

ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 322, ಪುಟಗಳು: 8, ಗುರುವಾರ, 29 ಆಗಸ್ಟ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3







### ಸುಭಾಷಿತ

ಒಳ್ಳೆಯದನ್ನು ವರ್ಣಿಸುವಾಗ ಮಾತು ಹೆಚ್ಚಾಗಲಿ, ಅಲ್ಲದ್ದನ್ನು ಕಂಡಾಗ ಮಾತು ಕೊಂಚಾಗಲಿ.

। ಬಿಎಂಶ್ರೀ

### ಪಂಚಾಂಗ

(ಗುರುವಾರ 29, ಆಗಸ್ಟ್-2024)

- ಕ್ರೋಧಿನಾಮಸಂವತ್ಸರ,
- ದಕ್ಷಿಣಾಯಣ, ವರ್ಷಋತು,
- ಶ್ರಾವಣ ಮಾಸ,
- ಕೃಷ್ಣಪಕ್ಷ, ಏಕಾದಶಿ, ಆರಿದ್ರ ನಕ್ಷತ್ರ
- ರಾಹುಕಾಲ : 01:57 ರಿಂದ 03:30
- ಗುಳಿಕಕಾಲ : 09:18 ರಿಂದ 10:51
- ಯಮಗಂಡಕಾಲ : 06:12 ರಿಂದ 07:45

# ಜಮ್ಮು ಕಾಶ್ಮೀರದ ಮೇಘಸ್ಫೋಟದಲ್ಲಿ ಕೊಚ್ಚಿಹೋದ ಮಕ್ಕಳು



**ರಾಂಬನ್:** ಜಮ್ಮು ಮತ್ತು ಕಾಶ್ಮೀರದ ರಾಂಬನ್ ಜಿಲ್ಲೆಯಲ್ಲಿ ಮೇಘಸ್ಫೋಟ ಸಂಭವಿಸಿದೆ. ಈ ಮೇಘಸ್ಫೋಟದಿಂದ ಉಂಟಾದ ದಿಢೀರ್ ಪ್ರವಾಹದಲ್ಲಿ ಮಹಿಳೆ ಮತ್ತು ಆಕೆಯ ಇಬ್ಬರು ಮಕ್ಕಳು ಕೊಚ್ಚಿ ಹೋಗಿದ್ದಾರೆ. ಮೇಘಸ್ಫೋಟದ ಶಾಕಿಂಗ್ ದೃಶ್ಯಗಳು ಆನ್‌ಲೈನ್‌ನಲ್ಲಿಯೂ ಕಾಣಿಸಿಕೊಂಡಿವೆ. ಅಧಿಕಾರಿಗಳ ಪ್ರಕಾರ, ಈಗಾಗಲೇ ಮೂವರು ಪ್ರಾಣ ಕಳೆದುಕೊಂಡಿದ್ದಾರೆ. ಪ್ರವಾಹದಿಂದಾಗಿ ಕಾಣೆಯಾದ ಜನರನ್ನು ಪತ್ತೆಹಚ್ಚಲು ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ.

ರಾಂಬನ್ ಜಿಲ್ಲೆಯ ರಾಜ್‌ಗಢ ತಹಶೀಲ್‌ನಲ್ಲಿರುವ ಕುಮಟೆ, ಧ್ರಮನ್ ಮತ್ತು ಹಲ್ಲಾ ಪಂಚಾಯತ್‌ಗಳಲ್ಲಿ ಸೋಮವಾರ ಮಧ್ಯಾಹ್ನ ಈ ಘಟನೆ ನಡೆದಿದೆ ಎಂದು ಹಿಂದೂಸ್ತಾನ್ ಟೈಮ್ಸ್ ವರದಿ ಮಾಡಿದೆ. ಈ ಘಟನೆಯ ದೃಶ್ಯಗಳು ಇಂದು ವೈರಲ್ ಆಗಿವೆ.

ಟ್ಯಾಂಗರ್ ಮತ್ತು ದಾಡಿ ಹೊಳೆಗಳಲ್ಲಿ ಮೇಘಸ್ಫೋಟ ಸಂಭವಿಸಿದೆ ಎಂದು ವರದಿಯಾಗಿದೆ. ಮೂವರ ಸಾವನ್ನು ಅಧಿಕಾರಿಗಳು ಖಚಿತಪಡಿಸಿದ್ದು, ನಾಲ್ವರಿಗೆ ಗಾಯಗಳಾಗಿವೆ. ನಾಪತ್ತೆಯಾದವರಲ್ಲಿ ಅಹ್ಮದ್ ಅವರ ತಾಯಿ ನಸೀಮಾ ಬೇಗಂ ಮತ್ತು 6 ವರ್ಷದ ಸಹೋದರಿ ಶಾಜಿಯಾ ಬಾನೂ ಸೇರಿದ್ದಾರೆ. ಕಾಣೆಯಾದ ಇತರ ಮೂವರು ವ್ಯಕ್ತಿಗಳು ಪರಿಹಾರ್‌ನ ತಾಯಿ ಗುಲ್ಶನ್ ಬೇಗಂ, 8 ವರ್ಷದ ಸಹೋದರಿ ಸೀರತ್ ಬಾನೂ ಮತ್ತು 6 ವರ್ಷದ ಕಾಜಿಯಾ ಬಾನೂ.

ಪುಟ 2



## ಸಂಕ್ಷಿಪ್ತ ಸುದ್ದಿ

### ಪತ್ನಿಯನ್ನ ಕೊಂದು, ನ್ಯಾಯಬೇಕು ಎಂದು ನಾಟಕ ಆಡ್ತಿದ್ದ ಪತಿ ಬಂಧನ

**ಬೆಂಗಳೂರು:** ಅನುಮಾನದ ಭೂತವನ್ನು ತಲೆಗೇರಿಸಿಕೊಂಡಿದ್ದ ಪತಿ ತನ್ನ ಪತ್ನಿಯನ್ನು ತೋಟಕ್ಕೆ ಕರೆದುಕೊಂಡು ಹೋಗಿ ಆಕೆಯನ್ನು ಕೊಲೆ ಮಾಡಿದ್ದ. ಬಳಿಕ ಯಾರೋ ಕೊಲೆ ಮಾಡಿದ್ದಾರೆ ಎಂದು ನಾಟಕವಾಡಿದ್ದ. ಸದ್ಯ ಇದೀಗ ಬಾಗಲೂರು ಪೊಲೀಸರು ಆರೋಪಿಯ ಕೃತ್ಯ ಬಯಲು ಮಾಡಿದ್ದು ಆರೋಪಿ ಅರೆಸ್ಟ್ ಆಗಿದ್ದಾನೆ.





ಪತ್ನಿಯನ್ನ ತಾನೇ ಕೊಲೆ ಮಾಡಿ ನಾಟಕ ಆಡ್ತಿದ್ದ ಪತಿಯನ್ನು ಬಾಗಲೂರು ಪೊಲೀಸರು ಬಂಧಿಸಿದ್ದಾರೆ. ಮೆಹಬೂಬ್ ಪಾಷಾ(50) ಬಂಧಿತ ಕೊಲೆ ಆರೋಪಿ. ಬಾಗಲೂರಿನ ರಜಾಕ್ ಸಾಬ್ ಪಾಳ್ಯದಲ್ಲಿ ವಾಸವಿದ್ದ ಮೆಹಬೂಬ್, ಕೂಲಿ ಕೆಲಸ ಮಾಡಿಕೊಂಡು ಪತ್ನಿ ಮುಮ್ತಾಜ್ ಜೊತೆ ವಾಸವಿದ್ದ. ಆ.25ರಂದು ಪೊಲೀಸ್ ಠಾಣೆಗೆ ಬಂದು ನನ್ನ ಪತ್ನಿ ಕೊಲೆಯಾಗಿದ್ದಾಳೆ.

ಪುಟ 2

### ಚಿಕ್ಕಬಳ್ಳಾಪುರ ಎರಡು ಪ್ರತ್ಯೇಕ ಅಪಘಾತ 5 ಮಂದಿಯ ದಾರುಣ ಸಾವು



**ಚಿಕ್ಕಬಳ್ಳಾಪುರ:** ಎರಡು ಪ್ರತ್ಯೇಕ ಅಪಘಾತ ಸಂಭವಿಸಿದ್ದು ಐದು ಮಂದಿಯ ದಾರುಣವಾಗಿ ಮೃತಪಟ್ಟ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ನಡೆದಿದೆ. ಚಾಲಕನ ನಿಯಂತ್ರಣ ತಪ್ಪಿ ಇನ್ನೋವಾ ಕಾರು ಪಲ್ಟಿಯಾಗಿ ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಇಬ್ಬರು ಸಾವನ್ನಪ್ಪಿದ್ದು ನಾಲ್ಕು ಮಂದಿ ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿರುವ ಘಟನೆ ಜಿಲ್ಲೆಯ ಗೌರಿಬಿದನೂರು ತಾಲೂಕಿನ ಕುಡುಮಲಕುಂಟೆ ಕೈಗಾರಿಕಾ ಪ್ರದೇಶದ ಬಳಿ ನಡೆದಿದೆ. ಮೃತರನ್ನು ಸೂರಜ್ (27) ಹಾಗೂ ಕಮಲ್ (26) ಗುರುತಿಸಲಾಗಿದ್ದು ಉತ್ತರ ಪ್ರದೇಶದ ಖಾನಾಪುರ್ ನಿವಾಸಿಗಳು ಎಂದು ತಿಳಿದು ಬಂದಿದೆ.

ಪುಟ 2

## ಬಳ್ಳಾರಿ ಜೈಲಿಗೆ ದರ್ಶನ್ ಶಿಫ್ಟ್

# ಪಾಲಿಸಬೇಕು ಕಠಿಣ ನಿಯಮ

**ಬಳ್ಳಾರಿ:** ಪರಪ್ಪನ ಅಗ್ರಹಾರ ಜೈಲಿನಲ್ಲಿ ವಿಶೇಷ ಆತಿಥ್ಯ ಪಡೆಯುತ್ತ ಆರಾಮವಾಗಿ ಕಾಲ ಕಳೆಯುತ್ತಿದ್ದ ದರ್ಶನ್ ಇದೀಗ ಬಳ್ಳಾರಿ ಕೇಂದ್ರ ಕಾರಾಗೃಹ ಸೇರಿದ್ದಾರೆ. ಇಲ್ಲಿ ದರ್ಶನ್‌ಗೆ ಕಠಿಣ ನಿಯಮಗಳನ್ನು ಪಾಲಿಸಬೇಕಿದೆ. ಈ ಹಿಂದೆ ಪರಪ್ಪನ ಅಗ್ರಹಾರ ಜೈಲಿನಲ್ಲಿ ಸಿಗುತ್ತಿದ್ದ 'ಸೌಲಭ್ಯ'ಗಳು ಇಲ್ಲಿ ಸಿಗುವುದಿಲ್ಲ ಎನ್ನಲಾಗುತ್ತಿದೆ. ಇಂದು (ಆಗಸ್ಟ್ 29) ರ ಮುಂಜಾನೆ ದರ್ಶನ್, ಬಳ್ಳಾರಿ ಜೈಲು ಸೇರಿದ್ದು, ಒಳ ಹೋಗುತ್ತಿದ್ದಂತೆ ಪೊಲೀಸರು ದರ್ಶನ್ ಗೆ ಶಿಸ್ತಿನ ಅರಿವು ಮೂಡಿಸಿದ್ದಾರೆ.

ಜೈಲಿನ ಒಳಗೆ ಹೋಗುತ್ತಿದ್ದಂತೆ ಮೊದಲಿಗೆ ಜೈಲು ಡೈರಿಯಲ್ಲಿ ದರ್ಶನ್ ರ ಮಾಹಿತಿ ಬರೆದುಕೊಳ್ಳಲಾಗಿದೆ. ದರ್ಶನ್ ಆರೋಪಿಯಾಗಿರುವ ಪ್ರಕರಣದ ಮಾಹಿತಿಯನ್ನು ತುಂಬಿಕೊಳ್ಳಲಾಗಿದೆ. ಯಾವ ಜೈಲಿನಿಂದ ಬಂದಿದ್ದಾರೆ, ಯಾವ ಸಮಯಕ್ಕೆ ಬಂದಿದ್ದಾರೆ ಇನ್ನಿತರೆ ಮಾಹಿತಿಗಳನ್ನು ತುಂಬಿಕೊಳ್ಳಲಾಗಿದೆ. ಬಳಿಕ ದರ್ಶನ್ ಕೈಯಲ್ಲಿದ್ದ ಕಡಗ, ಕೊರಳಲ್ಲಿದ್ದ ಮಣಿ ಸರಗಳನ್ನು ಕಳಚುವಂತೆ ಸೂಚಿಸಿದ್ದು, ಆ ವಸ್ತುಗಳನ್ನು ಜೈಲು ಸಿಬ್ಬಂದಿ ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ. ದರ್ಶನ್ ಕೂಲಿಂಗ್ ಗ್ಲಾಸ್ ಅನ್ನು ಸಹ ಕೊಂಡೊಯ್ದಿದ್ದರು ಅದನ್ನೂ ಸಹ ಪೊಲೀಸರು ವಶಪಡಿಸಿಕೊಂಡಿದ್ದಾರೆ ಎನ್ನಲಾಗಿದೆ. ಬಳಿಕ ದರ್ಶನ್‌ಗೆ ಜೈಲಿನಲ್ಲಿಯೇ ಆರೋಗ್ಯ ತಪಾಸಣೆ ಮಾಡಲಾಗಿದ್ದು, ಬಳಿಕ ನಿಗದಿತ ಬ್ಯಾರಕ್‌ಗೆ ಬಿಡಲಾಗಿದೆ.



ವಿಶೇಷ ಆತಿಥ್ಯ ಪಡೆದು ವಿವಾದ ಮಾಡಿಕೊಂಡಿರುವ ಕಾರಣದಿಂದಲೇ ಈಗ ಬಳ್ಳಾರಿ ಜೈಲಿಗೆ ದರ್ಶನ್ ಸ್ಥಳಾಂತರಗೊಂಡಿರುವ ಕಾರಣ, ಬಳ್ಳಾರಿ ಜೈಲಿನಲ್ಲಿ ಆ ರೀತಿಯ ಯಾವುದೇ ಸೌಲಭ್ಯಗಳು ನೀಡದಂತೆ ಉನ್ನತ ಅಧಿಕಾರಿಗಳಿಂದ ಶಿಸ್ತಿನ ಸೂಚನೆಗಳು ಸ್ಥಳೀಯ ಅಧಿಕಾರಿಗಳಿಗೆ ದೊರೆತಿದೆ. ಹಾಗಾಗಿ ದರ್ಶನ್ ವಿಚಾರದಲ್ಲಿ ತುಸು ಹೆಚ್ಚಿನ ಶಿಸ್ತನ್ನೇ ಜೈಲು ಅಧಿಕಾರಿಗಳು ಪಾಲಿಸಲಿದ್ದಾರೆ ಎನ್ನಲಾಗುತ್ತಿದೆ. ಬಳ್ಳಾರಿ ಜೈಲಿನಲ್ಲಿ 385 ಕೈದಿಗಳು ಈಗಾಗಲೇ ಇದ್ದಾರೆ.

ಪುಟ 2

### ಲಾಠಿ ಚಾರ್ಜ್

**ಅಭಿಮಾನಿಗಳು ಸಮಸ್ಯೆ ಮಾಡಬಾರದೆಂದೇ ತಡ ರಾತ್ರಿ ದರ್ಶನ್ ಅನ್ನು ಬೆಂಗಳೂರಿನ ಜೈಲಿನಿಂದ ಬಳ್ಳಾರಿ ಜೈಲಿಗೆ ಕರೆದುಕೊಂಡು ಹೋಗಲಾಯ್ತು. ದರ್ಶನ್ ಅನ್ನು ಬಳ್ಳಾರಿ ಜೈಲಿಗೆ ತಂದ ಸಮಯದಲ್ಲಿ ಜೈಲಿನ ಮುಂದೆ ಸಾಕಷ್ಟು ಸಂಖ್ಯೆಯಲ್ಲಿ ಅಭಿಮಾನಿಗಳು ಜಮಾವಣೆಗೊಂಡಿದ್ದರು. ಅಭಿಮಾನಿಗಳ ಕೂಗಾಟ-ಕಿರುಚಾಟ ಮಿತಿ ಮೀರಿದಾಗ ಪೊಲೀಸರು ಲಾಠಿ ಬೀಸಿ ಅಭಿಮಾನಿಗಳನ್ನು ಚದುರಿಸಿದ್ದಾರೆ.**

### ಜೈಲಲ್ಲಿ ರಾಜಾತಿಥ್ಯ: ನಟ ದರ್ಶನ್ ಸೇರಿ ಐವರನ್ನು ಪ್ರಶ್ನಿಸಿದ ಪೊಲೀಸರು

**ಬೆಂಗಳೂರು:** ಜೈಲಿನಲ್ಲಿ ರಾಜಾತಿಥ್ಯ ಪಡೆದ ಪ್ರಕರಣ ಸಂಬಂಧ ನಟ ದರ್ಶನ್ ಸೇರಿದಂತೆ ನಾಲ್ವರು ಆರೋಪಿಗಳನ್ನು ಆಗ್ನೇಯ ವಿಭಾಗದ ಪೊಲೀಸರು ಬುಧವಾರ ವಿಚಾರಣೆ ನಡೆಸಿದ್ದಾರೆ. ನಟ ದರ್ಶನ್, ಅವರ ಆಪ್ತ ನಾಗರಾಜ, ರೌಡಿಗಳಾದ ನಾಗರಾಜ ಅಲಿಯಾಸ್ ವಿಲ್ಸನ್ ಗಾರ್ಡನ್ ನಾಗರಾಜ, ಶ್ರೀನಿವಾಸ ಅಲಿಯಾಸ್ ಕುಳ್ಳ ಸೀನ ಹಾಗೂ ಧರ್ಮನನ್ನು ಪೊಲೀಸರು ತೀವ್ರ ವಿಚಾರಣೆ ನಡೆಸಿ ಹೇಳಿಕೆ ಪಡೆದಿದ್ದಾರೆ ಎನ್ನಲಾಗಿದೆ. ಆದರೆ ದರ್ಶನ್ ಅವರ ಸೆಲ್‌ನಲ್ಲಿ ಮೊಬೈಲ್ ಹಾಗೂ ಸಿಗರೇಟ್ ಪತ್ತೆಯಾಗಿಲ್ಲ.

ಹೀಗಾಗಿ ಮೊಬೈಲ್ ಸಂಬಂಧ ಗುರುವಾರ ಕೂಡ ಅವರನ್ನು ಮತ್ತೆ ಪೊಲೀಸರು ವಿಚಾರಣೆ ಮುಂದುವರೆಸಲಿದ್ದಾರೆ ಎಂದು ತಿಳಿದು ಬಂದಿದೆ. ಜೈಲಿನಲ್ಲಿ ರೌಡಿಗಳ ಜತೆ ಸಿಗರೇಟ್ ಸೇದುತ್ತ ಕುರ್ಚಿಯಲ್ಲಿ ದರ್ಶನ್ ಕುಳಿತಿದ್ದ ಫೋಟೋ ವೈರಲ್ ಆಗಿತ್ತು. ಆ ಫೋಟೋ ತೆಗೆದ ಸ್ಥಳವನ್ನು ಪೊಲೀಸರು ಪರಿಶೀಲಿಸಿದ್ದು,



ದರ್ಶನ್ ಹಾಗೂ ಅವರೊಂದಿಗೆ ಇದ್ದ ರೌಡಿಗಳನ್ನು ಕರೆದೊಯ್ದು ಮಹಜರ್ ಕೂಡ ನಡೆಸಿದ್ದಾರೆ ಎನ್ನಲಾಗಿದೆ.

**ವಿಚಾರಣೆಗೆ ಕೋರ್ಟ್ ಅನುಮತಿ:** ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ವಿಶೇಷ ಸೌಲಭ್ಯ ಪಡೆದ ಪ್ರಕರಣ ಸಂಬಂಧ ನಟ ದರ್ಶನ್ ಸೇರಿದಂತೆ ನಾಲ್ವರು ಆರೋಪಿಗಳ ವಿಚಾರಣೆಗೆ ನ್ಯಾಯಾಲಯವು ಪೊಲೀಸರಿಗೆ ಮಂಗಳವಾರ ಅನುಮತಿ ನೀಡಿದೆ. ಈ ಅನುಮತಿ ಹಿನ್ನಲೆಯಲ್ಲಿ ದರ್ಶನ್, ಅವರ ಆಪ್ತ ನಾಗರಾಜ, ಕುಖ್ಯಾತ ರೌಡಿಗಳಾದ ನಾಗರಾಜ ಅಲಿಯಾಸ್ ವಿಲ್ಸನ್ ಗಾರ್ಡನ್ ನಾಗ,

ಪುಟ 2

### ಸಿದ್ದರಾಮಯ್ಯ ಮುಡಾ ಕೇಸ್ ಇಂದು ಏನಾಗುತ್ತೆ?

# ಎಲ್ಲರ ಚಿತ್ತ ಹೈಕೋರ್ಟ್‌ನತ್ತ

**ಬೆಂಗಳೂರು:** ಮುಡಾ ಹಗರಣ ಕುರಿತ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ರಾಜ್ಯಪಾಲರ ಆದೇಶ ರದ್ದು ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿರುವ ಅರ್ಜಿ ವಿಚಾರಣೆ ಗುರುವಾರ ಮತ್ತೆ ಹೈಕೋರ್ಟ್ ಮುಂದೆ ವಿಚಾರಣೆಗೆ ಬರಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅರ್ಜಿ ಗುರುವಾರ ಮಧ್ಯಾಹ್ನ 2.30ಕ್ಕೆ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠದ ಮುಂದೆ ವಿಚಾರಣೆಗೆ ನಿಗದಿಯಾಗಿದೆ.

ನ್ಯಾಯಪೀಠದ ಹಿಂದಿನ ಸೂಚನೆಯಂತೆ ಅರ್ಜಿದಾರರು ಮತ್ತು ಪ್ರತಿವಾದಿಗಳ ಪರ ವಕೀಲರು ತಮ್ಮ ವಾದ ಹಾಗೂ ಪ್ರತಿವಾದವನ್ನು ಗುರುವಾರ ಪೂರ್ಣಗೊಳಿಸಬೇಕಿದೆ. ಜೊತೆಗೆ, ಪ್ರತಿವಾದಿಗಳಾಗಿರುವ ರಾಜ್ಯ ಸರ್ಕಾರ,



ರಾಜ್ಯಪಾಲರ ಕಚೇರಿಯ ಕಾರ್ಯದರ್ಶಿ, ಖಾಸಗಿ ದೂರುದಾರರಾದ ಟಿ.ಜೆ. ಅಬ್ರಹಾಂ, ಸ್ನೇಹಮಯಿ ಕೃಷ್ಣ ಮತ್ತು ಎಸ್.ಪಿ. ಪ್ರದೀಪ್ ಕುಮಾರ್ ಅವರು ಮುಖ್ಯಮಂತ್ರಿಗಳ ಅರ್ಜಿಗೆ ಆಕ್ಷೇಪಣೆ ಸಲ್ಲಿಸಬೇಕಿದೆ. ಇದರಿಂದ ಪ್ರಕರಣ ಕುರಿತ ಹೈಕೋರ್ಟ್ ವಿಚಾರಣೆ ತೀವ್ರ ಕುತೂಹಲ ಕೆರಳಿಸಿದೆ.

**ಸಿಎಂಗೆ ರಿಲೀಫ್ ನೀಡಿದ್ದ ಕೋರ್ಟ್:** ಆ.19ರಂದು ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್, ಮುಡಾ ಹಗರಣ ಸಂಬಂಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರು ನೀಡಿರುವ ಅನುಮತಿ ಆಧರಿಸಿ ಆ.29ರ ವರೆಗೆ ಮುಖ್ಯಮಂತ್ರಿಗಳ ವಿರುದ್ಧ ಯಾವುದೇ ಆತುರದ ಕ್ರಮ ಜರುಗಿಸದಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಸೂಚಿಸಿತ್ತು. ಇದರಿಂದ ಪ್ರಕರಣ ಕುರಿತು ವಿಶೇಷ ತನಿಖಾ ದಳ ಅಥವಾ ಬೇರೆ ಯಾವುದೇ ಸ್ವತಂತ್ರ ತನಿಖಾ ಸಂಸ್ಥೆಯಿಂದ ತನಿಖೆಗೆ ಆದೇಶಿಸಬೇಕು ಎಂದು ಕೋರಿ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ

ಪುಟ 2

### ಪವಿತ್ರಾಗೌಡ ಜಾಮೀನು ಅರ್ಜಿಯ

# ಭವಿಷ್ಯ ಆ.31ಕ್ಕೆ ನಿರ್ಧಾರ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದ ಎ1 ಆರೋಪಿ ಪವಿತ್ರಗೌಡ ಸೇರಿದಂತೆ ನಾಲ್ವರು ಆರೋಪಿಗಳು ಕೋರ್ಟ್‌ಗೆ ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆ ನಡೆಯಿತು. ಸುಧೀರ್ಘವಾದ ವಾದ-ಪ್ರತಿವಾದ ಆಲಿಸಿದ ಕೋರ್ಟ್ ಆಗಸ್ಟ್ 31ಕ್ಕೆ ಆದೇಶ ಕಾಯ್ದಿರಿಸಿದೆ.

ರೇಣುಕಾಸ್ವಾಮಿ ಕೊಲೆ ಕೇಸಲ್ಲಿ ಬಂಧನವಾಗಿದ್ದ ಆರೋಪಿಗಳಾದ ಪವಿತ್ರಗೌಡ, ವಿನಯ್, ಕೇಶವಮೂರ್ತಿ ಹಾಗೂ ಅನುಕುಮಾರ್ ಜಾಮೀನು ಕೋರಿ ಸೆಷನ್ಸ್ ಕೋರ್ಟ್‌ಗೆ ಅರ್ಜಿ ಹಾಕಿದ್ದರು. ನಿನ್ನೆ ಆರೋಪಿಗಳ ಪರ ವಕೀಲರು ವಾದ ನಡೆಸಿದ್ದು, ಪವಿತ್ರಾಗೌಡ ಪರ ಹಿರಿಯ ವಕೀಲ ಟಾಮಿ ಸೆಬಾಸ್ಟಿಯನ್ ವಾದ ಮಂಡನೆ ಮಾಡಿದ್ರು. ಇಂದು ಎಸ್‌ಪಿಪಿ ಪ್ರಸನ್ನ ಕುಮಾರ್ ವಾದ ಮಂಡನೆ ಮಾಡಿದರು.

ಸುಮಾರು ಒಂದು ಗಂಟೆಯ ಕಾಲ ವಾದ ಮಂಡಿಸಿದ ಎಸ್‌ಪಿಪಿ ಪ್ರಸನ್ನ ಕುಮಾರ್ ಅವರು ಕಿಡ್ನಾಪ್‌ನಿಂದ



ಹಿಡಿದು ಕೊಲೆಯ ಆಗಿ ಸಾಕ್ಷ್ಯನಾಶದ ಬಗ್ಗೆ ಇಂಚಿಂಚೂ ಮಾಹಿತಿ ಕೋರ್ಟ್‌ಗೆ ನೀಡಿದ್ದು, ಯಾವುದೇ ಕಾರಣಕ್ಕೂ ಜಾಮೀನು ಕೊಡದಂತೆ ಮನವಿ ಮಾಡಿ ವಾದ ಮುಕ್ತಾಯ ಮಾಡಿದರು. ಎರಡೂ ಕಡೆ ವಾದ-ಪ್ರತಿವಾದ ಮುಕ್ತಾಯ ಆಗಿದ್ದು, ಆಗಸ್ಟ್ 31 ಕ್ಕೆ ಪವಿತ್ರಗೌಡ ಹಾಗೂ ಅನುಕುಮಾರ್ ಅರ್ಜಿಯ ಆದೇಶ ಕಾಯ್ದಿರಿಸಿದರೆ, ಸೆ.2ಕ್ಕೆ ವಿನಯ್ ಹಾಗೂ ಕೇಶವಮೂರ್ತಿ ಜಾಮೀನು ಅರ್ಜಿ ಆದೇಶ ಕಾಯ್ದಿರಿಸಿತು.

# ಬೊಮ್ಮಸಂದ್ರ, ಹೊಸೂರು ಮೆಟ್ರೋ ಯೋಜನೆಗೆ ಕರ್ನಾಟಕ ವಿರೋಧ ಸಾಧ್ಯತೆ

**ಬೆಂಗಳೂರು:** ಚೆನ್ನೈ ಮೆಟ್ರೊ ರೈಲು ನಿಗಮ ನಿಯಮಿತ (ಸಿಎಂಆರ್‌ಎಲ್) ಪ್ರಸ್ತಾಪಿಸಿರುವ 6,900 ಕೋಟಿ ರೂ. ವೆಚ್ಚದ ಬೊಮ್ಮಸಂದ್ರ-ಹೊಸೂರು ಮೆಟ್ರೊ ಯೋಜನೆಗೆ ಕರ್ನಾಟಕದಿಂದ ವಿರೋಧ ವ್ಯಕ್ತವಾಗುವ ಸಾಧ್ಯತೆ ಇದೆ ಎಂದು ಮೂಲಗಳು ಹೇಳಿವೆ. ಈ ಯೋಜನೆಯು ಕರ್ನಾಟಕದಲ್ಲಿ ಐದು ಮತ್ತು ತಮಿಳುನಾಡಿನಲ್ಲಿ ಏಳು ನಿಲ್ದಾಣಗಳನ್ನು ಹೊಂದಿರುತ್ತದೆ. ಒಟ್ಟು 23 ಕಿಮೀ ಎತ್ತರಿತ ಮೆಟ್ರೋ ಮಾರ್ಗದ (ಕರ್ನಾಟಕದಲ್ಲಿ 12 ಕಿಮೀ ಮತ್ತು ಟಿಎನ್‌ನಲ್ಲಿ 11 ಕಿಮೀ) ವಿಸ್ತೃತ ಯೋಜನಾ ವರದಿಯನ್ನು ಸಿಎಂಆರ್‌ಎಲ್ ತಂಡವು ಮಂಗಳವಾರ ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್ (ಬಿಎಂಆರ್‌ಸಿಎಲ್) ಅಧಿಕಾರಿಗಳಿಗೆ ಸಲ್ಲಿಸಿದೆ ಎಂದು ವರದಿಯಾಗಿದೆ.

ಆದರೆ, ಬೆಂಗಳೂರಿನ ವ್ಯಾಪಾರ ಹಿತಾಸಕ್ತಿಗಳಿಗೆ ಹೊಸೂರು ಪ್ರತಿಸ್ಪರ್ಧಿಯಾಗಿ ಹೊರಹೊಮ್ಮುವುದರಿಂದ ಕರ್ನಾಟಕದಿಂದ



ಯೋಜನೆಗೆ ವಿರೋಧ ವ್ಯಕ್ತವಾಗಬಹುದು ಎಂದು ಹೇಳಲಾಗಿದೆ.

ಹೊಸೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡಲು ತಮಿಳುನಾಡು ಯೋಜಿಸುತ್ತಿರುದೆ. ಇದು ದಕ್ಷಿಣ ಬೆಂಗಳೂರಿನಿಂದ ವಿಮಾನಯಾನ ಮಾಡುವವರನ್ನು ಆಕರ್ಷಿಸುವ ಸಾಧ್ಯತೆಯಿದೆ. ಅಲ್ಲದೆ, ಬೆಂಗಳೂರಿನೊಂದಿಗೆ ಮೆಟ್ರೋ ಸಂಪರ್ಕವು ಹೊಸೂರಿನತ್ತ ಜನ ಆಕರ್ಷಿತರಾಗುವಂತೆ ಮಾಡಬಹುದು. ಈ ಎಲ್ಲ ಕಾರಣಗಳಿಂದ ಕರ್ನಾಟಕವು ಯೋಜನೆಗೆ ವಿರೋಧ ವ್ಯಕ್ತಪಡಿಸಬಹುದು ಎನ್ನಲಾಗಿದೆ.

ಗಮನಿಸಬೇಕಾದ ಅಂಶವೆಂದರೆ, ನಮ್ಮ ಮೆಟ್ರೋದ ಹಳದಿ ಮಾರ್ಗವು ಬೊಮ್ಮಸಂದ್ರದಿಂದ ಆರ್‌ವಿ ರಸ್ತೆಯನ್ನು ಸೆಂಟ್ರಲ್ ಸಿಲ್ಕ್ ಬೋರ್ಡ್‌ನಲ್ಲಿ ಸಂಧಿಸುತ್ತದೆ. ಈ ಮೂಲಕ ಏರ್‌ಪೋರ್ಟ್ ಲೈನ್ (ಬ್ಲೂ ಲೈನ್) ಸಂಪರ್ಕಿಸುತ್ತದೆ.

ಇಷ್ಟೇ ಅಲ್ಲದೆ, ಆ ಮಾರ್ಗವು ಉಪನಗರ ರೈಲು ಮತ್ತು ಬಸ್ ಡಿಪೋಗಳನ್ನು ಸಹ ಒಳಗೊಂಡಿರುತ್ತದೆ. ಬೊಮ್ಮಸಂದ್ರ ಮಾರ್ಗವನ್ನು ಅತ್ತಿಬೆಲೆಯವರೆಗೆ ವಿಸ್ತರಿಸಲು ಬಿಎಂಆರ್‌ಸಿಎಲ್ ಜುಲೈ 9 ರಂದು ಯೋಜನೆಯನ್ನು ಆರಂಭಿಸಿದೆ.

ಸದ್ಯ ಬೊಮ್ಮಸಂದ್ರ, ಹೊಸೂರು ಮೆಟ್ರೋ ಮಾರ್ಗದ ಬಗ್ಗೆ ಆರ್ವಿ ಅಸೋಸಿಯೇಟ್ಸ್ ಆರ್ಕಿಟೆಕ್ಟ್ಸ್ ಇಂಜಿನಿಯರ್ ಮತ್ತು ಕನ್ಸಲ್ಟೆಂಟ್ಸ್ ಪ್ರೈವೇಟ್ ಲಿಮಿಟೆಡ್ ಕಾರ್ಯಸಾಧ್ಯತಾ ಅಧ್ಯಯನವನ್ನು ನಡೆಸುತ್ತಿದೆ.

ಪುಟ 2

### ಆ.30 ಮತ್ತು 31ರಂದು ಹೋಟೆಲ್ ಗುಣಮಟ್ಟ ತಪಾಸಣೆ

**ಬೆಂಗಳೂರು:** ಆ.30 ಮತ್ತು 31ರಂದು ರಾಜ್ಯದಾದ್ಯಂತ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿರುವ ಹೋಟೆಲ್, ರೆಸ್ಟೋರೆಂಟ್ ಗಳಲ್ಲಿ ಆಹಾರ ಸುರಕ್ಷತೆ ಬಗ್ಗೆ ವಿಶೇಷ ತಪಾಸಣೆ ನಡೆಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಂಸ, ಮೀನು, ಮೊಟ್ಟೆಗಳ ಆಹಾರ ಮಾದರಿಗಳನ್ನೂ ಸಂಗ್ರಹಿಸಿ ತಪಾಸಣೆ ನಡೆಸಲಾಗುವುದು.

ಪುಟ 2

# ಧಾರ್ಮಿಕ ಭಾವನೆಗಳಿಗೆ ಧಕ್ಕೆ

### ಬಿಲ್ಲು, ಬಾಣಗಳಿರುವ ವಿದ್ಯುತ್ ಕಂಬ ತೆರವಿಗೆ ಆದೇಶ

**ಕೊಪ್ಪಳ:** ಗಂಗಾವತಿ ನಗರದ ಜುಲೈನಗರದಿಂದ ರಾಣಾ ಪ್ರತಾಪ್ ವೃತ್ತದವರೆಗೆ ಅಭಿವೃದ್ಧಿಪಡಿಸಿದ ರಸ್ತೆ ಮಧ್ಯೆ ಹಾಕಿರುವ ವಿದ್ಯುತ್ ಕಂಬಗಳ ತೆರವಿಗೆ ತಹಶೀಲ್ದಾರ್ ಆದೇಶಿಸಿದ್ದಾರೆ. ಅಷ್ಟೇ ಅಲ್ಲದೇ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ಸಂಸ್ಥೆ ವಿರುದ್ಧವೇ ಪ್ರಕರಣ ದಾಖಲಿಸಲು ಸೂಚಿಸಿದ್ದಾರೆ.

ಆಗಸ್ಟ್ 28 ರಂದು ಜಿಲ್ಲಾಧಿಕಾರಿಗಳ ಮೌಖಿಕ ಆದೇಶದಂತೆ ತಹಶೀಲ್ದಾರ್ ಅವರು ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷರಿಗೆ ನೀಡಿರುವ ಆದೇಶದ ಪ್ರತಿ ಮಾಧ್ಯಮಗಳಿಗೆ ಲಭ್ಯವಾಗಿದೆ.

ಜುಲೈನಗರದಿಂದ ರಾಣಾ ಪ್ರತಾಪ್ ವೃತ್ತದವರೆಗಿನ ರಸ್ತೆ ನಗರ ಸಭೆ ವ್ಯಾಪ್ತಿಗೆ ಬರುತ್ತಿದೆ. ಇಲ್ಲಿ ಕೆಐಆರ್ ಡಿಎಲ್ ಸಂಸ್ಥೆ ಸ್ಥಾಪಿಸಿದ ವಿದ್ಯುತ್ ಕಂಬಗಳು ಧಾರ್ಮಿಕ ಸೌಹಾರ್ದತೆ ಹಾಗೂ ಭಾವನೆಗಳಿಗೆ ಧಕ್ಕೆ ಉಂಟು ಮಾಡುವ ರೀತಿಯಲ್ಲಿ ನಿರ್ಮಾಣವಾಗಿದೆ. ಇದು ನಗರದಲ್ಲಿ ಸಾರ್ವಜನಿಕರ ಶಾಂತಿಗೆ ಭಂಗ ಉಂಟುಮಾಡುವ ಸಾಧ್ಯತೆಗಳು ಇರುವುದರಿಂದ ಅವುಗಳನ್ನು ಕೂಡಲೇ ತೆರವುಗೊಳಿಸಬೇಕು. ಈ ಕಾಮಗಾರಿ ಕೈಗೊಂಡಿರುವ ಕೆಐಆರ್‌ಡಿಎಲ್



ಎಂಜಿನಿಯರ್ ವಿರುದ್ಧ ಪ್ರಕರಣ ದಾಖಲಿಸಿ ಸೂಕ್ತ ಕ್ರಮ ಕೈಗೊಂಡು ವರದಿ ನೀಡುವಂತೆ ತಹಶೀಲ್ದಾರ್ ನಾಗರಾಜ್ ಅವರು ಸೂಚಿಸಿದ್ದಾರೆ.

ಹನುಮನ ಜನ್ಮಸ್ಥಳವಾಗಿರುವ ಅಂಜನಾದ್ರಿ ಭಾಗವನ್ನು ಅಯೋಧ್ಯೆ, ತಿರುಪತಿ ಮಾದರಿಯಲ್ಲಿ ಅಭಿವೃದ್ಧಿ ಮಾಡಬೇಕು ಎಂಬ ಒತ್ತಾಯ ಹಲವು ಬಾರಿ ಕೇಳಿ ಬಂದಿತ್ತು. ಜನಾರ್ದನ ರೆಡ್ಡಿ ಅವರು ಚುನಾವಣಾ ಪ್ರಚಾರದಲ್ಲೂ ಭರವಸೆ ನೀಡಿದ್ದರು. ಅದರಂತೆ ಈಗ ವಿದ್ಯುತ್ ಕಂಬಗಳಲ್ಲಿ ಬಿಲ್ಲು, ಬಾಣಗಳು ಇರುವ ಚಿತ್ರಗಳನ್ನು ಅಳವಡಿಸಲಾಗಿತ್ತು.

ಪುಟ 2

## ಬೆಂಗಳೂರು ಏರ್ ಪೋರ್ಟ್‌ನಲ್ಲಿ ವ್ಯಕ್ತಿ ಬರ್ಬರ ಹತ್ಯೆ

**ಬೆಂಗಳೂರು/ಚಿಕ್ಕಬಳ್ಳಾಪುರ:** ಅನೈತಿಕ ಸಂಬಂಧ ಶಂಕೆ ವ್ಯಕ್ತಪಡಿಸಿ ಬೆಂಗಳೂರು ಏರ್‌ಪೋರ್ಟ್‌ನಲ್ಲಿ ಕೆಲಸ ಮಾಡುತ್ತಿದ್ದ ವ್ಯಕ್ತಿ ಬರ್ಬರ ಹತ್ಯೆ ಮಾಡಿರುವ ಘಟನೆ ನಡೆದಿದೆ.





ತುಮಕೂರು ಜಿಲ್ಲೆಯ ಮಧುಗಿರಿ ತಾಲೂಕಿನ ನಿವಾಸಿ ರಮೇಶ್ ಕೊಲೆ ಆರೋಪಿ. ರಾಮಕೃಷ್ಣ (45) ಮೃತ ದುರ್ದೈವಿ. ಬೆಂಗಳೂರು ಏರ್‌ಪೋರ್ಟ್‌ನ ಟರ್ಮಿನಲ್ ಒಂದರಲ್ಲಿ ಯುವಕನಿಗೆ ಚಾಕುವಿನಿಂದ ಇರಿದು ಕೊಲೆ ಮಾಡಿದ್ದಾನೆ. ಬಿಎಂಟಿಸಿ ಬಸ್‌ನಲ್ಲಿ ಏರ್‌ಪೋರ್ಟ್‌ಗೆ ಆಗಮಿಸಿದ ಕೊಲೆ ಆರೋಪಿ, ವಿಮಾನ ನಿಲ್ದಾಣದಲ್ಲಿ ಟ್ರಾಲಿ ಎಳೆಯುವ ಕೆಲಸ ಮಾಡುತ್ತಿದ್ದ ರಾಮಕೃಷ್ಣನನ್ನು ಚಾಕುವಿನಿಂದ ಇರಿದು ಹತ್ಯೆ ಮಾಡಿದ್ದಾನೆ. ನನ್ನ ಸಂಸಾರ ಹಾಳು ಮಾಡಿದ್ದೀಯ ಎಂದು ಫೋನ್‌ನಲ್ಲಿ ಆರೋಪಿ ಜಗಳ ಮಾಡಿದ್ದ. ಅದರ ಬೆನ್ನಲ್ಲೇ ಕೊಲೆ ಮಾಡಿದ್ದಾನೆ. ಪತ್ನಿ ಜೊತೆ ಅನೈತಿಕ ಸಂಬಂಧ ಹೊಂದಿದ್ದ ಆರೋಪದಲ್ಲಿ ಕೊಲೆ ನಡೆದಿದೆ. ರಕ್ತದ ಮಡುವಿನಲ್ಲಿ ಏರ್‌ಪೋರ್ಟ್‌ನಲ್ಲಿ ಯುವಕ ಮಡಿದಿದ್ದಾನೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಮದುವೆಗೆ ಹೊರಟವರು ಮಸಣ ಸೇರಿದರು



**ಚಿಕ್ಕಬಳ್ಳಾಪುರ:** ಟಿಟಿ ವಾಹನ ಹಾಗೂ ಕಾರಿನ ನಡುವೆ ಮುಖಾಮುಖಿ ಡಿಕ್ಕಿಯಾಗಿ ಭೀಕರ ಅಪಘಾತ ಸಂಭವಿಸಿದ್ದು, ಕಾರಿನಲ್ಲಿದ್ದ ಮೂವರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲೂಕಿನ ದಂಡುಪಾಳ್ಯ ಗೇಟ್ ಬಳಿ ನಡೆದಿದೆ. ಕಾರಿನಲ್ಲಿದ್ದ ಮಗ ಶ್ರೀಕಾಂತ್ ಈತನ ತಂದೆ ಶ್ರೀನಿವಾಸಲು ಹಾಗೂ ತಾಯಿ ಪುಷ್ಪ ಮೂವರು ಸಹ ದಾರುಣ ಸಾವನ್ನಪ್ಪಿದ್ದಾರೆ. ಇನ್ನೂ ಟಿಟಿ ವಾಹನದಲ್ಲಿದ್ದ 12 ಜನರಿಗೆ ಗಂಭೀರ ಗಾಯಗಳಾಗಿ ಚಿಂತಾಮಣಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಅಂದಹಾಗೆ ಟಿಟಿ ವಾಹನ ಆಂಧ್ರಪ್ರದೇಶದ ಬಾಯಿಕೊಂಡದಿಂದ ಚಿಂತಾಮಣಿ ಕಡೆಗೆ ಬರುತ್ತಿತ್ತು. ಅಪಘಾತಕ್ಕೀಡಾದ ಕಾರು ಬೆಂಗಳೂರಿನಿಂದ ಕಡಪ ಹೈವೇ ರಸ್ತೆ ಮುಖಾಂತರ ಆಂಧ್ರಪ್ರದೇಶದ ಕಡೆಗೆ ಹೋಗುತ್ತಿತ್ತು. ಎರಡು ವಾಹನಗಳು ಮುಖಾಮುಖಿ ಡಿಕ್ಕಿ ಹೊಡೆದುಕೊಂಡಿವೆ. ಕಾರಿನಲ್ಲಿದ್ದವರು ಮೂಲತಃ ಆಂಧ್ರದವರಾದರೂ ಬೆಂಗಳೂರಿನಲ್ಲಿ ನೆಲಸಿದ್ದರು. ಬುಧವಾರ ಸಂಬಂಧಿಕರ ಮದುವೆಗೆ ಅಂತ ಆಂಧ್ರದ ಕಡೆಗೆ ಹೊರಟಿದ್ದ ವೇಳೆ ಅಪಘಾತ ಸಂಭವಿಸಿ ಸಾವನ್ನಪ್ಪಿದ್ದಾರೆ. ಇನ್ನೂ ಟಿಟಿ ವಾಹನದಲ್ಲಿದ್ದವರು ಸಹ ಬೆಂಗಳೂರಿನವರಾಗಿದ್ದು, ಬಾಯಿಕೊಂಡ ಗಂಗಮ್ಮ ದೇವಾಲಯಕ್ಕೆ ಹೋಗಿ ಬೆಂಗಳೂರಿಗೆ ವಾಪಾಸ್ ಆಗುತ್ತಿದ್ದರು ಅಂತ ತಿಳಿದುಬಂದಿದೆ. ಕೆಂಚಾರ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

### ನಮ್ಮ ಆಸ್ತಿ ಬಗ್ಗೆ ದಾಖಲೆ ಇದ್ದರೆ ಬಹಿರಂಗ ಪಡಿಸಲಿ

# ಛಲವಾದಿ ಮಾತಿಗೆ ಪ್ರಿಯಾಂಕ್ ಖರ್ಗೆ ತಿರುಗೇಟು

**ಬೆಂಗಳೂರು:** ಬಿಜೆಪಿಯವರಿಗೆ ನೈತಿಕತೆ ಇದ್ದರೆ, ಪೋಕ್ಸೋ ಕೇಸ್‌ನಲ್ಲಿರುವ ಪೂಜ್ಯ ಜನನ ತಂದೆಯವರನ್ನು ಶರಣಾಗತಿ ಮಾಡಲಿ. ಕಾಂಗ್ರೆಸ್‌ನವರ ನೈತಿಕತೆ ಪ್ರಶ್ನಿಸುವ ಬಿಜೆಪಿ ನಾಯಕರು ಅಪ್ಪಾಜಿಯವರನ್ನು ಶರಣಾಗತಿ ಮಾಡಿಸಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ.



ವಿಕಾಸಸೌಧದಲ್ಲಿ ಮಾತನಾಡಿದ ಅವರು, ಸಿದ್ದಾರ್ಥ ವಿಹಾರ್ ಟ್ರಸ್ಟ್‌ಗೆ ಕಾನೂನು ಬಾಹಿರವಾಗಿ ಭೂಮಿ ನೀಡಿಲ್ಲ. ನಮಗಾಗಿ ಯಾವುದೇ ನಿಯಮ ಬದಲಾವಣೆ ಮಾಡಿಲ್ಲ. ಕಾನೂನು ಯಾರಾದರೂ ಬದಲಾವಣೆ ಮಾಡಿದ್ದರೆ ದಾಖಲೆ ಬಿಡುಗಡೆ ಮಾಡಲಿ. ನಮ್ಮ ಟ್ರಸ್ಟ್ ಮೇಲೆ ಅವರಿಗೆ ಆಕ್ಷೇಪ ಇಲ್ಲ. ಅವರಿಗೆ ಆಕ್ಷೇಪ ಇರೋದು ಪ್ರಿಯಾಂಕ್ ಖರ್ಗೆ ಮೇಲೆ ಮಾತ್ರ. ಟ್ರಸ್ಟ್ ಚಟುವಟಿಕೆಗಳನ್ನು ಅವರು ಒಪ್ಪುತ್ತಾರೆ. ಆದರೆ ಈಗ ಭೂಮಿ ಪಡೆದ ಪ್ರಕ್ರಿಯೆ ಬಗ್ಗೆ ಈಗ ಅವರು ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ. ನಾವು ಪಡೆದ ಭೂಮಿಗೆ ಮಾತ್ರ ನಿಯಮಗಳು ಬದಲಾವಣೆ ಆಗಿದೆಯಾ? ಅಥವಾ ಎಲ್ಲಾ ಪ್ಲಾಟ್‌ಗಳಿಗೆ ಬದಲಾವಣೆ ಮಾಡಲಾಗಿದೆಯಾ..? ಸಮರ್ಪಕವಾಗಿ ದಾಖಲೆ ಕೊಡಲಿ ಎಂದು ಸವಾಲು ಹಾಕಿದ್ದಾರೆ.

ಯಾವ ರಾಜ್ಯದಲ್ಲಿ ಬಿಜೆಪಿ ನಾಯಕತ್ವ ವೀಕ್ ಇದೆಯೋ ಅಲ್ಲಿ ರಾಜಭವನ ದುರ್ಬಳಕೆ ಆಗ್ತಿದೆ. ಸರ್ಕಾರಿ ಯಂತ್ರದ ದುರ್ಬಳಕೆ ಆಗುತ್ತಿದೆ. ಪಾದಯಾತ್ರೆ ವಿಫಲ ಆಯ್ತು. ಅದಕ್ಕೆ ಇದೆಲ್ಲಾ ಈಗ ಹೊರಗೆ ಬರ್ತಾ ಇದೆ. ನಾನು ವೈಯಕ್ತಿಕವಾಗಿ ಛಲವಾದಿ ನಾರಾಯಣಸ್ವಾಮಿ ಅವರನ್ನು ಟೀಕೆ ಮಾಡಿಲ್ಲ. ಬಿಜೆಪಿಯವರಿಗೆ ಇಂಗ್ಲಿಷ್ ಬರಲ್ಲ, ಕಾನೂನು ಅರ್ಥ ಆಗಿಲ್ಲ ಎಂದು ಹೇಳಿದ್ದೆ. ವೈಯಕ್ತಿಕವಾಗಿ ಛಲವಾದಿ ನಾರಾಯಣಸ್ವಾಮಿ ಕಾಂಗ್ರೆಸ್‌ನಲ್ಲಿ ಬೆಳೆದವರು. ಕಾಂಗ್ರೆಸ್ ಬಹಳ ಅವಕಾಶ ಕೊಟ್ಟಿತ್ತು. ಈಗ ಅವರು ಬಿಜೆಪಿಗೆ ಹೋಗಿದ್ದಾರೆ. ಅವರಿಗೆ ನಮ್ಮ ಆಸ್ತಿ ಬಗ್ಗೆ ದಾಖಲೆ ಇದ್ದರೆ ಬಹಿರಂಗ ಪಡಿಸಲಿ. ನಾವು ಹೋಗಿ ಕ್ಲೈಮ್ ಮಾಡುತ್ತೇವೆ ಎಂದು ಹೇಳಿದ್ದರು. ನಿಯಮ ಮೀರಿ ಆಸ್ತಿ ಮಾಡಿದ್ದರೆ ಮೋದಿ, ಅಮಿತ್ ಶಾ ಬಿಡ್ತಾ ಇದ್ರಾ? ಅವರು ದೆಹಲಿಗೆ ಹೋರಾಟ ಮಾಡಿಕೊಂಡು ಹೋಗಲಿ, ಪರವಾಗಿಲ್ಲ ಬಿಡಿ ಎಂದು ವ್ಯಂಗ್ಯವಾಡಿದ್ದಾರೆ.

## ಯತ್ನಾಳ್ ಅವರ ನ್ಯಾಯದ ಹೋರಾಟಕ್ಕೆ ನಮ್ಮ ಬೆಂಬಲ

**ಬೆಂಗಳೂರು:** ಕಲಬುರ್ಗಿ ಜಿಲ್ಲೆಯ ಸಿದ್ದಸಿರಿ ಸಕ್ಕರೆ ಕಾರ್ಖಾನೆಯ ಮರು ಆರಂಭಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಸರ್ಕಾರ ದ್ವೇಷ ರಾಜಕಾರಣ ಮಾಡುತ್ತಿದೆ. ನ್ಯಾಯಕ್ಕಾಗಿ ನಮ್ಮ ಹೋರಾಟ ಮುಂದುವರೆಯಲಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.



ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕಚೇರಿಯಲ್ಲಿ, ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರೊಂದಿಗೆ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹಿಂದುಳಿದ ಪ್ರದೇಶವಾದ ಕಲಬುರ್ಗಿಯಲ್ಲಿ ಮುಳುಗಿಹೋಗಿದ್ದ ಸಕ್ಕರೆ ಕಾರ್ಖಾನೆಯನ್ನು ಶಾಸಕ ಯತ್ನಾಳ್ ಅಭಿವೃದ್ಧಿಪಡಿಸಿದ್ದಾರೆ. ಈ ಕಾರ್ಖಾನೆಯಿಂದ ಎರಡು ಸಾವಿರ ಜನರಿಗೆ ಉದ್ಯೋಗ ದೊರೆತಿದೆ. ಸಾವಿರಾರು ರೈತರಿಗೆ ಲಾಭವಾಗುತ್ತಿದೆ ಎಂದರು.

ಇಲ್ಲಿನ ಅಧಿಕಾರಿಗಳು ಸ್ಥಳಕ್ಕೆ ಬಾರದೆ ವಿಧಾನಸೌಧದ ಕಡೆಗೆ ಮುಖ ಮಾಡಿಕೊಂಡು ಕೂತಿದ್ದಾರೆ. ಒಂದು ಕಡೆ ಮುಡಾ ಹಗರಣ, ಮತ್ತೊಂದು ಕಡೆ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ, ಇನ್ನೊಂದು ಖರ್ಗೆ ಹಗರಣ ನಡೆದಿದೆ. ಇಂತಹ ಸ್ಥಿತಿಯಲ್ಲಿ ಸ್ವಾಯತ್ತ ಸಂಸ್ಥೆಯ ಮೇಲೆ ಈ ಕೆಟ್ಟ ಸರ್ಕಾರ ಒತ್ತಡ ಹೇರಿದೆ. ಕಾಂಗ್ರೆಸ್ ದ್ವೇಷ ರಾಜಕಾರಣ ಮಾಡುತ್ತಿದೆ. ಹೈಕೋರ್ಟ್ ಆದೇಶವಿದ್ದರೂ ಕಾರ್ಖಾನೆ ಮರು ಆರಂಭಕ್ಕೆ ಅನುಮತಿ ನೀಡುತ್ತಿಲ್ಲ. ಇದರ ವಿರುದ್ಧ ನಮ್ಮ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದರು.

ಶಾಸಕ ಯತ್ನಾಳ್ ಅವರು ನ್ಯಾಯಕ್ಕಾಗಿ ಹೋರಾಟ ಮಾಡುತ್ತಿದ್ದಾರೆ. ನಾವೆಲ್ಲರೂ ಅವರ ಹೋರಾಟಕ್ಕೆ ಬೆಂಬಲ ನೀಡುತ್ತಿದ್ದೇವೆ. ಇದು ಸ್ವಾಯತ್ತ ಸಂಸ್ಥೆಯಾಗಿದ್ದರೂ, ಇಲ್ಲಿ ಸ್ವಾತಂತ್ರ್ಯ ಕಾಣುತ್ತಿಲ್ಲ. ಅಧಿಕಾರಿಗಳು ಪ್ರತಿಯೊಂದಕ್ಕೂ ಸಚಿವರ ಕಡೆ ನೋಡುವ ಅಭ್ಯಾಸ ಬೆಳೆಸಿಕೊಂಡಿದ್ದಾರೆ ಎಂದು ದೂರಿದರು.

ಮಾಲಿನ್ಯ ನಿಯಂತ್ರಣ ಮಂಡಳಿ ಎಂದರೆ ಮಾಲಿನ್ಯವನ್ನು ನಿಯಂತ್ರಿಸುವ ಸಂಸ್ಥೆ. ಆದರೆ ಇಲ್ಲಿ ನಡೆಯುವ ಭ್ರಷ್ಟಾಚಾರಕ್ಕೆ ಕೊನೆಯೇ ಇಲ್ಲ. ಇಲ್ಲಿಗೆ ಪಂಚೆ ಉಟ್ಟುಕೊಂಡು ಬಂದರೆ ಬೆಲೆ ಇಲ್ಲ. ಸೂಟು ಬೂಟು ಧರಿಸಿ, ಹಣದ ಸೂಟ್‌ಕೇಸ್ ತೆಗೆದುಕೊಂಡು ಬಂದರೆ ಮಾತ್ರ ಬೆಲೆ. ಇದು ಕಾರ್ಪೊರೇಟ್ ಕಂಪನಿಯಂತಾಗಿದೆ. ಅಧಿಕಾರಿಗಳಿಗೆ ಮೇಲಿನಿಂದ ಕರೆ ಬಂದಿದ್ದು, ಯತ್ನಾಳ್ ಅವರಿಗೆ ತೊಂದರೆ ಕೊಡಲು ಸೂಚಿಸಲಾಗಿದೆ. ಮಂಡಳಿಯ ಅಧ್ಯಕ್ಷರು ಸ್ಥಳಕ್ಕೆ ಬಾರದೆ ತಪ್ಪಿಸಿಕೊಂಡು ಓಡಾಡುತ್ತಿದ್ದಾರೆ. ಹೈಕೋರ್ಟ್ ಆದೇಶವನ್ನು ಜಾರಿ ಮಾಡುವುದಿಲ್ಲ ಎಂದು ಲಿಖಿತವಾಗಿ ಕೊಡಲಿ ಎಂದು ಆಗ್ರಹಿಸಿದರು.

## ಹೆಂಡತಿ ಕೊಂದು ಸಿನಿಮಾ ಮಾದರಿಯಲ್ಲಿ ಹೂತಿಟ್ಟ!

**ರಾಮನಗರ:** ಆತ 5 ವರ್ಷಗಳ ಹಿಂದೆ ಹೆಂಡತಿಯನ್ನು ಕೊಲೆ ಮಾಡಿ ಹೂತುಹಾಕಿದ್ದ. ಬಳಿಕ ಹೆಂಡತಿ ಬೇರೊಬ್ಬನ ಜೊತೆ ಓಡಿಹೋಗಿದ್ದಾಳೆಂದು ಕುಟುಂಬಸ್ಥರಿಗೆ ನಂಬಿಸಿ ಪ್ರಕರಣವನ್ನು ಮುಚ್ಚಿ ಹಾಕಿ ಸೈಲೆಂಟ್ ಆಗಿದ್ದ. ಆದರೆ, ಇತ್ತೀಚೆಗೆ ಸ್ನೇಹಿತನ ಹೆಂಡತಿ ಕೊಲೆಯಲ್ಲಿ ಭಾಗಿಯಾಗಿ ಪೊಲೀಸರಿಗೆ ತಗಲಾಕಿಕೊಂಡಿರುವ ಆರೋಪಿ ತನ್ನ ಪತ್ನಿ ಕೊಲೆ ಬಗ್ಗೆಯೂ ಪೊಲೀಸರ ಮುಂದೆ ಬಾಯ್ಬಿಟ್ಟಿದ್ದಾನೆ.





ಹೌದು, ಆರೋಪಿ ಹೆಸರು ಕಿರಣ್ ಕುಮಾರ್. ಮಾಗಡಿ ತಾಲೂಕಿನ ಹೂಜಗಲ್ ಗ್ರಾಮದ ನಿವಾಸಿ. ಕಳೆದ 10 ವರ್ಷಗಳ ಹಿಂದೆ ತಾವರೆಕೆರೆಯ ಪೂಜಾ ಎಂಬಾಕೆಯನ್ನು ಮದುವೆ ಆಗಿದ್ದ. ನಂತರ ಸಂಸಾರದಲ್ಲಿ ಬಿರುಕು ಉಂಟಾಗಿ ಆಗಾಗ್ಗೆ ನ್ಯಾಯ ಪಂಚಾಯಿತಿ ಕೂಡ ಆಗಿತ್ತು. ನಂತರ 2019 ರಲ್ಲಿ ಹೆಂಡತಿಯ ನಡತೆ ಶಂಕಿಸಿ ಕೊಲೆಗೈದು ಗ್ರಾಮದ ಪಕ್ಕದ ಚೀಲೂರು ಫಾರೆಸ್ಟ್‌ನಲ್ಲಿ ಸ್ನೇಹಿತರಿಬ್ಬರ ಜೊತೆಗೂಡಿ ಹೂತುಹಾಕಿದ್ದ. ಆದರೆ ಫಾರೆಸ್ಟ್‌ನಲ್ಲಿ ಟ್ರಂಚ್ ತೋಡುವ ಕೆಲಸ ಆರಂಭವಾದಾಗ ನಾಲ್ಕು ತಿಂಗಳ ನಂತರ ಹೆಣವನ್ನು ಹೊರತೆಗೆದು, ಕಳೆಬರಗಳನ್ನ ಸುಟ್ಟು ಮಣ್ಣು ಮುಚ್ಚಿದ್ದ. ಸಂಬಂಧಿಕರಿಗೆ ತನ್ನ ಹೆಂಡತಿ ಬೇರೊಬ್ಬನ ಜೊತೆ ಓಡಿಹೋಗಿ ಮದುವೆಯಾಗಿದ್ದಾಳೆಂದು ನಂಬಿಸಿದ್ದ ಆಸಾಮಿ ಇದೀಗ ಪೊಲೀಸರ ಅತಿಥಿಯಾಗಿದ್ದಾನೆ.

ಕಳೆದ 20 ದಿನಗಳ ಹಿಂದೆ ಇದೆ ಹೂಜಗಲ್ ಪಕ್ಕದ ಬೆಟ್ಟದಲ್ಲಿ ಸ್ನೇಹಿತ ಹೆಂಡತಿ ಕೊಲೆ ಕೇಸ್‌ನಲ್ಲಿ ಮಾಗಡಿ ಪೊಲೀಸರಿಗೆ ತಗಲಾಕಿಕೊಂಡಿದ್ದ ಕಿರಣ್ ಪೊಲೀಸರ ವಿಚಾರಣೆ ವೇಳೆ ತನ್ನ ಹೆಂಡತಿ 10 ವರ್ಷಗಳ ಹಿಂದೆಯೆ ಕಾಣೆಯಾಗಿದ್ದಾಳೆ. ಮಿಸ್ಸಿಂಗ್ ಪ್ರಕರಣ ಕೂಡಾ ದಾಖಲಿಸಿದ್ದಾಗಿ ಹೇಳಿದ್ದ. ಇದರಿಂದ ಅನುಮಾನಗೊಂಡ ಪೊಲೀಸರು ಮೃತ ಪೂಜಾಳ ತಾಯಿ ಗೌರಮ್ಮಳನ್ನು ಸಂಪರ್ಕಿಸಿದ 5 ವರ್ಷದ ಹಿಂದೆ ಮಗಳು ಬೇರೊಬ್ಬನ ಜೊತೆ ಓಡಿಹೋಗಿದ್ದಾಳೆಂದು ತನ್ನ ಅಳಿಯ ಹೇಳಿದ್ದಾನೆ ಎಂದಿದ್ದಳು. ಇದರಿಂದ ಪೊಲೀಸರಿಗೆ ಮತ್ತಷ್ಟು ಅನುಮಾನ ಹೆಚ್ಚಾಗಿ, ಬಳಿಕ ಮಿಸ್ಸಿಂಗ್ ಕಂಪ್ಲೆಂಟ್ ಹುಡುಕಿದ ಪೊಲೀಸರಿಗೆ ಆ ಕಂಪ್ಲೆಂಟ್ ಸಿಕ್ಕದಿದ್ದಾಗ ಆತನ ಸ್ನೇಹಿತರಾದ ಭರತ್ ಹಾಗೂ ಕುಮಾರ್‌ನನ್ನು ವಿಚಾರಿಸಿದ್ದಾರೆ. ಆಗ ಸತ್ಯ ಬಯಲಾಗಿದೆ.

ಒಂದು ಕೊಲೆ ಕೇಸ್ ಭೇದಿಸಲು ಹೋದ ಪೊಲೀಸರಿಗೆ 5 ವರ್ಷದ ಹಳೆಯ ಪ್ರಕರಣ ಬೆಳಕಿಗೆ ಬಂದಾಕ್ಷಣ ಜೈಲಿನಲ್ಲಿದ್ದ ಆರೋಪಿ ಕಿರಣ್ ನನ್ನ ಮತ್ತೆ ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಈ ವೇಳೆ ಕಿರಣ್ ಸತ್ಯ ಬಾಯ್ಬಿಟ್ಟಿದ್ದಾನೆ. ಆದರೆ ಕುತೂಹಲದ ವಿಷಯ ಏನಂದರೆ ದೃಶ್ಯ ಸಿನಿಮಾದಲ್ಲಿ ಹೂತಿಟ್ಟಿದ್ದ ಶವವನ್ನು ಬೇರೆಡೆಗೆ ಸ್ಥಳಾಂತರಿಸುವುದನ್ನ ಗಮನಿಸಿದ್ದ ಈತ, ಅರಣ್ಯದಲ್ಲಿ ಟ್ರಂಚ್ ಕಾಮಗಾರಿ ಆರಂಭವಾಗುತ್ತಿದ್ದಂತೆ, ಎಲ್ಲಿ ಹೆಣ ಹೂತಿರುವುದು ಗೊತ್ತಾಗುತ್ತೋ ಎಂದು ಹೆಣವನ್ನು ಹೊರತೆಗೆದು ತನ್ನ ಜಮೀನಿನಲ್ಲಿ ಸುಟ್ಟು ಮತ್ತೆ ಮಣ್ಣು ಮುಚ್ಚಿದ್ದಾನೆ. ತನಿಖೆ ಕೈಗೊಂಡ ಪೊಲೀಸರು ಆರೋಪಿಯನ್ನು ಸ್ಥಳಕ್ಕೆ ಕರೆತಂದು ಪರಿಶೀಲನೆ ನಡೆಸಿದಾಗ ಹೂತಿಟ್ಟ ಶವದ ಮೂಳೆಗಳು ಪತ್ತೆಯಾಗಿವೆ. ಬಳಿಕ ಕಿರಣ್ ಹಾಗೂ ಆತನ ಸ್ನೇಹಿತರ ವಿರುದ್ಧ ಮತ್ತೊಂದು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಗಳನ್ನು ಜೈಲಿಗಟ್ಟಿದ್ದಾರೆ.

## ಪ್ರೀತಿಸಿ ಮದ್ವೆಯಾದ ಪತ್ನಿಗೆ ಚಿತ್ರಹಿಂಸೆ ಕೊಟ್ಟು ಕೊಂದ ಪಾಪಿ ಪತಿ!

**ಬೆಂಗಳೂರು:** ಮೂರು ವರ್ಷಗಳ ಹಿಂದೆಯಷ್ಟೇ ಪ್ರೀತಿಸಿ ಮದುವೆಯಾಗಿದ್ದ ಪತ್ನಿಯನ್ನು ಪತಿಯೇ ಚಿತ್ರಹಿಂಸೆ ಕೊಟ್ಟು ಕೊಂದಿರುವ ಘಟನೆ ಕೆಂಗೇರಿಯ ವಿಶ್ವೇಶ್ವರಯ್ಯ ಬಡಾವಣೆಯಲ್ಲಿ ನಡೆದಿದೆ.

ನವ್ಯಾ (25) ಕೊಲೆಯಾದ ಮಹಿಳೆ, ಕಿರಣ್ ಕೊಲೆ ಮಾಡಿದ ಪಾಪಿ ಪತಿ. ಪತ್ನಿಯ ಶೀಲ ಶಂಕಿಸಿ ಕೊಲೆ ಮಾಡಿದ್ದಾನೆ. ನಿನ್ನೆ ಮಧ್ಯಾಹ್ನ 1:30 ರಿಂದ 3 ಗಂಟೆ ಸಮಯದಲ್ಲಿ ಕೊಲೆ ನಡೆದಿರುವುದಾಗಿ ಪೊಲೀಸರು ಮಾಹಿತಿ ನೀಡಿದ್ದಾರೆ.

ಭದ್ರಾವತಿ ಮೂಲದ ನವ್ಯಾ, ಚಿಕ್ಕಬಳ್ಳಾಪುರ ಮೂಲದ ಕಿರಣ್ ಕಳೆದ ಮೂರು ವರ್ಷಗಳ ಹಿಂದೆಯಷ್ಟೇ ಪರಸ್ಪರ ಪ್ರೀತಿಸಿ ಮದುವೆಯಾಗಿದ್ದರು. ನವ್ಯಾ ಸಿನಿಮಾ ರಂಗದಲ್ಲಿ ಕೊರಿಯೋಗ್ರಾಫರ್ ಆಗಿ ಕೆಲಸ ಮಾಡುತ್ತಿದ್ದರು. ಪತಿ ಕಿರಣ್ ಕ್ಯಾಬ್ ಚಾಲಕನಾಗಿದ್ದ.

ಇತ್ತೀಚೆಗೆ ಪತಿ ಕಿರಣ್, ನವ್ಯಾ ಜೊತೆಗೆ ಆಗಾಗ್ಗೆ ಜಗಳ ತೆಗೆಯುತ್ತಿದ್ದ, ಶೀಲ ಶಂಕಿಸಿ ಗಲಾಟೆ ಮಾಡ್ತಿದ್ದ. ಬುಧವಾರ ಮಧ್ಯಾಹ್ನದ ವೇಳೆ ಇದೇ ವಿಚಾರಕ್ಕೆ ಗಲಾಟೆ ಮಾಡಿರುವ ಕಿರಣ್, ನಂತರ ನವ್ಯಾಳನ್ನ ಕುರ್ಚಿಗೆ ಕಟ್ಟಿಹಾಕಿ ಚಿತ್ರಹಿಂಸೆ ಕೊಟ್ಟು ಕೊಲೆ ಮಾಡಿದ್ದಾನೆ ಎಂದು ತಿಳಿದುಬಂದಿದೆ.

ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ಕೆಂಗೇರಿ ಪೊಲೀಸರು ಕೊಲೆ ಮಾಡಿ ಎಸ್ಕೇಪಾಗಿದ್ದ ಕಿರಣ್‌ನನ್ನ ಬಂಧಿಸಿ ಠಾಣೆಗೆ ಕರೆತಂದಿದ್ದಾರೆ. ಬಳಿಕ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.



### ಕೊಚ್ಚಿಹೋದ ಮಕ್ಕಳು

ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಕಾಶ್ಮೀರದಲ್ಲಿ ಆಗಸ್ಟ್ 30ರವರೆಗೆ ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ಆಗಸ್ಟ್ 30 ಮತ್ತು ಸೆಪ್ಟೆಂಬರ್ 1ರಂದು ಜಮ್ಮು ಮತ್ತು ಕಾಶ್ಮೀರದ ಹಲವು ಸ್ಥಳಗಳಲ್ಲಿ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದೆ.

### ಕಠಿಣ ನಿಯಮ

ಕೆಲವು ನಟೋರಿಯಸ್ ಹಂತಕರು ಸಹ ಅದೇ ಜೈಲಿನಲ್ಲಿದ್ದಾರೆ. ಹಿಂದೂ ಕಾರ್ಯಕರ್ತರನ್ನು ಹತ್ಯೆ ಮಾಡಿದ್ದ ಆರೋಪಿಗಳು ಸಹ ಅದೇ ಜೈಲಿನಲ್ಲಿದ್ದಾರೆ. ಪರಪ್ಪನ ಅಗ್ರಹಾರದಷ್ಟು ಸುಲಭವಾದ ವಾಸ್ತವ್ಯ ಬಳ್ಳಾರಿ ಜೈಲಿನಲ್ಲಿ ಇರದು ಎನ್ನಲಾಗುತ್ತಿದೆ.

### ಪ್ರಶ್ನಿಸಿದ ಪೊಲೀಸರು

ಶ್ರೀನಿವಾಸ ಅಲಿಯಾಸ್ ಕುಳ್ಳ ಸೀನ ಹಾಗೂ ಧರ್ಮನನ್ನು ಪೊಲೀಸರು ಪ್ರಶ್ನಿಸಿ ಹೇಳಿಕೆ ಪಡೆಯಲಿದ್ದಾರೆ. ಇದೇ ಪ್ರಕರಣ ಕುರಿತು ಕಾರಾಗೃಹದ ಅಧಿಕಾರಿಗಳನ್ನು ಪೊಲೀಸರು ವಿಚಾರಣೆಗೊಳಪಡಿಸಿದ್ದಾರೆ ಎಂದು ತಿಳಿದು ಬಂದಿದೆ.

ವಿಶೇಷ ಸೌಲಭ್ಯ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕವಾಗಿ ಎರಡು ಎಫ್‌ಐಆರ್‌ಗಳು ದಾಖಲಾಗಿದ್ದು, ಆ ಎರಡು ಪ್ರಕರಣಗಳಲ್ಲಿ ದರ್ಶನ್ ಎ1 ಆಗಿದ್ದಾರೆ. ಜೈಲಿನೊಳಗೆ ಕೃತ್ಯ ನಡೆದಿರುವ ಕಾರಣ ವಿಚಾರಣಾಧೀನ ಹಾಗೂ ಸಜಾ ಕೈದಿಗಳ ವಿಚಾರಣೆಗೆ ನ್ಯಾಯಾಲಯದ ಪೂರ್ವಾನುಮತಿ ಅಗತ್ಯವಾಗಿದೆ. ಈ ಹಿನ್ನಲೆಯಲ್ಲಿ ನಗರದ ಎಸಿಎಂಎಂ ನ್ಯಾಯಾಲಯಕ್ಕೆ ಅನುಮತಿ ಕೋರಿ ಪೊಲೀಸರು ಮನವಿ ಮಾಡಿದ್ದರು. ಈ ಮನವಿಗೆ ನ್ಯಾಯಾಲಯವು ಸಮ್ಮತಿಸಿದೆ.

### ಎಲ್ಲರ ಚಿತ್ತ ಹೈಕೋರ್ಟ್‌ನತ್ತ

ಕೃಷ್ಣ ದಾಖಲಿಸಿರುವ ದೂರಿನ ಕುರಿತು ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆ.20ರಂದು ಪ್ರಕಟಿಸಬೇಕಿದ್ದ ತೀರ್ಪಿಗೆ ತಾತ್ಕಾಲಿಕ ತಡೆ ಬಿದ್ದಿತು.

ಅಲ್ಲದೆ, ಟಿ.ಜೆ.ಅಬ್ರಹಾಂ ಅವರು ದಾಖಲಿಸಿರುವ ದೂರಿನ ಕುರಿತಂತೆ ಮುಂದಿನ ಕ್ರಮ ಜರುಗಿಸಲು ಮೈಸೂರಿನ ಲೋಕಾಯುಕ್ತ ಪೊಲೀಸರಿಗೆ ಅವಕಾಶ ಇಲ್ಲದಂತಾಗಿತ್ತು. ಹಾಗಾಗಿ, ಸಿದ್ದರಾಮಯ್ಯ ಅವರು ತಾತ್ಕಾಲಿಕವಾಗಿ ನಿರಾಳರಾಗಿದ್ದರು. ಗುರುವಾರ ಮತ್ತೆ ಮುಖ್ಯಮಂತ್ರಿಗಳ ಅರ್ಜಿ ಹೈಕೋರ್ಟ್ ಮುಂದೆ ವಿಚಾರಣೆಗೆ ಬರುತ್ತಿರುವುದರಿಂದ ಎಲ್ಲರ ಗಮನ ಹೈಕೋರ್ಟ್‌ನತ್ತ ನೆಟ್ಟಿದೆ.

### ಭಾವನೆಗಳಿಗೆ ಧಕ್ಕೆ

ವಿದ್ಯುತ್ ಕಂಬಗಳಲ್ಲಿ ಅಳವಡಿಸಿರುವ ಚಿತ್ರಗಳು ಐತಿಹಾಸಿಕ ಅಂಜನಾದ್ರಿ ಪರ್ವತದ ಮಾರ್ಗಸೂಚಿಗೆ ಅನುಕೂಲವಾಗಿವೆ. ಅಂಜನಾದ್ರಿಗೆ ಬರುವ ಭಕ್ತರಲ್ಲಿ ಧಾರ್ಮಿಕ ಭಕ್ತಿ ಉಂಟಾಗುವುದರಿಂದ ಇವುಗಳನ್ನು ಅಳವಡಿಸಲಾಗಿದೆ. ಇದರಿಂದ ಯಾರ ಭಾವನೆಗೂ ಧಕ್ಕೆ ಬರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದರು. ಅಷ್ಟೇ ಅಲ್ಲದೇ ನಗರಸಭೆಯಲ್ಲಿ ನಡೆದ ಸರ್ವ ಸದಸ್ಯರ ಸಭೆಯಲ್ಲೂ ಶಾಸಕ ಜನಾರ್ದನ ರೆಡ್ಡಿ ಅವರು ವಿಷಯ ಪ್ರಸ್ತಾಪಿಸಿ ಈ ವಿಷಯದಲ್ಲಿ ಅನಾವಶ್ಯಕ ಗೊಂದಲ ಸೃಷ್ಟಿಸದೇ ಎಲ್ಲರೂ ಸಹಕಾರ ನೀಡುವಂತೆ ಸದಸ್ಯರಲ್ಲಿ ಮನವಿ ಮಾಡಿದ್ದರು.

### ತಪಾಸಣೆ

ಜೊತೆಗೆ ಅಸುರಕ್ಷಿತ ಆಹಾರ ತಯಾರಿಸುತ್ತಿರುವ ಉದ್ದಿಮೆದಾರರ ಮೇಲೂ ಕಾನೂನು ರೀತಿಯಲ್ಲಿ ಕ್ರಮ ಜರುಗಿಸಲಾಗುತ್ತಿದೆ ಎಂದು ಹೇಳಿದರು.

ಜನರೇ ಆಹಾರ ಗುಣಮಟ್ಟ ಪರೀಕ್ಷೆ ಮಾಡಿಕೊಳ್ಳಲು 3400 ಟೆಸ್ಟ್ ಕಿಟ್: ಸಾರ್ವಜನಿಕರು ತಾವು ಸೇವಿಸುವ ಆಹಾರದ ಗುಣಮಟ್ಟವನ್ನು ತಾವೇ ಪರೀಕ್ಷಿಸಿಕೊಳ್ಳಲು ಅನುಕೂಲವಾಗುವಂತೆ ಹೋಟೆಲ್, ರೆಸ್ಟೋರೆಂಟ್, ಫುಡ್ ಪಾರ್ಕ್ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ 3400 ಟೆಸ್ಟಿಂಗ್ ಕಿಟ್ ಅಳವಡಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದ ಸಚಿವ ದಿನೇಶ್, ಈಗಾಗಲೇ ಒಂದು ಸಾವಿರ ಕಿಟ್ ಬಂದಿದ್ದು, ಶೀಘ್ರದಲ್ಲಿಯೇ ಸಾರ್ವಜನಿಕರ ಉಪಯೋಗಕ್ಕೆ ಲಭ್ಯವಾಗಲಿವೆ. ಜೊತೆಗೆ ಆಹಾರ ಗುಣಮಟ್ಟ ಪರೀಕ್ಷಿಸುವ ಕಾರ್ಯವನ್ನು ಆಹಾರ ಸುರಕ್ಷತಾ ಇಲಾಖೆ ಕಳೆದ ಒಂದು ವರ್ಷದಿಂದ ನಡೆಸಿಕೊಂಡು ಬರುತ್ತಿದೆ. ಉತ್ತಮ ಗುಣಮಟ್ಟದ ಆಹಾರ ಸೇವನೆ ಉತ್ತಮ ಆರೋಗ್ಯಕ್ಕೆ ನಾಂದಿ. ಹೀಗಾಗಿ ಆಹಾರ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದರು.

**ಕ್ರಿಮಿನಾಶಕಗಳ ಶೇಷಾಂಶ ಪತ್ತೆ:** ಹಣ್ಣು ಮತ್ತು ತರಕಾರಿಗಳ 385 ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಲಾಗಿದ್ದು, ವಿಶ್ಲೇಷಿಸಲಾದ 266 ಮಾದರಿಗಳಲ್ಲಿ 239 ಮಾದರಿಗಳು ಸುರಕ್ಷಿತ, 27 ಮಾದರಿಗಳು ಅಸುರಕ್ಷಿತ ಎಂದು ಕಂಡುಬಂದಿದೆ. ಅಸುರಕ್ಷಿತ ಮಾದರಿಗಳಲ್ಲಿ ಕ್ರಿಮಿನಾಶಕಗಳ ಶೇಷಾಂಶಗಳು ಹೆಚ್ಚಿನ

ಮೊದಲನೇ ಪುಟದಿಂದ...

ಪ್ರಮಾಣದಲ್ಲಿ ಕಂಡು ಬಂದಿದೆ. ಫಂಗಸ್ ಬೆಳವಣಿಗೆ ಕೂಡ ಕಂಡುಬಂದಿದೆ. ಅಲ್ಲದೇ 211 ಪನ್ನೀರ್, 246 ಕೇಕ್, 67 ಕೋವಾದ ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಲಾಗಿದ್ದು, ವಿಶ್ಲೇಷಣಾ ವರದಿಗಳು ಬಂದ ಕ್ರಮ ಕೈಗೊಳ್ಳಲಾಗುವುದು ಎಂದರು.

### ವಿರೋಧ ಸಾಧ್ಯತೆ

ಅದು ಪೂರ್ಣಗೊಳ್ಳಲು ಆರು ತಿಂಗಳು ತೆಗೆದುಕೊಳ್ಳಬಹುದು. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ತಮಿಳುನಾಡು ಸರ್ಕಾರಕ್ಕೆ ಕಾರ್ಯಸಾಧ್ಯತಾ ವರದಿಯನ್ನು ಸಿದ್ಧಪಡಿಸುವಂತೆ ಸೂಚಿಸಿದೆ ಎಂದು ಮೂಲಗಳು ತಿಳಿಸಿವೆ.

**ಬಿಎಂಆರ್‌ಸಿಎಲ್ ಆಸಕ್ತಿ ತೋರದ್ದರಿಂದ ತಮಿಳುನಾಡಿಗೆ ಹೊಣೆ:** ಕಾರ್ಯಸಾಧ್ಯತಾ ವರದಿಯನ್ನು ಆರಂಭದಲ್ಲಿ ಬಿಎಂಆರ್‌ಸಿಎಲ್ ಸಿದ್ಧಪಡಿಸಬೇಕಿತ್ತು. ಆದರೆ, ತಮಿಳುನಾಡು ಈ ಯೋಜನೆಗೆ ಹೆಚ್ಚಿನ ಆಸಕ್ತಿ ತೋರಿಸಿದ್ದರಿಂದ ಬೆಂಗಳೂರು ಮೆಟ್ರೋ ಅದನ್ನು ಮುಂದುವರಿಸಲಿಲ್ಲ. ಹೀಗಾಗಿ ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ಈಗ ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲು ತಮಿಳುನಾಡಿಗೆ ಕೇಳಿದೆ ಎಂದು ಮೂಲಗಳು ತಿಳಿಸಿವೆ.

ಹೊಸೂರು ಬೆಂಗಳೂರಿನಿಂದ ಕೇವಲ 39 ಕಿಮೀ ದೂರದಲ್ಲಿದೆ. ಬೆಂಗಳೂರಿಗೆ ಹೋಲಿಸಿದರೆ ಉತ್ತಮ ರಸ್ತೆಗಳು ಮತ್ತು ಕಡಿಮೆ ದಟ್ಟಣೆಯೊಂದಿಗೆ, ಮೆಟ್ರೋ ಸಂಪರ್ಕವು ಹೊಸೂರಿನ ಆರ್ಥಿಕ ಭವಿಷ್ಯವನ್ನು ಇನ್ನಷ್ಟು ಹೆಚ್ಚಿಸಲಿದೆ. ಬೆಂಗಳೂರಿಗೆ ಹೊಸೂರಿನಿಂದ ಕಠಿಣ ಸ್ಪರ್ಧೆ ಎದುರಾಗಲಿದೆ ಎಂದು ಮೂಲವೊಂದು ತಿಳಿಸಿದೆ.

### ಬಂಧನ

ಅಪರಿಚಿತ ವ್ಯಕ್ತಿಗಳು ಸೀಬೆ ತೋಟದಲ್ಲಿ ಕೊಲೆ ಮಾಡಿದ್ದಾರೆ ಎಂದು ದೂರು ಕೊಟ್ಟಿದ್ದ. ಆ.24ರಂದು ನಾನು ಫಂಕ್ಷನ್‌ಗೆ ಅಂತ ಹೊರಗಡೆ ಹೋಗಿದ್ದೆ. ಆ.24 ಸಂಜೆಯಿಂದ ಪತ್ನಿಗೆ ಕರೆ ಮಾಡಿದ್ರೆ ರಿಸೀವ್ ಮಾಡಿಲ್ಲ. ಬೆಳಗ್ಗೆ ತೋಟದ ಬಳಿ ಹೋದಾಗ ಪತ್ನಿ ಹೆಣವಾಗಿ ಬಿದ್ದಿದ್ದಳು. ಯಾರೋ ನನ್ನ ಪತ್ನಿಯನ್ನ ಕೊಲೆ ಮಾಡಿದ್ದಾರೆ ಎಂದು ದೂರು ನೀಡಿದ್ದ.

ಪೊಲೀಸರು ಕೂಡ ದೂರು ಸ್ವೀಕರಿಸಿ ತನಿಖೆ ಶುರು ಮಾಡಿದ್ರು. ಆದರೆ ಪೊಲೀಸರಿಗೆ ಈತನ ಮಾತಿನ ಮೇಲೆ ಅನುಮಾನ ಮೂಡಿತ್ತು. ಆರೋಪಿ ಮೆಹಬೂಬ್ ಪೊಲೀಸರು ಕೇಳಿದ ಪ್ರಶ್ನೆಗಳಿಗೆ ಸರಿಯಾದ ಉತ್ತರ ನೀಡಲಿಲ್ಲ. ಹೀಗಾಗಿ ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಅಸಲಿ ವಿಚಾರ ಬಯಲಿಗೆ ಬಂದಿದೆ. ಹೆಂಡತಿ ಮೇಲೆ ಅನುಮಾನ ಪಟ್ಟು ತಾನೇ ಕೊಲೆಗೈದಿರೋದಾಗಿ ಆರೋಪಿ ತಪ್ಪೊಪ್ಪಿಕೊಂಡಿದ್ದಾನೆ.

ಹಣ್ಣು ಕೀಳಬೇಕು ಬಾ ಎಂದು ಆ.24ರಂದು ತಾನು ಕೆಲಸ ಮಾಡ್ತಿದ್ದ ತೋಟಕ್ಕೆ ಆರೋಪಿ ಮೆಹಬೂಬ್ ತನ್ನ ಪತ್ನಿಯನ್ನ ಕರೆದುಕೊಂಡು ಹೋಗಿದ್ದ. ಈ ವೇಳೆ ಪತ್ನಿ ಜೊತೆ ಜಗಳ ತೆಗೆದು ಕಬ್ಬಿಣದ ವಸ್ತುವಿನಿಂದ ತಲೆಗೆ ಹೊಡೆದು ಕೊಲೆ ಮಾಡಿದ್ದಾನೆ. ಬಳಿಕ ಶವ ಅಲ್ಲೇ ಬಿಟ್ಟು ರಾತ್ರಿಯಿಡಿ ಮನೆಗೆ ಹೋಗದೆ ಹೊರಗಡೆಯೇ ಇದ್ದು ಬೆಳಗ್ಗೆ ಮನೆಗೆ ತೆರಳಿ ಏರಿಯಾದಲ್ಲಿ ಯಾರಿಗೂ ಅನುಮಾನ ಬರದ ಹಾಗೆ ಇದ್ದು ತಾನೇ ಹೋಗಿ ಪೊಲೀಸರಿಗೆ ದೂರು ನೀಡಿ ನ್ಯಾಯ ಕೊಡಿಸಿ ಅಂದು ಮೊಸಳೆ ಕಣ್ಣೀರು ಹಾಕಿದ್ದಾನೆ. ಸದ್ಯ ಆರೋಪಿ ಮೆಹಬೂಬ್ ಪೊಲೀಸರ ತನಿಖೆಯಲ್ಲಿ ಹತ್ಯೆಯ ಸತ್ಯ ಬಾಯ್ಬಿಟ್ಟಿದ್ದು ಪೊಲೀಸರು ಆರೋಪಿಯನ್ನು ಬಂಧಿಸಿ ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

### ಸಾವು

ಗಂಭೀರವಾಗಿ ಗಾಯಗೊಂಡ ಜೈಸಿಂಗ್, ಯು ಜೈಸಿಂಗ್ ಅವರನ್ನು ಗೌರಿಬಿದನೂರು ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ನೀಡಲಾಗುತ್ತಿದ್ದು, ಉಳಿದ ಇಬ್ಬರಿಗೆ ಹಿಂದೂಪೂರ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಆರು ಮಂದಿ ಆಂಧ್ರಪ್ರದೇಶದ ಸತ್ಯಸಾಯಿ ಜಿಲ್ಲೆಯ ಹಿಂದೂಪುರ ಬಳಿಯ ಕೈಗಾರಿಕಾ ಪ್ರದೇಶ ಶ್ಯಾಮ್ ಫೈರಷ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು, ಕೆಲಸ ಮುಗಿಸಿಕೊಂಡು ಗೌರಿಬಿದನೂರು ಮಾರ್ಗವಾಗಿ ಇನ್ನೋವಾ ಕಾರಿನಲ್ಲಿ ಬರುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಕಾರು ಚಾಲಕನ ಅತಿ ವೇಗವೇ ಘಟನೆಗೆ ಕಾರಣ ಎನ್ನಲಾಗುತ್ತಿದ್ದು, ಪಲ್ಟಿಯಾಗಿ ಮರಕ್ಕೆ ಡಿಕ್ಕಿ ಹೊಡೆದಿದೆ. ಗೌರಿಬಿದನೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಇನ್ನೂ ಚಿಂತಾಮಣಿ ತಾಲೂಕಿನ ದಂಡುಪಾಳ್ಯ ಗೇಟ್ ಬಳಿ ಕಾರು ಹಾಗೂ ಟಿಟಿ ನಡುವೆ ಮುಖಾಮುಖಿ ಡಿಕ್ಕಿಯಾಗಿ ಕಾರಿನಲ್ಲಿದ್ದ ಮಗ ಶ್ರೀಕಾಂತ್, ತಂದೆ ಶ್ರೀನಿವಾಸಲು ಹಾಗೂ ತಾಯಿ ಪುಷ್ಪ ಮೃತಪಟ್ಟಿದ್ದಾರೆ. ಟಿಟಿಯಲ್ಲಿದ್ದ 12 ಮಂದಿಯೂ ಗಾಯಗೊಂಡು ಆಸ್ಪತ್ರೆ ಪಾಲಾಗಿದ್ದಾರೆ ಎಂದು ತಿಳಿದು ಬಂದಿದೆ.

## ಪ್ರೀತಿ ನಿರಾಕರಿಸಿದ ಮಂಗಳಮುಖಿಗೆ ಚಾಕು ಇರಿತ

**ತುಮಕೂರು:** ಪ್ರೀತಿ ನಿರಾಕರಿಸಿದ ಮಂಗಳಮುಖಿಗೆ ಚಾಕು ಇರಿದು ಯುವಕ ಪರಾರಿಯಾಗಲು ಯತ್ನಿಸಿದಾಗ ಸ್ಥಳೀಯರು ಆತನನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ ಘಟನೆ ತುಮಕೂರು ಜಿಲ್ಲೆ ಕುಣಿಗಲ್ ಪಟ್ಟಣದ ಕೋಟೆ ಪ್ರದೇಶದಲ್ಲಿ ನಡೆದಿದೆ. ಹನೀಷಾ ಎಂಬ 21 ವರ್ಷದ ಮಂಗಳಮುಖಿಗೆ ಮಂಡ್ಯದ ಆದಿಲ್ ಎಂಬ 23 ವರ್ಷದ ಯುವಕ ಚಾಕುವಿನಿಂದ ಇರಿದಿದ್ದಾನೆ.



ಹನೀಷಾ ಹಾಗೂ ಆದಿಲ್ ಕಳೆದ ಆರು ತಿಂಗಳಿಂದ ಪ್ರೀತಿಸುತ್ತಿದ್ದರು ಎನ್ನಲಾಗಿದೆ. ಲಿಂಗತ್ವ ಅಲ್ಪಸಂಖ್ಯಾತರ ಕಾರ್ಯಕ್ರಮಗಳ ನಿಮಿತ್ತ ಹನೀಷಾ ಆಗಾಗ ಬೇರೆ ಬೇರೆ ಊರುಗಳಿಗೆ ಹೋಗುತ್ತಿದ್ದಳು. ಇದನ್ನು ಸಹಿಸದ ಆದಿಲ್, ಆಕ್ಷೇಪ ವ್ಯಕ್ತಪಡಿಸಿ ಹಲ್ಲೆ ನಡೆಸುತ್ತಿದ್ದ. ಇದರಿಂದ ಬೇಸತ್ತು ಪ್ರೇಮ ನಿರಾಕರಿಸಿದ ಹಿನ್ನೆಲೆಯಲ್ಲಿ ಇಬ್ಬರ ನಡುವೆ ಮಾತಿನ ಚಕಮಕಿ ನಡೆದಿತ್ತು. ಈ ಸಂದರ್ಭದಲ್ಲಿ ಆದಿಲ್ ಚಾಕುವಿನಿಂದ ಇರಿದಿದ್ದಾನೆ. ಇನ್ನು ಗಾಯಾಳು ಹನೀಷಾಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಕುಣಿಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶೀಲ ಶಂಕೆ: ಹೆಂಡತಿಯನ್ನು ಚೇರ್‌ಗೆ ಕಟ್ಟಿಹಾಕಿ ಕತ್ತು ಕೊಯ್ದ ಗಂಡ

**ಬೆಂಗಳೂರು:** ಶಿವಮೊಗ್ಗ ಜಿಲ್ಲೆ ಭದ್ರಾವತಿ ಮೂಲದ ನವ್ಯ ಹಾಗೂ ಚಿಕ್ಕಬಳ್ಳಾಪುರ ಮೂಲದ ಕ್ಯಾಬ್ ಚಾಲಕ ಕಿರಣ್ 3 ವರ್ಷಗಳ ಹಿಂದೆ ಮದುವೆಯಾಗಿದ್ದರು. ಕೆಂಗೇರಿಯ ವಿಶ್ವೇಶ್ವರಯ್ಯ ಲೇಔಟ್‌ನಲ್ಲಿ ವಾಸವಾಗಿದ್ರು. ವೃತ್ತಿಯಲ್ಲಿ ಈಕೆ ಕೊರಿಯೋಗ್ರಾಫರ್ ಆಗಿದ್ದು, ವಿವಿಧ ಖಾಸಗಿ ಶಾಲೆಗಳಿಗೆ ಹೋಗಿ ಮಕ್ಕಳಿಗೆ ಡ್ಯಾನ್ಸ್ ಹೇಳಿಕೊಡ್ತಿದ್ದಳು. ಎಲ್ಲವೂ ಚೆನ್ನಾಗಿಯೇ ನಡೆದಿತ್ತು. ಆದ್ರೆ ಪತಿ ಕಿರಣ್ ಗೆ ಆಕೆ ಮೇಲೆ ಇತ್ತೀಚೆಗೆ ಸಂಶಯ ಶುರುವಾಗಿತ್ತು. ಇದೇ ಸಂಶಯದ ಭೂತ ಆಕೆಯ ಹತ್ಯೆಗೆ ಕಾರಣವಾಗಿದೆ.

ವಿಚಿತ್ರ ಅಂದ್ರೆ ನವ್ಯಳನ್ನು ಪತಿ ಕಿರಣ್ ಕತ್ತು ಕೊಯ್ದು ಕೊಲೆ ಮಾಡಿದ್ರು, ನವ್ಯ ಪಕ್ಕದಲ್ಲಿ ಮಲಗಿದ್ದ ಆಕೆಯ ಸ್ನೇಹಿತೆ ಐಶ್ವರ್ಯಗೆ ಎಚ್ಚರವೇ ಇರಲಿಲ್ಲ. ಕಂಠಪೂರ್ತಿ ಬಿಯರ್‌ಸೇವಿಸಿ ಗಾಢ ನಿದ್ದೆಗೆ ಜಾರಿದ್ದಳು, ಕೊಲೆ ಬಳಿಕ ಆರೋಪಿ ಕಿರಣ್ ಪೊಲೀಸ್ ಠಾಣೆಗೆ ತೆರಳಿ ಶರಣಾಗಿದ್ದು, ಬೆಳಗ್ಗೆ ಪೊಲೀಸರು ಬಂದು ಎಬ್ಬಿಸಿದಾಗಲೇ ಐಶ್ವರ್ಯಗೆ ಕೃತ್ಯ ಗೊತ್ತಾಗಿದ್ಯಂತೆ. ಇನ್ನು ಈ ಘಟನೆಯಿಂದ ನೆರೆಹೊರೆಯ ಮನೆಯವರು ಬೆಚ್ಚಿಬಿದ್ದಿದ್ದಾರೆ.

### ಗುಜರಾತ್‌ನ ಹಲವು ಜಿಲ್ಲೆಗಳಲ್ಲಿ ರೆಡ್ ಅಲರ್ಟ್

# ಮಳೆಗೆ 15 ಸಾವು, 23 ಸಾವಿರ ಮಂದಿ ಸ್ಥಳಾಂತರ



**ಗಾಂಧೀನಗರ್:** ಗುಜರಾತ್‌ನಲ್ಲಿ ಭಾರೀ ಮಳೆಯಾಗುತ್ತಿದ್ದು ಹಲವು ಜಿಲ್ಲೆಗಳಿಗೆ ಕೇಂದ್ರ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ.

ಹವಾಮಾನ ಇಲಾಖೆ ಪ್ರವಾಹ ಪರಿಸ್ಥಿತಿ ನಡುವೆ ಭಾರೀ ಮಳೆಯ ಎಚ್ಚರಿಕೆ ನೀಡಿದ್ದು, 11 ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಮತ್ತು 22 ಜಿಲ್ಲೆಗಳಲ್ಲಿ ಯಲ್ಲೋ ಅಲರ್ಟ್ ಘೋಷಣೆ ಮಾಡಿದೆ. ಕಚ್ಛ್, ದ್ವಾರಕಾ, ಜಾಮ್‌ನಗರ, ಮೊರ್ಬಿ, ಸುರೇಂದ್ರನಗರ, ಜುನಾಗಢ್, ರಾಜ್‌ಕೋಟ್, ಬೊಟಾಡ್, ಗಿರ್ಸೋಮನಾಥ್, ಅಮ್ರೇಲಿ ಮತ್ತು ಭಾವನಗರ ಸೇರಿದಂತೆ ಸೌರಾಷ್ಟ್ರ ಪ್ರದೇಶಗಳಿಗೆ ರೆಡ್ ಅಲರ್ಟ್, ಮಧ್ಯ ಗುಜರಾತ್ ಮತ್ತು ದಕ್ಷಿಣ ಗುಜರಾತ್‌ಗೆ ಹಳದಿ ಅಲರ್ಟ್ ಘೋಷಿಸಿದೆ.

ಭಾರೀ ಮಳೆಯಿಂದಾಗಿ ಗುಜರಾತ್‌ನ ವಿವಿಧ ಜಿಲ್ಲೆಗಳಲ್ಲಿ ಕನಿಷ್ಠ 15 ಜನರು ಸಾವನ್ನಪ್ಪಿದ್ದಾರೆ. 23,000 ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ ಮತ್ತು 300 ಕ್ಕೂ ಹೆಚ್ಚು ಜನರನ್ನು ರಕ್ಷಿಸಲಾಗಿದೆ. ಈಗಾಗಲೇ 14 ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ತುಕಡಿಗಳು ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪಡೆಯ 22 ತುಕಡಿಗಳನ್ನು ನಿಯೋಜಿಸಲಾಗಿದೆ.

## ಲಾರಿ ಡಿಕ್ಕಿ ಹೊಡೆದು ಸೈಕಲ್ ಸವಾರ ಸ್ಥಳದಲ್ಲೇ ಸಾವು

**ಬೆಂಗಳೂರು:** ಸೈಕಲ್ ಸವಾರನಿಗೆ ಲಾರಿ ಡಿಕ್ಕಿ ಹೊಡೆದ ಪರಿಣಾಮ ಸೈಕಲ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಚಾಲುಕ್ಯ ಸರ್ಕಲ್‌ನಲ್ಲಿ ನಡೆದಿದೆ.

ಮೃತ ಸೈಕಲ್ ಸವಾರ ರಾಜಸ್ಥಾನ ಮೂಲದ ವ್ಯಕ್ತಿ ಎಂದು ತಿಳಿದು ಬಂದಿದೆ. ಸೈಕಲ್ ಸವಾರ ಕೆಲಸ ಮುಗಿಸಿಕೊಂಡು ಮನೆಗೆ ಹೋಗುತ್ತಿದ್ದ ವೇಳೆ ಘಟನೆ ನಡೆದಿದೆ. ಸ್ಥಳಕ್ಕೆ ಹೈಗ್ರೌಂಡ್ ಸಂಚಾರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಘಟನೆ ಸಂಬಂಧ ಹೈಗ್ರೌಂಡ್ ಸಂಚಾರಿ ಪೊಲೀಸರು ಲಾರಿ ಚಾಲಕ ಹಾಗೂ ಲಾರಿಯನ್ನು ವಶಕ್ಕೆ ಪಡೆದಿದ್ದಾರೆ.

## ಇಬ್ಬರು ಹಿಂದೂ ಸಂಘಟನೆ ಕಾರ್ಯಕರ್ತರ ಬಂಧನ

**ಮಂಗಳೂರು:** ಐವನ್ ಡಿಸೋಜಾ ಮನೆಗೆ ಕಲ್ಲು ತೂರಾಟ ಪ್ರಕರಣದಲ್ಲಿ ಇಬ್ಬರು ಹಿಂದೂ ಸಂಘಟನೆ ಕಾರ್ಯಕರ್ತರ ಬಂಧನವಾಗಿದೆ.

ಕಲ್ಲಡ್ಕದ ದಿನೇಶ್ (20) ಮತ್ತು ಭರತ್ (24) ಬಂಧಿತ ಆರೋಪಿಗಳು. ಬಂಧಿತರಿಬ್ಬರೂ ವಿಹೆಚ್‌ಪಿ, ಬಜರಂಗದಳದ ಕಾರ್ಯಕರ್ತರಾಗಿದ್ದಾರೆ. ಸಿಸಿಟಿವಿ ಕ್ಯಾಮೆರಾದಲ್ಲಿ ದಾಖಲಾದ ದೃಶ್ಯ ಆಧರಿಸಿ ಇಬ್ಬರು ಆರೋಪಿಗಳನ್ನು ಬಂಧಿಸಿದ ಪೊಲೀಸರು ರಾಜ್ಯಪಾಲರ ಕುರಿತು ಎಂಎಲ್‌ಸಿ ಐವನ್ ಡಿಸೋಜಾ ನೀಡಿದ ಹೇಳಿಕೆ ವಿವಾದಕ್ಕೆ ಕಾರಣವಾಗಿತ್ತು. ಐವನ್ ಡಿಸೋಜಾ ವಿರುದ್ಧ ಭಾರೀ ಆಕ್ರೋಶ ವ್ಯಕ್ತವಾಗಿತ್ತು. ಆಗಸ್ಟ್ 20 ರ ತಡರಾತ್ರಿ ಐವನ್ ಡಿಸೋಜಾ ಅವರ ಮನೆಗೆ ಕಲ್ಲು ತೂರಾಟ ನಡೆದಿತ್ತು. ಬೈಕ್‌ನಲ್ಲಿ ಬಂದ ಇಬ್ಬರು ಐವನ್ ಮನೆ ಮೇಲೆ ಕಲ್ಲು ತೂರಿ ಪರಾರಿಯಾಗಿದ್ದರು ಪ್ರಕರಣದ ಕುರಿತು ತನಿಖೆ ನಡೆಸಿ ಇಬ್ಬರನ್ನು ಪಾಂಡೇಶ್ವರ ಠಾಣೆಯ ಪೊಲೀಸರು ಬಂಧಿಸಿದ್ದಾರೆ.

## ಗಾಂಧಿ ವಿಚಾರಧಾರೆಗಳಿಗೆ ಮೂರ್ತರೂಪ, ಜಿಲ್ಲಾಧಿಕಾರಿ ಕಚೇರಿ ಪಕ್ಕದಲ್ಲಿ ನಿರ್ಮಾಣ

# ಮೈಸೂರಿನ ಮುಕುಟಕ್ಕೆ ಮಹಾತ್ಮ ಗಾಂಧಿ ಭವನದ ಗರಿ

**ಮೈಸೂರು:** ಸಾಂಸ್ಕೃತಿಕ ನಗರಿ, ಅರಮನೆ ನಗರಿ ಎಂಬ ಹೆಗ್ಗಳಿಕೆಯ ಮೈಸೂರು ಶೀಘ್ರದಲ್ಲಿಯೇ ಗಾಂಧಿ ಭವನ ಎಂಬ ಗರಿಯನ್ನು ತನ್ನ ಮುಕುಟಕ್ಕೆ ಸಿಕ್ಕಿಸಿಕೊಳ್ಳಲಿದೆ.

ಮಹಾತ್ಮ ಗಾಂಧಿಯವರ ಚಿಂತನೆಗಳು, ತತ್ವ, ಆದರ್ಶ, ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಅವರು ನೀಡಿದ ಕೊಡುಗೆಗಳೊಂದಿಗೆ, ಗಾಂಧಿಯವರ ಸರಳ ಜೀವನ, ಸತ್ಯಾಗ್ರಹ, ಗುಡಿ ಕೈಗಾರಿಕೆಗಳಿಗೆ ನೀಡಿದ ಪ್ರೋತ್ಸಾಹ, ಮಕ್ಕಳು ಮಹಿಳೆಯರು, ದಲಿತ, ಹಿಂದುಳಿದವರ ಬಗೆಗೆ ಅವರಿಗಿದ್ದ ಕಾಳಜಿ, ತುಡಿತಗಳ ಅನಾವರಣ ಗಾಂಧಿ ಭವನದಲ್ಲಿ ಆಗಲಿದೆ.

ನಗರದ ಬನ್ನೂರು ರಸ್ತೆಯ ಜಿಲ್ಲಾಧಿಕಾರಿ ಕಚೇರಿ ಪಕ್ಕದಲ್ಲಿ ಸದ್ದಿಲ್ಲದೇ ನಿರ್ಮಾಣ ವಾಗುತ್ತಿರುವ ಗಾಂಧಿಭವನದ ಶೇ.70ರಷ್ಟು ಕಾಮಗಾರಿ ಪೂರ್ಣಗೊಂಡು, ಮುಂದಿನ ಮೂರ್ನಾಲ್ಕು ತಿಂಗಳಲ್ಲಿ ಉದ್ಘಾಟನೆಗೆ ಸಿದ್ದಗೊಳ್ಳಲಿದೆ. ಮುಖ್ಯ ಮಂತ್ರಿ ಸಿದ್ದರಾಮಯ್ಯನವರು ತಮ್ಮ ಮೊದಲ



ಅವಧಿಯಲ್ಲಿ ಅಂದರೆ 2016-17ರ ಆಯವ್ಯಯದಲ್ಲಿ ಗಾಂಧೀಜಿಯವರ ವಿಚಾರಧಾರೆಗಳನ್ನು ಪ್ರಚುರಪಡಿಸಲು ಅನುಕೂಲವಾಗುವಂತೆ, ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ವಾರ್ತಾ ಇಲಾಖೆಯ ಮುಖಾಂತರ 3 ಕೋಟಿ ರೂ. ವೆಚ್ಚದಲ್ಲಿ ಗಾಂಧಿ ಭವನ ನಿರ್ಮಾಣ ಘೋಷಿಸಿದ್ದರು. ಅದರಂತೆ ಕಾಮಗಾರಿ ನಡೆಯುತ್ತಿದೆ.

ಗಾಂಧಿ ಭವನದಲ್ಲಿ ವರ್ಷಪೂರ್ತಿ ಕಾರ್ಯ ಚಟುವಟಿಕೆಗಳು ಹಾಗೂ ತರಬೇತಿ ನಡೆಸಲು ಉದ್ದೇಶಿಸಲಾಗಿದೆ. ಕಾಲಕಾಲಕ್ಕೆ ಸಭೆ, ಸಮಾರಂಭ ನಡೆಸಿ ಗಾಂಧೀಜಿಯವರ ವಿಚಾರಧಾರೆಗಳನ್ನು ಯುವ ಪೀಳಿಗೆಗೆ ತಲುಪಿಸುವ ಕಾರ್ಯ ಮಾಡಲಾಗುತ್ತದೆ.

ಅದರಂತೆ ಮೈಸೂರು ಜಿಲ್ಲೆಯಲ್ಲಿಯೂ 1 ಎಕರೆ ವಿಶಾಲವಾದ ಪ್ರದೇಶದಲ್ಲಿ ಗಾಂಧಿಭವನ ತಲೆ ಎತ್ತುತಿದ್ದು 100★100 ಅಳತೆಯ ಭವ್ಯ ಕಟ್ಟಡ ನಿರ್ಮಾಣವಾಗುತ್ತಿದೆ. ಕಟ್ಟಡದಲ್ಲಿ ಗ್ರಂಥಾಲಯ, ವಾಚನಾಲಯ, ವಿವಿದ್ದೋದ್ದೇಶ ಸಭಾಂಗಣ, ತರಬೇತಿ ಕೇಂದ್ರ, ಗಾಂಧಿಯವರ ಜೀವನದ ವಿವಿಧ ಹಂತಗಳ ಪೋಟೋ ಗ್ಯಾಲರಿ, 100 ಜನ ಕುಳಿತುಕೊಳ್ಳಬಹುದಾದ ಸಭಾಂಗಣ, ಸುಂದರ ಆಕೃತಿಗಳ ಒಳಾಂಗಣ, ಕಚೇರಿ ಕೋಣೆ ಸೇರಿದಂತೆ, ಕಟ್ಟಡದ ಹಿಂಭಾಗದಲ್ಲಿ ಶೌಚಾಲಯ, ವಿಕಲಚೇತನರಿಗೆ ರ್‍ಯಾಂಪ್ ವ್ಯವಸ್ಥೆ ಇರಲಿದೆ.

ಕಟ್ಟಡ ಮುಂಭಾಗದ ಅಂಗಳದಲ್ಲಿ ಹುಲ್ಲುಹಾಸಿನ ನಡುವೆ ಗಾಂಧಿಯವರ ವಿವಿಧ ಕಲಾಕೃತಿಗಳು, ಸ್ವಾತಂತ್ರ್ಯ ಸಂಗ್ರಾಮದ ಫೋಟೋಗಳು, ದೆಹಲಿಯ ಪಾರ್ಲಿಮೆಂಟ್ ಮುಂಭಾಗದಲ್ಲಿರುವ ಗ್ಯಾರಾ ಮೂರ್ತಿ ಆಕೃತಿ ತಲೆ ಎತ್ತಲಿದೆ.

ಜಿಲ್ಲಾಮಟ್ಟದಲ್ಲಿ ಗಾಂಧಿ ಭವನ ನಿರ್ವಹಣೆಗಾಗಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಜಿಲ್ಲಾಮಟ್ಟದ ಸಮಿತಿಯಿದ್ದು, ಜಿಲ್ಲಾ ಪಂಚಾಯತ್ ಸಿಇಒ, ಪೊಲೀಸ್ ವರಿಷ್ಠಾಧಿಕಾರಿ ಸದಸ್ಯರಿದ್ದು ಜಿಲ್ಲಾ ವಾರ್ತಾಧಿಕಾರಿ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ. ಒಟ್ಟಾರೆಯಾಗಿ ಗಾಂಧಿ ಭವನ ಗಾಂಧಿ ಪ್ರಿಯರು, ಗಾಂಧಿವಾದಿಗಳು, ವಿದ್ಯಾರ್ಥಿಗಳು, ಮಕ್ಕಳು, ಸಾರ್ವಜನಿಕರು ಗಾಂಧಿಯವರನ್ನು ಅರಿಯುವ ಹಾಗೂ ಪಿಕ್ನಿಕ್ ಪ್ರಿಯರಿಗೆ ಒಂದರ್ಧ ದಿನ ಕಳೆಯಲು ಒಂದು ಉತ್ತಮ ತಾಣವಾಗಲಿದೆ.

# ಪೂಲ್ ಕ್ಯಾಂಪಸ್ ಡ್ರೈವ್: 41 ಮಂದಿ ಆಯ್ಕೆ

**ಮೈಸೂರು:** ಮಾನಸಗಂಗೋತ್ರಿಯ ಜಿಐಎಸ್ ಹಾಗೂ ಭೂಗೋಳ ಅಧ್ಯಯನ ವಿಭಾಗವು ಬುಧವಾರ ಆಯೋಜಿಸಿದ್ದ ಪೂಲ್ ಕ್ಯಾಂಪಸ್ ಡ್ರೈವ್ ಸಂದರ್ಶನದಲ್ಲಿ ವಿವಿಧ ಭೌಗೋಳಿಕ ವಿಜ್ಞಾನ ಮತ್ತು ತಂತ್ರಜ್ಞಾನ ಕಂಪನಿಗಳಿಗೆ 42 ವಿದ್ಯಾರ್ಥಿಗಳು ಆಯ್ಕೆಯಾದರು.

ಆಟಂ ಜಿಯೊ, ಅಟ್ಲಾಸ್ ಶೈಲ್ ಮ್ಯಾಪ್ ಐಟಿ, ವ್ಯಾಪ್ಸ್, ಸ್ಪೇಶಿಯಲ್ ಹಾಕ್ ಹಾಗೂ ಯೂನಿವರ್ಸಲ್ ಕಂಪನಿಗಳು ಪಾಲ್ಗೊಂಡಿದ್ದವು. ಅವುಗಳಿಗೆ 100ಕ್ಕೂ ಹೆಚ್ಚು ಅಭ್ಯರ್ಥಿಗಳು ಬೇಕಿದ್ದರು. ಜಿಐಎಸ್‌ನ ಎಲ್ಲ 18 ಪದವೀಧರರು, ಭೂಗೋಳ ಅಧ್ಯಯನ ವಿಭಾಗದ 24 ಅಭ್ಯರ್ಥಿಗಳು ಉದ್ಯೋಗ ಗಿಟ್ಟಿಸಿದರು.

ಕ್ಯಾಂಪಸ್ ಡ್ರೈವ್ ಉದ್ಘಾಟಿಸಿದ ಕುಲಪತಿ ಪ್ರೊ. ಎನ್.ಕೆ.ಲೋಕನಾಥ್, ಕ್ಯಾಂಪಸ್ ಸಂದರ್ಶನಗಳು ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಉದ್ಯೋಗ ನೀಡಿ, ನಿರುದ್ಯೋಗವನ್ನು ತಪ್ಪಿಸುತ್ತವೆ. ಹೊಸ ಪ್ರತಿಭೆಗಳು ನೀಡುವ ಹೊಸ ಉಪಾಯಗಳು ಪ್ರತಿ ಕಂಪನಿಗೂ ಅಗತ್ಯವಾಗಿವೆ ಎಂದರು.

ಕ್ಯಾಂಪಸ್ ಸಂದರ್ಶನಗಳಿಂದ ಉದ್ಯಮಗಳು ಶಿಕ್ಷಣ ಸಂಸ್ಥೆಗಳ ನಡುವೆ ಸಮನ್ವಯ ಮೂಡುತ್ತದೆ. ಯಾವ ಮಾದರಿಯ ಜ್ಞಾನ ಹಾಗೂ ಕೌಶಲಗಳು ಅಗತ್ಯ ಎಂಬುದನ್ನು ಸಂಸ್ಥೆಗಳಿಗೆ ಉದ್ಯಮಗಳು ಮನವರಿಕೆ ಮಾಡಿಕೊಡುತ್ತವೆ. ಪಠ್ಯಕ್ರಮದಲ್ಲಿ ಇದ್ದದ್ದೇ ಬೇರೆ, ಉದ್ಯೋಗಕ್ಕೆ ಹೋದಾಗ ಎದುರಾಗುವ ಸವಾಲುಗಳು ಬೇರೆಯಾದರೆ ಕಷ್ಟವಾಗುತ್ತದೆ. ಹೀಗಾಗಿ ಇಂಥ ಕಾರ್ಯಕ್ರಮಗಳು ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ಅಗತ್ಯ ತರಬೇತಿ ಹಾಗೂ ಕೌಶಲಗಳನ್ನು ಕಂಪನಿಗಳು ವಿದ್ಯಾರ್ಥಿಗಳಿಗೆ ಕಲಿಸಬೇಕು. ಅಲ್ಲದೆ ಉದ್ಯೋಗ ನೀಡಿ ಪ್ರೋತ್ಸಾಹ ನೀಡುವುದರಿಂದ ಅಭ್ಯರ್ಥಿಗೆ ಕಂಪನಿಯ ಬೆಳವಣಿಗೆಯಲ್ಲಿ ಹೆಚ್ಚು ಕೆಲಸ ಮಾಡಬೇಕೆಂಬ ಉತ್ಸಾಹ ಮೂಡುತ್ತದೆ. ಕಂಪನಿಗೂ ಕಡಿಮೆ ವೆಚ್ಚದಲ್ಲಿ ಸಮರ್ಥ ಮಾನವ ಸಂಪನ್ಮೂಲ ಸಿಕ್ಕಂತಾಗುತ್ತದೆ ಎಂದರು.

**ಕ್ಯಾಂಪಸ್ ಸಂದರ್ಶನಗಳಿಂದ ಪ್ರತಿಭಾನಿತ ವಿದ್ಯಾರ್ಥಿಗಳಿಗೆ ಉದ್ಯೋಗ: ಪ್ರೊ.ಎನ್. ಕೆ.ಲೋಕನಾಥ್**

ವಿದ್ಯಾರ್ಥಿ ಗಳಿಗೆ ಆರಂಭದಲ್ಲಿಯೇ ಉತ್ತಮ ತರಬೇತಿ, ಸಂಬಳ ಸಿಗುವುದರಿಂದ ಉದ್ಯೋಗದ ಅಭದ್ರತೆಯೂ ಎಂಥ ಸಂದರ್ಭದಲ್ಲಿಯೂ ಕಾಡುವುದಿಲ್ಲ. ವಿದ್ಯಾರ್ಥಿಗಳು ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಭೂ ಗೋಳಕ್ಕೆ ಸಂಬಂಧಿಸಿದ ವಿಷಯಗಳಲ್ಲಿ ಪದ ವೀಧರರಾದವರಿಗೆ ವಿಪುಲವಾದ ಉದ್ಯೋಗವಕಾಶ ಸಿಗುತ್ತದೆ. ಪರಿಸರ, ಮಾನವ ಸಂಪನ್ಮೂಲ, ಪ್ರವಾಹ, ದತ್ತಾಂಶ, ಪ್ರವಾಸೋದ್ಯಮ, ನಗರ ಯೋಜನೆ ಮತ್ತು ಅಭಿವೃದ್ಧಿ, ಮೂಲಸೌಕರ್ಯ ಅಭಿವೃದ್ಧಿ, ಭೂ ಉಪಯೋಗದ ಯೋಜನೆ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಪ್ರತಿಭೆಗಳು ಬೇಕಾಗಿದ್ದಾರೆ ಎಂದು ಲೋಕನಾಥ್ ವಿವರಿಸಿದರು.

ಆಟಂಜಿಯೊ ಕಂಪನಿಯ ಸಿಇಒ ಶ್ರವಣ್ ರೆಡ್ಡಿ, ಭೂ ಸ್ವರೂಪ ಅಧ್ಯಯನ, ನಕ್ಷೆ, ವಿಶ್ಲೇಷಣೆ ಸೇರಿದಂತೆ ಎಲ್ಲಕ್ಕೂ ಪದವೀಧರರು ಅಗತ್ಯ. ನೈಸರ್ಗಿಕ ವಿಕೋಪ ನಿರ್ವಹಣೆ, ವನ್ಯಜೀವಿ ರಕ್ಷಣೆ, ಕೃಷಿ, ಸರಕು ಸಾಗಣೆ, ಸಾರ್ವಜನಿಕ ಆರೋಗ್ಯ, ಅರಣ್ಯ, ವ್ಯಾಪಾರ ವಹಿವಾಟು, ಮಾರುಕಟ್ಟೆ ವಿಶ್ಲೇಷಣೆ, ರಕ್ಷಣೆ ಮತ್ತು ಭದ್ರತೆ, ರಿಯಲ್ ಎಸ್ಟೇಟ್ ಉದ್ಯಮಗಳೂ ಜಿಐಎಸ್, ಭೂಗೋಳ ವಿಜ್ಞಾನ ಪದವೀಧರರು ಬೇಕಾಗಿದ್ದಾರೆ ಎಂದರು. ಜಿಐಎಸ್‌ನ ಸಂಯೋಜಕಿ ಪ್ರೊ.ಪಿ.ಜಯಶ್ರೀ, ಪ್ರೊ.ರಾಮು, ಪ್ರೊ.ಎಚ್.ವಿ. ರೇಖಾ, ಭೂಗೋಳ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ಎಸ್. ಅರುಣ್ ದಾಸ್, ಅಟ್ಲಾಸ್‌ಶೈನ್ ನಿರ್ದೇಶಕ ಸುರೇಶ್ ಚಿತ್ರಾಪು, ಸಿಇಒ ರಘುನಾಥ್ ಶರ್ಮ, ಆಟಂ ಜಿಯೊ ನಿರ್ದೇಶಕ ಮೋಹನ್ ಹಾಜರಿದ್ದರು.

# ಮಹಿಳೆಯರಲ್ಲಿ ಆರ್ಥಿಕ ಸಾಕ್ಷರತೆ ಹೆಚ್ಚಳ

## 13 ವರ್ಷಗಳಲ್ಲಿ 95 ಕೋಟಿ ಉಳಿತಾಯ: ವಿಜಯಕುಮಾರ್ ನಾಗನಾಳ

**ಮೈಸೂರು:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಮಹಿಳೆಯರಲ್ಲಿ ಆರ್ಥಿಕ ಸಾಕ್ಷರತೆ ಹೆಚ್ಚುತ್ತಿದೆ ಎಂದು ಬಿ.ಸಿ ಟ್ರಸ್ಟಿನ ಜಿಲ್ಲಾ ಹಿರಿಯ ನಿರ್ದೇಶಕ ವಿಜಯಕುಮಾರ್ ನಾಗನಾಳ ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್, ಶ್ರೀರಾಂಪುರ ವಲಯ ಪ್ರಗತಿಬಂಧು ಸ್ವಸಹಾಯ ಸಂಘಗಳ ಒಕ್ಕೂಟದ ಆಶ್ರಯದಲ್ಲಿ ನಾಗಮ್ಮ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಏರ್ಪಡಿಸಿದ್ದ ವಲಯ ಮಟ್ಟದ ಲಕ್ಷ್ಮೀ ಪೂಜೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಧರ್ಮಸ್ಥಳ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಹಾಗೂ ಮಾತೃಶ್ರೀಹೇಮಾವತಿ ಹೆಗ್ಗಡೆ ಇದೇ ಉದ್ದೇಶದಿಂದ ಮಹಿಳಾ ಸ್ವಸಹಾಯ ಸಂಘಗಳನ್ನು ಸ್ಥಾಪಿಸಿದ್ದಾರೆ ಎಂದರು.

ಮಹಿಳೆಯರು ಜಾಗೃತರಾಗಿದ್ದಾರೆ. ಬ್ಯಾಂಕುಗಳಲ್ಲಿ ಖಾತೆ ತೆರೆದು, ಹಣಕಾಸಿನ ವ್ಯವಹಾರಗಳ ಬಗ್ಗೆ ಅರಿವು ಮೂಡಿಸಿಕೊಂಡಿದ್ದಾರೆ. ಮೈಸೂರು, ನಂಜನಗೂಡು, ಎಚ್.ಡಿ.ಕೋಟೆ ಹಾಗೂ ಟಿ.ನರಸೀಪುರ ತಾಲೂಕುಗಳಲ್ಲಿ 19 ಸಾವಿರ ಮಹಿಳಾ ಸ್ವಸಹಾಯ ಸಂಘಗಳಿದ್ದು, ಕಳೆದ ಹದಿಮೂರು ವರ್ಷಗಳಲ್ಲಿ 95 ಕೋಟಿ ರೂ. ಉಳಿತಾಯ ಮಾಡಿದ್ದಾರೆ ಎಂದರು.

ಸಾಲ ಮಾಡಿಯಾದರೂ ತುಪ್ಪ ತಿನ್ನು ಎಂಬ ಗಾದೆ ಇದ್ದರೂ ಸಾಲ ಎಂಬ ಭ್ರಮೆಯಲ್ಲಿ ತೇಲಾಡಬಾರದು. ಅಗತ್ಯವಿದ್ದಾಗ ಮಾತ್ರ ಸಾಲ ಮಾಡಬೇಕು ಎಂದು ಅವರು ಸಲಹೆ ಮಾಡಿದರು.

ಬ್ಯಾಂಕುಗಳು ಹಾಗೂ ಸರ್ಕಾರಿ ಸಂಸ್ಥೆಗಳನ್ನು ಹೊರತುಪಡಿಸಿದರೆ ಅತ್ಯಂತ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡುವುದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಮಾತ್ರ. ಆ ಮೂಲಕ ಹೆಣ್ಣು ಮಕ್ಕಳ ಕಣ್ಣೀರನ್ನು ಒರೆಸುವ ಕೆಲಸ ಮಾಡುತ್ತಿದೆ. ಆದರೆ ಕೆಲವರು ಹೊಟ್ಟೆಕಿಚ್ಚಿನಿಂದ ಸಾಮಾಜಿಕ ಜಾಲತಾಣದಲ್ಲಿ ಅಪಪ್ರಚಾರದಲ್ಲಿ ತೊಡಗಿದ್ದು, ಇದಕ್ಕೆ ಮಹಿಳೆಯರು ಸೊಪ್ಪು ಹಾಕಬಾರದು. ನಾವು ದೀಪ ಹಚ್ಚುವ ಕೆಲಸ ಮಾಡುತ್ತಿದ್ದೇವೆ. ಕೆಲವರು ಬೆಂಕಿ ಹಚ್ಚಲು ಯತ್ನಿಸುತ್ತಿದ್ದು, ಈ ಬಗ್ಗೆ ಎಚ್ಚರವಹಿಸಬೇಕು ಎಂದು



ಅವರು ಮನವಿ ಮಾಡಿದರು.

ಧರ್ಮಸ್ಥಳ ಧರ್ಮಾಧಿಕಾರಿ ಯಾವುದೇ ಲಾಭದ ಉದ್ದೇಶದಿಂದ ಈ ಟ್ರಸ್ಟ್ ಆರಂಭಿಸಿಲ್ಲ. ಇದೊಂದು ಸೇವಾ ಸಂಸ್ಥೆ. ಕೆರೆಯ ನೀರನ್ನು ಕೆರೆಗೆ ಚೆಲ್ಲಿ ಎಂಬ ಗಾದೆ ಮಾತಿನಂತೆ ಲಾಭಾಂಶದ ಹಣವನ್ನು ಮೂವತ್ತು ಸಾವಿರ ಅಶಕ್ತರಿಗೆ ಮಾಸಾಶನ, ನಲವತ್ತು ಸಾವಿರ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ, ಕೆರೆಗಳು, ದೇವಸ್ಥಾನಗಳ ಪುನರುಜ್ಜೀನ, ಹಾಲು ಉತ್ಪಾದಕರ ಸಂಘಗಳಿಗೆ ಪ್ರೋತ್ಸಾಹ, ಸಮುದಾಯ ಭವನ ನಿರ್ಮಾಣಕ್ಕೆ ನೆರವು ನೀಡುತ್ತಿದೆ ಎಂದರು.

ಸ್ವಾತಂತ್ರ್ಯಪೂರ್ವದಲ್ಲಿ ದೇಶದಲ್ಲಿ ಅನ್ನ, ಅಕ್ಷರದ ಬಡತನ ಇತ್ತು. ಆದರೆ, ಇವತ್ತು ಆ ಪರಿಸ್ಥಿತಿ ಇಲ್ಲ. ಇತರೆ ದೇಶಗಳು ಭಾರತದ ಕಡೆ ತಿರುಗಿ ನೋಡುವಂತೆ ಆಗಿದೆ. ಆದರೆ ಬುದ್ಧಿಯ ಬಡತನ ದೊಡ್ಡದಿದೆ. ಅದನ್ನು ಹೋಗಲಾಡಿಸುವ ಕೆಲಸ ಆಗಬೇಕು ಎಂದರು.

ಮಹಿಳೆಯರು ಮನೆಯ ಪುರುಷರನ್ನು ಹಾದಿ ತಪ್ಪದಂತೆ ನಿಯಂತ್ರಿಸುವುದರ ಜತೆಗೆ ಮಕ್ಕಳಿಗೆ ಉತ್ತಮ ಶಿಕ್ಷಣ ಹಾಗೂ ಸಂಸ್ಕಾರ ನೀಡಬೇಕು. ಅಗತ್ಯವಿದ್ದಾಗ ಮಾತ್ರ ಮಕ್ಕಳ ಕೈಗೆ ಮೊಬೈಲ್ ನೀಡಬೇಕು. ಶಾಲೆಯಿಂದ ಮಕ್ಕಳು ಮನೆಗೆ ಬಂದಾಗ ಪೋಷಕರು ಟಿವಿ ಮುಂದೆ ಕುಳಿತುಕೊಳ್ಳುವುದನ್ನು ಬಿಡಬೇಕು. ಇದಲ್ಲದೇ ಸಮಾಜದಲ್ಲಿ ಹೆಣ್ಣು ಮಕ್ಕಳಿಗೆ ಗೌರವ ಕೊಡುವುದನ್ನು ಗಂಡು ಮಕ್ಕಳಿಗೆ ಮನೆಯಿಂದಲೇ ಕಲಿಸಬೇಕು ಎಂದು ಸಲಹೆ ಮಾಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಪ್ರಸ್ತುತ ಭೂಮಿಯಿಂದ ಬಾಹ್ಯಾಕಾಶದವರೆಗೆ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ತಮ್ಮ ಹೆಜ್ಜೆ ಗುರುತು ಮೂಡಿಸುತ್ತಿದ್ದಾರೆ. ಶಿಕ್ಷಣ, ಉದ್ಯೋಗದಲ್ಲಿಯೂ ಮುಂದೆ ಇದ್ದಾರೆ. ಮನೆಯ ಯಜಮಾನಿಯಾಗಿ ಕುಟುಂಬದ ಆರ್ಥಿಕ ನಿರ್ವಹಣೆಯನ್ನು ಮಾಡುತ್ತಾ, ಮಕ್ಕಳ ಶಿಕ್ಷಣ, ಮನೆಯ ಸದಸ್ಯರ ಆರೋಗ್ಯದ ಕಡೆ ಗಮನ ನೀಡುತ್ತಿದ್ದಾರೆ ಎಂದರು.

ಪುರುಷರು ದುಡಿದ ಹಣ ಕುಟುಂಬಕ್ಕೆ ಬಳಕೆಯಾಗದು ಎಂಬ ಉದ್ದೇಶದಿಂದಲೇ ಧರ್ಮಸ್ಥಳದ ಧರ್ಮಾಧಿಕಾರಿಗಳು ಮಹಿಳಾ ಸ್ವಸಹಾಯ ಸಂಘಗಳನ್ನು ಸ್ಥಾಪಿಸಿ, ಉಳಿತಾಯ ಯೋಜನೆಗೆ ಪ್ರೇರೇಪಣೆ ನೀಡಿದರು. ಅದೇ ರೀತಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕೂಡ ಗೃಹಲಕ್ಷ್ಮಿ ಯೋಜನೆಯಲ್ಲಿ ಮನೆಯ ಯಜಮಾನಿ ಹೆಸರಿಗೆ ಮಾಸಿಕ ಎರಡು ಸಾವಿರ ರೂ. ನೀಡುತ್ತಿದೆ ಎಂದರು. ಸಮಾಜ ಸೇವಕ ಸುಮಿತ್, ಕುವೆಂಪುನಗರ ಕ್ಷೇತ್ರ ಯೋಜನಾಧಿಕಾರಿ ಎನ್. ಶಕುಂತಳಾ, ಕೆಲ್ಲಹಳ್ಳಿ ಗ್ರಾ.ಪಂ ಸದಸ್ಯ ಹಾಗೂ ಪೂಜಾ ಸಮಿತಿ ಅಧ್ಯಕ್ಷ ಭೈರೇಶ್, ಮಹದೇವಪುರ ಜ್ವಾಲಾಮುಖಿ ಕನ್‌ಸ್ಟ್ರಕ್ಷನ್ ಮಾಲೀಕ ಆರ್.ಸುರೇಶ್, ಪಾರ್ಥಸಾರಥಿ ಮೊದಲಾದವರು ಇದ್ದರು.

# ಭಾರತದಲ್ಲಿ ಧರ್ಮ ಜಾಗೃತಿಯಾಗುತ್ತಿದೆ

**ಮೈಸೂರು:** ಭಾರತದಲ್ಲಿ ಧರ್ಮ ಜಾಗೃತಿಯಾಗುತ್ತಿದೆ ಎಂದು ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಶಾಲೆಯ ಅಧ್ಯಕ್ಷ ಆರೂರು ವಾಸುದೇವ್ ರಾವ್ ತಿಳಿಸಿದರು.

ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣ ಧಾಮದಲ್ಲಿ ಆಯೋಜಿಸಿದ್ದ ವಿಶ್ವ ಹಿಂದೂ ಪರಿಷತ್‌ನ ಸಂಸ್ಥಾಪನ ದಿನ ಹಾಗೂ ಷಷ್ಠಿ ಪೂರ್ತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭಾರತದಲ್ಲಿ ಧರ್ಮ ಜಾಗೃತಿಯಾಗುತ್ತಿದೆ ಅಂದರೆ ಅದು ವಿಶ್ವ ಹಿಂದೂ ಪರಿಷತ್‌ನಂತಹ ಸಂಘಟನೆಗಳಿಂದ ಮಾತ್ರ ಸಾಧ್ಯ. 60 ವರ್ಷಗಳಿಂದ ಭಾರತದಲ್ಲಿ ಸಂಘಟನೆ, ಧರ್ಮ ಪ್ರಚಾರ, ಧರ್ಮ ಜಾಗೃತಿ ಮಾಡುತ್ತಿರುವ ವಿಶ್ವ ಹಿಂದೂ ಪರಿಷತ್ ಕಾರ್ಯ ಶ್ಲಾಘನೀಯ ಎಂದು ತಿಳಿಸಿದರು.

ಮೇಲುಕೋಟೆಯ ವಂಗೀಪುರ ನಂಬೀ ಮಠದ ಇಳೈ ಆಳ್ವಾರ್ ಸ್ವಾಮೀಜಿ ಮಾತನಾಡಿ, ಮನೆ ಮನೆಗಳಲ್ಲಿ ಇಂದು ಧರ್ಮ ಉಳಿಸುವ ಕೆಲಸ ಮಾಡದಿದ್ದರೆ ನಾಳೆ ಭವಿಷ್ಯ ಕಷ್ಟವಾಗಲಿದೆ ಎಂದು ತಿಳಿಸಿದರು. ಆಶೀರ್ವಚನ ನೀಡಿದ ಶಾರದಾ ವಿಶ್ವಭಾವೈಕ್ಯ ಆಶ್ರಮದ ಮಾತಾ ಅಮೋಘಮಯಿ ಭಗವದ್ಗೀತೆಯ ಸಂದೇಶ ತಿಳಿಸಿದರು. ಭಗವದ್ಗೀತೆ ಕಲಿತವರು ಎಂದೂ ಸಮಾಜಘಾತುಕರಾಗಲಾರರು ಎಂದರು.



# ಮಾನವತ್ವದ ಆದರ್ಶ ಬಿತ್ತಿದವರು ಶರಣರು

**ಮೈಸೂರು:** ಲೋಕದ ಮಾನವತ್ವದ ಆದರ್ಶವನ್ನು ಬಿತ್ತಿ ಬೆಳೆಸಿದವರು ಶರಣರು ಎಂದು ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯಪಟ್ಟರು.



ಶರಣ ಸಾಹಿತ್ಯ ಪರಿಷತ್ತು ಶ್ರಾವಣ ಮಾಸದ ಅಂಗವಾಗಿ ಜೆಎಸ್‌ಎಸ್ ಮಹಿಳಾ ವಸತಿ ನಿಲಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಮುಂದಿನ ಎಲ್ಲ ರೀತಿಯ ಪರಿಸ್ಥಿತಿಗಳಿಗೆ ವಚನಗಳಲ್ಲಿ ಉತ್ತರವಿದೆ. ಕನ್ನಡಕ್ಕೆ ಶಾಸ್ತ್ರೀಯ ಭಾಷೆ ತಂದು ಸ್ಥಾನ ತಂದುಕೊಟ್ಟದ್ದು ಜನಗಳು ಎಂಬುದನ್ನು ನಾವು ಮರೆಯಬಾರದು ಎಂದು ಹೇಳಿದರು.

ಭೌತಿಕ ಶುದ್ಧತೆ ಮಾತ್ರ ಇದ್ದರೆ ಸಾಲದು ಅಂತರಂಗದ ಶುದ್ಧತೆ ಅಗತ್ಯ ಎಂಬ ದೊಡ್ಡ ಸಂದೇಶವನ್ನು ಶರಣರು ನೀಡಿದ್ದಾರೆ. ಕೆಟ್ಟದ್ದನ್ನು ಮಾಡಿ ಮಡಿಗೊಂಡರೆ ಪ್ರಯೋಜನವಿಲ್ಲ. ಅವನಿಗೆ ಶಿವನ ಸಾನಿಧ್ಯ ಸಲ್ಲದು ಎಂದರು.

ಸಮಾರಂಭ ಅಧ್ಯಕ್ಷತೆ ವಹಿಸಿದ್ದ ಮಗು ಸದಾನಂದಯ್ಯ ಜ್ಯೋತಿಯನ್ನು ಹೀಗೆ ನಮ್ಮ ಮಕ್ಕಳು ಕಾಪಿಟ್ಟುಕೊಂಡು ತಮ್ಮ ಜೀವನವನ್ನು ಸಾರ್ಥಕಗೊಳಿಸುವುದು ಅಗತ್ಯ ಎಂದರು.

ತಮಗೆ ಕೊಟ್ಟಿರುವ 30 ವಚನಗಳ ಈ ಪುಸ್ತಕ ಚಿಕ್ಕದಿದ್ದರೂ ಇಡೀ ಜೀವನವೇ ಅನುಸರಿಸಬಹುದಾದ ವಚನಗಳು ಇದರಲ್ಲಿ ಇವೆ. ಹೃದಯ ಚಿಕ್ಕದಿರುವುದು ಅದರ ಕಾರ್ಯ ಬೆಟ್ಟದಷ್ಟು. ಅಂತೆಯೇ ಈ ಪುಸ್ತಕ ಎಂದು ಹೇಳಿದರು.

ಪ್ರಾಯೋಜಕ ಜಗದೀಶ್ ಚಿಕ್ಕಮಠ ಗಿರಿಜಾ, ಹಾಗೂ ಜೆಎಸ್‌ಎಸ್ ನಿಲಯ ಪಾಲಕಿ ಮಮತಾ ಅವರನ್ನು ಗೌರವಿಸಲಾಯಿತು.

# ಪಾದಯಾತ್ರೆ ಮಾಡಿ ಸಮಸ್ಯೆ ಆಲಿಸಿದ ಶ್ರೀವತ್ಸ

**ಮೈಸೂರು:** ನಗರಪಾಲಿಕೆ ವಲಯ 1ರ 50ನೇ ವಾರ್ಡ್ ವ್ಯಾಪ್ತಿಯ ಸುಣ್ಣದಕೇರಿ ಹಾಗೂ ಬೆಸ್ತರಗೇರಿ ಭಾಗದಲ್ಲಿ ಪದಯಾತ್ರೆ ನಡೆಸಿದ ಶಾಸಕ ಟಿ.ಎಸ್.ಶ್ರೀವತ್ಸ, ನಿವಾಸಿಗಳ ಸಮಸ್ಯೆ ಆಲಿಸಿ ಕೂಡಲೇ ಬಗೆಹರಿಸುವ ಭರವಸೆ ನೀಡಿದರು.

ಸುಣ್ಣದಕೇರಿಯ 4ನೇ ಕ್ರಾಸ್‌ನಿಂದ 9ನೇ ಕ್ರಾಸ್‌ವರೆಗೆ ಪಾದಯಾತ್ರೆ ನಡೆಸಿದ ಅವರು, ನಿವಾಸಿಗಳ ಕುಂದು-ಕೊರತೆ ಆಲಿಸಿದರು. ಈ ವೇಳೆ ಕಳೆದ ಎರಡ್ಮೂರು ದಿನಗಳಿಂದ ಸುಣ್ಣದಕೇರಿಗೆ ನೀರು ಸರಬರಾಜಿನಲ್ಲಿ ತೊಂದರೆಯಾಗಿದ್ದು, ನೀರಿಲ್ಲದೆ ಪರದಾಡುವಂತಾಗಿದೆ. ಒಳಚರಂಡಿ ವ್ಯವಸ್ಥೆ ಸರಿಯಿಲ್ಲ. ಕೆಲ ರಸ್ತೆಗಳು ಹಾಳಾಗಿವೆ. ಪಾಲಿಕೆ ಅಧಿಕಾರಿಗಳು ಸ್ಪಂದಿಸುತ್ತಿಲ್ಲ. ಕೂಡಲೇ ಕುಡಿಯುವ ನೀರು ಸರಬರಾಜು ಮಾಡಿ ಎಂದು ಮನವಿ ಮಾಡಿದರು.

ನಿವಾಸಿಗಳ ಮನವಿಗೆ ಸ್ಪಂದಿಸಿದ ಶಾಸಕರು,



ಪೈಪ್‌ಲೈನ್ ವಾಲ್ವ್ ಬ್ಲಾಕ್ ಆಗಿರುವುದರಿಂದ ನೀರು ಸರಬರಾಜಿನಲ್ಲಿ ತೊಂದರೆಯಾಗಿದೆ. ಕೂಡಲೇ ದುರಸ್ಥಿ ಮಾಡುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು. ಸುಣ್ಣದಕೇರಿ 9ನೇ ಕ್ರಾಸ್ ಸಮೀಪದ ರಸ್ತೆಬದಿಯಲ್ಲಿ ಮೂತ್ರ ವಿಸರ್ಜನೆ ಮಾಡುತ್ತಿದರೆಂಬ ನಿವಾಸಿಗಳ ದೂರಿನ ಮೇರೆಗೆ ತಡೆಗೋಡೆ ನಿರ್ಮಿಸಲಾಗಿದೆ ಎಂದು ತಿಳಿಸಿದರು.

ಹಾಗೆಯೇ ಸುಣ್ಣದಕೇರಿ 7 ಮತ್ತು 9ನೇ ಕ್ರಾಸ್ ರಸ್ತೆ ಅಭಿವೃದ್ಧಿ ಕಾಮಗಾರಿ ವೀಕ್ಷಣೆ ಮಾಡಿ, ಕಾಂಕ್ರೀಟ್ ರಸ್ತೆ ಅಭಿವೃದ್ಧಿಯಲ್ಲಿ ಯಾವುದೇ ಲೋಪ ವಾಗಬಾರದು ಎಂದು ಗುತ್ತಿಗೆದಾರರಿಗೆ ಎಚ್ಚರಿಸಿದರು.

ಪಾಲಿಕೆ ಎಇಇ ಧನುಷ್, ಎಇ ಪ್ರಶಾಂತ್, ವಾಟರ್ ಇನ್ಸ್‌ಪೆಕ್ಟರ್ ಮಧು, ಬಿಜೆಪಿ ಮುಖಂಡರಾದ ಜೋಗಿ ಮಂಜು, ಕೃಷ್ಣನಾಯಕ, ಜೋಗಪ್ಪ, ರಾಕೇಶ್‌ಗೌಡ, ಲೋಕೇಶ್, ಜಯಸಿಂಹ, ಜಗದೀಶ್, ರಾಜೇಶ್, ಪ್ರದೀಪ್, ಕಿಶೋರ್, ಕೀರ್ತಿ, ಸ್ಥಳೀಯ ನಿವಾಸಿಗಳಾದ ದಾಸಪ್ಪ, ಅಶ್ವಥ್, ಮಹೇಶ್ ನಾಯಕ್ ಮತ್ತಿತರರಿದ್ದರು.

# ವ್ಯಾಪಕವಾಗಿ ಕನ್ನಡ ಬಳಸುವುದರತ್ತ ಗಮನಹರಿಸಿ

**ಮೈಸೂರು:** ತರಗತಿಯಲ್ಲಿ ಕಲಿಯುವುದು ಬಹಳ ಕಡಿಮೆ. ಪ್ರತಿಯೊಬ್ಬರೂ ಬೀದಿಯಲ್ಲಿ, ಸಾರ್ವಜನಿಕವಾಗಿ ಕನ್ನಡವನ್ನು ವ್ಯಾಪಕವಾಗಿ ಬಳಸುವುದರತ್ತ ಗಮನ ಹರಿಸಬೇಕೆಂದು ವಿಶ್ರಾಂತ ಪ್ರಾಧ್ಯಾಪಕ, ಸಂಸ್ಕೃತಿ ಚಿಂತಕ ಪ್ರೊ.ಎಂ.ಕೃಷ್ಣೇಗೌಡ ಆಶಿಸಿದರು. ಎಂಎಂಕೆ ಮತ್ತು ಎಸ್ ಡಿಎಂ ಮಹಿಳಾ ಮಹಾವಿದ್ಯಾಲಯದ ಕನ್ನಡ ವಿಭಾಗದ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ನುಡಿರತ್ನ ಕನ್ನಡ ಸಂಘ ಉದ್ಘಾಟಿಸಿ ಮಾತನಾಡಿದ ಅವರು, ಇಂದು ಕೂಡ ಭಾಷಾ ಶಾಸ್ತ್ರಜ್ಞರ ಪ್ರಕಾರ ಕನ್ನಡ ಭಾಷೆ ಪ್ರಪಂಚದ ಅತ್ಯುತ್ಕೃತವಾದ ಭಾಷೆಗಳಲ್ಲಿ ಒಂದಾಗಿದೆ. ಪ್ರಪಂಚದಲ್ಲಿರುವ ನಾಲ್ಕೂವರೆ ಸಾವಿರ ಭಾಷೆಗಳ ಪೈಕಿ ತುಂಬಾ ರಚನಾತ್ಮಕವಾದ, ತರ್ಕಬದ್ಧವಾದ 36 ಭಾಷೆಗಳಲ್ಲಿ ಕನ್ನಡವೂ ಒಂದಾಗಿರುವುದು ಹೆಮ್ಮೆಯ ವಿಷಯ. ಕನ್ನಡ ಭಾಷೆಯಲ್ಲಿ ಹಾಡು, ಒಗಟು, ಜನಪದ, ಧೀಮಂತ ಸಾಹಿತ್ಯ, ಸಂಸ್ಕೃತಿ ಹೀಗೆ ನಾನಾ ತರಹದ ಸಂಗತಿಗಳು ಇವೆ. 13 ಭಾರತೀಯ ಭಾಷೆಗಳನ್ನು ತಿಳಿದಿದ್ದಂತಹ ವಿನೋಬಾ ಭಾವೆ ಅವರು ಕನ್ನಡ ಲಿಪಿಯನ್ನು ಎಲ್ಲಾ ಲಿಪಿಗಳ ರಾಣಿ ಎಂದು



ಕರೆದಿದ್ದರು. ಭಾಷೆಯನ್ನು ಹಾಗಿದ್ದರೂ ನಮ್ಮ ಭಾಷೆಯನ್ನು ಕೀಳಾಗಿ ನೋಡುವ ಪರಿಪಾಠ ಬೆಳೆಸಿಕೊಂಡು ಬಂದಿರುವುದು ಬೇಸರದ ಸಂಗತಿ ಎಂದರು. ಮನುಷ್ಯನಲ್ಲಿರುವ ಆಕ್ರಮಕಾರಿ ಗುಣ ಬಹಳ ಕೆಟ್ಟ ಗುಣವಾಗಿರುತ್ತದೆ. ಇನ್ನೊಬ್ಬರ ಬದುಕಿನ ಒಳಗೆ ನುಗ್ಗುವುದೂ ಆಕ್ರಮಣಕಾರಿ ಗುಣವೇ. ಇಂದಿನ ದಿನಗಳಲ್ಲಿ ರಕ್ತಪಾತ ಇಲ್ಲದೇ ಈ ರೀತಿಯ ಆಕ್ರಮಣ ಯುದ್ಧಗಳು ದೇಶಗಳ ನಡುವೆ ನಡೆಯುತ್ತಿದೆ. ಹಿಂದೆ ಒಬ್ಬರು ಇನ್ನೊಬ್ಬರನ್ನು ಆಕ್ರಮಿಸಬೇಕಾದರೆ ಮದ್ದು, ಗುಂಡು ತೆಗೆದುಕೊಂಡು ಹೋಗಬೇಕಾಗಿತ್ತು. ಆದರೆ ಈಗ ಹಾಗಲ್ಲ ನಮಗೇ ಗೊತ್ತಿಲ್ಲದಂತೆ ಇನ್ನೊಬ್ಬರು ನಮ್ಮ ಬದುಕನ್ನೇ ಆಕ್ರಮಿಸುವ ಚಾಳಿ ಪ್ರಪಂಚದೆಲ್ಲಡೆ ತುಂಬಾ ಪ್ರಚಲಿತವಾಗಿದೆ. ಹಾಗಾಗಿ ಎಲ್ಲಾ ದೇಶಗಳಿಗೂ ಈಗ ತಮ್ಮ ದೇಶದ ಭೌಗೋಳಿಕ ಅಸ್ಮಿತೆ, ಸಂಸ್ಕೃತಿಯ ಅಸ್ಮಿತೆ, ಆಧ್ಯಾತ್ಮಿಕ ಅಸ್ಮಿತೆ, ಧಾರ್ಮಿಕ ಅಸ್ಮಿತೆಯನ್ನು ಉಳಿಸಿಕೊಳ್ಳುವುದು ಒಂದು ದೊಡ್ಡ ಸವಾಲಾಗಿದೆ. ಇಡೀ ಪ್ರಪಂಚವನ್ನು ನಿಮಗೇ ಗೊತ್ತಿಲ್ಲದಂತೆ ಅಮೆರಿಕ ಆಕ್ರಮಿಸುತ್ತಿದೆ. ಭಾರತ, ಕರ್ನಾಟಕ, ಮೈಸೂರನ್ನೂ ಅದೇ ರೀತಿ ಆಕ್ರಮಿಸುತ್ತಿದೆ. ಟ್ಯಾಂಕರ್‌ಗಳು, ಬಾಂಬ್, ರಾಕೆಟ್‌ಗಳ ಮೂಲಕ ಯುದ್ಧ ಮಾಡುವುದನ್ನು ಹಾರ್ಡ್‌ಪವರ್ ಎಂದು ಕರೆಯಬಹುದು. ಈಗ ಸಾಫ್ಟ್‌ಪವರ್ ಎನ್ನುವ ಹೊಸ ಕಾನ್ಸೆಪ್ಟ್ ಬಂದಿದೆ. ಅಂದರೆ ಸಾಫ್ಟ್‌ಪವರ್ ಆಕ್ರಮಣ ನಮಗೆ ಗೊತ್ತೇ ಆಗದಂತೆ ನಮ್ಮನ್ನು ಆಕ್ರಮಿಸಿಕೊಂಡಿರುತ್ತವೆ. ಅಮೆರಿಕ ಈಗ ಇಂತಹದೊಂದು ಸಾಫ್ಟ್‌ಪವರ್ ಉಪಯೋಗಿಸಿ ಪ್ರಪ್ರಂಚವನ್ನು ಆಕ್ರಮಿಸಿಕೊಳ್ಳಲು ಮುಂದಾಗಿದೆ. ನಾವು ಏನು ಊಟ ಮಾಡಬೇಕು, ನಾವು ಏನು ಧರಿಸಬೇಕು, ನಮ್ಮ ಆರೋಗ್ಯವನ್ನು ಅಮೆರಿಕ ನಿರ್ಧರಿಸುತ್ತಲಿದೆ ಎಂದರು. ಬ್ರಿಟಿಷ್ ಆಳ್ವಿಕೆಯ ಕಾಲದಲ್ಲಿ ಲಾರ್ಡ್ ಮೆಕಾಲೆ ಎನ್ನುವವನು ನಮ್ಮ ದೇಶದ ಒಗ್ಗಟ್ಟನ್ನು ಮುರಿಯಬೇಕಾದರೆ ನಮ್ಮ ಉಜ್ವಲ ಸಂಸ್ಕೃತಿ, ಪರಂಪರೆ, ಭಾಷೆಯನ್ನು ನಗಣ್ಯಗೊಳಿಸುವುದೇ ಉತ್ತಮ ಮಾರ್ಗ ಎಂದು ಸಾರಿ, ಅದಕ್ಕಾಗಿ ರಚನಾತ್ಮಕವಲ್ಲದ ಇಂಗ್ಲಿಷ್ ಭಾಷೆಯನ್ನು ಮುನ್ನೆಲೆಗೆ ತರಬೇಕೆಂದು ಪ್ರತಿಪಾದಿಸಿ ಯಶಸ್ವಿಯಾದನು. ಆದರೆ ಕೆಲವೊಂದು ಯೂರೋಪಿಯನ್ ದೇಶಗಳು ತಮ್ಮ ನಾಡಿನ ಭಾಷೆಯ ಅಸ್ಮಿತೆಯನ್ನು ಉಳಿಸಿಕೊಳ್ಳುವುದರಲ್ಲಿ ಹಿಂದೆ ಬಿದ್ದಿಲ್ಲ. ಇಂಗ್ಲಿಷ್‌ನಲ್ಲಿರುವ ವಿಷಯಗಳನ್ನು ತೆಗೆದುಕೊಂಡಾಗ ತಮ್ಮ ಮಾತೃ ಭಾಷೆಗೆ ತರ್ಜುಮೆ ಮಾಡಿಯೇ ತೆಗೆದುಕೊಳ್ಳಬೇಕೆಂಬ ನಿಯಮಗಳನ್ನು ರೂಪಿಸಿವೆ. ಆದರೆ ನಮ್ಮಲ್ಲಿ ನಮ್ಮ ಭಾಷೆಗೆ ಆದ್ಯತೆ ನೀಡದೇ ಇಂಗ್ಲಿಷ್ ಭಾಷೆಗೆ ಪ್ರಾಮುಖ್ಯತೆ ನೀಡುವ ಪರಿಪಾಠವನ್ನು ಬೆಳೆಸಿಕೊಂಡು ಬಂದಿದೇವೆ ಎಂದರು.

## ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ

**ಮೈಸೂರು:** ಉತ್ತನಹಳ್ಳಿ ಗ್ರಾಮದ ಸುಮಾರು 39 ವರ್ಷದ ಸ್ವಾಮಿ ಎಂಬುವವರು ಆ.13ರಂದು ಕಾಣೆಯಾಗಿದ್ದು, ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಗೆ ಸುಮಾರು 39 ವರ್ಷ ವಯಸ್ಸಾಗಿದ್ದು, 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣವನ್ನು ಹೊಂದಿದ್ದು, ಕನ್ನಡ ಭಾಷೆ ಬಲ್ಲವರಾಗಿರುತ್ತಾರೆ. ಬಲಗೈಯಲ್ಲಿ ನಂದಿನಿ ಎಂಬ ಹಸಿರು ಹಚ್ಚೆ ಗುರುತು ಹಾಗೂ ಎದೆಯ ಮೇಲೆ ಗೌಡಯ್ಯ ಮತ್ತು ಚಿಕ್ಕತಾಯಮ್ಮ ಎಂಬ ಹಸಿರು ಹಚ್ಚೆ, ಎಡಗಡೆಯ ತೊಡೆಯ ಹಿಂಭಾಗ ಕಪ್ಪು ಮಚ್ಚೆ ಮತ್ತು ಕಣ್ಣಿನಲ್ಲಿ ಕಪ್ಪು ಕಾರಳ್ಳು ಗುರುತಿರುತ್ತದೆ. ಕಾಣೆಯಾದ ಸಂದರ್ಭದಲ್ಲಿ ಗಿಣಿ ಹಸಿರು ಬಣ್ಣದ ಅರ್ಧ ತೋಳಿನ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಹಾಗೂ ಅಂಡರ್‌ವೇರ್ ಧರಿಸಿರುತ್ತಾರೆ. ಕಾಣೆಯಾಗಿರುವ ವ್ಯಕ್ತಿ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ಎಸ್.ಪಿ ದೂ. ಸಂ:2520040ನ್ನು ಮೈಸೂರು ಜಿಲ್ಲಾ ಕಂಟ್ರೋಲ್ ರೂ:2444800, ಮೈಸೂರು ಸೌತ್ ಪೊಲೀಸ್ ಠಾಣೆಯ ದೂ.ಸಂ:0821-2444955ನ್ನು ಸಂಪರ್ಕಿಸಬಹುದು ಎಂದು ಮೈಸೂರು ದಕ್ಷಿಣ ಪೊಲೀಸ್ ಠಾಣೆಯ ಠಾಣಾಧಿಕಾರಿ ತಿಳಿಸಿದ್ದಾರೆ.

## ಕಲಾತಂಡಗಳಿದ ಅರ್ಜಿ ಆಹ್ವಾನ

**ಮೈಸೂರು:** 2024-25ನೇ ಸಾಲಿನ ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಹಿನ್ನೆಲೆ ಸಾಂಸ್ಕೃತಿಕ ಉಪ ಸಮಿತಿಯ ವತಿಯಿಂದ ನವರಾತ್ರಿ, ಅ.3ರಿಂದ 11ರವರೆಗೆ ವಿವಿಧ ಕಲಾ ಪ್ರಕಾರಗಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅರಮನೆ ಹಾಗೂ ಇತರೆ ವೇದಿಕೆಗಳಲ್ಲಿ ಆಯೋಜಿಸಲು ತೀರ್ಮಾನಿಸಲಾಗಿದ್ದು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಲು ಕಲಾವಿದರಿಂದ ಅಥವಾ ಕಲಾತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸೆ.10ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು, ಅರ್ಜಿಗಳನ್ನು ಕರ್ನಾಟಕ ಕಲಾಮಂದಿರದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ನೇರವಾಗಿ ಅಥವಾ ಅಂಚೆ ಮೂಲಕ ಹಾಗೂ ಇ-ಮೇಲ್ ಮೂಲಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂ. ಸಂ:0821-2513225ನ್ನು ಸಂಪರ್ಕಿಸಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಮೈಸೂರು ದಸರಾ ಮಹೋತ್ಸವ 2024ರ ಸಾಂಸ್ಕೃತಿಕ ಉಪಸಮಿತಿಯ ಕಾರ್ಯದರ್ಶಿ ಡಾ.ಎಂ.ಡಿ ಸುದರ್ಶನ್ ತಿಳಿಸಿದ್ದಾರೆ.

## ಅಪರಿಚಿತ ವ್ಯಕ್ತಿಯ ಶವ ಪತ್ತೆ

**ಮೈಸೂರು:** ಆ.27ರಂದು ನಂಜನಗೂಡು ಪಟ್ಟಣದ ಅಂಬೇಡ್ಕರ್ ಸರ್ಕಲ್‌ನ ಭೂಮಿಕಾ ಮೆಡಿಕಲ್ ಹತ್ತಿರ ಸುಮಾರು 60 ರಿಂದ 65 ವರ್ಷ ವಯಸ್ಸಿನ ಅಪರಿಚಿತ ಗಂಡಸಿನ ಶವ ಪತ್ತೆಯಾಗಿದ್ದು, ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸುಮಾರು 60 ರಿಂದ 65 ವರ್ಷ ವಯಸ್ಸಿನ 5.6 ಅಡಿ ಎತ್ತರ, ಕೋಲು ಮುಖ, ಸಾಧಾರಣ ಶರೀರ, ಎಣ್ಣೆಗೆಂಪು ಮೈಬಣ್ಣ, ಕಪ್ಪು ಮತ್ತು ಬಿಳಿ ತಲೆ ಕೂದಲು, ಕಪ್ಪು ಬಿಳಿ ಗಡ್ಡ ಮೀಸೆ ಬಿಟ್ಟಿರುತ್ತಾನೆ. ಅಪರಿಚಿತ ವ್ಯಕ್ತಿ ಮೈಮೇಲೆ ಬಿಳಿ ಕಂದು ಬಣ್ಣ ಮಿಶ್ರಿತ ಅರ್ದತೋಳಿನ ಶರ್ಟ್, ಕೆಂಪು ಬಣ್ಣದ ಅಂಡರ್ವೇರ್ ಹಾಗೂ ಆತನ ಕತ್ತಿನಲ್ಲಿ ಒಂದು ದಾರದ ತಾಯಿತವನ್ನು ಧರಿಸಿರುತ್ತಾನೆ.

## ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ

**ಮೈಸೂರು:** ದೊಡ್ಡಕಾನ್ಯ ಗ್ರಾಮದ ಸುಮಾರು 85 ವರ್ಷದ ಮಹದೇವಪ್ಪ ಬಿನ್ ಲೇಟ್ ಸಣ್ಣಪ್ಪ ಎಂಬುವವರು ಜು.10 ರಂದು ಕಾಣೆಯಾಗಿದ್ದು, ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಗೆ ಸುಮಾರು 85 ವರ್ಷ ವಯಸ್ಸಾಗಿದ್ದು, 5.6 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಬಣ್ಣವನ್ನು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ತುಂಬುತೋಳಿನ ಅಂಗಿ ಮತ್ತು ಬಿಳಿ ಬಣ್ಣದ ಲಾಡಿ ನಿಕ್ಕರನ್ನು ಧರಿಸಿರುತ್ತಾರೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಕಂಡುಬಂದಲ್ಲಿ ಮೈಸೂರು ಜಿಲ್ಲೆಯ ಎಸ್.ಪಿ ಅವರ ದೂ.ಸಂ: 0821-2520040 ಮಾಹಿತಿ ನೀಡಿ.

## ತಳೂರಿನ ಯುವಕ ಕಾಣೆ

**ಮೈಸೂರು:** ತಳೂರು ಗ್ರಾಮದ ರವಿಚಂದ್ರ ಎಂಬ ವ್ಯಕ್ತಿ ಜುಲೈ 16 ರಂದು ಕಾಣೆಯಾಗಿದ್ದು, ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಗೆ ಸುಮಾರು 22 ವರ್ಷ ವಯಸ್ಸಾಗಿದ್ದು, 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಬಿಳಿ ಮೈಬಣ್ಣವನ್ನು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಂದರ್ಭದಲ್ಲಿ ಕೆಂಪು ಬಣ್ಣದ ಟಿ ಶರ್ಟ್, ಬಿಳಿ ಬಣ್ಣದ ಜೀನ್ಸ್ ಪ್ಯಾಂಟ್‌ನ್ನು ಧರಿಸಿರುತ್ತಾರೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಕಂಡುಬಂದಲ್ಲಿ ಮೈಸೂರು ಜಿಲ್ಲೆಯ ಎಸ್.ಪಿ ಅವರ ದೂ. ಸಂ: 0821-2520040, ಜಿಲ್ಲಾ ಕಂಟ್ರೋಲ್ ರೂಂ ನಂ: 0821-2444800 ಮಾಹಿತಿ ನೀಡಿ.

## ಸಾಲಬಾಧೆಗೆ ಆತ್ಮಹತ್ಯೆಗೆ ಶರಣು

**ಹುಣಸೂರು:** ಲಕ್ಷಾಂತರ ರೂ ಸಾಲ ಮಾಡಿಕೊಂಡಿದ್ದ ರೈತ, ಗ್ರಾಮ ಪಂಚಾಯ್ತಿ ಸದಸ್ಯರೊಬ್ಬರು ಕ್ರಿಮಿನಾಶಕದ ಕಾಳು ಸೇವಿಸಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ತಾಲೂಕಿನ ಹರೀನಹಳ್ಳಿಯಲ್ಲಿ ನಡೆದಿದೆ. ತಾಲೂಕಿನ ಹನಗೋಡು ಹೋಬಳಿಯ ಹರೀನಹಳ್ಳಿ ಗ್ರಾಮದ ಕುಮಾರಸ್ವಾಮಿ(55) ಆತ್ಮಹತ್ಯೆ ಮಾಡಿಕೊಂಡವರು. ಇವರಿಗೆ ಪತ್ನಿ, ಇಬ್ಬರು ಹೆಣ್ಣು ಮಕ್ಕಳಿದ್ದಾರೆ. ಕಾಂಗ್ರೆಸ್ ಮುಖಂಡರಾಗಿದ್ದ ಇವರು ಹುಣಸೂರು ತಾಲೂಕು ಕರ್ಣಕುಪ್ಪೆ ಗ್ರಾಮ ಪಂಚಾಯ್ತಿ ಮಾಜಿ ಉಪಾಧ್ಯಕ್ಷ ಹಾಗೂ ಹಾಲಿ ಸದಸ್ಯರು. ಪ್ರಸ್ತುತ ತಾಲೂಕು ಗ್ರಾ.ಪಂ.ಸದಸ್ಯರ ಒಕ್ಕೂಟದ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದರು. ಕೃಷಿ ಚಟುವಟಿಕೆಗಾಗಿ ಇವರು ವಿವಿಧ ಬ್ಯಾಂಕ್‌ಗಳಲ್ಲಿ ಸುಮಾರು 15ಲಕ್ಷಕ್ಕೂ ಹೆಚ್ಚು ಸಾಲ ಮಾಡಿಕೊಂಡಿದ್ದರು. ಸಾಲ ತೀರಿಸಲಾಗದೆ ಮನೆಯಲ್ಲಿ ಆತ್ಮಹತ್ಯೆಯ ಮಾತನಾಡುತ್ತಿದ್ದರು. ಸಾಲದ ಒತ್ತಡ ತಾಳಲಾರದೆ ಕ್ರಿಮಿನಾಶಕದ ಕಾಳು ಸೇವಿಸಿ ಅಸ್ವಸ್ಥಗೊಂಡಿದ್ದ ಇವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ಮೃತಪಟ್ಟಿದ್ದಾರೆಂದು ಪತ್ನಿ ಸುಮಿತ್ರಾ ರಾತ್ರಿ ಗ್ರಾಮಾಂತರ ಠಾಣೆಗೆ ದೂರು ನೀಡಿದ್ದಾರೆಂದು ಪೊಲೀಸರು ತಿಳಿಸಿದ್ದಾರೆ.

**ಜಿಲ್ಲಾ ಪಂಚಾಯತ್, ಕೋಲಾರ**
**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ**
ಜಿಲ್ಲಾ ಒಳಾಂಗಣ ಕ್ರೀಡಾಂಗಣ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮುಂಭಾಗ, ಬಂಗಾರಪೇಟೆ ರಸ್ತೆ, ಕೋಲಾರ ಜಿಲ್ಲೆ-563101,
**ದೂ:08152-222320, ಇ-ಮೇಲ್:adysskolar@gmail.com**
ಸಂ:ಸ.ನಿ/ಯುಸಕ್ರೀ/ಕ್ರೀಸಾಖ/38/2024-25 ದಿನಾಂಕ:27.08.2024

**ಪತ್ರಿಕಾ ಪ್ರಕಟಣೆ**

ಕೋಲಾರ ಜಿಲ್ಲೆಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಕ್ರೀಡಾ ಸಾಮಾಗ್ರಿಗಳನ್ನು ಖರೀದಿಸಲು ಇ-ಪ್ರಕ್ಯೂರ್‌ಮೆಂಟ್ **https://kppp.karnataka.gov.in** ನ ಮುಖಾಂತರ **26.08.2024 ರಂದು ಟೆಂಡರ್ ಕರೆಯಲಾಗಿದ್ದು**, ಅರ್ಜಿ ಸಲ್ಲಿಸಲು **ಕೊನೆಯ ದಿನಾಂಕ: 12.09.2024 ರ ಸಂಜೆ: 5:00 ಗಂಟೆಯವರೆಗೆ, ಪಾವತಿಸಬೇಕಾದ ಇ.ಎಂ.ಡಿ ಮೊತ್ತ ರೂ. 42,500/-** ಈ ಕಛೇರಿಯ ಕೆಲಸದ ವೇಳೆಯಲ್ಲಿ ಹೆಚ್ಚಿನ ವಿವರಗಳನ್ನು ಪಡೆಯಲು ಕೋರಲಾಗಿದೆ. **ದೂ:08152-222320 ಗೆ ಸಂಪರ್ಕಿಸುವುದು.**

**ಸಹಿ/- ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೋಲಾರ ಜಿಲ್ಲೆ, ಕೋಲಾರ**

ವಾಸಾಸಂಇ/ಕೋಲಾರ/ಆರ್.ಓ.ಸಂಖ್ಯೆ:189/ಕೆಎಸ್‌ಎಂಸಿಎ/2024-25

## ಎಲ್ಲ ಕ್ಷೇತ್ರದಲ್ಲೂ ಸ್ತ್ರೀ ಮುಂದು

**ಮೈಸೂರು:** ಇಂದು ಮಹಿಳೆಯರು ಎಲ್ಲಾ ಕ್ಷೇತ್ರದಲ್ಲೂ ಮುಂದಿದ್ದು, ತಮ್ಮದೇ ಆದ ಅಸ್ತಿತ್ವ ಮೂಡಿಸುತ್ತಿದ್ದಾರೆ ಎಂದು ಪ್ರದ್ಯುಷ್ ಅರರ್ವಾಲ್ ತಿಳಿಸಿದರು. ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಪ್ಸಿ-ಭಾರತದಲ್ಲಿನ ಅತಿ ವೇಗವಾಗಿ ಬೆಳೆಯುತ್ತಿರುವ ಹೈಪರ್‌ವಾಲ್ಯೂ ಪ್ಲಾಟ್‌ಫಾರ್ಮ್‌ಗಳಲ್ಲಿ ಒಂದಾಗಿದೆ. ಕಳೆದ ವರ್ಷ ಅಂದರೆ 2023ನೇ ವರ್ಷಕ್ಕೆ ಹೋಲಿಸಿದರೆ, ಈ ವರ್ಷ ಮೈಸೂರಿನಲ್ಲಿ ಗ್ರಾಹಕರ ಬೇಡಿಕೆಗಳಲ್ಲಿ ಶೇ.24ರಷ್ಟು ಏರಿಕೆ ಉಂಟಾಗಿದೆ. ಅಪ್ ಮಹಿಳಾ ಗ್ರಾಹಕರನ್ನು ಹೆಚ್ಚಾಗಿ ತನ್ನತ್ತ ಸೆಳೆದಿದ್ದು, ಶೇ.54 ಕ್ಕಿಂತ ಹೆಚ್ಚಿನ ಮಹಿಳೆಯರು ಹೆಚ್ಚಿನ ಸಮಯ ಕಳೆಯುತ್ತಿದ್ದಾರೆ. ಮೈಸೂರು ನಗರದ ಗ್ರಾಹಕರ ಒಟ್ಟು ಖರೀದಿಯಲ್ಲಿ ಶೇ.24ಕ್ಕಿಂತ ಹೆಚ್ಚಿನ ಏರಿಕೆ ಕಂಡಿದೆ. ಇತ್ತೀಚಿನ ಸಮೀಕ್ಷೆ ಅಪ್‌ನಲ್ಲಿ ವ್ಯವಹರಿಸುವ ಮೈಸೂರಿನ ಗ್ರಾಹಕರ ಹಲವು ಆಸಕ್ತಿದಾಯಕ ಪ್ರವೃತ್ತಿಗಳನ್ನು ಬಹಿರಂಗಪಡಿಸಿದೆ. ಮಹಿಳಾ ಗ್ರಾಹಕರು ಗ್ರಾಹಕರ ನೆಲೆಯ ಪ್ರಮುಖ ಅಂಗವಾಗಿದ್ದಾರೆ ಮತ್ತು ಇವರು ಹೆಚ್ಚಿನ ಮಟ್ಟದಲ್ಲಿ ಖರೀದಿಗಳನ್ನು ಮಾಡುತ್ತಾರೆ. ವಸ್ತುಗಳನ್ನು ಖರೀದಿ ಮಾಡುವ ವಿಷಯದಲ್ಲಿ ಮಹಿಳೆಯರು ಪುರುಷ ಗ್ರಾಹಕರನ್ನು ಯಾವಾಗಲೂ ಹಿಂದೆ ಹಾಕಿದ್ದಾರೆ ಎಂದರು. ಮುಂದಿನ ತಿಂಗಳು ಬೃಹತ್ ಮೇಳ ಮಾಡುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದು ಎಂದರು.

## ರಾಜಭವನ ಚಲೋ ಯಶಸಿಗೆ ಧನ್ಯವಾದ

**ಮೈಸೂರು:** ಸಿಎಂ ಸಿದ್ದರಾಮಯ್ಯ ಅವರ ತೇಜೋವಧೆ ಖಂಡಿಸಿ ಮಂಗಳವಾರ ಬೆಂಗಳೂರಿನಲ್ಲಿ ನಡೆದ ರಾಜ ಭವನ ಚಲೋ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಿದ ಶೋಷಿತ ಅಹಿಂದ ಮುಖಂಡರಿಗೆ ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಧನ್ಯವಾದ ಸಲ್ಲಿಸಿದ್ದಾರೆ. ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ ಸಿದ್ದರಾಮಯ್ಯನವರ ಅಭಿಮಾನಿಗಳು ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಿಂದ ರಾಜಭವನ ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮಕ್ಕೆ ಶೋಷಿತ ಸಮುದಾಯ, ಅಹಿಂದ ಮುಖಂಡರು ಮತ್ತು ಸಿದ್ದರಾಮಯ್ಯನವರ ಅಭಿಮಾನಿಗಳು ಆಗಮಿಸಿ ಯಶಸ್ವಿಗೊಳಿಸಿದ್ದಾರೆ. ಇದೇ ರೀತಿ ಸಿದ್ದರಾಮಯ್ಯ ಅವರ ಬೆಂಬಲಕ್ಕೆ ಸದಾ ಇರಬೇಕು ಎಂದು ಮನವಿ ಮಾಡಿದ್ದಾರೆ. ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್ ಹಿಂಪಡೆಯದೇ ಇದ್ದಲ್ಲಿ ಈ ಹೋರಾಟ ಉಗ್ರ ರೂಪ ಪಡೆಯಲಿದೆ ಎಂದು ಎಚ್ಚರಿಸಿದ್ದಾರೆ.

## ವಿವಿಧ ವೃತ್ತಿಗಳಿಗೆ ಆಹ್ವಾನ

**ಮೈಸೂರು:** ಮೈಸೂರಿನ ಎನ್.ಆರ್.ಮೊಹಲ್ಲಾದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಐಟಿಐ) ವತಿಯಿಂದ 2024-25ನೇ ಸಾಲಿನ ವಿಭಾಗದಲ್ಲಿನ ವಿವಿಧ ವೃತ್ತಿಗಳ 117 ಖಾಲಿ ಸ್ಥಾನಗಳಿಗೆ 8ನೇ ತರಗತಿ ಪಾಸಾದ (ವೆಲ್ಡರ್ ವೃತ್ತಿಗೆ ಮಾತ್ರ) ಹಾಗೂ ಎಸ್‌ಎಸ್‌ಎಲ್‌ಸಿ ಉತ್ತೀರ್ಣ ಅಭ್ಯರ್ಥಿಗಳಿಗೆ ಮೆರಿಟ್ ಆಧಾರದಲ್ಲಿ ಪ್ರಾಚಾರ್ಯರ ಹಂತದಲ್ಲಿಯೇ ಪ್ರವೇಶ ನಡೆಯಲಿದೆ.ಆಸಕ್ತ ಅಭ್ಯರ್ಥಿಗಳು ಐಟಿಐಗೆ ತಮ್ಮ ಮೂಲದಾಖಲಾತಿಗಳೊಡನೆ ನೇರವಾಗಿ ಭೇಟಿ ನೀಡಿ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ). ಎನ್.ಆರ್.ಮೊಹಲ್ಲಾ, ಮೈಸೂರು ಅನ್ನು ನೇರವಾಗಿ ಅಥವಾ ದೂ.ಸಂ:0821-2498456ನ್ನು ಸಂಪರ್ಕಿಸಬಹುದು ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ದರ್ಜೆ-1 ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಮೈಸೂರು:** ರಂಗಾಯಣ ಸಿದ್ದಪಡಿಸುವ ನಾಟಕಗಳಿಗೆ ಹಾಗೂ ರಂಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ರಂಗಭೂಮಿಯಲ್ಲಿ ಅನುಭವವಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ರಾಷ್ಟ್ರೀಯ ನಾಟಕ ಶಾಲೆಯ ಪದವಿ, ರಾಜ್ಯದ ಯಾವುದೇ ರಂಗಶಿಕ್ಷಣ ಕೇಂದ್ರದಿಂದ ರಂಗಶಿಕ್ಷಣ ಪದವಿ, ಡಿಪ್ಲೋಮಾ ಪಡೆದವರಾಗಿರಬೇಕು. ರಂಗಭೂಮಿ ಅನುಭವ ಕಡ್ಡಾಯವಾಗಿದ್ದು, ಅರ್ಹ 22 ರಿಂದ 35 ವರ್ಷದೊಳಗಿನ ವಯೋಮಿತಿಯುಳ್ಳ ಕಲಾವಿದರನ್ನು ರಂಗಾಯಣದ ನಿಯಮಾನುಸಾರ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಸಂದರ್ಶನದ ವೇಳೆ ಹಾಜರುಪಡಿಸಬೇಕಾದ ಮೂಲ ದಾಖಲಾತಿಗಳು ಜನ್ಮ ದಿನಾಂಕ ದೃಢೀಕರಣ ಪತ್ರ, ಎನ್‌ಎಸ್‌ಡಿ, ಡಿಪ್ಲೊಮೋ ಪ್ರಮಾಣ ಪತ್ರ, ರಂಗಶಿಕ್ಷಣ ಕೇಂದ್ರದ ಅನುಭವ ಪ್ರಮಾಣ ಪತ್ರ, ರಂಗಭೂಮಿ ಅನುಭವ ಕುರಿತ ಸ್ವವಿವರ ಪತ್ರ (ಅಗತ್ಯ ದಾಖಲೆಗಳೊಂದಿಗೆ) ಹಾಗೂ ಆಧಾರ್ ಕಾರ್ಡ್. ಆಸಕ್ತರು ಅರ್ಜಿ ನಮೂನೆಯನ್ನು ರಂಗಾಯಣದ ವೆಬ್‌ಸೈಟ್‌ನಿಂದ ಡೌನ್ ಲೋಡ್ ಮಾಡಿಕೊಂಡು ಸೆ.5ರೊಳಗೆ ವಿನೋಬಾ ರಸ್ತೆಯಲ್ಲಿರುವ ರಂಗಾಯಣದ ನಿರ್ದೇಶಕರ ವಿಳಾಸಕ್ಕೆ ಅರ್ಜಿ ಸಲ್ಲಿಸಬೇಕು ಎಂದು ರಂಗಾಯಣದ ಉಪನಿರ್ದೇಶಕ ಡಾ.ಎಂ.ಡಿ.ಸುದರ್ಶನ್ ತಿಳಿಸಿದ್ದಾರೆ.

## ಶಿಕ್ಷಕರ ಪ್ರಶಸ್ತಿಗೆ ಆಯ್ಕೆ

**ಮೈಸೂರು:** ಎನ್.ಆರ್.ಮೊಹಲ್ಲಾದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಿರಿಯ ತರಬೇತಿ ಅಧಿಕಾರಿ ಶಿವಲಿಂಗಯ್ಯ ಕೆ.ಜೆ ಭಾರತ ಸರ್ಕಾರದ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆಯ ವತಿಯಿಂದ ನೀಡುವ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿ-2024ಗೆ ಅಯ್ಕೆಯಾಗಿದ್ದು, ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಗೋವಿಂದರಾಜು. ಜೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ತಾಂತ್ರಿಕ ನೌಕರರ ಸಂಘದ ಜಿಲ್ಲಾಧ್ಯಕ್ಷ ಬೋಪಯ್ಯ.ಸಿ.ಯು, ಕಾರ್ಯದರ್ಶಿ ಭಾಸ್ಕರ.ಪಿ.ಬಿ, ಪದಾಧಿಕಾರಿಗಳು ಹಾಗೂ ಜಿಲ್ಲಾ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಅಧಿಕಾರಿ ಅಭಿನಂದನೆ ತಿಳಿಸಿದ್ದಾರೆ.

# ಸವಿತಾ ಸಮಾಜ ಶೈಕ್ಷಣಿಕವಾಗಿ ಮುಖ್ಯವಾಹಿನಿಗೆ ಬರಲಿ

**ಚಾಮರಾಜನಗರ:** ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಸವಿತಾ ಸಮಾಜ ಶೈಕ್ಷಣಿಕವಾಗಿ ಮುನ್ನಡೆದು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಸಲಹೆ ಮಾಡಿದರು.



ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಶಿವಶರಣ ಶ್ರೀ ಹಡಪದ ಅಪ್ಪಣ್ಣ ಅವರ 890ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಹಡಪದ ಅಪ್ಪಣ್ಣನವರು ಅನುಭವ ಮಂಟಪದ ಉಸ್ತುವಾರಿ ವಹಿಸಿಕೊಂಡಿದ್ದರು. ತೀರಾ ನಿರ್ಲಕ್ಷ್ಯಕ್ಕೆ ಒಳಗಾಗಿದ್ದ ಸಮುದಾಯದ ಅಪ್ಪಣ್ಣನವರನ್ನು ಅನುಭವ ಮಂಟಪದ ದ್ವಾರದಲ್ಲಿ ನಿಲ್ಲಿಸಲಾಗಿತ್ತು. ಶಿವಶರಣರು ಸೇರಿದಂತೆ ಯಾವುದೇ ವ್ಯಕ್ತಿ ಮಂಟಪ ಪ್ರವೇಶಿಸುವ ಮೊದಲು ಹಡಪದ ಅಪ್ಪಣ್ಣ ದರ್ಶನ ಮಾಡಿಯೇ ಒಳಬರಬೇಕಾಗಿತ್ತು. ಅಷ್ಟು ಮೌಲ್ಯಯುತ ಸ್ಥಾನ ಪಡೆದಿದ್ದ ಅಪ್ಪಣ್ಣನವರು ವಚನಗಳ ಮೂಲಕವು ಸಮಾಜ ತಿದ್ದುವ ಕಾಯಕದಲ್ಲಿ ತೊಡಗಿಸಿಕೊಂಡಿದ್ದರು ಎಂದರು.

ಪ್ರಸ್ತುತ ಸವಿತಾ ಸಮಾಜದ ಅಭಿವೃದ್ಧಿಗಾಗಿ ಸರ್ಕಾರವು ನಿಗಮಗಳ ಮೂಲಕ ಸ್ವಯಂ ಉದ್ಯೋಗ ನೇರ ಸಾಲ, ಅರಿವು ಶೈಕ್ಷಣಿಕ ಸಾಲ ಯೋಜನೆ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೊಳಿಸಿದೆ. ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಸಮುದಾಯ ಸಾಮಾಜಿಕ ಮುನ್ನೆಲೆಗೆ ಬರಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಮಕ್ಕಳನ್ನೆ ಆಸ್ತಿಯನ್ನಾಗಿ ಮಾಡಬೇಕು. ನಿಗಮಗಳಿಗೆ ಈಗ ನೀಡುತ್ತಿರುವ 5 ಕೋಟಿ ಅನುದಾನವನ್ನು 50 ಕೋಟಿ ರೂ. ಗಳಿಗೆ ಹೆಚ್ಚಿಸುವಂತೆ ಸದನದಲ್ಲಿ ಚರ್ಚಿಸಲಾಗುವುದು ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು. ಕಾರ್ಯಕ್ರಮದಲ್ಲಿ ಮುಖ್ಯ ಭಾಷಣ ಮಾಡಿದ ಯಳಂದೂರಿನ ಎಸ್.ಡಿ.ವಿ.ಎಸ್ ವಿದ್ಯಾಸಂಸ್ಥೆಯ ಶಿಕ್ಷಕರಾದ ಗುಂಬಳ್ಳಿ ಬಸವರಾಜ್ ಅವರು ಹಡಪದ ಅಪ್ಪಣ್ಣನವರ ವೈಚಾರಿಕ ಪ್ರಜ್ಞೆ, ಸಮಯಪ್ರಜ್ಞೆ, ನಡವಳಿಕೆ ಉತ್ತಮವಾಗಿತ್ತು. ಅನುಭವ ಮಂಟಪದಲ್ಲಿ ಬಸವಣ್ಣನವರ ಆಪ್ತ ಬಂಧುವಾಗಿದ್ದ ಹಡಪದ ಅಪ್ಪಣ್ಣನವರು 251 ವಚನಗಳನ್ನು ರಚಿಸಿದ್ದರು. ಸಾಮಾಜಿಕ ಅಸಮಾನತೆ ಹೋಗಲಾಡಿಸಲು ಟೊಂಕಕಟ್ಟಿದ್ದ ಅಪ್ಪಣ್ಣನವರನ್ನು ಅಲ್ಲಮಪ್ರಭುಗಳು ನಿಜಸುಖಿ ಎಂದು ಕರೆದಿದ್ದರು ಎಂದರು. ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಅವರು ಮಾತನಾಡಿ ಹಡಪದ ಅಪ್ಪಣ್ಣ ಅವರ ಆಲೋಚನೆ, ದೂರದೃಷ್ಟಿ, ವಿಚಾರಧಾರೆಗಳನ್ನು ನಾವೆಲ್ಲರು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ತಂಗಡಗಿ ಹಡಪದ ಅಪ್ಪಣ್ಣ ದೇವರ ಮಹಾಸಂಸ್ಥಾನ ಮಠದ ಅನ್ನದಾನಿ ಭಾರತಿ ಅಪ್ಪಣ್ಣ ಮಹಾಸ್ವಾಮಿಯವರು ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷರಾದ ಎಚ್.ವಿ. ಚಂದ್ರು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉದಯ್‌ಕುಮಾರ್, ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ವೆಂಕಟರಾಜು, ಎಲ್ಲಾ ತಾಲೂಕುಗಳ ಸಮಾಜದ ಅಧ್ಯಕ್ಷರು, ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಾರ್ವಜನಿಕರಿಗೆ ಯೋಜನೆಗಳ ಮಾಹಿತಿ ನೀಡಿ: ವೆಂಕಟೇಶ್

**ಪಿರಿಯಾಪಟ್ಟಣ:** ಅಧಿಕಾರಿಗಳು ಸರ್ಕಾರದ ಯೋಜನೆಗಳನ್ನು ಜಾಹೀರಾತುಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು ಎಂದು ಸಚಿವ ಕೆ.ವೆಂಕಟೇಶ್ ಸೂಚಿಸಿದರು.



> ಆಸ್ಪತ್ರೆಯಲ್ಲಿ ವೈದ್ಯರು ಕಡ್ಡಾಯವಾಗಿ ಸಕಾಲಕ್ಕೆ ಹಾಜರಿದ್ದು ರೋಗಿಗಳ ಚಿಕಿತ್ಸೆಗೆ ಸ್ಪಂದಿಸಬೇಕು. ಇಲ್ಲದಿದ್ದಲ್ಲಿ ಅಂತವರ ವಿರುದ್ಧ ಸೂಕ್ತ ಕ್ರಮ ವಹಿಸಲಾಗುವುದು.
> | ಕೆ.ವೆಂಕಟೇಶ್ ಸಚಿವರು

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲೂಕು ಆಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಕೆಡಿಪಿ ಪ್ರಗತಿ ಪರಿಶೀಲನ ಸಭೆಯಲ್ಲಿ ಮಾತನಾಡಿದರು. ಸರ್ಕಾರವು ಪ್ರತಿ ಇಲಾಖೆಗೂ ಕೂಡ ಅನುದಾನ ಬಿಡುಗಡೆ ಮಾಡಿ ಯೋಜನೆಗಳನ್ನು ಜಾರಿಗೊಳಿಸಿದೆ ಆದರೆ ಕೆಲವು ಇಲಾಖಾ ಅಧಿಕಾರಿಗಳು ಸಾರ್ವಜನಿಕರಿಗೆ ಸರಿಯಾದ ಮಾಹಿತಿ ನೀಡದೆ ಯೋಜನೆ ಅಭಿವೃದ್ಧಿ ಕುಂಠಿತವಾಗುತ್ತಿದೆ. ಆದ್ದರಿಂದ ಇಲಾಖಾಧಿಕಾರಿಗಳು ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಪ್ರಚಾರ ನೀಡಿ ಯೋಜನೆಗಳ ಸದುಪಯೋಗಪಡಿಸಬೇಕು ಎಂದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಸಾದ್ ಮಾತನಾಡಿ ತಾಲೂಕಿನಲ್ಲಿ 65,000 ಎಕರೆ ಜಮೀನಿನಲ್ಲಿ ಹೊಗೆಸೊಪ್ಪನ್ನು ಬೆಳೆದಿದ್ದು, ಈ ಬಾರಿ ಮುಂಗಾರು ಮಳೆ ಉತ್ತಮವಾಗಿದೆ. ಸಕಾಲಕ್ಕೆ ರೈತರಿಗೆ ಕೃಷಿ ಪರಿಕರಗಳನ್ನು ವಿತರಿಸಲಾಗಿದೆ. ಮಳೆ ಹಾನಿಯಾದ ಪ್ರದೇಶಗಳಿಗೆ ಭೇಟಿ ನೀಡಿ ವರದಿಯನ್ನು ಕೂಡ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಎರಡನೇ ಬೆಳೆಯಾಗಿ ಭತ್ತ ರಾಗಿ ಜೋಳ ಸೇರಿದಂತೆ ಇತರೆ ಬೆಳೆಗಳನ್ನು ರೈತರು ಬೆಳೆಯಲು ಮುಂದಾಗಿದ್ದಾರೆ ಎಂದು ಮಾಹಿತಿ ನೀಡಿದರು.

ಸಾರ್ವಜನಿಕ ಆಸ್ಪತ್ರೆಯ ಆಡಳಿತ ಅಧಿಕಾರಿ ಡಾ. ಅನಿಲ್ ಕುಮಾರ್ ಮಾತನಾಡಿ, ಆಸ್ಪತ್ರೆಯಲ್ಲಿ ಸಿಬ್ಬಂದಿ ಕೊರತೆ ಇದ್ದು ಲ್ಯಾಬ್ ಟೆಕ್ನಿಷಿಯನ್ಸ್‌ನ ಅವಶ್ಯಕತೆಗಳಿದೆ ಎಂದರು. ಆಸ್ಪತ್ರೆಯಲ್ಲಿ ಕಡ್ಡಾಯವಾಗಿ ವೈದ್ಯರು ಸಕಾಲಕ್ಕೆ ಹಾಜರಿದ್ದು ರೋಗಿಗಳ ಚಿಕಿತ್ಸೆಗೆ ಸ್ಪಂದಿಸಬೇಕು ಇಲ್ಲದಿದ್ದಲ್ಲಿ ಅಂತವರ ವಿರುದ್ಧ ಸೂಕ್ತ ಕ್ರಮ ವಹಿಸಲಾಗುವುದು ಎಂದು ಸಚಿವರು ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಚಂದ್ರಶೇಖರ್ ಮಾತನಾಡಿ, ತಾಲೂಕಿನಲ್ಲಿ 66 ಅಂತರ್ಜಾತಿ ವಿವಾಹ ಪ್ರಕರಣಗಳು ದಾಖಲಾಗಿದ್ದು ಸರ್ಕಾರದಿಂದ ಮಂಜೂರಾಗುವ ಪ್ರೋತ್ಸಾಹ ಅನುದಾನವು ಇವರಿಗೆ ತಲುಪಿಸಲಾಗುತ್ತಿದೆ. ತಾಲೂಕಿಗೆ 26 ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಕ್ಕೆ ಸ್ಥಳಾವಕಾಶಕ್ಕಾಗಿ ಗ್ರಾಮ ಪಂಚಾಯಿತಿಗಳಿಗೆ ವರದಿ ಮಾಡಲಾಗಿದೆ. ಆದಿವಾಸಿಗಳಿಗೆ 362 ಮನೆಗಳು ಮಂಜೂರಾಗಿದೆ. ಮಕ್ಕಳ ಆಯೋಗದ ಸದಸ್ಯರು ತಾಲೂಕಿನ ಎಲ್ಲಾ ವಿದ್ಯಾರ್ಥಿ ನಿಲಯಗಳಿಗೂ ಭೇಟಿ ನೀಡಿ ವಿದ್ಯಾರ್ಥಿಗಳ ಬಗ್ಗೆ ಅಧ್ಯಯನ ಮಾಡಿದ್ದಾರೆ ಎಂದು ತಿಳಿಸಿದರು. ಜಲ ಜೀವನ ಮಿಷನ್ ಕಾಮಗಾರಿ ಮೂಲಕ ಕುಡಿಯುವ ನೀರು ಸರಬರಾಜು ಮಾಡುವ ಪೈಪ್ ಲೈನ್‌ಗಳು ದುರಸ್ತಿಯಾಗಿ ಗ್ರಾಮೀಣ ಭಾಗದ ಜನ ಸಾಮಾನ್ಯರು ಸಂಕಷ್ಟಕ್ಕೆ ಒಳಗಾಗಿದ್ದಾರೆ ಇದನ್ನು ಸರಿಪಡಿಸಬೇಕು.ಇದಕ್ಕೆ ಕಾರಣರಾದ ಗುತ್ತಿಗೆದಾರರ ಮೇಲೆ ಕ್ರಮವಹಿಸಬೇಕು ಎಂದು ಸಣ್ಣ ನೀರಾವರಿ ಅಭಿಯಂತರ ಕೃಷ್ಣ ಮೂರ್ತಿಯನ್ನು ತರಾಟೆಗೆ ತೆಗೆದುಕೊಂಡರು. ಈ ಸಂದರ್ಭದಲ್ಲಿ ಕೆಡಿಪಿ ಸದಸ್ಯರಾದ ನಿತೀನ್ ವೆಂಕಟೇಶ್, ಮಹಮ್ಮದ್ ಶಫಿ,ಲಕ್ಷ್ಮಿ ನಾರಾಯಣ, ಚನ್ನಕಲ್ ಶೇಖರ್, ನಿರೂಪ ರಾಜೇಶ್, ಮಾದೇವ,ತಹಸೀಲ್ದಾರ್ ನಿಸರ್ಗ ಪ್ರಿಯಾ, ತಾಪಂ ಕಾರ್ಯ ನಿರ್ವಹಕಾಧಿಕಾರಿ ಸುನೀಲ್ ಕುಮಾರ್,ಎಇಇ ವೆಂಕಟೇಶ್, ಮಲ್ಲಿಕಾರ್ಜುನ, ಕುಮಾರ್, ದಿನೇಶ್, ಪಶು ಇಲಾಖೆ ಸೋಮಯ್ಯ ಅಧಿಕಾರಿಗಳು ಹಾಜರಿದ್ದರು.



**ಪೇರೆಂಟ್ಸ್ ಅಸೋಸಿಯೇಷನ್ ಆಫ್ ಡೆಫ್ ಚಿಲ್ಡ್ರನ್ ಸಂಸ್ಥೆ ನಡೆಸುತ್ತಿರುವ ಇನ್‌ಸ್ಟಿಟ್ಯೂಟ್ ಆಫ್ ಮದರ್ ಅಂಡ್ ಡೆಫ್ ಚೈಲ್ಡ್ ಸಂಸ್ಥೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಆಚರಿಸಲಾಯಿತು. ಶಾಲೆಯ ಮಕ್ಕಳು ಕೃಷ್ಣನ ವಿವಿಧ ವೇಷ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ತೀರ್ಪುಗಾರರಾಗಿ ಅಂಬುಜಾ ಶ್ರೀಧರ್, ಚಂದ್ರಿಕಾ, ಅರುಣ ದಿನಕರ್ ಶೆಟ್ಟಿ ಆಗಮಿಸಿದ್ದರು. ಶಾಲೆಯ ಶಿಕ್ಷಕ ವೃಂದದವರು ಇದ್ದರು.**

# ಸಂಘಟಿತ ಹೋರಾಟದಿಂದ ಸಮಾನತೆ ಸಾಧ್ಯ



**ತಿ.ನರಸೀಪುರ:** ತಳ ಸಮುದಾಯಗಳು ಸಮಾಜದ ಮುಖ್ಯವಾಹಿನಿಗೆ ಬರಬೇಕಾದರೆ ಬಾಬಾ ಸಾಹೇಬ್ ಅಂಬೇಡ್ಕರ್ ಹೇಳಿದಂತೆ ಶಿಕ್ಷಣ, ಸಂಘಟನೆ, ಹೋರಾಟ, ಮುಖ್ಯ ಎಂದು ತಹಶೀಲ್ದಾರ್ ಸುರೇಶಾಚಾರ್ ತಿಳಿಸಿದರು.

ಪಟ್ಟಣದ ತಾ.ಪಂ.ಸಭಾಂಗಣದಲ್ಲಿ ತಾಲ್ಲೂಕು ಆಡಳಿತ, ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಹಾಗೂ ಆರ್ಯ ಈಡಿಗರ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಆಚರಿಸಿದ ಬ್ರಹ್ಮಶ್ರೀ ನಾರಾಯಣಗುರು ರವರ 170 ನೇ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಸಮಾಜದಲ್ಲಿ ನಮ್ಮ ಹಕ್ಕು ನಮಗೆ ಸಿಗಬೇಕಾದರೆ ಮೊದಲು ಶಿಕ್ಷಣ ನಂತರ ಸಂಘಟಿತರಾಗಬೇಕು. ಇವೆರಡಕ್ಕೂ ದಕ್ಕದಿದ್ದಾಗ ಹೋರಾಟ ಅನಿವಾರ್ಯವಾಗುತ್ತದೆ ಎಂದು ಬಾಬಾ ಸಾಹೇಬ್ ಅಂಬೇಡ್ಕರ್ ತಿಳಿಸಿಕೊಟ್ಟಿದ್ದಾರೆ. ಅವರ ಮಾತನ್ನು ಪ್ರತಿ ದಿನ ಪ್ರತಿ ಹೆಜ್ಜೆ ಹೆಜ್ಜೆಗೂ ಮನನ ಮಾಡಿಕೊಳ್ಳಬೇಕು ಎಂದರು. ಜಾತಿಯ ಕಾರಣಕ್ಕೆ ಅಸಮಾನತೆಯನ್ನು ಎದುರಿಸಿ ದೇವಾಲಯಗಳ ಪ್ರವೇಶವನ್ನು ನಿರಾಕರಿಸಿದಾಗ ಶೋಷಿತರೇ ಪೂಜಿಸುವ ಮತ್ತು ಎಲ್ಲರಿಗೂ ಮುಕ್ತ ಪ್ರವೇಶ ಕಲ್ಪಿಸುವ ದೇಗುಲಗಳನ್ನು ನಾರಾಯಣ ಗುರುಗಳು ಸ್ಥಾಪಿಸಿದರು ಅಂತಹ ಸಂತನ ಸ್ಮರಣೆಯೊಂದಿಗೆ ಅವರ ಹಾದಿಯಲ್ಲಿ ನಾವೆಲ್ಲರೂ ನಡೆಯೋಣ ಎಂದರು. ಮುಖ್ಯ ಭಾಷಣಕಾರರಾಗಿ ಮಾತನಾಡಿದ ಜಿಲ್ಲಾ ಆರ್ಯ ಈಡಿಗ ಯುವ ವೇದಿಕೆ ಅಧ್ಯಕ್ಷ ರಾಜು ಅಸ್ಪೃಶ್ಯತೆ, ಅಂಧಶ್ರದ್ಧೆಯ ಬಹುವಿಧಗಳಿಗೆ ಮೌನ ಕ್ರಾಂತಿಯನ್ನು ಸಂಘರ್ಷ ರಹಿತವಾಗಿ ಸಂಘಟಿಸಿ ಶೋಷಿತರ ಜೀವನಗತಿಗೊಂದು ಸುಧಾರಣೆಯ ಹೊಸ ಸೂತ್ರವನ್ನು ನಾರಾಯಣಗುರು ಹೆಣೆದರು. ಜೀವಿತಾವಧಿಯನ್ನು ಸಂಪೂರ್ಣವಾಗಿ ಸಮಾಜೋದ್ಧಾರಕ್ಕೆ ಸದ್ಬಳಕೆ ಮಾಡಿದ ಪರಿಣಾಮಾತ್ಮಕ ವಿಚಾರಗಳಿಂದಲೇ ನವ ಮನ್ವಂತರಕ್ಕೂ ಮಾದರಿಯಾಗಿ ನಿಂತವರು ನಾರಾಯಣ ಗುರುಗಳು ಎಂದರು. ದೇವಸ್ಥಾನಗಳು ಭಕ್ತಿ ಪೀಠವಾಗುವುದರ ಜತೆಯಲ್ಲಿ ಅಧ್ಯಯನ ಕೇಂದ್ರವಾಗಬೇಕು. ಪರೋಪಕಾರವೇ ತನ್ನ ಜೀವನದ ಧ್ಯೇಯ ಎನ್ನುತ್ತಾ ಸಮಾಜದ ಎಲ್ಲ ಧರ್ಮದವರನ್ನು ಒಗ್ಗೂಡಿಸಿ ಸರ್ವಧರ್ಮ ಸಮ್ಮೇಳನ ನಡೆಸಿ ನಾವೆಲ್ಲ ಇಲ್ಲಿ ಸೇರಿರುವುದು ವಾದಿಸಲಿಕ್ಕಲ್ಲ, ವಾದಿಸಿ ಜಯಿಸಲಿಕ್ಕೂ ಅಲ್ಲ, ಪರಸ್ಪರ ತಿಳಿಯಲು ಮತ್ತು ತಿಳಿಸಲು ಎನ್ನುವ ವಿಚಾರ ಧಾರೆಗಳನ್ನು ತಿಳಿಸಿಕೊಟ್ಟವರು ಬ್ರಹ್ಮಶ್ರೀ ನಾರಾಯಣ ಗುರುಗಳು ಎಂದರು.

ಪ್ರಸ್ತುತ ದಿನಮಾನದ ಬಹಳಷ್ಟು ಗಂಭೀರವಾದ ಸಾಮಾಜಿಕ, ಧಾರ್ಮಿಕ, ಆರ್ಥಿಕ, ರಾಜಕೀಯ ಸಮಸ್ಯೆಗಳಿಗೆ ಚಿಕಿತ್ಸಕ ಗುಣ ಗುರುಗಳ ವಿಚಾರ ಧಾರೆಯಲ್ಲಿದೆ. ಇದನ್ನು ಒಪ್ಪುವ ಮತ್ತು ಪಾಲಿಸುವ ಮನಃಸ್ಥಿತಿ ಹೆಚ್ಚಾದಷ್ಟು ಸಮಾಜದಲ್ಲಿ ಪ್ರಗತಿ ಸಾಧ್ಯವಿದೆ ಎಂದರು. ತಾಲ್ಲೂಕು ಆರ್ಯ ಈಡಿಗರ ಸಂಘದ ಗೌರವ ಅಧ್ಯಕ್ಷ ಸಿದ್ದರಾಜು,ಅಧ್ಯಕ್ಷ ಕಿರಗಸೂರು ಶಂಕರ್, ಉಪಾಧ್ಯಕ್ಷ ಗುರು,ಗೋವಿಂದ ರಾಜು, ಪ್ರಧಾನ ಕಾರ್ಯದರ್ಶಿ ರೇಣುಕಾ ಪ್ರಸಾದ್, ತಾಲ್ಲೂಕು ಪಂಚಾಯತಿ ಯೋಜನಾ ನಿರ್ದೇಶಕ ರಂಗಸ್ವಾಮಿ, ಪುರಸಭಾ ಮುಖ್ಯಾಧಿಕಾರಿ ಬಿ.ಕೆ ವಸಂತ ಕುಮಾರಿ, ಬನ್ನೂರು ಪುರಸಭಾ ಮುಖ್ಯಾಧಿಕಾರಿ ಹೇಮಂತ್ ರಾಜ್,ಪಟ್ಟಣ ಠಾಣೆ ಇನ್ಸ್‌ಪೆಕ್ಟರ್ ಧನಂಜಯ,ಹಿಂದುಳಿದ ವರ್ಗಗಳ ಇಲಾಖೆ ಅಧಿಕಾರಿ ರಾಜಣ್ಣ, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಶಾಂತ, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಸುಹಾಸಿನಿ ಹಾಜರಿದ್ದರು.

# ಜಿಂಕೆ ಬೇಟೆ: ಓರ್ವನ ಬಂಧನ

**ಹುಣಸೂರು:** ನಾಗರ ಹೊಳೆ ಉದ್ಯಾನದಂಚಿನ ವೀರನಹೊಸಹಳ್ಳಿ ಪ್ರಾದೇಶಿಕ ಅರಣ್ಯದಲ್ಲಿ ಜಿಂಕೆ ಭೇಟೆಯಾಡಿ ಮಾಂಸ ಸಾಗಿಸುತ್ತಿದ್ದ ವೇಳೆ ಆರೋಪಿಯನ್ನು ಕಿರಂಗೂರು ಗೇಟ್ ಬಳಿಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದರೆ, ಮತ್ತಿಬ್ಬರು ಆರೋಪಿಗಳು ಪರಾರಿಯಾಗಿದ್ದಾರೆ.



ಉದ್ಯಾನದಂಚಿನ ಹನಗೋಡು ಹೋಬಳಿಯ ಭರತವಾಡಿ ಹಾಡಿಯ ರುದ್ರ ಬಂಧಿತ ಆರೋಪಿ, ಈತನಿಂದ ಎರಡು ಕೆ.ಜಿಯಷ್ಟು ಜಿಂಕೆ ಮಾಂಸ, ಜಿಂಕೆ ಚರ್ಮ, ಕೃತ್ಯಕ್ಕೆ ಬಳಸಿದ್ದ ಬೈಕ್, ಒಂದು ಮೊಬೈಲ್ ವಶಕ್ಕೆ ಪಡೆದಿದ್ದಾರೆ. ಮತ್ತಿಬ್ಬರು ಆರೋಪಿಗಳಾದ ಕಪ್ಪನಕಟ್ಟೆ ಹಾಡಿಯ ರಾಮು ಹಾಗೂ ಅವ್ವ ತಲೆ ಮರೆಸಿಕೊಂಡಿದ್ದಾರೆ.

ಆರೋಪಿಗಳು ಜಿಂಕೆಯನ್ನು ಬೇಟೆಯಾಡಿ ಮಾಂಸವನ್ನು ಮಾರಾಟ ಮಾಡುತ್ತಿರುವ ಬಗ್ಗೆ ಬಂದ ಖಚಿತ ಮಾಹಿತಿ ಮೇರೆಗೆ ಹುಣಸೂರು ವನ್ಯಜೀವಿ ವಿಭಾಗದ ಆರ್.ಎಫ್.ಓ.ಸುಬ್ರಮಣ್ಯ ಕೆ.ಇ, ಆನೆಚೌಕೂರು ವಲಯದ ಡಿಆರ್‌ಎಫ್‌ಓ ಶಿವಕುಮಾರ್ ಹಾಗೂ ಗಸ್ತು ಅರಣ್ಯ ಪಾಲಕರು ಹಾಗೂ ಸಿಬ್ಬಂದಿ ಹನಗೋಡಿಗೆ ಸಮೀಪದ ಕಿರಂಗೂರು ಗೇಟ್ ಬಳಿ ದಾಳಿ ನಡೆಸಿ ವಶಪಡಿಸಿಕೊಳ್ಳಲಾಗಿದೆ. ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಲಾಗಿದ್ದು, ಉಳಿದಿಬ್ಬರು ಆರೋಪಿಗಳ ಪತ್ತೆಗೆ ಕ್ರಮವಹಿಸಲಾಗಿದೆ ಎಂದು ನಾಗರಹೊಳೆ ಹುಲಿಯೋಜನೆ ನಿರ್ದೇಶಕಿ ಪಿ.ಎ.ಸೀಮಾ ತಿಳಿಸಿದ್ದಾರೆ.

# ಪ್ರಸಾದ ಲೇಖನ: ಬಹುಮಾನ ವಿತರಣೆ

**ಮೈಸೂರು:** ಡಾ.ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯ 109ನೇ ಜಯಂತಿ ಅಂಗವಾಗಿ ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ಪ್ರಸಾದ ಲೇಖನ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.




ಸುತ್ತೂರು ಮಠದಲ್ಲಿ ನಡೆದ ಜಯಂತಿ ಮಹೋತ್ಸವವದಲ್ಲಿ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯದಲ್ಲಿ ಬಹುಮಾನ ವಿತರಿಸಲಾಯಿತು. ಪದವಿಪೂರ್ವ ವಿಭಾಗದಲ್ಲಿ ವಿಜಯನಗರದ ಜೆಎಸ್‌ಎಸ್ ಕಾಲೇಜಿನ ಐಶ್ವರ್ಯ ಪ್ರಥಮ, ಮಂಡ್ಯ ಸದ್ವಿದ್ಯಾ ಕಾಲೇಜಿನ ಆರ್.ಪ್ರಿಯಾಂಕ ದ್ವಿತೀಯ, ಕೊಡಗು ಕೂರ್ಗ್ ಇನ್‌ಸ್ಟಿಟ್ಯೂಟ್ ಆಫ್ ಫ್ರಿ ಯೂನಿವರ್ಸಿಟಿಯ ಎ.ಟಿ.ಡೀಪ್ನ ಸೀತಮ್ಮ, ತೃತೀಯ ಬಹುಮಾನ ಪಡೆದರು.

ಪದವಿ ವಿಭಾಗದಲ್ಲಿ ಕೊಳ್ಳೇಗಾಲ ಜೆಎಸ್‌ಎಸ್ ಮಹಿಳಾ ಕಾಲೇಜಿನ ಎಸ್.ಪ್ರಮೀಳ ಪ್ರಥಮ, ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯದ ಎಸ್. ಗೀತಾ ದ್ವಿತೀಯ, ನಂಜನಗೂಡು ಜೆಎಸ್‌ಎಸ್ ಕಾಲೇಜಿನ ಬಿ.ಸಿ. ಭ್ರಮರಾಂಬಿಕಾ ತೃತೀಯ ಬಹುಮಾನ ಪಡೆದರು.

ಸ್ನಾತಕೋತ್ತರ ವಿಭಾಗದಲ್ಲಿ ಮೈಸೂರು ಊಟಿ ರಸ್ತೆ ಜೆಎಸ್‌ಎಸ್ ಕಾಲೇಜಿನ ಮಂಜುನಾಥ ಪ್ರಥಮ, ಡಿ.ಎಂ.ಅನನ್ಯ ದ್ವಿತೀಯ, ಸರಸ್ವತಿಪುರಂ ಜೆಎಸ್‌ಎಸ್ ಮಹಿಳಾ ಕಾಲೇಜಿನ ಎಂ.ಪಾರ್ವತಮ್ಮ ತೃತೀಯ ಬಹುಮಾನ ಪಡೆದರು. ಎನ್. ಆರ್. ಶಿವಕುಮಾರ್ ವಿವರಗಳನ್ನು ಮಂಡಿಸಿದರು.

# ಕಾರಾಗೃಹಕ್ಕೆ ದಿಢೀರ್ ಭೇಟಿ: ಪರಿಶೀಲನೆ

**ಮೈಸೂರು:** ಮೈಸೂರಿನ ಕೇಂದ್ರ ಕಾರಾಗೃಹಕ್ಕೆ ಡಿಸಿಪಿ ಮುತ್ತುರಾಜ್ ನೇತೃತ್ವದ ತಂಡ ಸೋಮವಾರ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್ ರಾಜಾತಿಥ್ಯದ ಫೋಟೋಗಳು ವೈರಲ್ ಆದ ಬೆನ್ನಲ್ಲೇ ಗೃಹ ಸಚಿವರು 9 ಅಧಿಕಾರಿಗಳನ್ನು ಅಮಾನತು ಮಾಡಿತ್ತು. ಈ ಪ್ರಕರಣದಿಂದ ಎಚ್ಚೆತ್ತ ನಗರ ಪೊಲೀಸರು, ಡಿಸಿಪಿ ಮುತ್ತುರಾಜ್ ಮೈಸೂರು ಕಾರಾಗೃಹಕ್ಕೆ ಭೇಟಿ ನೀಡಿ, ಜೈಲಿನ ಭದ್ರತಾ ವ್ಯವಸ್ಥೆ ಮತ್ತು ನಿಯಮಗಳ ಪಾಲನೆಯ ಮೇಲಿನ ನಿಯಂತ್ರಣ ಪರಿಶೀಲಿಸಿದ್ದಾರೆ. ತಮ್ಮ ಭೇಟಿ ವೇಳೆಯಲ್ಲಿ ಜೈಲಿನ ಎಲ್ಲ ಭಾಗಗಳನ್ನು ಪರಿಶೀಲಿಸಿದ ಡಿಸಿಪಿ ಮುತ್ತರಾಜ್, ಡಾಗ್ ಸ್ಕ್ವ್ಯಾಡ್ ಸಹಿತವಾಗಿ ಪ್ರತ್ಯೇಕ ಪರಿಶೀಲನೆ ನಡೆಸಿದರು. ಈ ವೇಳೆ ಜೈಲಿನ ದಿನಚರಿ, ಖೈದಿಗಳ ಚಲನವಲನ ಹಾಗೂ ಭದ್ರತೆಯ ಬಗ್ಗೆ ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಿದರು.

ಕೊಲೆ ಆರೋಪದ ಮೇರೆಗೆ ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ನಟ ದರ್ಶನ್ ಜೈಲಿನಲ್ಲಿ ಐಷಾರಾಮಿ ಜೀವನ ನಡೆಸುತ್ತಿದ್ದ ಫೋಟೋಗಳು ಹಾಗೂ ವೀಡಿಯೋ ಕಾಲ್ ಮಾಡಿದ್ದ ಫೋಟೋ ಎಲ್ಲೆಡೆ ವೈರಲ್ ಆಗಿತ್ತು. ಈ ಫೋಟೊಗಳು ಸಾರ್ವಜನಿಕರಲ್ಲಿ ಹಲವು ಪ್ರಶ್ನೆ ಹುಟ್ಟುಹಾಕಿತ್ತಲ್ಲದೆ, ಜನರ ಆಕ್ರೋಶಕ್ಕೂ ಕಾರಣವಾಗಿತ್ತು. ಈ ಹಿನ್ನೆಯಲ್ಲಿ ಕಾರಾಗೃಹದಲ್ಲಿನ ಚಟುವಟಿಕೆಗಳು, ಕೈದಿಗಳ ಚಲನವಲನಗಳ ಬಗ್ಗೆ ಹೆಚ್ಚು ನಿಗಾವಹಿಸುವ ನಿಟ್ಟಿನಲ್ಲಿ ಡಿಸಿಪಿ ಮುತ್ತುರಾಜ್ ಅವರು ಜೈಲಿಗೆ ಭೇಟಿ ನೀಡಿ ಪರಿಶೀಲಿಸಿದ್ದಾರೆ.



# ರೈತಭವನ ನಿರ್ಮಾಣಕ್ಕೆ ಕ್ರಮ: ಹರೀಶ್‌ಗೌಡ

**ಹುಣಸೂರು:** ಟಿಎಪಿಸಿಎಂಎಸ್‌ವತಿಯಿಂದ ನೆನೆಗುದಿಗೆ ಬಿದ್ದಿರುವ ರೈತಭವನ ನಿರ್ಮಿಸಲು ಎಲ್ಲಾ ರೀತಿಯ ಕ್ರಮವಹಿಸಲಾಗುವುದೆಂದು ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.



> ಮೊದಲ ಹಂತದಲ್ಲಿ 50ಲಕ್ಷರೂ ವೆಚ್ಚದಡಿ 9 ಮಳಿಗೆ ನಿರ್ಮಿಸಲಾಗಿದೆ. ಮತ್ತೊಂದು ಕಡೆ 50 ಲಕ್ಷರೂ ವೆಚ್ಚದ ಮಳಿಗೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ. ಈ ವಾಣಿಜ್ಯ ಮಳಿಗೆಗಳಿಂದ ಸಂಘಕ್ಕೆ ಆದಾಯ ಬರಲಿದೆ.
> | ಹರೀಶ್ ಗೌಡ ಶಾಸಕರು

ನಗರದ ಅಕ್ಕಿಗಿರಣಿ ಕಟ್ಟಡದ ಆವರಣದಲ್ಲಿ ನಡೆದ ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ(ಟಿಎಪಿಸಿಎಂಎಸ್)ದ 2023-24ನೇ ಸಾಲಿನ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು ಹಲವಾರು ವರ್ಷಗಳಿಂದ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದ ಸಂಘವು ಇತ್ತೀಚಿನ ವರ್ಷಗಳಲ್ಲಿ ಪುನಶ್ಚೇತನಗೊಂಡಿದೆ. ಸಂಘದ ಆದಾಯ, ಸದಸ್ಯರ ಲಾಭಾಂಶದ ಪಾಲಿನ ಹಣ ಹಾಗೂ ರಾಜ್ಯ ಮಾರಾಟ ಮಹಾ ಮಂಡಳದವತಿಯಿಂದ ಹತ್ತು ಲಕ್ಷರೂ ನೆರವಿನೊಂದಿಗೆ ಅಕ್ಕಿಗಿರಣಿ ಆರವಣದಲ್ಲಿ ಶಿಥಿಲವಾಗಿದ್ದ ಹಳೇ ವಾಣಿಜ್ಯ ಮಳಿಗೆ ಕಟ್ಟಡವನ್ನು ಕೆಡವಿ ಒಂದು ಕೋಟಿ ವೆಚ್ಚದಡಿ ವಾಣಿಜ್ಯ ಮಳಿಗೆಯನ್ನು ನಿರ್ಮಿಸಲಾಗಿದೆ. ಸದಸ್ಯರ ಆಶಯದಂತೆ ಮುಂದಿನ ದಿನಗಳಲ್ಲಿ ರೈತಭವನ ನಿರ್ಮಿಸಲು ಬದ್ದವಾಗಿದ್ದೇನೆ. ಪಾರದರ್ಶಕ ಆಡಳಿತದಿಂದಾಗಿ ಸಂಘವು ಲಾಭದಲ್ಲಿದೆ. ಸಂಘಕ್ಕೆ 2.5ಲಕ್ಷರೂ ಮಳಿಗೆ ಬಾಡಿಗೆ ಬರುತ್ತಿದ್ದು, ಮುಂದಿನ ದಿನಗಳಲ್ಲಿ ಪ್ರಗತಿ ಕಾಣಲಿದೆ. ಸಂಘಕ್ಕೆ ಬರಬೇಕಾದ 29ಲಕ್ಷರೂಗಳ ಹಳೇ ಬಾಕಿ ವಸೂಲಿಗೆ ಕಾನೂನು ರೀತ್ಯಕ್ರಮಕ್ಕೆಗೊಳ್ಳಿ ಎಂದು ಆಡಳಿತ ಮಂಡಳಿಗೆ ಸೂಚಿಸಿದರು.

10.10ಲಕ್ಷ ಲಾಭ: ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಬಸವಲಿಂಗಯ್ಯ ಮಾತನಾಡಿ, 2023-24ನೇ ಸಾಲಿನಲ್ಲಿ 87.58ಲಕ್ಷರೂ, ವಹಿವಾಟು ನಡೆಸಿದ್ದು, 10.10ಲಕ್ಷ ರೂ.ಲಾಭ ಗಳಿಸಿದೆ. ಸಂಘವು ತನ್ನ ವ್ಯಾಪಾರ ವಹಿವಾಟು ವಿಸ್ತರಿಸಲು ಕ್ರಮಕ್ಕೆಗೊಳ್ಳಲಾಗಿದೆ. ಶಾಸಕರ ಸಹಕಾರದಿಂದ ಸಂಘವು ಪ್ರಗತಿಯಲ್ಲಿದೆ. ಸದಸ್ಯರ ಮನವಿಯಂತೆ ಮರಣ ನಿಧಿಯನ್ನು 7ರಿಂದ 8ಸಾವಿರಕ್ಕೆ ಹೆಚ್ಚಿಸಲಾಗುವುದು. ಸಂಘದವತಿಯಿಂದ ಇ-ಸ್ಟ್ಯಾಂಪಿಂಗ್ ಶಾಲು, ಹಾರ, ಪೇಟ, ಬಟ್ಟೆಯ ಮಾರಾಟ ಕೇಂದ್ರ ತೆರೆದಿದ್ದು, ಸಹಕಾರ ಸಂಘಗಳವರು ಇಲ್ಲಿಯೇ ಖರೀದಿಸುವಂತೆ ಮನವಿ ಮಾಡಿದರು. ರಾಜ್ಯ ಮಾರಾಟ ಮಹಾಮಂಡಳದ ನಿರ್ದೇಶಕ ಜಯರಾಂ, ಸಂಘದ ಉಪಾಧ್ಯಕ್ಷ ರೇವಣ್ಣ, ನಿರ್ದೇಶಕ ಅಸ್ವಾಳುಕೆಂಪೇಗೌಡ, ಮಾತನಾಡಿದರು. ಸದಸ್ಯರಾದ ರಾಮೇಗೌಡ, ಕಿರಿಜಾಜಿರಾಮಕೃಷ್ಣ, ಸೇರಿದಂತೆ ಅನೇಕರು ಮಾತನಾಡಿದರು. ಸಂಘದ ಕಾರ್ಯದರ್ಶಿ ಹೇಮಲತಾ ಸಂಘದ ವರದಿಯನ್ನು ಮಂಡಿಸಿದರು. ಸಂಘದ ನಿರ್ದೇಶಕರು ಹಾಗೂ ಸಾವಿರಕ್ಕೂ ಹೆಚ್ಚು ಸದಸ್ಯರು ಭಾಗವಹಿಸಿದ್ದರು.

ತಾವು ಎಂಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿದ್ದಾಗ ನಷ್ಟದಲ್ಲಿದ್ದ ವೇಳೆ ಸಾವಿರ ಕೋಟಿ ಠೇವಣಿ ಸಂಗ್ರಹಿಸಿ, ರೈತರಿಗೆ ಸಕಾಲದಲ್ಲಿ ಸಾಲ ಸೌಲಭ್ಯ ಕಲ್ಪಿಸಲಾಗಿತ್ತು. ಇದೀಗ ಠೇವಣಿ 800ಕೋಟಿಗೆ ಇಳಿದಿದೆ. ರೈತರಿಗೆ ಸಾಲ ಸಿಗುತ್ತಿಲ್ಲಾ, ತಾವು ಅಧ್ಯಕ್ಷರಾಗಿದ್ದಾಗ ಡಿಸಿಸಿ ಹಾಗೂ ಅಪೆಕ್ಸ್‌ಬ್ಯಾಂಕ್‌ನಿಂದ 275ಸಹಕಾರ ಸಂಘಗಳಿಗೆ ಐದು ಕೋಟಿ ಬಿಲ್ಡಿಂಗ್‌ಫಂಡ್ ಒದಗಿಸಲಾಗಿತ್ತು ಹಾಗೂ 1600ಕೋಟಿರೂ ಸಾಲನೀಡಲಾಗಿತ್ತೆಂದು ಹೇಳಿ, ರಾಜಕೀಯ ಕಾರಣಕ್ಕಾಗಿ ಸರಕಾರ ಚುನಾವಣೆ ನಡೆಸದೆ ಅನ್ಯಾಯ ಮಾಡಿದೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ಬೇಸರ ವ್ಯಕ್ತಪಡಿಸಿ, ರೈತರಿಗೆ ಅನಾನುಕೂಲವಾಗಿದೆ ಎಂದರು.

# ಚಿಕ್ಕಾಡೆ ಗ್ರಾಪಂ ದೇವಮ್ಮ ಉಪಾಧ್ಯಕ್ಷೆ

**ಪಾಂಡವಪುರ:** ಚಿಕ್ಕಾಡೆ ಗ್ರಾಮ ಪಂಚಾಯ್ತಿಗೆ ಕಾಂಗ್ರೆಸ್ ಹಾಗೂ ರೈತ ಸಂಘದ ಬೆಂಬಲಿತ ಅಭ್ಯರ್ಥಿ ದೇವಮ್ಮ ಅವಿರೋಧವಾಗಿ ಆಯ್ಕೆ ಆದರು.

ತಾಲೂಕಿನ ಚಿಕ್ಕಾಡೆ ಗ್ರಾಮ ಪಂಚಾಯ್ತಿಯಲ್ಲಿ ತೆರವಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆದಿದ್ದು ಕಾಂಗ್ರೆಸ್ ಹಾಗೂ ಬೆಂಬಲಿತ ಅಭ್ಯರ್ಥಿ ದೇವೇಗೌಡನ ಕೊಪ್ಪಲು ಗ್ರಾಮದ ಮಹಿಳೆ ಪರಿಶಿಷ್ಟ ಜಾತಿಯ ದೇವಮ್ಮ ಅವಿರೋಧವಾಗಿ ಆಯ್ಕೆ ಆದರು. ಚುನಾವಣಾ ಅಧಿಕಾರಿಯಾಗಿ ಇ. ಓ. ಲೋಕೇಶ್ ಮೂರ್ತಿ ಇದ್ದರು.

ಈ ಸಂದರ್ಭದಲ್ಲಿ ಗ್ರಾಂ.ಪಂಚಾಯ್ತಿ ಅಧ್ಯಕ್ಷೆ ಅರ್ಚನ, ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಪ್ರಮೋದ್, ಗ್ರಾ. ಪಂ ಮಾಜಿ ಉಪಾಧ್ಯಕ್ಷ ಶೇಖರ್, ಸದಸ್ಯರಾದ ಮಂಗಳಮ್ಮ, ದೇವೇಗೌಡನ ಕೊಪ್ಪಲು ಅವಿನಾಶ್, ಪಟ್ಟಸೋಮನಹಳ್ಳಿ ಮೋಹನ್ ಕುಮಾರ್, ಚಿಕ್ಕಾಡೆ ಆನಂದ್ ಮುಖಂಡರುಗಳಾದ ಚಿಕ್ಕಾಡೆ ವಿಜೇಂದ್ರ, ಚಿಕ್ಕಾಡೆ ಸಿ. ಎಂ ಮಹೇಶ್, ಮಾಜಿ ವಿಎಸ್ಎಸ್ ಎನ್ ಅಧ್ಯಕ್ಷ ಹಾಲಿ ನಿರ್ದೇಶಕ ಜಗದೀಶ್, ಹಾಲಿ ಚಿಕ್ಕಾಡೆ ವಿಎಸ್ಎಸ್ ಎನ್ ಅಧ್ಯಕ್ಷ ರವೀಂದ್ರ ಸ್ವಾಮಿ, ರಮೇಶ್ ಇನ್ನು ಇತರರು ಉಪಸ್ಥಿತರಿದ್ದರು.



# ಅಂಗನವಾಡಿ ಕೇಂದ್ರಕ್ಕೆ ಶುಭ ಭೇಟಿ

**ಮಡಿಕೇರಿ:** ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶುಭ ಅವರು ಇತ್ತೀಚೆಗೆ ಕೊಡಗು ಜಿಲ್ಲೆಯ ವಿವಿಧ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ವೀಕ್ಷಿಸಿದರು.



ಇಂದಿನ ಮಕ್ಕಳೇ ನಾಳಿನ ಪ್ರಜೆಗಳಾಗಿದ್ದು, ಮಕ್ಕಳ ಆರೋಗ್ಯ ಕಡೆ ಹೆಚ್ಚಿನ ಗಮನಹರಿಸಬೇಕು. ದೇಶದ ಅಭಿವೃದ್ಧಿಯಲ್ಲಿ ಮಕ್ಕಳ ಆರೋಗ್ಯ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ಹೇಳಿದ್ದಾರೆ.

ಯಾವುದೇ ಮಗು ಅಪೌಷ್ಠಿಕತೆಯಿಂದ ಬಳಲಬಾರದು. ಆ ನಿಟ್ಟಿನಲ್ಲಿ ಪ್ರತಿದಿನ ಪೌಷ್ಠಿಕ ಆಹಾರವನ್ನು ನೀಡುವಂತಾಗಬೇಕು ಎಂದು ತಿಳಿಸಿದರು.

ವಿವಿಧ ಅಂಗನವಾಡಿಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕೆಲವು ಅಂಗನವಾಡಿ ಕೇಂದ್ರಗಳಲ್ಲಿ ತಡೆಗೋಡೆ ಇಲ್ಲದಿರುವುದು, ಸೂಕ್ತ ಕಿಟಕಿ ವ್ಯವಸ್ಥೆ ಇಲ್ಲದಿರುವುದು, ಮಕ್ಕಳಿಗೆ ಒಳಾಂಗಣ ಮತ್ತು ಹೊರಾಂಗಣ ಮೈದಾನದಲ್ಲಿ ಆಟವಾಡಲು ಸೂಕ್ತ ಸ್ಥಳದ ಅಭಾವ ಕಂಡುಬಂದಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದ್ದಾರೆ.

ಕೆಲವೊಂದು ಅಂಗನವಾಡಿ ಕೇಂದ್ರಗಳಲ್ಲಿ ಉತ್ತಮವಾಗಿ ಅಡುಗೆ ಕೋಣೆ ಇದ್ದು, ಶುಚಿತ್ವಕ್ಕೆ ಒತ್ತು ನೀಡುವುದು ಶ್ಲಾಘನೀಯವಾಗಿದೆ ಎಂದು ಶುಭ ಅವರು ಹೇಳಿದ್ದಾರೆ.

ಅಂಗನವಾಡಿ ವ್ಯಾಪ್ತಿಯ ಗರ್ಭಿಣೀಯರು, ಬಾಣಂತಿಯರು, ಮಕ್ಕಳಿಗೆ ಸಮರ್ಪಕವಾಗಿ ಪೌಷ್ಠಿಕ ಆಹಾರವನ್ನು ಪೂರೈಕೆ ಮಾಡುವುದು ಕಂಡುಬಂದಿದೆ ಎಂದು ಅವರು ತಿಳಿಸಿದ್ದಾರೆ. ಅಪೌಷ್ಠಿಕತೆ ನಿವಾರಣಾ ರಾಜ್ಯ ಸಲಹಾ ಸಮಿತಿಯ ಅಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ವೇಣುಗೋಪಾಲ ಗೌಡ ಅವರ ನಿರ್ದೇಶನದಂತೆ ಇತ್ತೀಚೆಗೆ ಮಡಿಕೇರಿಯ ಸ್ಟೋನ್ ಹಿಲ್, ತ್ಯಾಗರಾಜ ಕಾಲೋನಿ, ಹಿಲ್‌ರಸ್ತೆ, ಕಡಗದಾಳು, ಮಾದಾಪುರ, ಕೊಳತ್ತೋಡು ಹೀಗೆ ವಿವಿಧ ಅಂಗನವಾಡಿಗಳಿಗೆ ಭೇಟಿ ನೀಡಿ ವೀಕ್ಷಣೆ ಮಾಡಲಾಗಿದೆ ಎಂದು ಶುಭ ಹೇಳಿದ್ದಾರೆ.

# ಮತದಾರರ ಪಟ್ಟಿ ಪರಿಷ್ಕರಣೆ

**ಚಾಮರಾಜನಗರ:** ಕೇಂದ್ರ ಚುನಾವಣಾ ಆಯೋಗವು ಮತದಾರರ ಪಟ್ಟಿ ಪರಿಷ್ಕರಣೆ ವೇಳಾಪಟ್ಟಿಯನ್ನು ಪ್ರಕಟಿಸಿದ್ದು, ಆಗಸ್ಟ್ 20ರಿಂದ ಮತದಾರರ ಪಟ್ಟಿ ಪರಿಷ್ಕರಣೆ ನಡೆಯುತ್ತಿದೆ. ಮತದಾರರ ಪಟ್ಟಿಗೆ ಪರಿಷ್ಕರಣೆ ವೇಳೆ ರಾಜ್ಯದ ಎಲ್ಲಾ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗಳಿಗೆ ಭೇಟಿ ನೀಡಲಿದ್ದಾರೆ. ಈ ಸಮಯದಲ್ಲಿ ಸಾರ್ವಜನಿಕರು ಮತದಾರರ ಪಟ್ಟಿಗೆ ಹೊಸದಾಗಿ ನೋಂದಣಿ, ತಿದ್ದುಪಡಿಗಳು, ಮೃತ ಮತ್ತು ಸ್ಥಳಾಂತರಗೊಂಡ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆಯಲು, 18 ವರ್ಷ ತುಂಬಿದ ಯುವ ಮತದಾರರ ಹೆಸರು ಸೇರ್ಪಡೆ ಕುರಿತಾದ ಅರ್ಜಿಗಳನ್ನು ಸಲ್ಲಿಸಬಹುದು. ಆಗಸ್ಟ್ 20 ರಿಂದ ಅಕ್ಟೋಬರ್ 18ರವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳು ಬಿ.ಎಲ್.ಒ ಪರಿಶೀಲನೆ ನಡೆಸಲಿದ್ದಾರೆ. ಅಕ್ಟೋಬರ್ 19 ರಿಂದ 28ರವರೆಗೆ ಸಮಗ್ರ ಕರಡು ಮತದಾರರ ಪಟ್ಟಿಯನ್ನು ಸಿದ್ದಪಡಿಸಲಾಗುವುದು. ಅಕ್ಟೋಬರ್ 29ರಂದು ಸಮಗ್ರ ಕರಡು ಮತದಾರರ ಪಟ್ಟಿಯ ಪ್ರಕಟಣೆ ಮಾಡಲಾಗುತ್ತದೆ.ಸಾರ್ವಜನಿಕರು ಲೋಪದೋಷಗಳ ಕುರಿತಾಗಿ ಅಕ್ಟೋಬರ್ 29 ರಿಂದ ನವೆಂಬರ್ 28ರವರೆಗೆ ಆಕ್ಷೇಪಣೆಗಳನ್ನು ಸಲ್ಲಿಸುವ ಅವಕಾಶ ಇರುತ್ತದೆ.ಆಕ್ಷೇಪಣೆಗಳ ವಿಲೇವಾರಿಯನ್ನು ಡಿಸೆಂಬರ್ 24ರೊಳಗೆ ಮುಕ್ತಾಯಗೊಳಿಸಲಾಗುವುದು. 2025 ಜನವರಿ 1ರೊಳಗೆ ಮತದಾರರ ಪಟ್ಟಿ ಗುಣಮಟ್ಟ ಪರಿಶೀಲಿಸಲಾಗುತ್ತದೆ. ಜನವರಿ 6ರಂದು ಮತದಾರರ ಪಟ್ಟಿಯನ್ನು ಅಂತಿಮವಾಗಿ ಪ್ರಕಟಿಸಲಾಗುತ್ತದೆ. ಆಕ್ಷೇಪಣೆಯ ಅವಧಿಯಲ್ಲಿ ಮುಖ್ಯ ಚುನಾವಣಾಧಿಕಾರಿಗಳು ನಿಗದಿತ ಶನಿವಾರ ಮತ್ತು ಭಾನುವಾರ ನಡೆಸಲಿರುವ ವಿಶೇಷ ಅಭಿಯಾನದ ದಿನಾಂಕಗಳನ್ನು ಶೀಘ್ರದಲ್ಲಿಯೇ ಪ್ರಕಟಿಸಲಿದ್ದಾರೆ ಎಂದು ಗುಂಡ್ಲುಪೇಟೆ ತಾಲೂಕು ತಹಶಿಲ್ದಾರ್ ತಿಳಿಸಿದ್ದಾರೆ.

# ಕಲಾವಿದರಿಂದ ಅರ್ಜಿ ಆಹ್ವಾನ

**ಮಡಿಕೇರಿ:** ಮೈಸೂರು ರಂಗಾಯಣವು ಸಿದ್ದಪಡಿಸುವ ನಾಟಕಗಳಿಗೆ ಹಾಗೂ ರಂಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ರಂಗಭೂಮಿಯಲ್ಲಿ ಅನುಭವವಿರುವ ಆಸಕ್ತ ಕಲಾವಿದರು ಅರ್ಜಿ ಸಲ್ಲಿಸಬಹುದು. ರಾಷ್ಟ್ರೀಯ ನಾಟಕ ಶಾಲೆಯ ಪದವಿ/ರಾಜ್ಯದ ಯಾವುದೇ ರಂಗಶಿಕ್ಷಣ ಕೇಂದ್ರದಿಂದ ರಂಗಶಿಕ್ಷಣ ಪದವಿ/ಡಿಪ್ಲೊಮೋ/ರಾಜ್ಯ ಸರ್ಕಾರ ಅಂಗೀಕೃತ ವಿಶ್ವವಿದ್ಯಾಲಯದಿಂದ ನಾಟಕ ವಿಭಾಗದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು. ಅರ್ಹತೆಯುಳ್ಳ 22 ರಿಂದ 35 ವರ್ಷದೊಳಗಿನ ವಯೋಮಿತಿಯುಳ್ಳ ಆಸಕ್ತ ಕಲಾವಿದರನ್ನು ರಂಗಾಯಣದ ನಿಯಮಾನುಸಾರ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಪ್ರಸ್ತುತ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಸೆಪ್ಟೆಂಬರ್, 05 ರವರೆಗೆ ವಿಸ್ತರಿಸಲಾಗಿದೆ. ಆಸಕ್ತರು ಅರ್ಜಿಯನ್ನು ನಿರ್ದೇಶಕರು, ರಂಗಾಯಣ, ವಿನೋಬಾ ರಸ್ತೆ, ಮೈಸೂರು-05 ಈ ವಿಳಾಸಕ್ಕೆ ಸಲ್ಲಿಸುವುದು. ಈ ಸಂಬಂಧ ಸಂದರ್ಶನವು ಸೆಪ್ಟೆಂಬರ್, 10 ರಂದು ನಡೆಯಲಿದೆ. ಅರ್ಜಿ ನಮೂನೆಯನ್ನು ರಂಗಾಯಣದ ವೆಬ್‌ಸೈಟ್ rangayanamysore.karnataka.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಆಯ್ಕೆಯಾದ ಅಭ್ಯರ್ಥಿಗಳು ರಂಗಾಯಣದ ನಿಯಮ ಹಾಗೂ ಷರತ್ತುಗಳಿಗೆ ಬದ್ಧರಾಗಿರಬೇಕು. ಸಂದರ್ಶನದ ವೇಳೆ ಜನ್ಮ ದಿನಾಂಕ ದೃಢೀಕರಣ ಪತ್ರ, ಎನ್‌ಎಸ್‌ಡಿ / ಡಿಪ್ಲೊಮೋ ಪ್ರಮಾಣ ಪತ್ರ, ರಂಗಶಿಕ್ಷಣ ಕೇಂದ್ರದ ಅನುಭವ ಪ್ರಮಾಣ ಪತ್ರ, ರಂಗಭೂಮಿ ಅನುಭವ ಕುರಿತ ಸ್ವವಿವರ ಪತ್ರ (ಅಗತ್ಯ ದಾಖಲೆಗಳೊಂದಿಗೆ), ಆಧಾರ್ ಕಾರ್ಡ್ ಹಾಜರು ಪಡಿಸಬೇಕು ಎಂದು ಮೈಸೂರು ರಂಗಾಯಣದ ಉಪ ನಿರ್ದೇಶಕರಾದ ಡಾ.ಎಂ.ಡಿ.ಸುದರ್ಶನ್ ತಿಳಿಸಿದ್ದಾರೆ.

# ಮಾಹಿತಿ ಕಾರ್ಯಕ್ರಮ

**ಮಡಿಕೇರಿ:** ಖಾದಿ ಮತ್ತು ಗ್ರಾಮೋದ್ಯೋಗ ಆಯೋಗ ವತಿಯಿಂದ ಸರ್ವೋದಯ ಚಾರಿಟಬಲ್ ಟ್ರಸ್ಟ್ ಸಹಯೋಗದಲ್ಲಿ ಪ್ರದಾನ ಮಂತ್ರಿ ಉದ್ಯೋಗ ಸೃಜನ ಕಾರ್ಯಕ್ರಮ ಸಂಬಂಧ ಆಗಸ್ಟ್ 30 ರಂದು ಬೆಳಗ್ಗೆ 11 ಗಂಟೆಗೆ ನಗರದ ಗಾಂಧಿ ಭವನದಲ್ಲಿ ಪಿಎಂಇಜಿಪಿ ಸಾಲ ಸೌಲಭ್ಯ ಬಗ್ಗೆ ಅರಿವು ಕಾರ್ಯಕ್ರಮ ನಡೆಯಲಿದೆ.

# ಜಾನಪದ ದಿನಾಚರಣೆ ಅಂಗವಾಗಿ ಜಾನಪದ ವೈವಿಧ್ಯ

**ಮಡಿಕೇರಿ:** ಕರ್ನಾಟಕ ಜಾನಪದ ಪರಿಷತ್ ಕೊಡಗು ಜಿಲ್ಲಾ ಘಟಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ,ಮಡಿಕೇರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕನ್ನಡ ವಿಭಾಗ ಇವುಗಳ ಸಂಯುಕ್ತಾಶ್ರಯದಲ್ಲಿ 29ರಂದು ವಿಶ್ವ ಜಾನಪದ ದಿನಾಚರಣೆ ಅಂಗವಾಗಿ ಜಾನಪದ ವೈವಿಧ್ಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನಗರದ ಜೂನಿಯರ್ ಕಾಲೇಜಿನ ಆವರಣದಲ್ಲಿರುವ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಸಭಾಂಗಣದಲ್ಲಿ ನಡೆಯುವ ಕಾರ್ಯಕ್ರಮವನ್ನು ಕೊಡಗು ಜಿಲ್ಲಾಧಿಕಾರಿ ವೆಂಕಟ್ ರಾಜಾ ಉದ್ಘಾಟಿಸಲಿದ್ದಾರೆ.ಅಧ್ಯಕ್ಷತೆಯನ್ನು ಜಾನಪದ ಪರಿಷತ್‌ನ ಕೊಡಗು ಘಟಕದ ಅಧ್ಯಕ್ಷರಾದ ಬಿ.ಜಿ.ಅನಂತಶಯನ ವಹಿಸಲಿದ್ದು,ಮುಖ್ಯ ಅತಿಥಿಗಳಾಗಿ ಮಡಿಕೇರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಪಿ.ಕೆ.ವೆಂಕಟೇಶ್ ಪ್ರಸನ್ನ ಪಾಲ್ಗೊಳ್ಳಲಿದ್ದಾರೆ. ಅತಿಥಿಗಳಾಗಿ ಜಾನಪದ ಪರಿ?ತ್ ಕೊಡಗು ಘಟಕದ ಪ್ರಧಾನ ಕಾರ್ಯದರ್ಶಿ ಮುನೀರ್ ಅಹ್ಮದ್, ಖಜಾಂಚಿ ಸಂಪತ್ ಕುಮಾರ್,ಕಾರ್ಯದರ್ಶಿ ಉಜ್ವಲ್ ರಂಜಿತ್, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರು,ಕೊಡಗು ವಿವಿ ಸಿಂಡಿಕೇಟ್ ಸದಸ್ಯರಾದ ಡಾ.ಕಾವೇರಿ ಪ್ರಕಾಶ್,ಮಡಿಕೇರಿ ತಾಲೂಕು ಜಾನಪದ ಪರಿಷತ್ ಅಧ್ಯಕ್ಷ ಎಚ್.ಟಿ.ಅನಿಲ್ ಭಾಗವಹಿಸಲಿದ್ದಾರೆ. ಶನಿವಾರ ಸಂತೆಯ ಕಲಾವಿದ ಮೊಗೇರ ಸುರೇಶ್, ಮಡಿಕೇರಿಯ ಸಪ್ತಸ್ವರ ಕಲಾವಿದರ ಬಳಗ,ಸ.ಪ್ರ.ದ. ಕಾಲೇಜಿನ ಕನ್ನಡಸಂಘದಿಂದ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಚಿತ್ರಕಲಾವಿದ ಸಾದಿಕ್ ಹಂಸ ಮತ್ತು ಉಜ್ವಲ್ ರಂಜಿತ್ ತಂಡದಿಂದ ಕುಂಚಗಾಯನ ನಡೆಯಲಿದೆ ಎಂದು ತಿಳಿಸಿದೆ.

# ವಿದ್ಯಾರ್ಥಿಗಳು ಸಂವಿಧಾನ ಓದುವ ಹವ್ಯಾಸ ಬೆಳೆಸಿಕೊಳ್ಳಿ

**ಚಾಮರಾಜನಗರ:** ಜ್ಞಾನ ಸಂಪಾದನೆಗೆ ಸಂವಿಧಾನ ಓದುವ ಹವ್ಯಾಸವನ್ನು ವಿದ್ಯಾರ್ಥಿಗಳು ವಿದ್ಯಾರ್ಥಿ ದೆಸೆಯಿಂದಲೇ ಬೆಳೆಸಿಕೊಳ್ಳಬೇಕು ಎಂದು ಜಿಪಂ ಮಾಜಿಅಧ್ಯಕ್ಷ, ಕಾಂಪೋಸ್ಟ್ ಅಭಿವೃದ್ದಿ ನಿಗಮದ ಮಾಜಿ ಅಧ್ಯಕ್ಷ ಎಸ್. ಮಹದೇವಯ್ಯ ಹೇಳಿದರು.

ತಾಲೂಕಿನ ಆಲೂರು ಗ್ರಾಮದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಜಿಲ್ಲಾ ಜನಹಿತಾಶಕ್ತಿ ಹೋರಾಟವೇದಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಡೆದ ಸಂವಿಧಾನ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಂಬೇಡ್ಕರ್ ರಚಿಸಿರುವ ಸಂವಿಧಾನದಲ್ಲಿ ಸಾಮಾಜಿಕ, ಶೈಕ್ಷಣಿಕವಾಗಿ ಎಲ್ಲ ಅಂಶಗಳು ಅಡಕವಾಗಿವೆ. ಮಹಿಳೆಯರು, ಪುರುಷರು, ವಿದ್ಯಾರ್ಥಿಗಳ ಅನೂಕೂಲತೆಗೆ ಮೂಲಭೂತ ಹಕ್ಕುಗಳನ್ನು ಸಂವಿಧಾನದಲ್ಲಿ ಉಲ್ಲೇಖಿಸಲಾಗಿದೆ. ವಿದ್ಯಾರ್ಥಿಗಳು ಮುಂದೆ ಉನ್ನತಮಟ್ಟದ ಅಧಿಕಾರಿಗಳಾದಾಗ ಸರ್ಕಾರಿಸೇವೆ ಜತೆಗೆ ತಮ್ಮ ಗ್ರಾಮಗಳ ಅಭಿವೃದ್ದಿಗೂ ಆದ್ಯತೆ ನೀಡಬೇಕು, ನೀವು ಓದಿದ ಶಾಲಾಕಾಲೇಜಿಗೆ ಕೀರ್ತಿ ತರಬೇಕು

ಮುಖ್ಯವಾಗಿ ಸಮಯಪ್ರಜ್ಞೆ ಬೆಳೆಸಿಕೊಳ್ಳಬೇಕು ಎಂದು ಮನವಿ ಮಾಡಿದರು. ವಿಚಾರಮಂಡನೆ ಮಾಡಿದ ಕುದೇರು ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಎ.ಸಿ.ಮಹೇಂದ್ರ ಭಾರತದ ಸಂವಿಧಾನದಲ್ಲಿ ಪ್ರತಿಯೊಬ್ಬರಿಗೂ ಸಮಾನ ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯಿತಿಯಿಂದ ಹಿಡಿದು, ಪ್ರಧಾನಿ ರಾಷ್ಟ್ರಪತಿಯಂತಹ ಉನ್ನತಹುದ್ದೆಗೇರಲು ಸಂವಿಧಾನದ ಕೊಡುಗೆ ಅಪಾರ, ವಿದ್ಯಾರ್ಥಿಗಳು ಸಂವಿಧಾನ ಅಧ್ಯಯನ ಮಾಡುವ ಮೂಲಕ ತಮ್ಮ ಜ್ಞಾನಾರ್ಜನೆ ಹೆಚ್ಚಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ತಿಮ್ಮರಾಜು ಮಾತನಾಡಿ, ಜನಹಿತಾಶಕ್ತಿ ಹೋರಾಟವೇದಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ವಿವಿಧ ಕಾಲೇಜುಗಳಲ್ಲಿ ಸಂವಿಧಾನ ಅರಿವು ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಪ್ರಶಂಸನೀಯ, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಸಹಕಾರಿಯಾಗಲಿವೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಜನಹಿತಾಶಕ್ತಿ ಹೋರಾಟವೇದಿಕೆ ಅಧ್ಯಕ್ಷ ರಾಮಸಮುದ್ರಸುರೇಶ್ ಸಂವಿಧಾನ ಅರಿವು ಕಾರ್ಯಕ್ರಮವನ್ನು 50 ಪದವಿಪೂರ್ವ ಕಾಲೇಜುಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಸಂವಿಧಾನದ ಅರಿವು ಕಾಲೇಜು ವಿದ್ಯಾರ್ಥಿಗಳಿಗೆ ಮೂಡಿಸುವುದೇ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು. ಚಾಮರಾಜನಗರ ಸಿದ್ದಾರ್ಥ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಸಿ.ರಂಗಸ್ವಾಮಿ, ಜನಹಿತಾಶಕ್ತಿ ಹೋರಾಟವೇದಿಕೆ ಪ್ರಧಾನ ಕಾರ್ಯದರ್ಶಿ ಕಾಡಹಳ್ಳಿ ನಾಗರಾಜು, ಹಿರಿಯ ಉಪನ್ಯಾಸಕರಾದ ಮಹಾಲಿಂಗಸ್ವಾಮಿ, ನಾಗರಾಜು, ಸುರೇಶ್, ಪ್ರಸಾದ್, ಕೃಷ್ಣಮೂರ್ತಿ, ರಶ್ಮಿಕಾ, ಮಹೇಶ್ ಹಾಜರಿದ್ದರು.

## ವಿಶ್ವ ಜಾನಪದ ದಿನಾಚರಣೆ ಉಪನ್ಯಾಸದಲ್ಲಿ ಹಿ.ಚಿ.ಬೋರಲಿಂಗಯ್ಯ ಅನಿಸಿಕೆ

# ಜಾನಪದ ನಮ್ಮ ಜೀವನದ ವಾಸ್ತವತೆ

**ಕೆ.ಆರ್.ಪೇಟೆ:** ಜಾನಪದ ನಮ್ಮ ಜೀವನದ ವಾಸ್ತವತೆ ಹಾಗೂ ಸಂಸ್ಕೃತಿಯ ಮೇಲೆ ಬೆಳಕು ಚೆಲ್ಲುವ ಜೀವಗಂಗೆಯಾಗಿದ್ದು, ಜಾನಪದ ಕಲೆಗಳು ಸೇರಿದಂತೆ ಜಾನಪದ ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಯುವಜನರು ಮುಂದಾಗಬೇಕು ಎಂದು ನಾಡಿನ ಖ್ಯಾತ ಜಾನಪದ ಸಂಶೋಧಕರು ಹಾಗೂ ಹಂಪಿ ಕನ್ನಡ ವಿಶ್ವ ವಿದ್ಯಾನಿಲಯದ ವಿಶ್ರಾಂತ ಉಪಕುಲಪತಿ ಪ್ರೊ.ಹಿ.ಚಿ.ಬೋರಲಿಂಗಯ್ಯ ಕರೆ ನೀಡಿದರು.

ಅವರು ಕೆ.ಆರ್.ಪೇಟೆ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ನಾಟಕ ಜಾನಪದ ಪರಿ?ತ್ತು ಹಾಗೂ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಸಹಯೋಗದಲ್ಲಿ ವಿಶ್ವ ಜಾನಪದ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಉಪನ್ಯಾಸ, ಜಾನಪದ ಗಾಯನ ಹಾಗೂ ಸನ್ಮಾನ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು.



ರಾಜ್ಯದಲ್ಲಿಯೇ ಅತೀ ಹೆಚ್ಚು ಜಾನಪದ ಕಲಾ ಪ್ರಾಕಾರಗಳ ವೈವಿಧ್ಯತೆಯು ಉಳಿದು ಬೆಳೆದು ಜೀವಂತವಾಗಿರುವುದು ಮಂಡ್ಯ ಜಿಲ್ಲೆಯಲ್ಲಿ ಎನ್ನುವುದು ಹೆಮ್ಮೆಯ ವಿಚಾರವಾಗಿದೆ. ರಾಮನಗರದ ಬಳಿ ಜಾನಪದ ಲೋಕವನ್ನು ಸ್ಥಾಪಿಸಿ ಜಾನಪದ ಕಲೆಗಳ ಉಳಿವು ಹಾಗೂ ಸಂರಕ್ಷಣೆಗೆ ಪಣ ತೊಟ್ಟವರು ಡಾ.ಹೆಚ್.ಎಲ್.ನಾಗೇಗೌಡರು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನವರಾಗಿದ್ದಾರೆ. ನಮ್ಮ ಸಂಸ್ಕೃತಿ ಹಾಗೂ ಜೀವನದ ಮೌಲ್ಯಗಳ ಸಂಸ್ಕೃತಿಯು ಅನಾವರಣಗೊಳ್ಳುವುದು ಜಾನಪದ ಕಲೆಗಳ ಮೂಲಕ ವಾದ್ದರಿಂದ ಮೌಢ್ಯಗಳಿಲ್ಲದ ನಮ್ಮ ನಾಗರೀಕ ಸಮಾಜದ ವೈವಿಧ್ಯತೆ ಹಾಗೂ ಆರೋಗ್ಯವಂತ ಸಮಾಜದ ನಿರ್ಮಾಣಕ್ಕೆ ಅಗತ್ಯವಾಗಿ ಬೇಕಾದ ಜಾನಪದ ಕಲೆಗಳ ಉಳಿವಿಗೆ ದೀಕ್ಷೆ ತೊಡಬೇಕು ಎಂದು ಹಿ.ಚಿ.ಬೋರಲಿಂಗಯ್ಯ ಕರೆ ನೀಡಿದರು.

ಜಾನಪದ ನಿಘಂಟು ಅನುವಾದಕ ಕ್ಯಾತನಹಳ್ಳಿ ಚಂದ್ರಣ್ಣ ವಿಶ್ವ ಜಾನಪದ ಸಾಹಿತ್ಯ ಕುರಿತು ವಿಚಾರ ಮಂಡಿಸುತ್ತಾ ವಿಶ್ವದಲ್ಲಿಯೇ ಶ್ರೇಷ್ಠ ಜಾನಪದ ವೈವಿಧ್ಯತೆಯಿರುವುದು ಕರ್ನಾಟಕ ರಾಜ್ಯದಲ್ಲಿ ಮಾತ್ರ. ಜಾನಪದ ನಮ್ಮ ಬದುಕಿನ ಜೀವ ಸೆಲೆಯಾಗಿದ್ದು ಆರೋಗ್ಯವಂತ ಸಮಾಜದ ನಿರ್ಮಾಣಕ್ಕೆ, ಸ್ನೇಹ,

> ನಮ್ಮ ಸಂಸ್ಕೃತಿ ಹಾಗೂ ಜೀವನದ ಮೌಲ್ಯಗಳ ಸಂಸ್ಕೃತಿಯು ಅನಾವರಣಗೊಳ್ಳುವುದು ಜಾನಪದ ಕಲೆಗಳ ಮೂಲಕವಾದ್ದರಿಂದ ಮೌಢ್ಯಗಳಿಲ್ಲದ ನಮ್ಮ ನಾಗರೀಕ ಸಮಾಜದ ವೈವಿಧ್ಯತೆ ಹಾಗೂ ಆರೋಗ್ಯವಂತ ಸಮಾಜದ ನಿರ್ಮಾಣಕ್ಕೆ ಅಗತ್ಯವಾಗಿ ಬೇಕಾದ ಜಾನಪದ ಕಲೆಗಳ ಉಳಿವಿಗೆ ದೀಕ್ಷೆ ತೊಡಬೇಕು.
>
> **। ಹಿ.ಚಿ.ಬೋರಲಿಂಗಯ್ಯ**
> ಖ್ಯಾತ ಜಾನಪದ ಸಂಶೋಧಕರು

ವಿಶ್ವಾಸ ಹಾಗೂ ಸಹ ಬಾಳ್ವೆಯ ಸಮೃದ್ಧ ಜೀವನಕ್ಕೆ ದಾರಿದೀಪವಾಗಿದೆ ಎಂದರು.

ಕಾರ್ಯಕ್ರಮ ಶಾಸಕ ಹೆಚ್.ಟಿ.ಮಂಜು ಜಾನಪದ ಸಾಹಿತ್ಯ ಅಕಾಡೆಮಿ ಸದಸ್ಯ ಮಂಜೇಶ್ ಚನ್ನಾಪುರ ಹಾಗೂ ಕರ್ನಾಟಕ ಜಾನಪದ ಪರಿಷತ್ ಅಧ್ಯಕ್ಷ ಡಾ.ಹಿ.ಚಿ.ಬೋರಲಿಂಗಯ್ಯ ಅವರನ್ನು ಸನ್ಮಾನಿಸಿ ಗೌರವಿಸಿ ಮಾತನಾಡಿ ಜಾನಪದ ನಮ್ಮ ಸಾಹಿತ್ಯದ ಮೂಲ ಬೇರಾಗಿದ್ದು ಜಾನಪದ ಸಂಸ್ಕೃತಿಯು ವಿಶ್ವದಲ್ಲಿಯೇ ಸರ್ವ ಶ್ರೇಷ್ಠ ಸಂಸ್ಕೃತಿಯಾಗಿದೆ. ಬಂಡಿಹೊಳೆಯ ಜಾನಪದ ವಿದ್ವಾಂಸ ಅರ್ಚಕ ರಂಗಸ್ವಾಮಿ ಭಟ್ಟರು ಸೇರಿದಂತೆ ಹಲವಾರು ಮಹನೀಯರು ಜಾನಪದ ಕ್ಷೇತ್ರಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ. ಜಾನಪದ ನಮ್ಮ ಬದುಕಿನ ಉಸಿರಾಗಿದ್ದು ಜಾನಪದ ಕಲೆಗಳನ್ನು ನಾಶಪಡಿಸಲು ಯಾರಿಂದಲೂ ಸಾಧ್ಯವಿಲ್ಲ. ಆದ್ದರಿಂದ ಜಾನಪದ ಕಲೆಗಳ ಸಂರಕ್ಷಣೆಗೆ ನಾಗರಿಕ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಿ ಒಂದಾಗಿ ಕೆಲಸ ಮಾಡಬೇಕು ಎಂದು ಶಾಸಕ ಮಂಜು ಮನವಿ ಮಾಡಿದರು. ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಂಶುಪಾಲೆ ಹೇಮಲತಾ, ಮಂಡ್ಯ ಜಿಲ್ಲಾ ಕರ್ನಾಟಕ ಜಾನಪದ ಪರಿ?ತ್ ಅಧ್ಯಕ್ಷ ಡಿ.ಪಿ.ಸ್ವಾಮಿ, ತಾಲ್ಲೂಕು ಘಟಕದ ಅಧ್ಯಕ್ಷ ಕತ್ತರಘಟ್ಟ ವಾಸು, ಉದಯರವಿ ಟ್ರಸ್ಟ್ ಅಧ್ಯಕ್ಷ ಕೆ.ಎಸ್. ಸೋಮಶೇಖರ್, ಕಾಲೇಜಿನ ಪತ್ರಾಂಕಿತ ವ್ಯವಸ್ಥಾಪಕ ಬಿ.ಎ.ಮಂಜುನಾಥ್, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಪೂರ್ಣಚಂದ್ರತೇಜಸ್ವಿ, ಸಾಹಿತಿ ಮಾರೇನಹಳ್ಳಿ ಲೋಕೇಶ್, ಜಯಕರ್ನಾಟಕ ಸಂಘಟನೆ ತಾಲೂಕು ಅಧ್ಯಕ್ಷ ಹೆಚ್.ಆರ್.ಸೋಮಶೇಖರ್, ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಜಯಕೀರ್ತಿ, ಜಾನಪದ ಪರಿಷತ್ ಕಾರ್ಯದರ್ಶಿ ಶೀಳನೆರೆ ಶಿವಕುಮಾರ್, ಮಹಿಳಾ ಕಾಲೇಜಿನ ಪ್ರಾಂಶುಪಾಲ ಡಾ.ರಮೇಶ್, ಸಾಹಿತ್ಯ ಪರಿಚಾರಕ ಕನ್ನಡ ನಾಗರಾಜು, ತಾಲೂಕು ಕಸಾಪ ಮಾಜಿ ಅಧ್ಯಕ್ಷ ಕೆ.ಆರ್.ನೀಲಕಂಠ ಮತ್ತಿತರರು ಉಪಸ್ಥಿತರಿದ್ದರು. ನಾಗಮಂಗಲದ ಗೋವಿಂದರಾಜು ತಂಡದವರು ನಡೆಸಿಕೊಟ್ಟ ಜಾನಪದ ಗೀತೆಗಳ ಗಾಯನವು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಮನಸೂರೆ ಗೊಂಡಿತು.

# ಕ್ರೀಡೆಗಳಿಗೆ ಹೆಚ್ಚು ಪ್ರೋತ್ಸಾಹ ನೀಡಿ

**ಕೊಳ್ಳೇಗಾಲ:** ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಸೂರಾಪುರ ಸರ್ಕಾರಿ ಪ್ರೌಢಶಾಲೆ ಸಂಯುಕ್ತ ಆಶ್ರಯದಲ್ಲಿ

ಪ್ರೌಢ ಶಾಲೆಗಳು ಮತ್ತು ಹಿರಿಯ ಪ್ರಾಥಮಿಕ ಶಾಲೆಗಳ ತಾಲ್ಲೂಕು ಮಟ್ಟದ ಕ್ರೀಡಾಕೂಟವನ್ನು ಶಾಸಕ ಎಂ.ಆರ್ ಮಂಜುನಾಥ್ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು ಕ್ರೀಡಾಕೂಟಗಳನ್ನು ಏರ್ಪಡಿಸುವ ಮೂಲಕ ಮಕ್ಕಳ ಪ್ರತಿಭೆಯನ್ನು ಗುರುತಿಸಲು ಸಾಧ್ಯವಾಗುತ್ತದೆ ಎಂದ ಅವರು ಮಕ್ಕಳನ್ನು ಹೆಚ್ಚು ಹೆಚ್ಚು ಕ್ರೀಡೆಯಲ್ಲಿ ತೊಡಗುವಂತೆ ಪ್ರೋತ್ಸಾಹಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮಂಜುಳ, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ, ಮಾದೇವ್ ಕುಮಾರ್, ಮುಖ್ಯ ಶಿಕ್ಷಕರು ಸರ್ಕಾರಿ ಪ್ರೌಢಶಾಲೆ ಸೂರಾಪುರ ಲೋಕೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್,ದೈಹಿಕ ಪರಿವೀಕ್ಷಕರಾದ ಸ್ಟೀವನ್, ದೈಹಿಕ ಶಿಕ್ಷಣ ಸಂಸ್ಥೆಯ ಸೂರಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಸುಂದರ್ ರಾಜ್, ಹಾಗೂ ಮುಖಂಡರುಗಳಾದ ಸುರಪುರದ ರಘು, ಸೂರಾಪುರ ಸೋಮಣ್ಣ, ಶಿವರಾಜು ಇನ್ನಿತರರು ಉಪಸ್ಥಿತರಿದ್ದರು.



# ಹೂಳೆತ್ತುವ ಕಾರ್ಯಕ್ಕೆ ಶಾಸಕರ ಚಾಲನೆ



**ಸಂತೇಮರಹಳ್ಳಿ:** ಸಮೀಪದ ಹೊಂಗನೂರು ಗ್ರಾಮದ ಹತ್ತಿರ ಇರುವ ಬೆಲವತ್ತ ಡ್ಯಾಮ್‌ನ ಎಡದಂಡೆ ಮತ್ತು ಬಲದಂಡೆ ಕಾಲುವೆಯಲ್ಲಿ ಹೂಳು ಎತ್ತುವ ಕಾರ್ಯಕ್ಕೆ ಶಾಸಕ ಎ. ಆರ್. ಕೃಷ್ಣ ಮೂರ್ತಿ ಗುದ್ದಲಿ ಪೂಜೆ ನೆರವೇರಿಸಿದರು.

ಈ ಕ್ಷೇತ್ರಕ್ಕೆ 18 ಕೋಟಿ ಪ್ರಸ್ತಾವನೆ ನೀಡಿದ್ದು ಅದರಲ್ಲಿ ಸಣ್ಣ ನೀರಾವರಿ ಇಲಾಖೆ (ಎಸ್ ಡಿ ಎಮ್ ಎಫ್ ) ವತಿಯಿಂದ ಸುಮಾರು 1 ಕೋಟಿ ರೂ ಅನುದಾನದಲ್ಲಿ ರಸ್ತೆ, ಬಂಡು, ಹೂಳು ತೆಗೆಯುವುದು ಸೇರಿದಂತೆ, 971 ಹೆಕ್ಟೇರ್ ಪ್ರದೇಶದ ರೈತರಿಗೆ ಅನುಕೂಲವಾಗುವಂತೆ 2 ವರೆ ಕಿಲೋಮೀಟರ್ ವ್ಯಾಪ್ತಿಗೆ ಒಳಪಡುವ ಎಡದಂಡೆ ಮತ್ತು ಬಲದಂಡೆ ಪಕ್ಕದಲ್ಲಿ ಈ ಭಾಗದ ರೈತರಿಗೆ ಅನುಕೂಲವಾಗುವ ದೃಷ್ಟಿಯಿಂದ ಈ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಎಚ್.ವಿ. ಚಂದ್ರು, ಗ್ರಾಪಂ ಅಧ್ಯಕ್ಷ ನವೀನ್, ಕಳೆಗೌಡ, ಸಿದ್ದೇಗೌಡ, ಬಸವರಾಜ್, ಶಿವಣ್ಣ, ರಾಘು ಮತ್ತಿತರರು ಇದ್ದರು.

# ದುಷ್ಟಶಕ್ತಿಯ ನಿರ್ಮೂಲನೆಗೆ ಕೃಷ್ಣಾವತಾರ: ದಾನೇಶ್ವರಿ

**ಚಾಮರಾಜನಗರ:** ಶ್ರೀ ಕೃಷ್ಣನ ಉಯ್ಯಾಲೋತ್ಸವ ಮನಸ್ಸಿಗೆ ಪರಮಾನಂದ ನೀಡುವ ಪದ್ಧತಿಯಾಗಿದೆ. ಶ್ರೀಕೃಷ್ಣ ಜನ್ಮಾಷ್ಟಮಿಯ ಸಂಜೆ ಶ್ರೀ ಕೃಷ್ಣನ ಉಯ್ಯಾಲೋತ್ಸವ, ಡೋಲೋತ್ಸವ, ಮಡಿಕೆ ಒಡೆಯುವ ಉತ್ಸವ, ಕೃಷ್ಣ ಮೆರವಣಿಗೆ, ವಿಶೇಷ ಪೂಜೆ ಪ್ರತಿಯೊಂದು ಪ್ರಕ್ರಿಯೆಯು ಭಾರತದ ವಿವಿಧ ಭಾಗದಲ್ಲಿ ವಿವಿಧ ರೀತಿಯಲ್ಲಿ ನಡೆಯುತ್ತಿದೆ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ರಾಜಯೋಗಿನಿ ಬಿ.ಕೆ. ದಾನೇಶ್ವರಿ ತಿಳಿಸಿದರು. ಅವರು ಋಗ್ವೇದಿ ಯೂಥ್ ಕ್ಲಬ್ ಹಾಗೂ ಜೈ ಹಿಂದ್ ಪ್ರತಿಷ್ಠಾನ ಋಗ್ವೇದಿ ಕುಟೀರದಲ್ಲಿ ಹಮ್ಮಿಕೊಂಡಿದ್ದ ಶ್ರೀ ಕೃಷ್ಣ ಜಯಂತಿ ಹಾಗೂ ಉಯ್ಯಾಲೋತ್ಸವ ಕಾರ್ಯಕ್ರಮದಲ್ಲಿ ಶ್ರೀಕೃಷ್ಣ ಉಯ್ಯಾಲೆ ತೂಗಿ ನಂತರ ಮಾತನಾಡಿ ಶ್ರೀ ಕೃಷ್ಣನ ಅವತಾರ ಎಲ್ಲದರ ಮೂಲವಾಗಿದೆ. ಲೋಕದಲ್ಲಿ ದುಷ್ಟಶಕ್ತಿಯ ಪ್ರಾಬಲ್ಯ ಹೆಚ್ಚಾದಾಗ ನಾಶಗೊಳಿಸಲು ಅವತಾರದಲ್ಲಿ ಕಾಣಿಸಿಕೊಳ್ಳುತ್ತಾರೆ. ಕೃಷ್ಣನ ಅವತಾರವು ಬಹು ಮುಖ್ಯವಾದದ್ದು. ಶ್ರಾವಣ ಮಾಸದ ಅಷ್ಟಮಿಯ ದಿನ ಮಧ್ಯರಾತ್ರಿ ಜನಿಸಿದ ಶ್ರೀ ಕೃಷ್ಣನ ಜೀವನವೇ ಒಂದು ರೀತಿಯ ಆತ್ಮಾವಲೋಕನದ ರಹಸ್ಯವಾಗಿದೆ. ಶ್ರೀ ಕೃಷ್ಣ ಪ್ರಜ್ಞೆಯನ್ನು ಮೂಡಿಸಿಕೊಳ್ಳುವ ಮೂಲಕ ಮಾನವ ಜನ್ಮವನ್ನು ಸಾರ್ಥಕ ಪಡಿಸಿಕೊಳ್ಳೋಣ. ಮನಸಿನಲ್ಲಿರುವ ದುಷ್ಟ ಗುಣಗಳನ್ನು ಸಂಹಾರ ಮಾಡುವ ಮೂಲಕ ಭಗವಂತನ ಸಂಕೀರ್ತನೆಯ ಮೂಲಕ ದಿವ್ಯ ಜ್ಞಾನವನ್ನು ರಾಜಯೋಗವನ್ನು ಪಡೆಯೋಣ. ಋಗ್ವೇದಿ ಕುಟೀರದಲ್ಲಿ ಹಮ್ಮಿಕೊಂಡಿರುವ ಉಯ್ಯಾಲೋಸವವು ಬಹಳ ಸಂತೋಷದ ಧಾರ್ಮಿಕ ಕಾರ್ಯಕ್ರಮವಾಗಿದೆ. ಆಧ್ಯಾತ್ಮಿಕ ಚಟುವಟಿಕೆಗಳು ಪ್ರತಿ ಮನೆಯಲ್ಲೂ ನಿರಂತರವಾಗಿ ಜರಗಿದಾಗ ಭಗವಂತ ನೆಲೆಸುತ್ತಾನೆ ಎಂದರು.



ಶ್ರೀ ಕೃಷ್ಣ ಪ್ರತಿಷ್ಠಾನದ ಅಧ್ಯಕ್ಷರು ಹಾಗೂ ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್ ಋಗ್ವೇದಿ ಮಾತನಾಡಿ ಶ್ರೀ ಕೃಷ್ಣನ ಜಯಂತಿಯ ಮೂಲಕ ಪ್ರತಿಯೊಬ್ಬರು ಭಗವದ್ಗೀತೆಯ ಸಂದೇಶಗಳನ್ನು ವಿಚಾರಧಾರೆಗಳನ್ನು ಅಳವಡಿಸಿಕೊಳ್ಳುವ ಕಾರ್ಯ ಮಾಡಬೇಕಿದೆ. ಶ್ರೀಕೃಷ್ಣನ ಜೀವನ ನಿರಂತರ ಕಷ್ಟಗಳಿಂದ ಕೂಡಿದ್ದರು ಸಮಾಜಕ್ಕೆ ಪೂರ್ಣವಾದ ಶ್ರೇಷ್ಠ ಮಾರ್ಗವನ್ನು ನೀಡಿದವರು ಶ್ರೀಕೃಷ್ಣ ಪರಮಾತ್ಮ. ಭಾರತದ ಸಂಸ್ಕೃತಿ ಪರಂಪರೆ ಇತಿಹಾಸಕ್ಕೆ ಶ್ರೀರಾಮ ಮತ್ತು ಶ್ರೀ ಕೃಷ್ಣದೇ ಆಧಾರ ಸ್ಥಂಭಗಳು. ಮಹಾ ಕಾವ್ಯಗಳು ಮನುಷ್ಯ ಜನ್ಮದ ಪರಿಪೂರ್ಣತೆಗೆ ಇರುವ ದಿವ್ಯ ಸಂದೇಶದ ಸಾಹಿತ್ಯವಾಗಿದೆ. ಉಯ್ಯಾಲೋಸವವು ಶ್ರೀಕೃಷ್ಣ ಜಯಂತಿಯ ವಿಶೇಷ ಪೂಜಾ ಕಾರ್ಯಕ್ರಮ. ಉಯ್ಯಾಲೆ ಮನುಷ್ಯ ಜೀವನದ ಸಂಕೇತ . ಸುಖ ದುಃಖ ಎಲ್ಲವನ್ನು ಮೈಗೂಡಿಸಿಕೊಂಡು ಸುಖವಾಗಿ ಬದುಕಿ ಸನ್ಮಾರ್ಗದಲ್ಲಿ ಜೀವನ ನಡೆಸಿ ಸಮಾಜಕ್ಕೆ ಒಳ್ಳೆಯ ಸಂದೇಶವನ್ನು ನೀಡುವುದೇ ಆಗಿದೆ ಎಂದರು. ಋಗ್ವೇದಿ ಯೂಥ್ ಕ್ಲಬ್ ಅಧ್ಯಕ್ಷರು ಹಾಗೂ ಸಾಫ್ಟ್‌ವೇರ್ ಇಂಜಿನಿಯರ್ ಶರಣ್ಯ ಋಗ್ವೇದಿ ಮಾತನಾಡಿ ಶ್ರೀಕೃಷ್ಣ ನಗುವಿನ ಪ್ರೀತಿಯ ಸಂಕೇತ. ಶ್ರೀ ಕೃಷ್ಣನ ನಾಮಸ್ಮರಣೆಯು ನಮ್ಮೆಲ್ಲರಲ್ಲಿ ಹೆಚ್ಚು ಶಕ್ತಿಯನ್ನು, ಚೈತನ್ಯವನ್ನು ,ಸ್ಫೂರ್ತಿಯನ್ನು ನೀಡುತ್ತದೆ ಎಂದರು. ಶಾರದಾ ಭಜನಾ ಮಂಡಳಿಯ ವತ್ಸಲಾ ರಾಜಗೋಪಾಲ್, ಸರಸ್ವತಿ ಮಾಲಾ, ವಾಣಿಶ್ರೀ, ಪಾರ್ವತಿ ಮೇಘನಾ ,ಕುಸುಮ, ಶ್ರಾವ್ಯ, ಬಿ ಕೆ ಆರಾಧ್ಯ, ನಾಗರಾಜು ಉಪಸ್ಥಿತರಿದ್ದರು.

# ಹೆಚ್‌ಐವಿ ಜಾಗೃತಿಗೆ ಮ್ಯಾರಥಾನ್

**ಮಂಡ್ಯ:** ಮಾರಕ ರೋಗ ಹೆಚ್.ಐ.ವಿ ಹರಡದಂತೆ ತಡೆಗಟ್ಟಲು ಯುವಜನರಲ್ಲಿ ಜಾಗೃತಿ ಮೂಡಿಸಲು ಜಿಲ್ಲೆಯಲ್ಲಿ ಸೆಪ್ಟೆಂಬರ್ 11 ರಂದು ಯುವಜನೋತ್ಸವ ಅಂಗವಾಗಿ ಮ್ಯಾರಥಾನ್ ಓಟ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಎಂ.ಎನ್ ಆಶಾಲತಾ ಹೇಳಿದರು. ಅವರು ಮಂಗಳವಾರ ಜಿಲ್ಲಾ ಪಂಚಾಯತ್‌ನಲ್ಲಿ ನಡೆದ ಹೆಚ್.ಐ.ವಿ ತಡೆಗಟ್ಟಲು ತೀವ್ರಗೊಳಿಸದ ಐ.ಇ.ಸಿ ಪ್ರಚಾಂದೋಲನ ಸಭೆ ನಡೆಸಿ ಮಾತನಾಡಿದರು. ಸೆಪ್ಟೆಂಬರ್ 11 ರಂದು ಮ್ಯಾರಥಾನ್ ಓಟ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮ್ಯಾರಥಾನ್ ಸ್ಪರ್ಧೆಗೆ 17 ರಿಂದ 25 ವ?ದವರು ಒಟ್ಟು 250 ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಮಂಡ್ಯ ನಗರದ ಸರ್. ಎಂ.ವಿ.ಕ್ರೀಡಾಂಗಣದಿಂದ ಮ್ಯಾರಥಾನ್ ಪ್ರಾರಂಭವಾಗಿ ನಗರದ ಮುಖ್ಯ ರಸ್ತೆಗಳಲ್ಲಿ ಒಟ್ಟು 5 ಕಿ.ಮೀ ಸಂಚರಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲಿದೆ ಎಂದರು.

ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ ಮೋಹನ್, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಓಂ ಪ್ರಕಾಶ್, ವೈದ್ಯಕೀಯ ಶಿಕ್ಷಣ ಸಂಸ್ಥೆಯ ಅಧೀಕ್ಷಕರು ಡಾ.ಶಿವಕುಮಾರ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಿ.ಚೆಲುವಯ್ಯ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.



# ಸಂಜೆ ಟಿಪ್ಸ್




## ರೂ 4,000 ಕೋಟಿ ಐಪಿಒಗಾಗಿ ಡಿಆರ್‌ಎಚ್‌ಪಿ ಸಲ್ಲಿಸಿದ ಬ್ಲಾಕ್‌ಸ್ಟೋನ್ ಪೋರ್ಟ್‌ಫೋಲಿಯೋ ಕಂಪನಿ

ಇಂಟರ್‌ನ್ಯಾಶನಲ್ ಜೆಮೊಲಾಜಿಕಲ್ ಇನ್‌ಸ್ಟಿಟ್ಯೂಟ್ (ಇಂಡಿಯಾ) ಲಿಮಿಟೆಡ್, ಬ್ಲಾಕ್‌ಸ್ಟೋನ್ ಪೋರ್ಟ್‌ಫೋಲಿಯೊ ಕಂಪನಿಯಾಗಿದ್ದು, ಇದು ನೈಸರ್ಗಿಕ ವಜ್ರಗಳು, ಪ್ರಯೋಗಾಲಯದಲ್ಲಿ ತಯಾರಿಸಿದ ವಜ್ರಗಳು, ಸ್ಟಡ್ಡ್ ಆಭರಣಗಳು ಮತ್ತು ಬಣ್ಣದ ಕಲ್ಲುಗಳ ಪ್ರಮಾಣೀಕರಣ ಮತ್ತು ಮಾನ್ಯತೆಗೆ ಸಂಬಂಧಿಸಿದ ಸೇವೆಗಳನ್ನು ಒದಗಿಸುತ್ತದೆ ಮತ್ತು ಅದರ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಐಪಿಒ ಸಲ್ಲಿಸಿದೆ. ಕಂಪನಿಯ ಪ್ರವರ್ತಕರು ಬಿಸಿಪಿ ಏಷ್ಯಾ 2 ಟಾಪ್‌ಕೊ ಪಿಟಿಇ ಲಿಮಿಟೆಡ್ ಆಗಿದೆ. (ಬ್ಲಾಕ್‌ಸ್ಟೋನ್‌ನ ಅಂಗಸಂಸ್ಥೆಗಳು ನಿರ್ವಹಿಸುವ ಮತ್ತು/ಅಥವಾ ಸಲಹೆ ನೀಡಿದ ನಿಧಿಗಳ ಅಂಗಸಂಸ್ಥೆ). ಈ ಸಾರ್ವಜನಿಕ ಕೊಡುಗೆಯು 1250 ಕೋಟಿ ರೂ.ವರೆಗಿನ ತಾಜಾ ಸಂಚಿಕೆಯನ್ನು ಒಳಗೊಂಡಿರುತ್ತದೆ. ಮತ್ತು ಮಾರಾಟದ ಕೊಡುಗೆ ರೂ.2 ಮುಖಬೆಲೆಯ 2,750 ಕೋಟಿ ಈಕ್ವಿಟಿ ಷೇರುಗಳು ಆಗಿದ್ದು ಪ್ರವರ್ತಕ ಮಾರಾಟ ಮಾಡುವ ಷೇರುದಾರ ಬಿಸಿಪಿ ಏಷ್ಯಾ 2 ಟಾಪ್‌ಕೊ ಪಿಟಿಇ ಲಿಮಿಟೆಡ್ ನಿಂದ 2750 ಕೋಟಿ ಈಕ್ವಿಟಿ ಷೇರು ಮಾರಾಟವನ್ನು ಒಳಗೊಂಡಿರುತ್ತದೆ. ಅರ್ಹ ಉದ್ಯೋಗಿಗಳಿಗೆ ರೂ.2 ಮುಖಬೆಲೆಯ ಈಕ್ವಿಟಿ ಷೇರುಗಳ ಮೀಸಲಾತಿ ಭಾಗವನ್ನು ಈ ಕೊಡುಗೆ ಒಳಗೊಂಡಿದೆ. ಈ ಷೇರು ಮಾರಾಟದಿಂದ ಬರುವ ಹಣವನ್ನು ಕಂಪೆನಿಯು ಐಜಿಐ ಬೆಲ್ಜಿಯಂ ಗ್ರೂಪ್ ಮತ್ತು ಐಜಿಐ ನೆದರ್ಲ್ಯಾಂಡ್ಸ್ ಗ್ರೂಪ್ ಅನ್ನು ಪ್ರವರ್ತಕರಿಂದ ಸ್ವಾಧೀನಪಡಿಸಿಕೊಳ್ಳಲು ಖರೀದಿ ಪರಿಗಣನೆಯ ಪಾವತಿ (ಎ) ನಿಧಿಯ ಕಡೆಗೆ ನಿವ್ವಳ ಆದಾಯವನ್ನು ಮತ್ತು ಮತ್ತು (ಬಿ) ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗೆ ಬಳಸಿಕೊಳ್ಳಲು ಕಂಪನಿಯು ಪ್ರಸ್ತಾಪಿಸುತ್ತದೆ.

## ಥಟ್ ಅಂತ ದೋಸೆ ಮಾಡಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅಕ್ಕಿ ಹಿಟ್ಟು - 1 ಕಪ್, ಕಡಲೆ ಹಿಟ್ಟು - 1/4 ಕಪ್, ಮೊಸರು - 1/2 ಕಪ್, ಆಲೂಗಡ್ಡೆ- 1, ಒಣ ಮೆಣಸಿನಕಾಯಿ -5, ಅಡುಗೆ ಎಣ್ಣೆ, ಬೆಣ್ಣೆ, ರುಚಿಗೆ ಉಪ್ಪು

### ಮಾಡುವ ವಿಧಾನ

ಒಂದು ನಿಕ್ಸಿ ಜಾರ್‌ಗೆ ಅಕ್ಕಿ ಹಿಟ್ಟು ಹಾಕಿ ಹಾಗೂ ಅದಕ್ಕೆ ಕಡಲೆ ಹಿಟ್ಟು , ಅರ್ಧ ಕಪ್ ಮೊಸರು ಹಾಕಿಕೊಳ್ಳಿ. ಜೊತೆಗೆ ಸ್ವಲ್ಪ ನೀರು ಹಾಕಿಕೊಳ್ಳಿ. ಇದಕ್ಕು ಮೊದಲು 5 ಒಣ ಮೆಣಸಿನಕಾಯಿಯನ್ನು ಬಿಸಿ ನೀರಿನಲ್ಲಿ ನೆನೆಸಿಡಬೇಕು. ಈ ಮೆಣಸಿನಕಾಯಿಯನ್ನು ಇದೇ ಜಾರ್‌ಗೆ ಹಾಕಿಕೊಳ್ಳಿ. ಬಳಿಕ ಇದಕ್ಕೆ ಸಿಪ್ಪೆ ತೆಗೆದು ಹೆಚ್ಚಿಕೊಂಡಿರುವ ಒಂದು ಆಲೂಗಡ್ಡೆಯನ್ನು ಸಣ್ಣದಾಗಿ ಕತ್ತರಿಸಿಕೊಂಡು ಹಾಕಿ. ಇದಕ್ಕೆ ಉಪ್ಪು ಸಹ ಹಾಕಿಕೊಂಡು ರುಬ್ಬಿಕೊಳ್ಳಿ. ರುಬ್ಬಿಕೊಳ್ಳುವಾಗ ಹೆಚ್ಚು ರುಬ್ಬಿಕೊಳ್ಳಬೇಡಿ. ದೋಸೆ ಹಿಟ್ಟಿನ ಹದ ಬರುವಂತೆ ರುಬ್ಬಿಕೊಳ್ಳಿ. ರುಬ್ಬಿಕೊಂಡ ಹಿಟ್ಟನ್ನು ಒಂದು ಪಾತ್ರೆಗೆ ಹಾಕಿಕೊಳ್ಳಿ. ಈಗ ರೆಡಿ ಮಾಡಿಕೊಂಡ ಹಿಟ್ಟಿಗೆ ಸ್ವಲ್ಪ ಅಡುಗೆ ಸೋಡಾ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಈ ವೇಳೆ ಒಲೆ ಮೇಲೆ ದೋಸೆ ಕಾವಲಿ ಒಲೆ ಮೇಲೇ ಇಟ್ಟು ಅದಕ್ಕೆ ನೀರು ಚಿಮುಕಿಸಿ ಬಳಿಕ ಕಾವಲಿಯನ್ನು ಒರೆಸಿಕೊಂಡು ಅದಕ್ಕೆ ಹಿಟ್ಟು ಹಾಕಿಕೊಳ್ಳಿ. ಬಳಿಕ ದೋಸೆ ಮೇಲೆ ಬೆಣ್ಣೆಯನ್ನು ಸಣ್ಣದಾಗಿ ಕತ್ತರಿಸಿ ದೋಸೆ ಮೇಲೆ ಹಾಕಿಕೊಳ್ಳಿ. ದೋಸೆ ಎರಡೂ ಕಡೆ ಚೆನ್ನಾಗಿ ಕಾಯಿಸಿಕೊಳ್ಳಿ. ಅದರಲ್ಲೂ ಒಂದು ಕಡೆ ದೋಸೆ ಬಣ್ಣ ಕೇಸರಿಗೆ ತಿರುಗುವಷ್ಟು ಕಾಯಿಸಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ಇನ್‌ಸ್ಟಂಟ್ ದೋಸೆ ರೆಡಿಯಾಗಿರುತ್ತದೆ.

## ದೀಪಿಕಾ ಪಡುಕೋಣೆ ಜೊತೆ ಕಾರು ಓಡಿಸೋ ಪೈಪೋಟಿಗಿಳಿದ ಸಾಹಸಗಳ ಬಗ್ಗೆ ವಿವರಿಸಿದ ಕಂಗನಾ





ಈಗೆಲ್ಲಾ ಮಹಿಳೆಯರು ಡ್ರೈವಿಂಗ್ ಮಾಡೋದು ಸಾಮಾನ್ಯ. ಆದರೆ ಬಾಲಿವುಡ್ ನಟಿ ಕಂಗನಾಗೆ ಮಾತ್ರ ಜೀವನದಲ್ಲಿ ಕಾರು ಓಡಿಸೋದನ್ನ ಕಲಿಯುವುದೇ ದೊಡ್ಡ ಸಮಸ್ಯೆಯಾಗಿತ್ತು ಅನ್ನೋ ವಿಚಾರವನ್ನ ಇತ್ತೀಚೆಗೆ ಹೇಳಿದ್ದಾರೆ. ಗಾಡ್‌ಫಾದರ್ ಇಲ್ಲದೆ ಸಿನಿಮಾ ಹಾಗೂ ರಾಜಕೀಯದಲ್ಲಿ ಕ್ಷೇತ್ರಗಳಲ್ಲಿ ಶಕ್ತಿ ಪ್ರದರ್ಶನ ಮಾಡಿರುವಾಕೆ ನಟಿ ಕಮ್ ಸಂಸದೆ ಕಂಗನಾ ರಣಾವತ್. ಆದರೆ ಇದುವರೆಗೂ ಇವರಿಗೆ ಕಾರು ಚಾಲನೆ ಮಾತ್ರ ಸಾಧ್ಯವಾಗಲಿಲ್ಲ ಅನ್ನೋದೇ ದುರಂತ. ಕಾರು ಡ್ರೈವಿಂಗ್ ಟ್ರೈನಿಂಗ್ ವೇಳೆ, ಎರಡು ಬಾರಿ ಆಗಿದ್ದ ಅನಾಹುತದಿಂದ ನಿರಾಸೆಗೊಂಡಿದ್ದ ನಟಿ. ಮುಂದೆ ಕಾರು ಓಡಿಸುವ ಪ್ರಯತ್ನವನ್ನೇ ನಿಲ್ಲಿಸಿ ಬಿಟ್ಟಿದ್ದರಂತೆ ಕಂಗನಾ. ಸದ್ಯಕ್ಕೆ 'ಎಮರ್ಜೆನ್ಸಿ' ಸಿನಿಮಾದ ಸಂದರ್ಶನದಲ್ಲಿ ಮಾತನಾಡಿರುವ ಕಂಗನಾ, ಕಾರು ಓಡಿಸೋದನ್ನ ಕಲಿಯಲು ಮಾಡಿದ್ದ ಸಾಹಸಗಳ ಬಗ್ಗೆ ವಿವರಿಸಿದ್ದಾರೆ. ಇಂಡಸ್ಟ್ರಿಗೆ ಬಂದ ಆರಂಭದಲ್ಲಿ ಕಾರು ಓಡಿಸುವ ಮನಸಾಗಿ ಮುಂಬೈನ ಬಾಂದ್ರಾದಲ್ಲಿ ಡ್ರೈವಿಂಗ್ ಸ್ಕೂಲ್‌ವೊಂದಕ್ಕೆ ಸೇರಿಕೊಂಡಿದ್ರಂತೆ. ಅದೇ ಶಾಲೆಯಲ್ಲೇ ಆಗಷ್ಟೇ ಇಂಡಸ್ಟ್ರಿಗೆ ಕಾಲಿಟ್ಟಿದ್ದ ಇನ್ನೋರ್ವ ನಟಿ ದೀಪಿಕಾ ಪಡುಕೋಣೆ ಕೂಡ ತರಬೇತಿಗೆ ಬಂದಿರುತ್ತಾರೆ. ಸುಮಾರು 2006-07ರ ವೇಳೆ, ಹೀಗೆ ಒಂದು ದಿನ ಲೈಸೆನ್ಸ್ ಪಡೆಯಬೇಕಾದ ದಿನವೇ ಕಂಗನಾ ತಮ್ಮ ಕಾರನ್ನ ಬ್ರೇಕ್ ಒತ್ತುವ ಬದಲು ಆಕ್ಸಿಲೇಟರ್ ಒತ್ತಿದ ಪರಿಣಾಮ ಮುಂದಿರುವ ಆಟೋ ರಿಕ್ಷಾಗೆ ಗುದ್ದಿದ್ರಂತೆ ಆ ಘಟನೆ ಬಳಿಕ ಭಯದಿಂದ ಕಂಗನಾ ಕಾರು ಓಡಿಸುವ ಆಸೆ ಕೈಬಿಡ್ತಾರೆ. ಇದೇ ಕಂಗನಾಗೆ ಮತ್ತೆ ಐದಾರು ವರ್ಷಗಳ ಬಳಿಕ ಕಾರು ಓಡಿಸುವ ಆಸೆ ಹುಟ್ಟಿಸುವುದು ಡ್ರೈವಿಂಗ್ ಸ್ಕೂಲ್ ಕ್ಲಾಸ್ ಮೇಟ್ ಆಗಿದ್ದ ನಟಿ ದೀಪಿಕಾ ಪಡುಕೋಣೆ. ಯಾಕೆಂದರೆ ಕಾರ್ಯಕ್ರಮವೊಂದರಲ್ಲಿ ಕಂಗನಾ ಎದುರೇ ದೀಪಿಕಾ ಪಡುಕೋಣೆ ತಾವೇ ಕಾರ್ ಡ್ರೈವ್ ಮಾಡಿಕೊಂಡು ಬರುತ್ತಾರೆ. ಇದನ್ನ ಕಂಡ ಕಂಗನಾಗೆ ಮತ್ತೆ ಸ್ವತಂತ್ರವಾಗಿ ಕಾರು ಓಡಿಸೋದನ್ನ ಕಲಿಯುವ ಆಸೆಯಾಗುತ್ತೆ. ಮತ್ತೆ ಡ್ರೈವಿಂಗ್ ಸ್ಕೂಲ್‌ಗೆ ಹೋಗ್ತಾರೆ. ಆದರೆ ಎರಡನೇ ಬಾರಿಯೂ ನಟಿ ವಿಫಲರಾಗುತ್ತಾರೆ. ತರಬೇತಿ ದಿನ ತಮ್ಮ BMW ಕಾರ್‌ನ್ನ ಪೊಲೀಸ್ ಜೀಪಿನ ಮೇಲೆ ಹತ್ತಿಸಿಬಿಡ್ತಾರೆ. ಈಪರಿಣಾಮ, ಕಂಗನಾ ಕಾರು ಬಹಳವೇ ಸ್ಕ್ರ್ಯಾಚ್ ಆಗಿರುತ್ತೆ. ಅಲ್ಲಿಗೆ ಕಾರು ಓಡಿಸುವ ದುಸ್ಸಾಹಸ ಬೇಡ ಎಂದು ತೀರ್ಮಾನಕ್ಕೆ ಬರುತ್ತಾರಂತೆ ಕಂಗನಾ. ಹೀಗೆ ಸಂಸದೆ ಕಂಗನಾ ಡ್ರೈವಿಂಗ್ ಕಥೆಯನ್ನ ಬಿಚ್ಚಿಟ್ಟಿದ್ದಾರೆ.

## ಏಡಿ ಮಾಂಸ' ಆರೋಗ್ಯಕ್ಕೆ ಒಳ್ಳೆಯದೇ..?

### ಹೆಲ್ತ್ ಟಿಪ್ಸ್



ಆಹಾರ ಬದಲಾಗಬೇಕು. ದೇಹವು ಸದೃಢವಾಗಿರಲು ನಮ್ಮ ಅಭ್ಯಾಸಗಳು ಬದಲಾಗಬೇಕು. ಚಿಕನ್, ಮಟನ್ ಮತ್ತು ಮೀನಿನಂತಹ ಮಾಂಸಾಹಾರಿ ಭಕ್ಷ್ಯಗಳ ಹೊರತಾಗಿ, ಅನೇಕ ಜನರು ಆಹಾರದಲ್ಲಿ ಏಡಿಗಳನ್ನು ಸಹ ತಿನ್ನುತ್ತಾರೆ. ಆದರೆ ಕೆಲವರು ಏಡಿಗಳ ಬಗ್ಗೆ ಕೇಳಿದ್ದಾರೆ, ಆದರೆ ಏಡಿಗಳನ್ನು ಹೆಚ್ಚು ತಿನ್ನುವುದಿಲ್ಲ.

ಏಡಿ ದೇಹಕ್ಕೆ ಒಳ್ಳೆ ಪ್ರೊಟೀನ್ ಏಡಿಗಳಲ್ಲಿರುವ ವಿಟಮಿನ್ ಬಿ 12 ಕೆಂಪು ರಕ್ತ ಕಣಗಳ ಉತ್ಪಾದನೆಯನ್ನು ಸುಧಾರಿಸುತ್ತದೆ. ಇದಲ್ಲದೆ, ಲ್ಯುಕೇಮಿಯಾದಂತಹ ರೋಗಗಳು.. ಏಡಿಗಳು ಕಡಿಮೆ ಮಾಡಲು ಸಹಾಯ ಮಾಡುತ್ತವೆ. ತೂಕ ಇಳಿಸಿಕೊಳ್ಳಲು ಆರೋಗ್ಯಕರ ಆಯ್ಕೆ. ಫೈಬರ್ ಮತ್ತು ಫೈಬರ್ ಜೊತೆಗೆ, ಕ್ಯಾಲ್ಸಿಯಂ ಸಮೃದ್ಧ ಪ್ರೋಟೀನ್ಗಳು ಸಹ ಇರುತ್ತವೆ.

ಅವರು ಪಡೆಯುತ್ತಾರೆ. ಥೈರಾಯ್ಡ್ ಗ್ರಂಥಿಯ ಕಾರ್ಯನಿರ್ವಹಣೆಯನ್ನು ಸುಧಾರಿಸುವ ಥೈರಾಯ್ಡ್ ಗ್ರಂಥಿಯ ಆರೋಗ್ಯದಲ್ಲಿ ಏಡಿಗಳು ಪ್ರಮುಖ ಪಾತ್ರವಹಿಸುತ್ತವೆ.

ಏಡಿಗಳೊಂದಿಗೆ ಮೆದುಳಿನ ಆರೋಗ್ಯ, ಹೃದಯವನ್ನು ಬಲಪಡಿಸುತ್ತದೆ ಏಡಿಗಳಲ್ಲಿ ಇರುವ ಒಮೆಗಾ ಮೂರು ಕೊಬ್ಬಿನಾಮ್ಲಗಳು ಹೃದ್ರೋಗಗಳಿಂದ ರಕ್ಷಿಸುತ್ತವೆ. ಅಧಿಕ ರಕ್ತದೊತ್ತಡ ಇರುವವರಿಗೆ ಏಡಿ ಅತ್ಯುತ್ತಮ ಆಯ್ಕೆಯಾಗಿದೆ. ಬಿಪಿಯನ್ನು ಚಿಟಿಕೆಯಷ್ಟು ಸುಲಭವಾಗಿ ಕಡಿಮೆ ಮಾಡುತ್ತದೆ. ಏಡಿಗಳನ್ನು ನಿಯಮಿತವಾಗಿ ತಿನ್ನುವುದು ಮೆದುಳಿನ ಆರೋಗ್ಯವನ್ನು ಸುಧಾರಿಸುತ್ತದೆ. ನೀವು ಮಾಂಸಾಹಾರವನ್ನು ಇಷ್ಟಪಟ್ಟರೆ, ಮನೆಯಲ್ಲಿ ಏಡಿಗಳನ್ನು ಬೇಯಿಸಿ ತಿನ್ನಿ.

## ಹರ್ಬಲ್ 'ಫೇಸ್ ಪ್ಯಾಕ್'

### ಬ್ಯೂಟಿ ಟಿಪ್ಸ್



ನಾವು ಅದೆಷ್ಟೋ ಬಾರಿ ಜಂಕ್ ಫುಡ್ ಗಳಾದ ಪೇಸ್ಟ್ರೀಸ್, ಪಾನಿ ಪುರಿ , ಪಿಜ್ಜಾ, ಬರ್ಗರ್ ಇವುಗಳನ್ನು ತಿನ್ನಬಾರದೆಂದು ಅಂದುಕೊಂಡಿರುತ್ತೀವಿ. ಯಾಕೆಂದರೆ ನಮ್ಮ ತ್ವಚೆಯ ಮೇಲೆ ಇವುಗಳು ತ್ವರಿತವಾದ ಪರಿಣಾಮ ಬೀರುವುದಲ್ಲದೆ, ಮರುದಿನ ಬೆಳಗ್ಗೆಯೇ ಮೊಡವೆಗಳು ಹಾಗೂ ಇನ್ನಿತರ ಸ್ಕಿನ್ ಅಲರ್ಜಿಗಳಿಗೆ ಕಾರಣವಾಗುತ್ತದೆ. ಆದರೆ ಇವುಗಳಿಂದ ತ್ವಚೆಯನ್ನು ರಕ್ಷಣೆ ಮಾಡುವ ಕೆಲವು ಹರ್ಬಲ್ ವಿಧಾನಗಳನ್ನು ಇಲ್ಲಿ ಹೇಳಲಾಗಿದೆ. ಮೊಡವೆ ಮುಕ್ತ ತ್ವಚೆ ನಿಮ್ಮದಾಗಿಸಿಕೊಳ್ಳಬೇಕೇ, ಹಾಗಿದ್ದರೆ ಈ ಸರಳವಾದ ವಿಧಾನಗಳನ್ನು ಅನುಸರಿಸಿ.

**ನೀಮ್, ಅಲೋವೆರಾ ಮತ್ತು ಸೌತೆಕಾಯಿ ಫೇಸ್ ಪ್ಯಾಕ್:** 4-5 ಬೇವಿನ ಎಲೆಗಳು, 1 ಚಮಚ ಅಲೋವೆರಾ ಜೆಲ್ ಮತ್ತು 1-2 ಸಣ್ಣ ಸೌತೆಕಾಯಿ ಚೂರು, ಎಲ್ಲವನ್ನು ಬ್ಲೆಂಡರ್ ನಲ್ಲಿ ಗ್ರೈಂಡ್ ಮಾಡಿಕೊಳ್ಳಿ. ನಂತರ ಈ ಪೇಸ್ಟನ್ನು ಮುಖಕ್ಕೆ ಲೇಪಿಸಿ. ಇದು ತ್ವಚೆಯ ಮೇಲಿನ ಕಲೆಗಳನ್ನು ಹೋಗಲಾಡಿಸುವುದಲ್ಲದೇ, ಚರ್ಮವನ್ನು ಮೃದುವಾಗಿಸುತ್ತದೆ.

**ಮುಲ್ತಾನಿ ಮಿಟ್ಟಿ:** ರೋಸ್ ವಾಟರ್ ಜೊತೆಗೆ ಈ ಮುಲ್ತಾನಿ ಮಿಟ್ಟಿಯನ್ನು ಮಿಕ್ಸ್ ಮಾಡಿ ಹಚ್ಚುವುದರಿಂದ ಮೊಡವೆ ಮತ್ತು ಅದರಿಂದಾದ ಕಲೆಗಳು ಕಡಿಮೆಯಾಗಿ, ತ್ವಚೆಯು ಹೊಳಪನ್ನು ಪಡೆದುಕೊಳ್ಳುತ್ತದೆ.

**ಆಮ್ಲ ಫ್ರೂಟ್ ಪೌಡರ್:** ಇದರಲ್ಲಿ ವಿಟಮಿನ್ ಸಿ ಅಂಶ ಹೇರಳವಾಗಿದ್ದು, ನಮ್ಮ ತ್ವಚೆಗೆ ಬಹಳ ಪ್ರಯೋಜನಕಾರಿಯಾಗಿದೆ. ಒಂದು ಚಮಚ ಆಮ್ಲ ಪೌಡರ್ ಅನ್ನು ನೀರಿನೊಂದಿಗೆ ಕಲೆಸಿ ಪೇಸ್ಟ್ ತಯಾರಿಸಿಕೊಳ್ಳಿ. ಇದನ್ನು ಮುಖಕ್ಕೆ ಲೇಪಿಸುವುದರಿಂದ ಚರ್ಮದ ಕಾಂತಿಯನ್ನು ಸುಧಾರಿಸಿ, ತ್ವಚೆಯಲ್ಲಿರುವ ಡೆಡ್ ಸೆಲ್ ಗಳನ್ನು ತೆಗೆದುಹಾಕುವಲ್ಲಿ ಸಹಾಯ ಮಾಡುತ್ತದೆ.

## ಅರೆನಾ ಆನಿಮೇಶನ್ ಬೆಂಗಳೂರು ಹೊಸ ಭಾರತಕ್ಕೆ ಹೊಸ ಯುಗದ ವೃತ್ತಿಗಳು




ಭಾರತದಲ್ಲಿ ಪ್ರಮುಖ ಆಮೇಶನ್ ಸಂಸ್ಥೆಯಾದ ಅರೆನಾ ಆನಿಮೇಶನ್, ಬೆಂಗಳೂರು ಯುವಕರಿಗಾಗಿ ಹೊಸ ಭಾರತದ ಹೊಸ ಯುಗದ ವೃತ್ತಿಗಳು: ಪರ್ಸ್ಪೆಕ್ಟಿವ್ಸ್ ಟೂರ್ 2024 ಅನ್ನು ಯಶಸ್ವಿಯಾಗಿ ಶ್ರೇಷ್ಠಗೊಳಿಸಿದ ಬಗ್ಗೆ ಸಂತೋಷದಿಂದ ಘೋಷಿಸುತ್ತಿದೆ. ಈ ಸೆಮಿನಾರ್ 2024ರ ಆಗಸ್ಟ್ 26ರಂದು ಆಂಬೇಡ್ಕರ್ ಹಾಲ್, ಶಾಂತಿನಗರ, ಬೆಂಗಳೂರಿನಲ್ಲಿ ಆಯೋಜಿತವಾಯಿತು. ಈ ಚೈತನ್ಯಮಯ ವೇದಿಕೆ ಮಾಧ್ಯಮ ಮತ್ತು ಮನರಂಜನಾ ಉದ್ಯಮದ ಪ್ರಮುಖತೆಗಳನ್ನು ಹಂಚಿಕೊಳ್ಳಲು ಮತ್ತು ಆಕರ್ಷಕ ಸೃಜನಾತ್ಮಕ ಕೃತಿಗಳನ್ನು ಸೃಷ್ಟಿಸುವ ಬಗ್ಗೆ ತಮ್ಮ ಅಮೂಲ್ಯ ಅನುಭವಗಳು ಮತ್ತು ಒಳನೋಟಗಳನ್ನು ಹಂಚಿಕೊಳ್ಳಲು ಒಬ್ಬರ ಚಿತ್ತಗಳ ಮೇಲೆ ಭೇಟಿ ನೀಡಿದವು. 1200 ಕ್ಕೂ ಹೆಚ್ಚು ಯುವ ಆಕಾಂಕ್ಷಿಗಳು ಮತ್ತು ವೃತ್ತಿಪರರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದು, ಅವರು ಸೃಜನಶೀಲತೆಯ ಕ್ಷೇತ್ರದಲ್ಲಿ ಕಲಿಯಲು ಮತ್ತು ಬೆಳೆಯಲು ಉನೆದರಬ್ಬಿಗೆ ಉತ್ಸುಕರಾಗಿದ್ದರು, ಯೋಚನೆಗಳನ್ನು ಹಂಚಿಕೊಳ್ಳುವ ಸಕ್ರಿಯ ವಿನಿಮಯವನ್ನು ಮುಂದುವರಿಸಿದರು. 'ಪರ್ಸ್ಪೆಕ್ಟಿವ್ಸ್' ಭಾಗವಹಿಸುವವರಿಗೆ ಉದ್ಯಮದ ಒಳನೋಟವನ್ನು ಪಡೆಯಲು ವಿಶಿಷ್ಟ ಅವಕಾಶವನ್ನು ಒದಗಿಸುತ್ತದೆ, ಇದವು ಉತ್ಸಾಹಿ ವಿದ್ಯಾರ್ಥಿಗಳಿಗೆ ಪ್ರಮುಖ ಕ್ಷಣವಾಗಿ ಪರಿಗಣಿಸಲಾಗುತ್ತಿದೆ. ವರ್ಷದಿಂದ ವರ್ಷಕ್ಕೆ ಉಲ್ಲಾಸಕರ ಭಾಗವಹಿಸುವವರನ್ನು ಸೆಳೆಯುವ ಈ ಕಾರ್ಯಕ್ರಮವು ಈ ವರ್ಷವೂ ಆನಿಮೇಶನ್, ವಿಎಫ್‌ಎಕ್ಸ್, ಮಲ್ಟಿಮೀಡಿಯಾ, ಗೇಮಿಂಗ್ ಮತ್ತು ವೆಬ್ ಡಿಸೈನ್ನಲ್ಲಿ ವೃತ್ತಿಗಳನ್ನು ಅನ್ವೇಷಿಸಲು ಆಸಕ್ತಗೊಂಡಿರುವ ಅನೇಕ ವಿದ್ಯಾರ್ಥಿಗಳನ್ನು ಆಯೋಜಿಸಿತು. ಭಾಗವಹಿಸುವವರಿಗೆ ಪ್ರಸಿದ್ಧ ಪ್ರಮುಖ ಅಭಿಪ್ರಾಯದ ನಾಯಕರಿಂದ ನಡೆಸುವ ಆಲೋಚನೆ ಉಂಟು ಮಾಡಲು ಪ್ರೇರಣಾವಾದ ಕುರಿತಾದ ವ್ಯವಸ್ಥಿತ ಅಧಿವೇಶನಗಳ ಸರಣಿಯೊಂದಿಗೆ, ಉತ್ಕೃಷ್ಟ ಆನಿಮೇಶನ್, ದೃಶ್ಯ ಪರಿಣಾಮಗಳು ಮತ್ತು ಚಿತ್ರ ನಿರ್ಮಾಣದ ಹಿಂದೆ ಇರುವ ಜಟಿಲ ಪ್ರಕ್ರಿಯೆಗಳ ಕುರಿತು ತಿಳಿದಿರುವ ಮಾಹಿತಿಯನ್ನು ನೀಡಲಾಯಿತು. ಮೌಲ್ಯಮಾಪನ ತಜ್ಞರು, ಟಾಟಾ ಎಲ್ಕ್ಸಿಯ XR ಪ್ರಾಕ್ಟೀಸ್ ಹೆಡ್ ಮೌಲಿಕ್ ರಾವಲ್, ಸ್ಥಾಪಕ ಮತ್ತು ಸೃಜನಾತ್ಮಕ ನಿರ್ದೇಶಕ ವೀರೇಂದ್ರ ಪಾಟೀಲ, ಜೇಬುನಿಂದ ಸಿಜಿ ನಿರ್ವಾಹಕರು ರಕ್ಷಿತ್ ಮತ್ತು ಕೃಷ್ಣಬಾಬು, ಮತ್ತು ZRಸ್ಟುಡಿಯೋಗಳಿಂದ ನಿರ್ದೇಶಕ ಆನಂದಸಾಯಿ ಶಿವನಲಿಂಗಮ್, ಕಾರ್ಯಕಾರಿ ನಿರ್ಮಾಪಕ ಶಿವಕುಮಾರ್ ಕಸೆಟ್ಟಿಯಂತಹ ಗಣ್ಯ ಉದ್ಯಮ ತಜ್ಞರು ಅವರ ಅಮೂಲ್ಯ ಉದ್ಯಮದ ಒಳನೋಟಗಳು ಮತ್ತು ಆಳವಾದ ತಾಂತ್ರಿಕ ಜ್ಞಾನದ ಮೂಲಕ ಭಾಗವಹಿಸುವವರನ್ನು ಪ್ರೇರೇಪಿಸಿದರು. ಮೌಲಿಕ್ ರಾವಲ್, ಟಾಟಾ ಎಲ್ಕ್ಸಿಯ XRಪ್ರಾಕ್ಟೀಸ್ ಹೆಡ್: ಜನರೇಟಿವ್ ಎಐ ಮತ್ತು AR-VRತಂತ್ರಜ್ಞಾನಗಳ ಏಕತೆಗೆ ಸಂಬಂಧಿಸಿದಂತೆ ಆಕರ್ಷಕ ಪ್ರಸ್ತಾವನೆಯನ್ನು ನೀಡಿದರು. ಈ ಅಧಿವೇಶನವು ಈ ಆವಿಷ್ಕಾರಗಳು ವಿಭಿನ್ನ ಕ್ಷೇತ್ರಗಳಲ್ಲಿ ಗ್ರಾಹಕ ಅನುಭವಗಳನ್ನು ಹೇಗೆ ಪುನರ್ ವ್ಯಾಖ್ಯಾನಿಸುವುದಕ್ಕೆ ಬದ್ಧವಾಗಿದೆ ಎಂಬುದರ ಬಗ್ಗೆ ಮುನ್ಸೂಚನೆ ನೀಡಿತು. ವೀರೇಂದ್ರ ಪಾಟೀಲ (ಸ್ಥಾಪಕ ಮತ್ತು ಸೃಜನಾತ್ಮಕ ನಿರ್ದೇಶಕ), ರಕ್ಷಿತ್ (ಸಿಜಿ ನಿರ್ವಾಹಕ), ಜೇಬಿನಿಂದ ಕೃಷ್ಣಬಾಬು (ಸಿಜಿ ನಿರ್ವಾಹಕ): ಅನ್ರಿಯಲ್ ಎಂಜಿನ್ ಬಳಸಿಕೊಂಡು ಸೃಜನಾತ್ಮಕ ಮತ್ತು ತಾಂತ್ರಿಕ ಸಾಧನೆಗಳ ಹಿನ್ನೋಟವನ್ನು ಆಕರ್ಷಕ ಪ್ರಸ್ತುತಪಡಿಸಿದರು. ಚರ್ಚೆಯು ಚಿತ್ರ ನಿರ್ಮಾಣದಲ್ಲಿ ಅನ್ರಿಯಲ್ ಎಂಜಿನ್ನ ನಿಂಗು-ಮೆನ್ನು ಮಾಡುವ ಅಪ್ಲಿಕೇಶನ್ಗಳನ್ನು ಸಹ ಪರಿಶೀಲಿಸಿತು. ಆನಂದಸಾಯಿ ಶಿವನಲಿಂಗಮ್ (ನಿರ್ದೇಶಕ), ಶಿವಕುಮಾರ್ ಕಸೆಟ್ಟಿ (ಕಾರ್ಯಕಾರಿ ನಿರ್ಮಾಪಕ) ಚಂ ಸ್ಟುಡಿಯೋಗಳಿಂದ: ಗೇಮಿಂಗ್ ಮತ್ತು ಮಾನವ ಸಂಪತ್ತಿನ ಹೊರಹೊಮ್ಮುವ ಹೊಸ ಉದ್ಯೋಗಾವಕಾಶಗಳನ್ನು ಮಾರ್ಪಡಿಸಲು ಮತ್ತು ಜನರು ವೃತ್ತಿಗಳನ್ನು ಹುಡುಕುವ ಹಾಗೂ ಕೆಲಸ ಮಾಡುವ ಶ್ರೇಷ್ಠತೆಯನ್ನು ಹೇಗೆ ಬದಲಾಯಿಸುತ್ತವೆ ಎಂಬ ಶ್ರೇಷ್ಠವಾದ ಆಳವಾದ ಪರಿಶೀಲನೆಯನ್ನು ನೀಡಿದರು. ಈ ಕಾರ್ಯಕ್ರಮವು ಭಾಗವಹಿಸುವವರಿಂದ ಅಪಾರ ಪ್ರತಿಕ್ರಿಯೆಯನ್ನು ಹೊಂದಿತು, ಅವರು ಪ್ರಸ್ತಾವನೆಗಳ ಆಳ ಮತ್ತು ಸಂಬಂಧವನ್ನು ಪ್ರಶಂಸಿಸಿದರು. ಚರ್ಚೆಗಳು ಉದಯೋನ್ಮುಖ ತಂತ್ರಜ್ಞಾನದ ಪರಿವರ್ತನಾ ಪರಿಣಾಮವನ್ನು ಪರಿಗಣಿಸುತ್ತವೆ ಮತ್ತು ವಿದ್ಯಾರ್ಥಿಗಳಿಗೆ ಮತ್ತು ಯುವ ವೃತ್ತಿಪರರಿಗೆ ಕಾರ್ಯನ್ವಯಿಸುವ ಒಳನೋಟಗಳನ್ನು ನೀಡುತ್ತವೆ.

**ಶ್ರೀ ಸಂತಿದ್ಧಿಪ್ ವೆಲಿಂಗ್, ಮುಖ್ಯ ವ್ಯವಹಾರ ಅಧಿಕಾರಿ ರೀಟೇಲ್ ಬಿಸಿನೆಸ್, ಅಪ್ಟೆಕ್ ಲಿಮಿಟೆಡ್. ನಾವು 'ಹೊಸ ಭಾರತಕ್ಕೂ ಹೊಸ ಯುಗದ ವೃತ್ತಿಗಳು:** ಪರ್ಸ್ಪೆಕ್ಟಿವ್ಸ್ ಟೂರ್ 2024'ನ ಯಶಸ್ಸಿನಿಂದ ಹೆಬ್ಬಾಗಿಲು ಹಾಕುತ್ತಿದ್ದೇವೆ. ಈ ಕಾರ್ಯಕ್ರಮವು ಭಾರತದಲ್ಲಿ ವೃತ್ತಿಗಳ ಭವಿಷ್ಯವನ್ನು ನಾವು ಹೇಗೆ ನಿಗದಿತ ಮಾಡುತ್ತೇವೆ ಮತ್ತು ರೂಪಿಸುತ್ತೇವೆ ಎಂಬುದರಲ್ಲಿ ನಿಖರವಾದ ಮಾನದಂಡವನ್ನು ಹೊಂದಿದೆ. ನಿಖರವಾದ ಚಿಂತನೆಗಳನ್ನು ಹಂಚಿಕೊಳ್ಳುವ ಪ್ರಮುಖ ಅಭಿಪ್ರಾಯದ ನಾಯಕರ ಭಾಗವಹಿಸುವಿಕೆ ಮತ್ತು ವಿಚಾರೋದ್ದೀಪಕ ಚರ್ಚೆಗಳ ನಡುವೆ, ಹೊಸ ಯುಗದ ವೃತ್ತಿಗಳನ್ನು ಅನುಸರಿಸಲು ಉತ್ಸುಕವಾದ ಆಕಾಂಕ್ಷಿಗಳಿಗೆ ಈ ಕಾರ್ಯಕ್ರಮವು ಬೃಹತ್ ಪ್ರಯೋಜನವಹಿಸಿದೆ ಎಂದು ನಾನು ನಂಬುತ್ತೇನೆ. ಅರೆನಾ ಆನಿಮೇಶನ್ ವಿದ್ಯಾರ್ಥಿಗಳು ಹೊಸಯುಗದ ಕೌಶಲ್ಯಗಳಿಗೆ ತರಬೇತಿ ನೀಡುವುದರಲ್ಲಿ ಬದ್ಧವಾಗಿದೆ ಮತ್ತು ತಮ್ಮ ಪ್ರತಿಭೆಯನ್ನು ಪರಿಶೀಲಿಸಲು ಮತ್ತು ತಮ್ಮ ಸೃಜನಶೀಲ ಶಕ್ತಿಯನ್ನು ಬಿಡುಗಡೆ ಮಾಡಲು ಯುವ ಆಕಾಂಕ್ಷಿಗಳು/ಅಭಿವೃದ್ಧಿಗಳು ನಮ್ಮ ಕೇಂದ್ರಗಳಿಗೆ ಬರೆಯುವಂತೆ ನಾವು ವಿನಂತಿಸುತ್ತೇವೆ. ಗ್ರಾಹಕರು ಹೀರೋ ಮತ್ತು ಶಕ್ತಿಯುತ ಪ್ರಾಣಿ ಕಾಲುವೆಗಳಿಗೆ ಹೆಚ್ಚು ಆಕರ್ಷಿಸುತ್ತಿರುವಂತೆ, ಭಾರತದ ಎವಿಜಿಸಿ ಕ್ಷೇತ್ರವು ಇತ್ತೀಚಿನ ವರ್ಷಗಳಲ್ಲಿ ಅಪಾರ ವೃದ್ಧಿ ಪ್ರಮಾಣವನ್ನು ಹೊಂದಿದೆ. 53 ಪ್ರದೇಶಗಳಲ್ಲಿ 13 ಕ್ಷೇತ್ರಗಳಲ್ಲಿ ಕಫಾಅ ವತಿಯಿಂದ ಪ್ರಕಟಿತ 24ನೇ ವಾರ್ಷಿಕ ಜಾಗತಿಕ ಮನರಂಜನೆ ಮತ್ತು ಮಾಧ್ಯಮ ನೋಟ 2023-2027 ಪ್ರಕಾರ, ಭಾರತದ ಮಾಧ್ಯಮ ಮತ್ತು ಮನರಂಜನೆಯ ಉದ್ಯಮವು 9.7% ಅಂಉಖ ನಲ್ಲಿ ಬೆಳೆಯಲಿದೆ, 2027ರ ವೇಳೆಗೆ ಗಖ73.6 ಬಿಲಿಯನ್ಗಳನ್ನು ತಲುಪಲಿದೆ. ಈ ಏರಿಕೆಯನ್ನು ಗ್ರಾಹಿಸಲು ಹಾರವಿಧಾನಗಳು ಗಾರರು ಹೆಚ್ಚಾಗುತ್ತಿದ್ದಾರೆ. 25 ವರ್ಷಗಳ ಪರಂಪರೆಯನ್ನು ಹೊಂದಿರುವ ಅರೆನಾ ಆನಿಮೇಶನ್, ನ್ನು ಸಮರ್ಪಕನೆಂಬ ಗುಣಮಟ್ಟವನ್ನು ತೋರಿಸುವ ಪರಿಕಲ್ಪನೆಯನ್ನು ರೂಪಿಸುತ್ತದೆ, ಬುದ್ಧಿವಂತ ಸಮಾಗಮಗಳು, ಶ್ರೇಷ್ಠ ಹಕ್ಕಿಗಳಾದ ಶಿಕ್ಷಕರು ಮತ್ತು ಸಂಪೂರ್ಣ ತಂತ್ರಜ್ಞಾನ ಉಪಕರಣಗಳಿಂದ ಬಲಗೊಳ್ಳುತ್ತದೆ. ಈ ಧ್ಯೆಯವು ಸ್ಪಷ್ಟವಾಗಿರುತ್ತವೆ ? ಯುವಕರಿಗೆ ಉದ್ಯಮಕ್ಕೆ ಸಂಬಂಧಿಸಿದ ಕೌಶಲ್ಯಗಳನ್ನು ಒದಗಿಸಲಾಗುವುದು ಮತ್ತು ಅವರ ಸೃಜನಶೀಲತೆಯನ್ನು ಹೊಳೆಯಲು, ನಂಬಿಕೆ ಕಟ್ಟಲು ಮತ್ತು ತಂಡದ ಕಾರ್ಯಕ್ಕೆ ಉತ್ತೇಜನ ನೀಡಲು, ಅವರು ಬೋಧನೆಯನ್ನು ಪೂರೈಸಲು, ಪ್ರಸ್ತಾವನೆಗಳನ್ನು ನೀಡಲು ಮತ್ತು ಉದ್ಯಮದ ಸಹೋದ್ಯೋಗಿಗಳೊಂದಿಗೆ ಸಂಪರ್ಕ ಹೊಂದಲು ಸಾಧ್ಯವಾಗುವಂತೆ ಮಾಡುವುದಾಗಿದೆ. ಅರೆನಾ ಆನಿಮೇಶನ್ ಎಂದು ಕರೆಯಲ್ಪಡುವುದಕ್ಕೆ ಗ್ರಾಹಕರಾದ ತಮ್ಮ ಮೆಟ್ಟಿಲು ಕಟ್ಟುವ ಉತ್ಸಾಹವನ್ನು ಆರೋಗ್ಯಕರವಾಗಿ ಬೆಳೆಸಲು ಬದ್ಧವಾಗಿದೆ, ಅವರು ಮಾಧ್ಯಮ ಮತ್ತು ಮನರಂಜನೆಯ ಚಾಲಕ ರಲ್ಲಿ ತಮ್ಮ ಗುರುತಿನ ಗುರುತನ್ನು ಮಾಡಲು ಸಿದ್ಧರಾಗಿದ್ದಾರೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

**ಮೇಷ:** ಆರ್ಥಿಕ ಮುಗ್ಗಟ್ಟು, ಕುಟುಂಬದಿಂದ ಅಂತರ, ಮಾಟ ಮಂತ್ರ ತಂತ್ರದ ಆತಂಕ, ಸಂಗಾತಿಯಿಂದ ಲಾಭ

**ವೃಷಭ:** ವ್ಯಾಪಾರ ವ್ಯವಹಾರದಲ್ಲಿ ನಷ್ಟ, ಯತ್ನ ಕಾರ್ಯಗಳಲ್ಲಿ ವಿಘ್ನ, ಉದ್ಯೋಗ ಸ್ಥಳದಲ್ಲಿ ಶತ್ರು ಕಾಟ, ವಿದ್ಯಾಭ್ಯಾಸದಲ್ಲಿ ಅನಾನುಕೂಲ

**ಮಿಥುನ:** ಸಾಲ ಮರುಪಾವತಿಗೆ ಸಹಕಾರ, ಅಧಿಕ ಖರ್ಚು, ವಿದ್ಯಾಭ್ಯಾಸದಲ್ಲಿ ಪ್ರಗತಿ, ಪೂರ್ವಪುಣ್ಯ ಫಲ ಪ್ರಾಪ್ತಿ

**ಕಟಕ:** ವ್ಯಾಪಾರದಲ್ಲಿ ನಷ್ಟ, ಅವಮಾನ ಅಪಮಾನ ಅಪನಿಂದನೆ, ಮಾಟ ಮಂತ್ರ ತಂತ್ರದ ಆತಂಕ, ತಾಯಿಯೊಂದಿಗೆ ಮನಸ್ತಾಪ

**ಸಿಂಹ:** ಸಂಗಾತಿಯಿಂದ ಅನುಕೂಲ, ಬಂಧು ಬಾಂಧವರಿಂದ ಅನಾನುಕೂಲ, ಉದ್ಯೋಗ ಬದಲಾವಣೆ ಆಲೋಚನೆ, ಆರ್ಥಿಕ ಕುಂಠಿತ

**ಕನ್ಯಾ:** ವ್ಯಾಪಾರ ವ್ಯವಹಾರದಲ್ಲಿ ನಷ್ಟ, ಶತ್ರು ಭಾದೆ, ದಾಂಪತ್ಯದಲ್ಲಿ ಮನಸ್ತಾಪ, ಪಾಲುದಾರಿಕೆಯಲ್ಲಿ ಅನಾನುಕೂಲ, ಆರ್ಥಿಕವಾಗಿ ಸಹಕಾರ

**ತುಲಾ:** ಪಾಲುದಾರಿಕೆಯಲ್ಲಿ ಸಮಸ್ಯೆ, ಪ್ರೀತಿ ಪ್ರೇಮ ಭಾವನೆಗಳ ತೊಳಲಾಟ, ಮಕ್ಕಳಿಂದ ಅನುಕೂಲ, ರೋಗಭಾದೆಯಿಂದ ಮುಕ್ತಿ

**ವೃಶ್ಚಿಕ:** ಸ್ಥಿರಾಸ್ತಿ ವಿಷಯದಲ್ಲಿ ಅನುಕೂಲ, ಸಂಗಾತಿಯಿಂದ ನಷ್ಟ,ಪಾಲುದಾರಿಕೆ ವ್ಯವಹಾರದಲ್ಲಿ ಸಮಸ್ಯೆ, ಪ್ರಯಾಣದಲ್ಲಿ ಅನುಕೂಲ

**ಧನಸ್ಸು:** ಶತ್ರು ಉಪಟಳದಿಂದ ಮುಕ್ತಿ, ಮಕ್ಕಳಿಂದ ಲಾಭ, ಪತ್ರ ವ್ಯವಹಾರದಲ್ಲಿ ಅನುಕೂಲ, ರೋಗಭಾದೆಗಳಿಂದ ಮುಕ್ತಿ,

**ಮಕರ :** ಮಕ್ಕಳಿಂದ ಆರ್ಥಿಕ ಸಹಕಾರ, ಪ್ರೀತಿ ಪ್ರೇಮ ವಿಷಯಗಳಿಂದ ಅಂತರ, ಉದ್ಯೋಗ ಲಾಭ, ಕುಟುಂಬದಿಂದ ಸಹಕಾರ

**ಕುಂಭ:** ಆರ್ಥಿಕ ಮುಗ್ಗಟ್ಟು,ಮಕ್ಕಳಿಂದ ಸಹಕಾರ, ತಾಯಿಯಿಂದ ಸಹಕಾರ, ವಿದ್ಯಾಭ್ಯಾಸದಲ್ಲಿ ಪ್ರಗತಿ

**ಮೀನ:** ಆರ್ಥಿಕ ಚಿಂತೆ ಕಾಡುವುದು, ದುಶ್ಚಟಗಳಿಂದ ಸಮಸ್ಯೆ, ಅಧಿಕ ದುಂದು ವೆಚ್ಚ, ಮಾತಿನಿಂದ ಕಲಹ

## ನೇತ್ರ ಆರೋಗ್ಯದ ಕಡೆಗೆ ಗಮನಹರಿಸಿ




**ಮೈಸೂರು:** ನೇತ್ರ ಮನುಷ್ಯನ ದೇಹದ ಬಹುಮುಖ್ಯ ಅಂಗವಾಗಿದ್ದು, ಸಾರ್ವಜನಿಕರು ನೇತ್ರದ ಆರೋಗ್ಯದ ಕಡೆಗೆ ಹೆಚ್ಚು ಗಮನ ಹರಿಸಬೇಕೆಂದು ರಾಮೇಶ್ವರಂ ಕೆಫೆ ಸ್ಥಾಪಕ ಸಂಸ್ಥಾಪಕಿ ನಾಗಶ್ರೀ ತಿಳಿಸಿದರು.

ನೇತ್ರಧಾಮದ ನೂತನ ಆಸ್ಪತ್ರೆ ಉದ್ಘಾಟಿಸಿ ಮಾತನಾಡಿದ ಅವರು, ನೇತ್ರಧಾಮದ ಈ ಹೊಸ ಸೌಲಭ್ಯ ಉದ್ಘಾಟಿಸಲು ನನಗೆ ಗೌರವವಿದೆ. ಇದು ನೇತ್ರ ಆರೈಕೆ ಶ್ರೇಷ್ಠತೆಯ ಶ್ರೇಷ್ಠ ಪರಂಪರೆ ಹೊಂದಿದೆ. ಈ ಹೊಸ ಕೇಂದ್ರ ನಿಸ್ಸಂದೇಹವಾಗಿ ತೀವ್ರ ಕಣ್ಣಿನ ಪರಿಸ್ಥಿತಿಗಳನ್ನು ಎದುರಿಸುತ್ತಿರುವ ಲಕ್ಷಾಂತರ ರೋಗಿಗಳಿಗೆ ಪ್ರಯೋಜನ ನೀಡುತ್ತದೆ. ನೇತ್ರಧಾಮದಲ್ಲಿ ನಾನು ಪಡೆದ ಆರೈಕೆ ಮತ್ತು ಚಿಕಿತ್ಸೆ ಅಸಾಧಾರಣವಾಗಿದೆ. ಅಂತಹ ಗಂಭೀರ ಗಾಯದ ನಂತರ ನನ್ನ ದೃಷ್ಟಿಯನ್ನು ಮರಳಿ ಪಡೆಯುವುದನ್ನು ನಾನು ಎಂದಿಗೂ ಊಹಿಸಿರಲಿಲ್ಲ. ಆದರೆ ಇಲ್ಲಿನ ವೈದ್ಯರಿಗೆ ಮತ್ತು ಅವರು ಬಳಸುತ್ತಿರುವ ಸುಧಾರಿತ ತಂತ್ರಜ್ಞಾನಗಳಿಗೆ ಧನ್ಯವಾದ, ಅವರು ಅಸಾಧ್ಯವೆಂದು ತೋರಿದ್ದನ್ನು ವಾಸ್ತವವಾಗಿಸಿದ್ದಾರೆ ಎಂದು ಹೇಳಿದರು.

ನೇತ್ರಧಾಮದ ಅಧ್ಯಕ್ಷ ಮತ್ತು ಮ್ಯಾನೇಜಿಂಗ್ ಡೈರೆಕ್ಟರ್ ಡಾ.ಗಣೇಶ್ ಮಾತನಾಡಿ, ನೇತ್ರಧಾಮ ಯಾವಾಗಲೂ ಭಾರತೀಯ ನೇತ್ರ ಆರೈಕೆ ಕ್ಷೇತ್ರಕ್ಕೆ ನಾವೀನ್ಯ ತಂತ್ರಜ್ಞಾನ ಪರಿಚಯಿಸುವಲ್ಲಿ ಮುಂಚೂಣಿಯಲ್ಲಿದೆ. ನಮ್ಮ ಹೊಸ ವೈಟ್ ಫೀಲ್ಡ್ ಕೇಂದ್ರ, ವಿಷನ್ ಕೇರ್ ಪಾರ್ ಎಕ್ಸಲೆನ್ಸ್ ಅನ್ನು ತಲುಪಿಸುವ ನಮ್ಮ ಬದ್ಧತೆಗೆ ಸಾಕ್ಷಿಯಾಗಿದೆ. ನಾವು ಜಾಗತಿಕವಾಗಿ ಲಭ್ಯವಿರುವ ಕೆಲವು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಸಂಯೋಜಿಸಿದ್ದೇವೆ ಇದರಿಂದ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲ ಆಗಲಿದೆ ಎಂದರು. ಕಾರ್ಯಕ್ರಮದಲ್ಲಿ ಸಿಇಒ ಮತ್ತು ನಿರ್ದೇಶಕ ಡಾ.ಸುಮನ್ ಸೇರಿದಂತೆ ಹಲವರು ಇದ್ದರು.

# 12 ನೂತನ ಕೈಗಾರಿಕಾ ಸ್ಮಾರ್ಟ್ ಸಿಟಿ, 10 ಲಕ್ಷ ಹೊಸ ಉದ್ಯೋಗ ಸೃಷ್ಟಿ

## ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ

**ನವದೆಹಲಿ:** ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಕಾರ್ಯಕ್ರಮದ ಅಡಿಯಲ್ಲಿ 28,500 ಕೋಟಿ ರೂ. ಹೂಡಿಕೆಯೊಂದಿಗೆ 12 ಕೈಗಾರಿಕಾ ಸ್ಮಾರ್ಟ್ ಸಿಟಿಗಳನ್ನು ಸ್ಥಾಪಿಸಲು ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಇದರಿಂದ ಸುಮಾರು 12 ಲಕ್ಷ ನೇರ ಉದ್ಯೋಗಗಳು ಮತ್ತು 20 ಲಕ್ಷ ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸಲು ಸಾಧ್ಯ ಎಂದು ತಿಳಿಸಿದೆ.

ಭಾರತವು 'ಪ್ಲಗ್-ಎನ್-ಪ್ಲೇ' ಮತ್ತು 'ವಾಕ್-ಟು-ವರ್ಕ್' ಪರಿಕಲ್ಪನೆಗಳೊಂದಿಗೆ ವಿಶ್ವದರ್ಜೆಯ ಗ್ರೀನ್‌ಫೀಲ್ಡ್ ಕೈಗಾರಿಕಾ ಸ್ಮಾರ್ಟ್ ಸಿಟಿಗಳನ್ನು ನಿರ್ಮಿಸಲು ಸಜ್ಜಾಗಿದೆ.

ಈ ಯೋಜನೆಗಳು ದೃಢವಾದ ಮತ್ತು ಸುಸ್ಥಿರ ಮೂಲಸೌಕರ್ಯವನ್ನು ಸೃಷ್ಟಿಸುವ ಗುರಿಯನ್ನು ಹೊಂದಿವೆ. ಹೂಡಿಕೆ ಮತ್ತು ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಯನ್ನು ಉತ್ತೇಜಿಸುವ ಗುರಿ ಹೊಂದಲಾಗಿದೆ ಎಂದು ಆರ್ಥಿಕ ವ್ಯವಹಾರಗಳ ಕ್ಯಾಬಿನೆಟ್ ಸಮಿತಿ (ಸಿಸಿಇಎ) ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಬೇಡಿಕೆಗಿಂತ ಮುಂಚಿತವಾಗಿ ಸ್ಮಾರ್ಟ್ ಸಿಟಿಗಳನ್ನು ಅಭಿವೃದ್ಧಿಪಡಿಸಲಾಗುವುದು. ದೇಶೀಯ ಮತ್ತು ಅಂತಾರಾಷ್ಟ್ರೀಯ ಹೂಡಿಕೆಗಳನ್ನು ಆಕರ್ಷಿಸಲು ವಿನ್ಯಾಸಗೊಳಿಸಲಾದ ಆಧುನಿಕ ಸೌಕರ್ಯಗಳನ್ನು ಒಳಗೊಂಡಿರುತ್ತದೆ. 'ಪ್ಲಗ್-ಎನ್-ಪ್ಲೇ' ಪರಿಕಲ್ಪನೆಯು ಅಗತ್ಯ ಮೂಲಸೌಕರ್ಯವು ಸುಲಭವಾಗಿ ಲಭ್ಯವಿರುತ್ತದೆ ಎಂದು ಸೂಚಿಸುತ್ತದೆ. ಇದು ವ್ಯವಹಾರಗಳಿಗೆ ತ್ವರಿತವಾಗಿ ಕಾರ್ಯಾಚರಣೆಗಳನ್ನು ಹೊಂದಿಸಲು ಸುಲಭವಾಗುತ್ತದೆ. 'ವಾಕ್-ಟು-ವರ್ಕ್' ಪರಿಕಲ್ಪನೆಯು ಕೆಲಸದ ಸ್ಥಳಗಳಿಗೆ ಸಮೀಪವಿರುವ ವಸತಿ ಪ್ರದೇಶಗಳನ್ನು ರೂಪಿಸುವುದನ್ನು ಒತ್ತಿ ಹೇಳುತ್ತದೆ. ಇದರಿಂದಾಗಿ ಪ್ರಯಾಣದ ಸಮಯವನ್ನು ಕಡಿಮೆಯಾಗುವುದಲ್ಲದೇ, ನಿವಾಸಿಗಳ ಜೀವನದ ಗುಣಮಟ್ಟ ಸುಧಾರಿಸುತ್ತದೆ.



### ಎಲ್ಲೆಲ್ಲಿ ಸ್ಮಾರ್ಟ್ ಸಿಟಿ?

- ಉತ್ತರಾಖಂಡದ ಖುರ್ಪಿಯಾ
- ಪಂಜಾಬ್‌ನ ರಾಜಪುರ, ಪಟಿಯಾಲ
- ಉತ್ತರ ಪ್ರದೇಶದ ಆಗ್ರಾವು ಸ್ವಚ್ಛ ಮತ್ತು ಪರಿಸರ ಸ್ನೇಹಿ ಕೈಗಾರಿಕಾ ಅಭಿವೃದ್ಧಿಯನ್ನು ಹೊಂದಿರುತ್ತದೆ
- ಯುಪಿಯಲ್ಲಿ ಪ್ರಯಾಗ್ರಾಜ್
- ಬಿಹಾರದ ಗಯಾ ಕೃಷಿ, ಜವಳಿ ಮತ್ತು ಇಂಜಿನಿಯರಿಂಗ್ ಮೇಲೆ ಕೇಂದ್ರೀಕರಿಸುತ್ತದೆ
- ಮಹಾರಾಷ್ಟ್ರದ ಈಘಿ ಬಂದರು ಕೈಗಾರಿಕಾ ಪ್ರದೇಶ. ಬಂದರು ನೇತೃತ್ವದ ಕೈಗಾರಿಕೀಕರಣದತ್ತ ಗಮನ ಹರಿಸಲಾಗುವುದು
- ಜೋಧಪುರ, ರಾಜಸ್ಥಾನದ ಪಾಲಿ.
- ಆಂಧ್ರಪ್ರದೇಶದ ಕೋಪರ್ತಿ
- ಆಂಧ್ರಪ್ರದೇಶದ ಓರ್ವಕಲ್
- ತೆಲಂಗಾಣದ ಜಹೀರಾಬಾದ್
- ಕೇರಳದ ಪಾಲಕ್ಕಾಡ್
- ಜಮ್ಶೆಡ್‌ಪುರ-ಪುರುಲಿಯಾ-ಅಸನ್ಸೋಲ್

# ಅರುಣಾಚಲ ಪ್ರದೇಶದಲ್ಲಿ ಪ್ರಪಾತಕ್ಕೆ ಬಿದ್ದ ಟ್ರಕ್

## ಮೂವರು ಯೋಧರು ಹುತಾತ್ಮ




ಇಟಾನಗರ: ಟ್ರಕ್ ಸ್ಕಿಡ್ ಆಗಿ ಪ್ರಪಾತಕ್ಕೆ ಬಿದ್ದ ಪರಿಣಾಮ ಮೂವರು ಭಾರತೀಯ ಯೋಧರು ಹುತಾತ್ಮರಾಗಿದ್ದು, ಅನೇಕರು ಗಾಯಗೊಂಡ ಘಟನೆ ಅರುಣಾಚಲ ಪ್ರದೇಶದಲ್ಲಿ ನಡೆದಿದೆ.

ಸೈನಿಕರನ್ನು ಸಾಗಿಸುತ್ತಿದ್ದ ಟ್ರಕ್ ಲೆಪರಾಡ ಜಿಲ್ಲೆಯ ಬಸರಾಗೆ ತೆರಳುತ್ತಿದ್ದ ವೇಳೆ ಸ್ಕಿಡ್ ಆಗಿ ಪ್ರಪಾತಕ್ಕೆ ಉರುಳಿದೆ. ಇದರಿಂದ ಮೂವರು ಯೋಧರು ಹುತಾತ್ಮರಾಗಿದ್ದು ಅನೇಕರಿಗೆ ಗಾಯಗಳಾಗಿವೆ. ಅರುಣಾಚಲ ಪ್ರದೇಶದ ಅಪ್ಪರ್ ಸುಭನ್ಸಿರಿ ಎಂಬಲ್ಲಿ ಈ ಘಟನೆ ನಡೆದಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.

ಸೇನಾ ಮೂಲಗಳ ಪ್ರಕಾರ, ಹುತಾತ್ಮರಾದ ಮೂವರು ಯೋಧರನ್ನು ಹವಲ್ದಾರ್ ನಖಾತ್ ಸಿಂಗ್, ನಾಯಕ್ ಮುಖೇಶ್ ಕುಮಾರ್, ಗ್ರೆನೇಡಿಯರ್ ಆಶಿಶ್ ಕುಮಾರ್ ಎಂದು ಗುರುತಿಸಲಾಗಿದೆ.

ಘಟನೆ ಸಂಭವಿಸಿದ ಕೂಡಲೇ ಸ್ಥಳೀಯರು ಸೇರಿ ಗಾಯಗೊಂಡ ಸೈನಿಕರನ್ನು ಮೇಲೆತ್ತಲು ಸಹಾಯ ಮಾಡಿದ್ದಾರೆ.

ಘಟನೆಯ ಕುರಿತು ಸೇನೆಯ ಪೂರ್ವ ಕಮಾಂಡ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದೆ. ಈಸ್ಟನ್ ಕಮಾಂಡ್ ಆರ್ಮಿ ಕೇಡರ್ ಮತ್ತು ಎಲ್ಲಾ ಶ್ರೇಣಿಯ ಲೆಫ್ಟಿನೆಂಟಲ್ ಜನರಲ್ ಆರ್ ಸಿ ತಿವಾರಿ, ಬ್ರೇವ್‌ಹಾರ್ಟ್ಸ್ ಹವ್ ನಖತ್ ಸಿಂಗ್, ಎನ್‌ಕೆ ಮುಖೇಶ್ ಕುಮಾರ್, ಮತ್ತು ಜಿಡಿಆರ್ ಆಶಿಶ್‌ರವರ ಈ ಘಟನೆಗೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಅರುಣಾಚಲ ಪ್ರದೇಶದ ಸಿಎಂ ಪ್ರೇಮ ಖಂಡು ಕೂಡ ತಮ್ಮ ಎಕ್ಸ್ ಖಾತೆಯಲ್ಲಿ ಸಂತಾಪ ವ್ಯಕ್ತಪಡಿಸಿದ್ದು, ಹುತಾತ್ಮ ಯೋಧರನ್ನು ಗೌರವಪೂರ್ವಕವಾಗಿ ಸ್ಮರಿಸಲಾಗುವುದು, ಈ ದುಃಖವನ್ನು ಭರಿಸುವ ಶಕ್ತಿ ಹುತಾತ್ಮ ಯೋಧರ ಕುಟುಂಬಸ್ಥರಿಗೆ ಸಿಗಲಿ ಎಂದು ನಾನು ಬುದ್ಧನಲ್ಲಿ ಪ್ರಾರ್ಥನೆ ಮಾಡುತ್ತೇನೆ ಎಂದು ಬರೆದಿದ್ದಾರೆ.

# ಜನ್ ಧನ್ ಯೋಜನೆಗೆ 10 ವರ್ಷ, 53.1 ಕೋಟಿ ಬ್ಯಾಂಕ್ ಖಾತೆಗಳಲ್ಲಿ 2.3 ಲಕ್ಷ ಕೋಟಿ ಜಮೆ: ಮೋದಿ ಹರ್ಷ

**ನವದೆಹಲಿ:** ಪ್ರಧಾನಮಂತ್ರಿ ಜನ್‌ಧನ್ ಯೋಜನೆಗೆ ಹತ್ತು ವರ್ಷ ಪೂರ್ಣಗೊಂಡಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಹರ್ಷ ವ್ಯಕ್ತಪಡಿಸಿದ್ದಾರೆ.

ಪ್ರಧಾನಮಂತ್ರಿ ಜನ್‌ಧನ್ ಯೋಜನೆ 2014 ರಲ್ಲಿ ಪ್ರಾರಂಭವಾಗಿತ್ತು. ಈ ಯೋಜನೆಯಿಂದಾಗಿ 53.1 ಕೋಟಿ ಬ್ಯಾಂಕ್ ಖಾತೆಗಳು ತೆರೆಯಲಾಗಿದ್ದು, 2.3 ಕೋಟಿ ರೂ. ಜಮೆಯಾಗಿದೆ. 30 ಕೋಟಿ ಮಹಿಳೆಯರು ಇದರ ಸದುಪಯೋಗ ಪಡೆದುಕೊಂಡಿದ್ದಾರೆ. ಇವತ್ತು ನಮಗೆ ಮಹತ್ವದ ಸಂದರ್ಭ. ಜನಧನ ಯೋಜನೆಗೆ 10 ವರ್ಷ ತುಂಬಿದೆ. ಈ ಯೋಜನೆಯಿಂದಾಗಿ ಹಣಕಾಸಿನ ವ್ಯವಹಾರದ ಒಳಗೊಳ್ಳುವಿಕೆಯಲ್ಲಿ ಉತ್ತೇಜನ ಕಂಡಿದೆ. ಕೋಟ್ಯಂತರ ಜನರು ಇದರ ಉಪಯೋಗ ಪಡೆದುಕೊಂಡಿದ್ದಾರೆ. ಅದರಲ್ಲೂ ಪ್ರಮುಖವಾಗಿ ಮಹಿಳೆಯರು, ಯುವಕರು ಮತ್ತು ಬಡ ಕುಟುಂಬಗಳು ಇದರ ಉಪಯೋಗ ಪಡೆದುಕೊಂಡಿದ್ದಾರೆ ಎಂದು ಪ್ರಧಾನಿ ಮೋದಿ ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ.

2014 ರಲ್ಲಿ ಪ್ರಾರಂಭವಾದ ಈ ಯೋಜನೆಯು ಯಶಸ್ವಿಯಾಗಿ 53.1 ಕೋಟಿ ಬ್ಯಾಂಕ್ ಖಾತೆಗಳನ್ನು ತೆರೆದಿದೆ, 2.3 ಲಕ್ಷ ಕೋಟಿ ರೂ.ಗಳಷ್ಟು ಠೇವಣಿಗಳನ್ನು ಸಂಗ್ರಹಿಸಿದೆ. ಗಮನಾರ್ಹವಾಗಿ, ಸುಮಾರು 30 ಕೋಟಿ ಫಲಾನುಭವಿಗಳು ಮಹಿಳೆಯರಾಗಿದ್ದು, ಅಂಚಿನಲ್ಲಿರುವ ಸಮುದಾಯಗಳ ಸಬಲೀಕರಣದ ಮೇಲೆ ಯೋಜನೆಯ ಪ್ರಭಾವವನ್ನು ಪ್ರತಿಬಿಂಬಿಸುತ್ತದೆ ಎಂದು ಎಕ್ಸ್ ಪೋಸ್ಟ್‌ನಲ್ಲಿ ಹಂಚಿಕೊಂಡಿದ್ದಾರೆ.





ಕಜಎಆಜ 53.13 ಕೋಟಿ ಖಾತೆಗಳೊಂದಿಗೆ ಮಹತ್ವದ ಮೈಲಿಗಲ್ಲನ್ನು ಸಾಧಿಸಿದೆ. ಅದರಲ್ಲಿ 55.6% ಮಹಿಳೆಯರು ಹೊಂದಿದ್ದಾರೆ. ಯೋಜನೆಯು ಗ್ರಾಮೀಣ ಮತ್ತು ಅರೆ-ನಗರ ಪ್ರದೇಶಗಳಲ್ಲಿ ಗಣನೀಯ ಉಪಸ್ಥಿತಿಯನ್ನು ಹೊಂದಿದೆ. ಎಲ್ಲಾ ಖಾತೆಗಳಲ್ಲಿ 66.6% ನಷ್ಟಿದೆ. ಠೇವಣಿ ಬ್ಯಾಲೆನ್ಸ್‌ಗಳು 2,31,236 ಕೋಟಿ ರೂ.ಗೆ ಏರಿಕೆಯಾಗಿದ್ದು, ಯೋಜನೆ ಪ್ರಾರಂಭವಾದಾಗಿನಿಂದ ಠೇವಣಿಗಳಲ್ಲಿ 15 ಪಟ್ಟು ಹೆಚ್ಚಳ ಮತ್ತು ಖಾತೆಗಳಲ್ಲಿ 3.6 ಪಟ್ಟು ಏರಿಕೆಯಾಗಿದೆ. ಪ್ರತಿ ಖಾತೆಯ ಸರಾಸರಿ ಠೇವಣಿ ಈಗ 4,352 ರೂ. ಆಗಿದೆ. ಪಿಎಂಜೆಡಿವೈ ಯೋಜನೆ ಯಶಸ್ಸು ಕಂಡಿದೆ. ಈ ಯೋಜನೆಯಿಂದ ಉಪಯೋಗಗಳು ಪಡೆದ ಮತ್ತು ಈ ಯೋಜನೆಯಲ್ಲಿ ಒಳಗೊಂಡ ಎಲ್ಲರಿಗೂ ಅಭಿನಂದನೆಗಳು ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಈ ಯೋಜನೆಯಿಂದ ಭಾರತೀಯರಿಗೆ ಉಳಿತಾಯ ಮತ್ತು ಠೇವಣಿ ಖಾತೆಗಳು ತೆರೆಯುವಲ್ಲಿ, ಕ್ರೆಡಿಟ್, ವಿಮೆ, ಹಣ ರವಾನೆ ಮತ್ತು ಪಿಂಚಣಿಗೆ ಸಹಾಯವಾಗಲಿದೆ. ಇದರಿಂದಾಗಿ ಕೋಟ್ಯಂತರ ಜನರಿಗೆ ಸಹಾಯವಾಗಿದೆ. ಭಾರತದ ಆರ್ಥಿಕತೆ ಹೆಚ್ಚಳವಾಗುವಲ್ಲಿಯೂ ಪ್ರಮುಖ ಪಾತ್ರ ವಹಿಸಿದೆ.

# ಪಾಕ್-ಚೀನಾ ಯುದ್ಧ, ನಕ್ಸಲರ ದಾಳಿ, ಕೋಮು ಗಲಭೆಗಳಿಗಿಂತ ರಸ್ತೆ ಅಪಘಾತಗಳಲ್ಲಿ ಸಾಯುವವರ ಸಂಖ್ಯೆಯೇ ಹೆಚ್ಚಿದೆ: ಗಡ್ಕರಿ

**ನವದೆಹಲಿ:** ಪಾಕಿಸ್ತಾನ, ಚೀನಾ ಯುದ್ಧಗಳು, ನಕ್ಸಲರ ದಾಳಿ, ಕೋಮು ಗಲಭೆಗಳಿಗಿಂತ ರಸ್ತೆ ಅಪಘಾತದಲ್ಲೇ ಹೆಚ್ಚಿನ ಭಾರತೀಯರು ಸಾವಿಗೀಡಾಗಿದ್ದಾರೆ ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಅಭಿಪ್ರಾಯಪಟ್ಟಿದ್ದಾರೆ.

FICCI ರೋಡ್ ಸೇಫ್ಟಿ ಅವಾರ್ಡ್ಸ್ ಮತ್ತು ಕಾನ್ಕ್ಲೇವ್ 2024 ರ ಆರನೇ ಆವೃತ್ತಿಯಲ್ಲಿ ಮಾತನಾಡಿದ ಗಡ್ಕರಿ, ಪ್ರತಿ ವರ್ಷ ಭಾರತದಲ್ಲಿ ರಸ್ತೆ ಅಪಘಾತಗಳಲ್ಲಿ ಸುಮಾರು 1.5 ಲಕ್ಷ ಸಾವುಗಳು ವರದಿಯಾಗುತ್ತಿವೆ. ಬಲಿಪಶುಗಳಲ್ಲಿ ಸುಮಾರು 65% ಯುವಕರು ಮತ್ತು ಯುವತಿಯರು ಇದ್ದಾರೆ. ಇದರಿಂದ ಜಿಡಿಪಿಯ ಶೇ.3ರಷ್ಟು ನಷ್ಟವಾಗಿದೆ ಎಂದು ತಿಳಿಸಿದ್ದಾರೆ. ನೀವು ಲೆಕ್ಕ ಹಾಕಿದರೆ, ಚೀನಾ ಅಥವಾ ಪಾಕಿಸ್ತಾನ ಯುದ್ಧಗಳು, ನಕ್ಸಲರ ದಾಳಿ, ಕೋಮು ಗಲಭೆಗಳು, ಕಾನೂನು ಮತ್ತು ಸುವ್ಯವಸ್ಥೆಯಲ್ಲಿನ ದುರ್ಘಟನೆಗಳಿಗಿಂತ ರಸ್ತೆ ಅಪಘಾತಗಳಲ್ಲಿ ಹೆಚ್ಚಿನ ಸಂಖ್ಯೆಯ ಜನರು ಸಾವನ್ನಪ್ಪಿದ್ದಾರೆ ಎಂದು ಹೇಳಿದ್ದಾರೆ.

ಪ್ರತಿ ರಸ್ತೆ ಅಪಘಾತಕ್ಕೂ ಚಾಲಕರನ್ನೇ ಹರಕೆಯ ಕುರಿ ಮಾಡುತ್ತಿದ್ದೇವೆ. ಆದರೆ ರಸ್ತೆ ಎಂಜಿನಿಯರುಗಳ ತಪ್ಪು ಇಲ್ಲಿ ಎದ್ದು ಕಾಣುತ್ತಿದೆ ಎಂದು ಆರೋಪಿಸಿದ್ದಾರೆ.

ಹೆದ್ದಾರಿ ಅಭಿವೃದ್ಧಿಗೆ ಸಂಬಂಧಿಸಿದಂತೆ ಅವೈಜ್ಞಾನಿಕವಾಗಿ ಸಿದ್ಧಪಡಿಸುವ ವಿಸ್ತೃತ ಯೋಜನಾ ವರದಿಗಳಿಂದ (ಡಿಪಿಆರ್) ಹೆದ್ದಾರಿಗಳಲ್ಲಿ ಬ್ಲಾಕ್ ಸ್ಪಾಟ್ ಸಂಖ್ಯೆ ಹೆಚ್ಚುತ್ತಿದೆ. ಇದರಿಂದ ಅಪಘಾತಗಳ ಸಂಖ್ಯೆಯೂ ಏರಿಕೆಯಾಗುತ್ತಿದೆ ಎಂದು ತಿಳಿಸಿದ್ದಾರೆ.

# 50 ದನಗಳನ್ನು ನದಿಗೆಸೆದ ದುಷ್ಕರ್ಮಿಗಳು, 20 ಸಾವು: ಪ್ರಕರಣ ದಾಖಲು

**ಭೋಪಾಲ್:** ನದಿಗೆ ಕಿಡಿಗೇಡಿಗಳು 50 ಹಸುಗಳನ್ನು ಎಸೆದಿದ್ದು, ಅದರಲ್ಲಿ 20 ಹಸುಗಳು ಮೃತಪಟ್ಟ ಘಟನೆ ಸಾತ್ನಾ ಜಿಲ್ಲೆಯ ನಾಗೋಡು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಹಸುಗಳು ನೀರಿನಲ್ಲಿ ತೇಲಿಕೊಂಡು ಹೋಗುತ್ತಿರುವ ಹೃದಯವಿದ್ರಾವಕ ಘಟನೆಯ ವೀಡಿಯೋ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ತನಿಖೆ ವೇಳೆ 15 ರಿಂದ 20 ಆಕಳು ಮೃತಪಟ್ಟಿದ್ದು ಖಚಿತವಾಗಿದೆ.ಬಾಮ್ಹೋರ್ ಹತ್ತಿರದ ರೈಲ್ವೆ ಸೇತುವೆ ಬಳಿ ಆಕಳು ನದಿಯಲ್ಲಿ ತೇಲಿ ಹೋಗುತ್ತಿರುವ ದೃಶ್ಯ ವೀಡಿಯೋದಲ್ಲಿದೆ. ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ನಾಗೋಡು ಪೊಲೀಸ್ ಅಧಿಕಾರಿ ಅಶೋಕ್ ಪಾಂಡ್ಯ ತಿಳಿಸಿದ್ದಾರೆ. ನಾಗೋಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಸಲಾಗುತ್ತಿದೆ. ಆರೋಪಿಯನ್ನು ಬಂಧಿಸಲು ಶೋಧಕಾರ್ಯ ನಡೆದಿದೆ ಎಂದು ತಿಳಿದು ಬಂದಿದೆ.



# ಸೋಷಿಯಲ್ ಮೀಡಿಯಾದಲ್ಲಿ ದೇಶ ವಿರೋಧಿ ಪೋಸ್ಟ್ ಹಾಕಿದರೆ ಜೀವಾವಧಿ ಶಿಕ್ಷೆ?

**ಲಕ್ನೋ:** ಸಾಮಾಜಿಕ ಮಾಧ್ಯಮದಲ್ಲಿ ದೇಶ ವಿರೋಧಿ ಪೋಸ್ಟ್ ಹಾಕಿದರೆ ಜೀವಾವಧಿ ಶಿಕ್ಷೆ ವಿಧಿಸುವ ಹೊಸ ಸಾಮಾಜಿಕ ಜಾಲತಾಣ ನೀತಿ ಜಾರಿಗೆ ಉತ್ತರ ಪ್ರದೇಶ ಸರ್ಕಾರ ಅನುಮೋದನೆ ನೀಡಿದೆ. ಫೇಸ್‌ಬುಕ್, ಎಕ್ಸ್, ಇನ್ ಸ್ಟಾಗ್ರಾಮ್ ಮತ್ತು ಯೂಟ್ಯೂಬ್ ಸೇರಿದಂತೆ ಪ್ಲಾಟ್‌ಫಾಮ್ ಗಳಲ್ಲಿ ದೇಶ ವಿರೋಧಿ ಪೋಸ್ಟ್‌ಗಳನ್ನು ನಿಯಂತ್ರಿಸುವ ಉದ್ದೇಶದಿಂದ ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ. ಹೊಸ ನೀತಿಯ ಅಡಿಯಲ್ಲಿ, 'ದೇಶ ವಿರೋಧಿ' ವಿಷಯವನ್ನು ಪೋಸ್ಟ್ ಮಾಡುವುದು ಗಂಭೀರ ಅಪರಾಧವಾಗಿದೆ. ಮೂರು ವರ್ಷಗಳ ಜೈಲು ಶಿಕ್ಷೆಯಿಂದ ಜೀವಾವಧಿ ಶಿಕ್ಷೆ ವರೆಗೂ ಕ್ರಮ ಇರುತ್ತದೆ. ಈ ಹಿಂದೆ, ಇಂತಹ ಕ್ರಮಗಳು ಮಾಹಿತಿ ತಂತ್ರಜ್ಞಾನ ಕಾಯಿದೆಯ ಸೆಕ್ಷನ್ 66ಇ ಮತ್ತು 66ಈ ಅಡಿಯಲ್ಲಿ ಕ್ರಮವಾಗಿ ಗೌಪ್ಯತೆ ಉಲ್ಲಂಘನೆ ಮತ್ತು ಸೈಬರ್‌ಟೆರರಿಸಂಗೆ ಸಂಬಂಧಿಸಿತ್ತು. ಆನ್‌ಲೈನ್‌ನಲ್ಲಿ ಅಶ್ಲೀಲ ಅಥವಾ ಮಾನಹಾನಿಕರ ವಿಷಯವನ್ನು ಪ್ರಸಾರ ಮಾಡುವುದು ಕ್ರಿಮಿನಲ್ ಮಾನನಷ್ಟ ಆರೋಪಗಳಿಗೆ ಕಾರಣವಾಗಬಹುದು. ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳನ್ನು ದುರುಪಯೋಗಪಡಿಸಿಕೊಳ್ಳುವ ಕಾನೂನು ಶಾಖೆಗಳ ಅಗತ್ಯವನ್ನು ಇದು ಒತ್ತಿಹೇಳುತ್ತದೆ. ಹೊಸ ನೀತಿಯ ಪ್ರಕಾರ, ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್‌ಗಳಲ್ಲಿ ಜಾಹೀರಾತುಗಳನ್ನು ನೀಡುವ ಮೂಲಕ ಸರ್ಕಾರದ ಯೋಜನೆಗಳು ಮತ್ತು ಸಾಧನೆ ಆಧಾರಿತ ವಿಷಯವನ್ನು ಹಂಚಿಕೊಳ್ಳಲು ಪ್ರೋತ್ಸಾಹಿಸಲಾಗುತ್ತದೆ. ಪ್ರಭಾವಿಗಳು ಸರ್ಕಾರದ ಯೋಜನೆಗಳು ಮತ್ತು ಉಪಕ್ರಮಗಳನ್ನು ತಮ್ಮ ಖಾತೆಗಳಲ್ಲಿ ಹಂಚಿಕೊಳ್ಳುವ ಮೂಲಕ ಸಾಮಾಜಿಕ ಮಾಧ್ಯಮದಲ್ಲಿ ತಿಂಗಳಿಗೆ 8 ಲಕ್ಷದವರೆಗೆ ಗಳಿಸಬಹುದು. ಈ ನೀತಿಯು ಸಾಮಾಜಿಕ ಮಾಧ್ಯಮದ ಪ್ರಭಾವಿಗಳಿಗೆ ಸಂಭವನೀಯ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ.

# 3 ವರ್ಷದ ಮಗುವಿನ ಮೇಲೆ ಅತ್ಯಾಚಾರ ಮಗುವಿನ ಅಪ್ಪನ ಸ್ನೇಹಿತನಿಂದಲೇ ಕೃತ್ಯ

**ಗಾಂಧಿನಗರ:** ಗುಜರಾತ್‌ನ ವಲ್ಸಾದ್‌ನ ಉಮರ್ಗಾಮ್ ಪ್ರದೇಶದಲ್ಲಿ ಮೂರು ವರ್ಷದ ಮಗುವಿನ ಮೇಲೆ ಆಕೆಯ ತಂದೆಯ ಆಪ್ತ ಸ್ನೇಹಿತ ಅತ್ಯಾಚಾರ ಎಸಗಿರುವ ಘಟನೆ ನಡೆದಿದೆ. ಘಟನೆ ಬಳಿಕ ಕಾಮುಕ ಆರೋಪಿ ಎಸ್ಕೇಪ್ ಆಗಿದ್ದಾನೆ. ಇನ್ನೂ ಲೈಂಗಿಕ ದೌರ್ಜನ್ಯದ ಸುದ್ದಿ ಹರಡುತ್ತಿದ್ದಂತೆ, ರೊಚ್ಚಿಗೆದ್ದ ಸ್ಥಳೀಯ ನಿವಾಸಿಗಳು ಉಮರ್ಗಾಮ್ ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಿದ್ದಾರೆ. ಠಾಣೆ ಮುಂದೆಯೇ ಪ್ರತಿಭಟನೆ ನಡೆಸಿದ್ದಾರೆ. ಆರೋಪಿಯನ್ನ ಬಂಧಿಸಿ, ಕೂಡಲೇ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಇದಾದ ನಂತರ ಪೊಲೀಸರು ಮಧ್ಯಾಹ್ನದ ಒಳಗೆ ಆರೋಪಿಯನ್ನು ಹಿಡಿದು ತರುವುದಾಗಿ ಊರಿನ ಜನರಿಗೆ ಭರವಸೆ ನೀಡಿದ್ದರು. ಆದಾಗ್ಯೂ ಜಗ್ಗದ ಜನ ಶೀಘ್ರ ನ್ಯಾಯ ದೊರಕಿಸಿಕೊಡುವಂತೆ ಹಾಗೂ ಕಾಮುಕನಿಗೆ ಮರಣದಂಡನೆ ವಿಧಿಸುವಂತೆ ಪಟ್ಟು ಹಿಡಿದರು. ಪ್ರತಿಭಟನೆ ಹಿಂಸಾರೂಪಕ್ಕೆ ತಿರುಗುತ್ತಿದ್ದಂತೆ ಪೊಲೀಸರು ಉಮರ್ಗಾಮ್‌ನಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದರು. ಸದ್ಯ ತನಿಖೆ ಮುಂದುವರಿಸುತ್ತಿರುವ ಪೊಲೀಸರು ಆರೋಪಿಗಾಗಿ ಬಲೆ ಬೀಸಿದ್ದಾರೆ. ಇತ್ತ ಸಂತ್ರಸ್ತ ಮಗುವಿನ ವೈದ್ಯಕೀಯ ಪರೀಕ್ಷೆ ನಡೆಸುವ ಜೊತೆಗೆ ಶಾಂತಿ ಸುವ್ಯವಸ್ಥೆಗೆ ಅಗತ್ಯ ಕ್ರಮಗಳನ್ನು ಕೈಗೊಂಡಿರುವುದಾಗಿ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.




# ವೈದ್ಯೆ ಅತ್ಯಾಚಾರ-ಕೊಲೆ ಕೇಸ್; ಐಎಂಎ ಸದಸ್ಯತ್ವದಿಂದ ಡಾ. ಸಂದೀಪ್ ಅಮಾನತು

**ನವದೆಹಲಿ:** ಕೋಲ್ಕತ್ತಾದ ಆರ್‌ಜಿ ಕರ್ ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಡಾ. ಸಂದೀಪ್ ಘೋಷ್ ಅವರ ಸದಸ್ಯತ್ವವನ್ನು ಭಾರತೀಯ ವೈದ್ಯಕೀಯ ಸಂಘ ಅಮಾನತುಗೊಳಿಸಿದೆ.

ಸೋಮವಾರ ಸುಳ್ಳು ಪತ್ತೆ ಪರೀಕ್ಷೆಗೆ ಒಳಗಾದ ಡಾ. ಘೋಷ್, ಮಹಿಳೆಯ ಶವ ಪತ್ತೆಯಾದಾಗ ಪೊಲೀಸ್ ದೂರು ದಾಖಲಿಸಲು ವಿಫಲವಾದುದೂ ಸೇರಿದಂತೆ ನಿರ್ಲಕ್ಷ್ಯ ಧೋರಣೆ ತಳೆದ ಆರೋಪ ಹೊತ್ತಿದ್ದಾರೆ. ಟ್ರೈನಿ ವೈದ್ಯೆ ಅತ್ಯಾಚಾರ ಮತ್ತು ಹತ್ಯೆ ಹತ್ಯೆಗೆ ಸಂಬಂಧಿಸಿದಂತೆ ಅವರು ಆರೋಪ ಎದುರಿಸುತ್ತಿಲ್ಲ. ಆದರೆ, ಜಾಮೀನು ರಹಿತ ಭ್ರಷ್ಟಾಚಾರ ಆರೋಪಗಳನ್ನು ಎದುರಿಸುತ್ತಿದ್ದಾರೆ.

ಆದಾಗ್ಯೂ, ಆರ್‌ಜಿ ಕರ್ ಆಸ್ಪತ್ರೆಯಲ್ಲಿ ಭ್ರಷ್ಟಾಚಾರದ ಆರೋಪಗಳಿವೆ. ಮಾಜಿ ಉದ್ಯೋಗಿಯೊಬ್ಬರು, ಡಾ. ಘೋಷ್ ಅವರು ಮೃತದೇಹಗಳು ಮತ್ತು ಬಯೋಮೆಡಿಕಲ್ ತ್ಯಾಜ್ಯಗಳ ಕಳ್ಳಸಾಗಣೆ ಮಾಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

ಸಿಬಿಐ, ಘೋಷ್ ಅವರ ಕೋಲ್ಕತ್ತಾದ ಮನೆಯಲ್ಲಿ 11 ಗಂಟೆಗಳ ಸಮಗ್ರ ಶೋಧವನ್ನು ನಡೆಸಿತು. ಹಲವು ದಾಖಲೆಗಳನ್ನು ವಶಪಡಿಸಿಕೊಂಡಿದೆ. ಇದುವರೆಗೆ ಸುಮಾರು 90 ಗಂಟೆಗಳ ಕಾಲ ಡಾ. ಘೋಷ್ ಅವರನ್ನು ಪ್ರಶ್ನೆಗೊಳಪಡಿಸಿದೆ.



ಐಎಂಎ ಕೂಡ ಬಂಗಾಳದ ವೈದ್ಯರ ಆರೋಪಗಳನ್ನು ಉಲ್ಲೇಖಿಸಿದೆ. ಡಾ. ಘೋಷ್ ಅವರು ತಮ್ಮ ಕಾರ್ಯಗಳಿಂದ ವೃತ್ತಿಗೆ ಅಪಖ್ಯಾತಿ ತಂದಿದ್ದಾರೆ. ಶಿಸ್ತು ಸಮಿತಿಯು ಅವರನ್ನು ಅಮಾನತುಗೊಳಿಸಲು ನಿರ್ಧರಿಸಿದೆ ಎಂದು ತಿಳಿಸಿದೆ.

# ರೈಲು ಹಳಿಗಳ ಮೇಲೆ ಮರದ ದಿಮ್ಮಿ ಇಟ್ಟ ರೈತ ಮುಖಂಡನ ಪುತ್ರ, ಸ್ನೇಹಿತ ಅರೆಸ್ಟ್

**ಲಕ್ನೋ:** ಉತ್ತರಪ್ರದೇಶದಲ್ಲಿ ರೈಲು ಹಳಿಗಳ ಮೇಲೆ ಮರದ ದಿಮ್ಮಿ ಹಾಕಿ ಕೃತ್ಯವೆಸಗಲು ಮುಂದಾದ ರೈತ ಮುಖಂಡನ ಪುತ್ರ ಹಾಗೂ ಸ್ನೇಹಿತನನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ರೈಲು ಹಳಿಗಳ ಮೇಲೆ ಮರದ ದಿಮ್ಮಿಗಳನ್ನು ಹಾಕಿ ಹಳಿ ತಪ್ಪಿಸಲು ಯತ್ನಿಸಿದಾಗ ಲೋಕೋ ಪೈಲೆಟ್ ಸಮಯಕ್ಕೆ ಸರಿಯಾಗಿ ಬ್ರೇಕ್ ಹಾಕುವ ಮೂಲಕ ದುರಂತವನ್ನು ಸಂಭವಿಸುವುದನ್ನು ತಪ್ಪಿಸಿದ್ದಾರೆ. ಇಪ್ಪತ್ತು ವರ್ಷದ ದೇವ್ ಸಿಂಗ್ ಹಾಗೂ ಫರೂಕಾಬಾದ್ ಅರಿಯಾರಾ ಗ್ರಾಮದ ಮೋಹನ್ ಕುಮಾರ್ ಈ ಕೃತ್ಯವೆಸಗಿದ್ದಾರೆ ಎನ್ನಲಾಗಿದೆ. ದೇವ್ ಸಿಂಗ್‌ನ ತಂದೆ ಕಮಲೇಶ್ ರೈತ ಮುಖಂಡ. ಇ ವಿಚಾರಣೆಯ ವೇಳೆ ತಮ್ಮ ಹೆಸರು ಹೆಚ್ಚು ಪ್ರಸಿದ್ಧಿ ಪಡೆಯುತ್ತದೆ ಎಂಬ ಕಾರಣಕ್ಕಾಗಿ ಹೀಗೆ ಕೃತ್ಯವೆಸಗಿರುವುದಾಗಿ ಹೇಳಿದ್ದಾರೆ ಎಂದು ಕಾಯಮ್ ಗಂಜ್ ಪೊಲೀಸ್ ಅಧಿಕಾರಿ ಹೇಳಿಕೆ ನೀಡಿದ್ದಾರೆ.



ಈ ಘಟನೆಯ ಬಗ್ಗೆ ಭಾರತೀಯ ರೈಲ್ವೆ ಉದ್ಯೋಗಿ ಜಮೀರ್ ಅಹ್ಮದ್ ಖಾನ್ ಆಗಸ್ಟ್ 24 ರಂದು ದೂರು ನೀಡಿದ್ದು, ಪೊಲೀಸರು ಅಪರಿಚಿತ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿಕೊಂಡಿದ್ದರು. ಅಪರಾಧ ಮಾಡಿರುವ ವ್ಯಕ್ತಿಗಳು ತನಿಖೆಯ ವೇಳೆ, ತಾವು ಶನಿವಾರ ರಾತ್ರಿ ಆ ಪ್ರದೇಶದಲ್ಲಿ ಯಾರು ಇಲ್ಲದ ಸಮಯದಲ್ಲಿ ಪಕ್ಕದಲ್ಲಿದ್ದ ಗದ್ದೆಯಿಂದ ಮರದ ದಿಮ್ಮಿಗಳನ್ನು ತಂದು 80 ಮೀಟರ್ ದೂರದಲ್ಲಿರುವು ರೈಲು ಹಳಿಗಳ ಮೇಲೆ ಹಾಕಿರುವುದಾಗಿ ಹೇಳಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಮಾಧ್ಯಮಗಳ ಮುಂದೆ ತಿಳಿಸಿದ್ದಾರೆ. ಆರೋಪಿ ಸಿಂಗ್ ಹಾಗೂ ಕುಮಾರ್ ರೈತರಾಗಿದ್ದು ಭಾರತೀಯ ನ್ಯಾಯ ಸಂಹಿತೆಯ (ಬಿಎನ್‌ಎಸ್) ಸೆಕ್ಷನ್ 327 ಮತ್ತು ರೈಲ್ವೇ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.

# ಭಾರತದಲ್ಲಿರುವ ಈ ರೈಲು ನಿಲ್ದಾಣಕ್ಕೆ ಹೋಗಲು ಭಾರತೀಯರಿಗೂ ಪಾಸ್ ಪೋರ್ಟ್ , ವೀಸಾ ಬೇಕು

**ನವದೆಹಲಿ:** ಭಾರತದಲ್ಲಿ ನೂರಾರು ರೈಲು ನಿಲ್ದಾಣಗಳಿವೆ, ಭಾರತೀಯರು ಆ ನಿಲ್ದಾಣಗಳಿಗೆ ಕೇವಲ, ಟಿಕೆಟ್ , ಪ್ಲಾಟ್ ಫಾರಂ ಟಿಕೆಟ್ ಇದ್ದರೆ ಸುಲಭವಾಗಿ ಭೇಟಿ ನೀಡಬಹುದು. ಆದರೆ ಭಾರತದಲ್ಲೇ ಇರುವ ಈ ರೈಲು ನಿಲ್ದಾಣಕ್ಕೆ ಭಾರತೀಯರೇ ಹೋಗುವುದಾದರೂ ಪಾಸ್ ಪೋರ್ಟ್ , ವೀಸಾವನ್ನು ಹೊಂದಿರಲೇಬೇಕು.

ಇತ್ತೀಚೆಗೆ ಇನ್ ಸ್ಟಾಗ್ರಾಂ ಖಾತೆಯಲ್ಲಿ ಒಂದು ವಿಡಿಯೋವನ್ನು ಹಂಚಿಕೊಳ್ಳಲಾಗಿದೆ. ಇಲ್ಲಿ ವ್ಯಕ್ತಿಯೊಬ್ಬರು ಇಬ್ಬರು ಹುಡುಗಿಯರ ಬಳಿ ವೀಸಾ, ಪಾಸ್ ಪೋರ್ಟ್ ಅಗತ್ಯವಿರುವ ಭಾರತದ ರೈಲು ನಿಲ್ದಾಣ ಯಾವುದು ಎನ್ನುವ ಪ್ರಶ್ನೆ ಕೇಳುತ್ತಾರೆ. ಆ ಪ್ರಶ್ನೆ ಕೇಳಿ ಇಬ್ಬರೂ ಗೊಂದಲಕ್ಕೊಳಗಾಗುತ್ತಾರೆ.

ಆತ ತಮಾಷೆ ಮಾಡುತ್ತಿದ್ದಾನೆ ಎಂದೇ ಭಾವಿಸುತ್ತಾರೆ. ಆದರೆ ಅಂತಹ ನಿಲ್ದಾಣ ಭಾರತದಲ್ಲಿ ಅಸ್ತಿತ್ವದಲ್ಲಿರುವುದು ಸತ್ಯ.




ರೈಲು ನಿಲ್ದಾಣದ ಹೆಸರು ಅಟ್ಟಾರಿ ಅಮೃತಸರದ ಅಟ್ಟಾರಿ ರೈಲು ನಿಲ್ದಾಣವನ್ನು ಅಟ್ಟಾರಿ ಶ್ಯಾಮ್ ಸಿಂಗ್ ರೈಲ್ವೆ ನಿಲ್ದಾಣ ಎಂದೂ ಕರೆಯಲಾಗುತ್ತದೆ. ಈ ರೈಲು ನಿಲ್ದಾಣಕ್ಕೆ ಹೋಗಲು ಭಾರತೀಯರಿಗೆ ವೀಸಾ ಮತ್ತು ಪಾಸ್‌ಪೋರ್ಟ್ ಕೂಡ ಬೇಕು. ಏಕೆಂದರೆ ಇಲ್ಲಿಂದ ಪಾಕಿಸ್ತಾನಕ್ಕೆ ರೈಲುಗಳು ಹೋಗುತ್ತವೆ ಮತ್ತು ಅಟ್ಟಾರಿ ಗಡಿಯಿಂದ ಪಾಕಿಸ್ತಾನಕ್ಕೆ ಹೋಗುತ್ತದೆ. ಉತ್ತರ ರೈಲ್ವೆಯ ಫಿರೋಜ್ ಪುರ ವಿಭಾಗದ ಅಡಿಯಲ್ಲಿ ಅಟ್ಟಾರಿ ನಿಲ್ದಾಣವು ಬರುತ್ತದೆ.

ಇಲ್ಲಿಗೆ ಹೋಗಲು ಪಾಕಿಸ್ತಾನಿ ವೀಸಾ ಅಗತ್ಯವಿದೆ. ನಿಲ್ದಾಣದ ಭದ್ರತೆಯ ಜವಾಬ್ದಾರಿಯನ್ನು ಸೇನೆಯು ಹೊಂದಿದೆ ಮತ್ತು ಇಲ್ಲಿಯ ಪ್ರಯಾಣಿಕರು ಹಲವಾರು ಹಂತದ ತಪಾಸಣೆಗೆ ಒಳಗಾಗಬೇಕಾಗುತ್ತದೆ. ಅಟ್ಟಾರಿ ಅಮೃತಸರ-ಲಾಹೋರ್ ಮಾರ್ಗದಲ್ಲಿರುವ ಭಾರತದ ಕೊನೆಯ ರೈಲು ನಿಲ್ದಾಣವಾಗಿದೆ.

## ವಿಶ್ವದ ಅತ್ಯಂತ ಚಿಕ್ಕ ಏರ್ ಪೋರ್ಟ್ ಇದು

# ಮರದ ಕೆಳಗೆ ಕೂತು ಕಾಯ್ಬೇಕು

**ಕೊಲಂಬಿಯಾ:** ಜಗತ್ತಿನಲ್ಲಿ ನಾವು ತಿಳಿದುಕೊಳ್ಳುವ ವಿಚಾರಗಳು ಹಲವಿದೆ. ಒಂದು ಕಾಲದಲ್ಲಿ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಹೋಗುವುದೇ ಖುಷಿಯ ವಿಚಾರವಾಗಿತ್ತು. ಅದರಲ್ಲೂ ವಿಮಾನದಲ್ಲಿ ಎಲ್ಲಾದರೂ ಹೋದರೆ ಅದು ಹೆಮ್ಮೆಯ ವಿಷಯವಾಗಿತ್ತು. ಕಾಲ ಬದಲಾದಂತೆ ಮನುಷ್ಯನ ಆಲೋಚನೆಗಳು ಕೂಡ ಬದಲಾಗಿವೆ. ಇಲ್ಲಿ ಐಷಾರಾಮಿ ಪ್ರಯಾಣವನ್ನು ಒದಗಿಸುವ ವಿಮಾನವಿದೆ ಆದರೆ ವಿಮಾನ ನಿಲ್ದಾಣದಲ್ಲಿ ಯಾವುದೇ ಸೌಕರ್ಯಗಳಿಲ್ಲ.

ವಿಮಾನ ನಿಲ್ದಾಣ ಎಂದ ತಕ್ಷಣ ನಿಮ್ಮ ಕಣ್ಣಿಗೆ ವೇಟಿಂಗ್ ಪ್ರದೇಶ, ತಿಂಡಿ, ತಿನಿಸುಗಳು, ವಿಮಾನಗಳು, ಐಷಾರಾಮಿ ಮೂಲಸೌಕರ್ಯಗಳೇ ನೆನಪಿಗೆ ಬರುತ್ತವೆ. ಶ್ವದ ಒಂದು ವಿಮಾನ ನಿಲ್ದಾಣವು ಸಾಮಾನ್ಯ ವಿಮಾನ ನಿಲ್ದಾಣಗಳಿಗಿಂತ ಸಂಪೂರ್ಣವಾಗಿ ಭಿನ್ನವಾಗಿದೆ. ಅದು ಜಗತ್ತಿನ ಸಣ್ಣ ವಿಮಾನ ನಿಲ್ದಾಣ ಎಂಬ ಖ್ಯಾತಿಗೆ ಪಾತ್ರವಾಗಿದೆ.

ಕೊಲಂಬಿಯಾದ ಅಗುವಾಚಿಕಾ ಎಂಬ ಸ್ಥಳದಲ್ಲಿ ಹಕಾರಿಟಮಾ ವಿಮಾನ ನಿಲ್ದಾಣವಿದೆ. ವಿಮಾನ ನಿಲ್ದಾಣದ ಗಾತ್ರದಿಂದಾಗಿ ಅದು ಪ್ರಸಿದ್ಧವಾಗಿದೆ. ವಿಮಾನ ಹೊರಡಲು 20 ನಿಮಿಷಗಳು ಬಾಕಿ ಇರುವಾಗ ಬೋರ್ಡಿಂಗ್ ಪ್ರಕ್ರಿಯೆಗಳು ಶುರುವಾಗುತ್ತವೆ.



ಅಲ್ಲಿ ಲಗೇಶ್ ಪರಿಶೀಲಿಸಲು ಸ್ಕ್ಯಾನ್ ಕೂಡ ಇಲ್ಲ, ಕೈಯಲ್ಲಿ ಪರಿಶೀಲಿಸಲಾಗುತ್ತದೆ. ಇಲ್ಲಿ ಸ್ಕ್ಯಾನರ್ ಯಂತ್ರ ಇರಿಸಲೂ ಕೂಡ ಸ್ಥಳವಿಲ್ಲ. ಜನರು ವಿಮಾನ ನಿಲ್ದಾಣಕ್ಕೆ ಬಂದರೆ ಬಿಸಿಲಿನಲ್ಲಿ ಸರತಿ ಸಾಲಿನಲ್ಲಿ ನಿಲ್ಲಬೇಕು.

ಇಲ್ಲಿ ಐಷಾರಾಮಿ ಕಾಯುವ ಕೊಠಡಿ ಇಲ್ಲ, ಬದಲಿಗೆ ಮಾವಿನ ಮರದ ಕೆಳಗೆ ನಿರ್ಮಿಸಲಾದ ಬೆಂಚುಗಳ ಮೇಲೆ ಜನರು ಕಾಯುತ್ತಾರೆ. ಪುರುಷರು ಮತ್ತು ಮಹಿಳೆಯರಿಗೆ ತಲಾ ಒಂದು ಕಾಯುವ ಕೊಠಡಿ ಇದೆ. ಇಲ್ಲಿ ವಿಮಾನವು ಚಿಕ್ಕದಾಗಿದ್ದರೂ, ಆಸನಗಳು ಸಾಕಷ್ಟು ಆರಾಮದಾಯಕವಾಗಿವೆ.

# ಸ್ಥಿರತೆ ಕಂಡ ಚಿನ್ನ, ಬೆಳ್ಳಿ

**ಬೆಂಗಳೂರು:** ಮಂಗಳವಾರದ ಬೆಲೆ ಏರಿಕೆ ಬಳಿಕ ಚಿನ್ನ ಮತ್ತು ಬೆಳ್ಳಿ ಬೆಲೆ ಇಂದು ಯಥಾಸ್ಥಿತಿಯಲ್ಲಿದೆ. ಜಾಗತಿಕವಾಗಿ ಕೆಲಸ ದೇಶಗಳಲ್ಲಿ ಬೆಲೆ ಏರಿಳಿತಗಳಾಗಿವೆ. ಭಾರತದಲ್ಲಿ ಸದ್ಯ ಈ ಎರಡು ಅಮೂಲ್ಯ ಲೋಹಗಳ ಬೆಲೆ ಸ್ಥಿರತೆ ಪಡೆದುಕೊಂಡಂತಿದೆ. ಬೆಳ್ಳಿ ಬೆಲೆ ಬೆಂಗಳೂರಿನಲ್ಲಿ ಅಲ್ಪ ಇಳಿಕೆ ಆಗಿರುವುದು ಬಿಟ್ಟರೆ ಉಳಿದೆಡೆ ಯಥಾಸ್ಥಿತಿ ಹೊಂದಿದೆ. ಭಾರತದಲ್ಲಿ ಸದ್ಯ 10 ಗ್ರಾಮ್ ನ 22 ಕ್ಯಾರಟ್ ಚಿನ್ನದ ಬೆಲೆ 67,150 ರುಪಾಯಿ ಇದೆ. 24 ಕ್ಯಾರಟ್ ನ ಅಪರಂಜಿ ಚಿನ್ನದ ಬೆಲೆ 73,250 ರುಪಾಯಿ ಆಗಿದೆ. 100 ಗ್ರಾಮ್ ಬೆಳ್ಳಿ ಬೆಲೆ 8,850 ರುಪಾಯಿ ಇದೆ. ಬೆಂಗಳೂರಿನಲ್ಲಿ ಚಿನ್ನದ ಬೆಲೆ 10 ಗ್ರಾಮ್ ಗೆ 67,150 ರುಪಾಯಿ ಆಗಿದೆ, ಬೆಳ್ಳಿ ಬೆಲೆ 100 ಗ್ರಾಮ್ ಗೆ 8,300 ರುಪಾಯಿಯಲ್ಲಿ ಇದೆ.

ಈ ವರ್ಷಾಂತ್ಯದೊಳಗೆ ಚಿನ್ನದ ಬೆಲೆ 70,000 ರೂ ಗಡಿ ದಾಟಬಹುದು ಎಂದು ತಜ್ಞರು ಅಂದಾಜು ಮಾಡಿದ್ದರು. ಆದರೆ, ವರ್ಷಾರ್ಧದಲ್ಲೇ ಬೆಲೆ ಆ ಗಡಿ ದಾಟಿ ಹೋಗಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಪ್ರಮೋದ್ ಚಿತ್ರಕ್ಕೆ ಸಾಥ್ ನೀಡಿದ ಕಿಚ್ಚ ಸುದೀಪ್



ಭುವನಂ ಗಗನಂ ಸಿನಿಮಾ ತನ್ನ ಟೀಸರ್ ನಿಂದಲೇ ಪ್ರೇಕ್ಷಕರಲ್ಲಿ ಕುತೂಹಲ ಕೇಂದ್ರ ಬಿಂದುವಾಗಿದೆ. ಕ್ಲಾಸ್ ಕಥೆಗಳ ಮೂಲಕ ಗಮನಸೆಳೆದ ಪೃಥ್ವಿ ಅಂಬಾರ್ ಹಾಗೂ ಮಾಸ್ ಸಿನಿಮಾಗಳ ಮೂಲಕ ಸೈ ಎನಿಸಿಕೊಂಡ ಪ್ರಮೋದ್, ಮೊದಲ ಬಾರಿ ಒಟ್ಟಿಗೆ ತೆರೆಹಂಚಿಕೊಂಡಿರುವ ಈ ಚಿತ್ರದ ಟೈಟಲ್ ಟ್ರ್ಯಾಕ್ ಅನಾವರಣಗೊಂಡಿದೆ.

ಹೊಸ ಪ್ರತಿಭೆಗಳಿಗೆ ಸದಾ ಬೆನ್ನುತಟ್ಟುವ ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್, ಚಿತ್ರರಂಗದ ಭರವಸೆ ನಾಯಕರಾಗಿರುವ ಪ್ರಮೋದ್, ಪೃಥ್ವಿ ಚಿತ್ರಕ್ಕೆ ಸಾಥ್ ಕೊಟ್ಟಿದ್ದಾರೆ, ಭುವನಂ ಗಗನಂ ಹಾಡು ಬಿಡುಗಡೆ ಮಾಡಿ ಇಡೀ ಸಿನಿತಂಡಕ್ಕೆ ಆಲ್ ದಿ ಬೆಸ್ಟ್ ತಿಳಿಸಿದ್ದಾರೆ. ಭುವನಂ ಗಗನಂ ಎಂದು ಶುರುವಾಗುವ ಹಾಡಿಗೆ ಅನಿರುದ್ಧ ಶಾಸ್ತ್ರೀ ಕ್ಯಾಚಿ ಮ್ಯಾಚಿ ಪದ ಪೋಣಿಸಿದ್ದು, ಅರ್ಮಾನ್ ಮಲ್ಲಿಕ್ ಹಾಗೂ ಐಶ್ವರ್ಯ ರಂಗರಾಜನ್ ಧ್ವನಿಯಾಗಿದ್ದಾರೆ. ಗುಮ್ಮಿನೇನಿ ವಿಜಯ್ ಈ ಮಧುರ ಗೀತೆಗೆ ಟ್ಯೂನ್ ಹಾಕಿದ್ದಾರೆ. ಭುವನಂಗಗನಂ ಟೈಟಲ್ ಟ್ರ್ಯಾಕ್ ನಲ್ಲಿ ಪ್ರಮೋದ್ ಹಾಗೂ ರೆಚೆಲ್ ಡೇವಿಡ್ ಜೋಡಿಯ ಕೆಮಿಸ್ಟ್ರೀ ನೋಡುಗರಿಗೆ ಇಷ್ಟವಾಗುತ್ತದೆ.

ಗಿರೀಶ್ ಮೂಲಿಮನಿ ಭುವನಂ ಗಗನಂ ಸಿನಿಮಾಗೆ ಕಥೆ, ಚಿತ್ರಕಥೆ ಬರೆದಿದ್ದು, ಆಕ್ಷನ್ ಕಟ್ ಹೇಳಿದ್ದಾರೆ. ಈ ಹಿಂದೆ ಇವರು ರಾಜರು ಎಂಬ ಚಿತ್ರ ಮಾಡಿದ್ದರು. ಇದೀಗ ಭುವನಂ ಗಗನಂ ಮೂಲಕ ಮತ್ತೊಂದು ಫ್ರೆಶ್ ಕಥೆಯನ್ನು ಹೇಳೋದಿಕ್ಕೆ ಬರ್ತಿದ್ದಾರೆ. ಕನ್ನಡ ಸಿನಿಮಾ ರಂಗಕ್ಕೆ ಅದ್ಭುತ ಸಿನಿಮಾಗಳನ್ನು ಕೊಡುಗೆಯಾಗಿ ನೀಡ್ಬೇಕೆಂಬ ಕನಸಿನೊಂದಿಗೆ ನಿರ್ಮಾಪಕ ಎಂ ಮುನೇಗೌಡ ತಮ್ಮದೇ ಎಸ್ ವಿಸಿ ಫಿಲ್ಮಂಸ್ ಪ್ರೊಡಕ್ಷನ್ ನಡಿ ಭುವನಂ ಗಗನಂಗೆ ಹಣ ಹಾಕಿದ್ದಾರೆ.

ಭುವನಂ ಗಗನಂ ಸಿನಿಮಾ ಲವ್, ರೋಮ್ಯಾನ್ಸ್, ಫ್ಯಾಮಿಲಿ ಎಮೋಷನ್ ಕಥಾಹಂದರ ಸಿನಿಮಾವಾಗಿದ್ದು, ನಗರ, ಹಳ್ಳಿ ಎರಡು ಬ್ಯಾಕ್ ಡ್ರಾಪ್ ನಲ್ಲಿ ನಡೆಯುವ ಕಥೆಯಾಗಿದ್ದು, ಪ್ರಮೋದ್ ಗೆ ಜೋಡಿಯಾಗಿ ಲವ್ ಮಾಕ್ಟೇಲ್ ಖ್ಯಾತಿಯ ರೆಚೆಲ್ ಡೇವಿಡ್, ಪೃಥ್ವಿಗೆ ಜೋಡಿಯಾಗಿ ಅಶ್ವಥಿ ನಟಿಸ್ತಿದ್ದಾರೆ. ಅಚ್ಯುತ್ ಕುಮಾರ್, ಶರತ್ ಲೋಹಿತಾಶ್ವ, ಪ್ರಕಾಶ್ ತುಮ್ಮಿನಾಡು, ಸಿದ್ಲಿಂಗು ಶ್ರೀಧರ್, ಹರಿಣಿ, ಸ್ಪರ್ಶ ರೇಖಾ, ಪ್ರಜ್ವಲ್ ಶೆಟ್ಟಿ, ಚೇತನ್ ದುರ್ಗ ತಾರಾಬಳಗದಲ್ಲಿದ್ದಾರೆ. ಉದಯ್ ಲೀಲಾ ಕ್ಯಾಮೆರಾ ಕೈಚಳಕ, ಗುಮ್ಮಿನೇನಿ ವಿಜಯ್ ಮ್ಯೂಸಿಕ್ ಕಿಕ್, ಸುನೀಲ್ ಕಶ್ಯಪ್ ಸಂಕಲನ ಸಿನಿಮಾಕ್ಕಿದೆ. ಪ್ರಚಾರ ಅಖಾಡಕ್ಕೆ ಇಳಿದಿರುವ ಚಿತ್ರತಂಡ ಆದಷ್ಟು ಬೇಗ ಭುವನಂ ಗಗನಂ ಸಿನಿಮಾ ತೆರೆಗೆ ತರಲಿದೆ.

# ಪ್ರೆಗ್ನೆನ್ಸಿ ಫೋಟೋಶೂಟ್‌ನಲ್ಲಿ ಕಂಗೊಳಿಸಿದ ಹರ್ಷಿಕಾ ಪೂಣಚ್ಚ



ಕೊಡಗಿನ ಬೆಡಗಿ ಹರ್ಷಿಕಾ ಪೂಣಚ್ಚ ಅವರು ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ಇದರ ನಡುವೆ ಹೊಸ ಬೇಬಿ ಬಂಪ್ ಫೋಟೋಶೂಟ್‌ವೊಂದನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಕ್ಯಾಮೆರಾ ಕಣ್ಣಿಗೆ ನಟಿ ಮುದ್ದಾಗಿ ಪೋಸ್ ನೀಡಿದ್ದಾರೆ. ಈ ಫೋಟೋಸ್ ಇಂಟರ್‌ನೆಟ್‌ನಲ್ಲಿ ಸದ್ದು ಮಾಡುತ್ತಿದೆ.

ನೇರಳೆ ಬಣ್ಣದ ಸೀರೆಯುಟ್ಟು ಹರ್ಷಿಕಾ ಪ್ರೆಗ್ನೆನ್ಸಿ ಫೋಟೋಶೂಟ್‌ನಲ್ಲಿ ಮಿರ ಮಿರ ಎಂದು ಮಿಂಚಿದ್ದಾರೆ. ಫೋಟೋದಲ್ಲಿ ತಾಯ್ತನದ ಕಳೆ ಎದ್ದು ಕಾಣುತ್ತಿದೆ. ನಟಿಯ ಬ್ಯಾಕ್ ಟು ಬ್ಯಾಕ್ ಬೇಬಿ ಬಂಪ್ ಫೋಟೋಶೂಟ್‌ಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ.

ಹರ್ಷಿಕಾ ಮತ್ತು ಭುವನ್ ದಂಪತಿ ಮೊದಲ ಮಗುವಿನ ಆಗಮನಕ್ಕಾಗಿ ಎದುರು ನೋಡ್ತಿದ್ದಾರೆ. ಚೊಚ್ಚಲ ಮಗು ಆಗಮನಕ್ಕೆ ದಿನಗಣನೆ ಶುರುವಾಗಿದ್ದು, ಮನೆಯಲ್ಲಿ ಸಂಭ್ರಮ ಮನೆ ಮಾಡಿದ್ದಾರೆ.

ಜು.2ರಂದು ಕೊಡಗು ಶೈಲಿಯಲ್ಲಿ ಬೇಬಿ ಬಂಪ್ ಫೋಟೋಶೂಟ್ ಮಾಡಿಸಿ ತಾಯಿಯಾಗುತ್ತಿರುವ ಗುಡ್ ನ್ಯೂಸ್ ಅನ್ನು ನಟಿ ಹಂಚಿಕೊಂಡಿದ್ದರು. ಇಡೀ ಕುಟುಂಬ ಈ ಫೋಟೋಶೂಟ್‌ನಲ್ಲಿ ಭಾಗಿಯಾಗಿತ್ತು.

ಅಂದಹಾಗೆ, ಹಲವು ವರ್ಷಗಳು ಪ್ರೀತಿಸಿ, ಆ.24ರಂದು ಹರ್ಷಿಕಾ ಮತ್ತು ಭುವನ್ ಜೋಡಿ ಹಸೆಮಣೆ ಏರಿದರು. ಹುಟ್ಟೂರು ಕೊಡಗಿನಲ್ಲಿ ಅದ್ಧೂರಿಯಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಈ ಮದುವೆಗೆ ಪೂಜಾ ಗಾಂಧಿ, ಗೋಲ್ಡನ್ ಸ್ಟಾರ್ ಗಣೇಶ್ ಸೇರಿದಂತೆ ಅನೇಕರು ಭಾಗಿಯಾಗಿ ಶುಭಕೋರಿದ್ದರು.

ಇನ್ನೂ ಸಿನಿಮಾ ವಿಚಾರಕ್ಕೆ ಬರೋದಾದ್ರೆ, ಪತಿ ಭುವನ್ ನಟಿಸಲಿರುವ ಮುಂಬರುವ ಚಿತ್ರಕ್ಕೆ ಹರ್ಷಿಕಾ ಅವರೇ ನಿರ್ಮಾಣದ ಹೊಣೆ ಹೊತ್ತಿದ್ದಾರೆ. ಸದ್ಯ ಶೂಟಿಂಗ್ ಕೂಡ ಭರದಿಂದ ನಡೆಯುತ್ತಿದೆ.



# ಕಣಂಜಾರು ಸಾಂಗ್: ಪ್ರೇಮ ಶೃಂಗಾರಕ್ಕೆ ಫ್ಯಾನ್ಸ್ ಫಿದಾ



'ಕಣಂಜಾರು' 'ಪ್ರೇಮ ಶೃಂಗಾರದ' ಮೂಲಕ ಗಮನ ಸೆಳೆಯುತ್ತಿರುವ ಸ್ಯಾಂಡಲ್ ವುಡ್ ನ ಬಹುನಿರೀಕ್ಷಿಯ ಸಿನಿಮಾಗಳಲ್ಲಿ ಒಂದು. ಆರ್ ಪಿ ಫಿಲ್ಮ್ಸ್ ಬ್ಯಾನರ್ ಅಡಿ ಆರ್.ಬಾಲಚಂದ್ರ ನಿರ್ಮಿಸಿ, ನಿರ್ದೇಶನ ಮಾಡಿ, ನಾಯಕನಾಗಿ ನಟಿಸಿರುವ ಸಿನಿಮಾ ಕಣಂಜಾರು. ಕ್ಯಾಚಿ ಟೈಟಲ್ ಮೂಲಕವೇ ಗಮನ ಸೆಳೆಯುತ್ತಿರುವ ಕಣಂಜಾರು ಸದ್ಯ ರೋಮ್ಯಾಂಟಿಕ್ ಹಾಡಿನ ಮೂಲಕ ಸ್ಯಾಂಡಲ್ ನಲ್ಲಿ ಸಂಚಲನ ಮೂಡಿಸಿದೆ.

ಈಗಾಗಲೇ ಚಿತ್ರೀಕರಣ ಮುಗಿಸಿ ರಿಲೀಸ್ ಗೆ ತಯಾರಿ ಮಾಡಿಕೊಂಡಿರುವ ಕಣಂಜಾರು ಸದ್ಯ ಪ್ರಮೋಷನ್ ಚಟುವಟಿಕೆಯಲ್ಲಿ ಸಿಕ್ಕಾಪಟ್ಟೆ ಬಿಸಿಯಾಗಿದೆ. ಇದೀಗ ಸಿನಿಮಾ ತಂಡ ಅದ್ಭುತವಾದ ಹಾಡನ್ನು ರಿಲೀಸ್ ಮಾಡಿ ಸದ್ದು ಮಾಡುತ್ತಿದೆ. ಅಂದಹಾಗೆ ಕಣಂಜಾರು ಚಿತ್ರದ ಸುಂದರವಾದ ಹಾಡನ್ನು ಸ್ಯಾಂಡಲ್ವುಡ್ ನ ಅನೇಕ ಗಣ್ಯರು ರಿಲೀಸ್ ಮಾಡಿ ಚಿತ್ರತಂಡಕ್ಕೆ ಶುಭ ಹಾರೈಸಿದರು.

ಕಾಟೇರ, ಭೀಮ ಸೇರಿದಂತೆ ಅನೇಕ ಹಿಟ್ ಸಿನಿಮಾಗಳಿಗೆ ಡೈಲಾಗ್ ಬರೆದಿರುವ ಖ್ಯಾತ ಡೈಲಾಗ್ ರೈಟರ್ ಮಾಸ್ತಿ, ನಟರಾದ ನಕುಲ್ ಗೌಡ, ಶ್ರೇಯಸ್ ಮಂಜು, ವಿಕ್ಕಿ, ಹಾಗೂ ನಿರ್ದೇಶಕ ಮಹೇಶ್ ಗೌಡ, ನಟಿಯರಾದ ಕಾರುಣ್ಯ ರಾಮ್, ಅನುಷಾ ರೈ ಸೇರಿದಂತೆ ಅನೇಕ ಗಣ್ಯರು ಕಣಂಜಾರು ಸಿನಿಮಾದ ಹಾಡನ್ನು ರಿಲೀಸ್ ಮಾಡಿ ಸಿನಿಮಾಗೆ ಸಾಥ್ ನೀಡಿದರು.ಕಣಂಜಾರು ಸಿನಿಮಾದಲ್ಲಿ ನಾಯಕ ಆರ್ ಬಾಲಚಂದ್ರನ್ ಜೊತೆ ಕ್ರೇಜಿ ಸ್ಟಾರ್ ರವಿಚಂದ್ರನ್ ಅವರ ಅಪೂರ್ವ ಸಿನಿಮಾ ಖ್ಯಾತಿಯ ನಟಿ ಅಪೂರ್ವಾ ನಾಯಕಿಯಾಗಿ ಮಿಂಚಿದ್ದಾರೆ. ಈ ಹಾಡಿನಲ್ಲಿ ಅಪೂರ್ವಾ ಸಿಕ್ಕಪಟ್ಟೆ ಗ್ಲಾಮರಾಗಿ ಕಾಣಿಸಿಕೊಂಡಿದ್ದು ಪಡ್ಡೆ ಹುಡುಗರ ನಿದ್ದೆಗೆಡಿಸಿದ್ದಾರೆ. 'ಪ್ರೇಮ ಶೃಂಗಾರ?' ಸಾಲುಗಳಿರುವ ಈ ಪ್ರೇಮ ಗೀತೆ ನಿಜಕ್ಕು ರವಿಚಂದ್ರನ್ ಅವರ ಸಿನಿಮಾಗಳ ಹಾಡುಗಳನ್ನು ನೆನಪಿಸುತ್ತಿದೆ. ಅಂದಹಾಗೆ ಈ ಹಾಡಿಗೆ ಹರ್ಷವರ್ಧನ್ ರಾಜ್ ಸಂಗೀತ ಸಂಯೋಜನೆವಿದೆ, ಸಂತೋಷ್ ನಾಯಕ್ ಸಾಹಿತ್ಯ ರಚಿಸಿದ್ದು ಮೋಹನ್ ಮಾಸ್ಟರ್ ಕೊರಿಯೋಗ್ರಫಿವಿದೆ.

ಹಾಡು ರಿಲೀಸ್ ಬಳಿಕ ಮಾತನಾಡಿದ ನಾಯಕ, ನಿರ್ದೇಶಕ ಬಾಲಚಂದ್ರ, 'ಯೂಟ್ಯೂಬ್ ನಲ್ಲಿ ರಿಲೋಸ್ ಮಾಡೋಣ ಅಂತ ಅಂದುಕೊಂಡಿದ್ದೆ. ಆದರೆ ಕೆಲವರು ಅದ್ಭುತವಾಗಿದೆ ಅಂತ ಹೇಳಿದ್ರು ಹಾಗಾಗಿ ದೊಡ್ಡ ಮಟ್ಟದಲ್ಲಿ ರಿಲೀಸ್ ಮಾಡಿದ್ದೀವಿ. ನನ್ನನ್ನು ಹೊಸಬ ಅಂತ ಅಂದುಕೊಳ್ಳದೆ ನಾಯಕಿ ಅಪೂರ್ವಾ ಕೂಡ ಒಪ್ಪಿಕೊಂಡು ಈ ಸಿನಿಮಾದಲ್ಲಿ ನಟಿಸಿದ್ದಾರೆ. ನಿರ್ದೇಶಕ ತರುಣ್ ಸುಧೀರ್ ಅವರು ತುಂಬಾ ಸಹಾಯ ಮಾಡಿದ್ದಾರೆ. ಇತ್ತೀಚಿಗಷ್ಟೇ ತರುಣ್ ಸುಧೀರ್ ಮತ್ತು ಸೋನಾಲ್ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ. ಅವರಿಗೆ ಈ ಹಾಡನ್ನು ಅರ್ಪಿಸುತ್ತಿದ್ದೇನೆ' ಎಂದರು. ನಾಯಕಿ ಅಪೂರ್ವ ಮಾತನಾಡಿ, 'ಸಿನಿಮಾದ ಟೀಸರ್ ರಿಲೀಸ್ ಆದ್ಮೇಲೆ ಅದ್ಭುತವಾದ ರೆಸ್ಪಾನ್ಸ್ ಬಂದಿದೆ. ಹಾಗಾಗಿ ಈ ಸಿನಿಮಾವನ್ನು ನಾನು ಒಪ್ಪಿಕೊಂಡೆ. ನಾನು ಮೊದಲು ಕಥೆಗೆ ಆದ್ಯತೆ ನೀಡುತ್ತೇನೆ. ಜನ ಸಿನಿಮಾ ನೋಡಲ್ಲ ಅಂತ ಹೇಳ್ತಾರೆ ಆದ್ರೆ, ಒಳ್ಳೆ ಸಿನಿಮಾ ಬಂದ್ರೆ, ಖಂಡಿತ ಜನ ಥಿಯೇಟರಿಗೆ ಬರ್ತಾರೆ. ಈ ಸಿನಿಮಾ ಕೂಡ ಅದ್ಭುತವಾಗಿ ಮೂಡಿ ಬಂದಿದೆ. ದಯವಿಟ್ಟು ಚಿತ್ರಮಂದಿರಕ್ಕೆ ಬಂದು ಸಿನಿಮಾ ನೋಡಿ' ಎಂದರು. ಸದಿಯ ಟೀಸರ್ ಮತ್ತು ಹಾಡಿನ ಮೂಲಕ ಸದ್ದು ಮಾಡುತ್ತಿರುವ ಕಣಂಜಾರು ಸದ್ಯದಲ್ಲೇ ಚಿತ್ರಮಂದಿರಕ್ಕೆ ಎಂಟ್ರಿ ಕೊಡಲಿದೆ.

# ಲಕ್ನೋ ಸೂಪರ್ ಜೈಂಟ್ಸ್ ತಂಡಕ್ಕೆ ನೂತನ ಮೆಂಟರ್ ಆಗಿ ಜಹೀರ್ ಖಾನ್ ನೇಮಕ



2025ರ ಇಂಡಿಯನ್ ಪ್ರೀಮಿಯರ್ ಲೀಗ್ ಆವೃತ್ತಿಗೂ ಮುನ್ನವೇ ಲಕ್ನೋ ಸೂಪರ್ ಜೈಂಟ್ಸ್ ತಂಡವು ನೂತನ ಮೆಂಟರ್ ಆಗಿ 2011ರ ಏಕದಿನ ವಿಶ್ವಕಪ್ ವಿನ್ನರ್ ಹಾಗೂ ಟೀಂ ಇಂಡಿಯಾ ಮಾಜಿ ವೇಗಿ ಜಹೀರ್ ಖಾನ್ ಅವರನ್ನ ನೇಮಕ ಮಾಡಿದೆ.

2022ರಲ್ಲಿ ಐಪಿಎಲ್‌ಗೆ ಪದಾರ್ಪಣೆ ಮಾಡಿದ್ದ ಲಕ್ನೋ ಸೂಪರ್ ಜೈಂಟ್ಸ್ ತಂಡಕ್ಕೆ ಮೊದಲ ಎರಡು ಆವೃತ್ತಿಗಳಲ್ಲಿ ಗೌತಮ್ ಗಂಭೀರ್ ಮೆಂಟರ್ ಆಗಿದ್ದರು. ಆದ್ರೆ 2024ರ ಐಪಿಎಲ್‌ನಲ್ಲಿ ಗಂಭೀರ್ ಕೋಲ್ಕತ್ತಾ ನೈಟ್‌ರೈಡರ್ಸ್ ತಂಡಕ್ಕೆ ಸೇರ್ಪಡೆಯಾದರು. ಅಂದಿನಿಂದ ಖಾಲಿ ಉಳಿದಿದ್ದ ಸ್ಥಾನಕ್ಕೆ ಈಗ ಫ್ರಾಂಚೈಸಿ ಜಹೀರ್ ಖಾನ್ ಅವರನ್ನ ನೇಮಕ ಮಾಡಿಕೊಂಡಿದೆ.

ಈ ಮಾಹಿತಿಯನ್ನು ಲಕ್ನೋ ಫ್ರಾಂಚೈಸಿ ತನ್ನ ಅಧಿಕೃತ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದೆ. ಅಲ್ಲದೇ ಲಕ್ನೋ ತಂಡದ ಮಾಲೀಕರಾದ ಸಂಜೀವ್ ಗೋಯೆಂಕಾ ಬುಧವಾರ ನಡೆದ ಕಾರ್ಯಕ್ರಮದಲ್ಲಿ ಜಹೀರ್ ಖಾನ್‌ಗೆ ಎಲ್‌ಎಸ್‌ಜಿ ಮೆಂಟರ್ ಜರ್ಸಿ ಕೊಟ್ಟು ಸ್ವಾಗತಿಸಿದ್ದಾರೆ.

**ಸತತ 2 ಬಾರಿ ಪ್ಲೇ ಆಫ್ಸ್‌ಗೆ:** ಗೌತಮ್ ಗಂಭೀರ್ ಮಾರ್ಗದರ್ಶನದಲ್ಲಿ ಎಲ್‌ಎಸ್‌ಜಿ ತಂಡ ಐಪಿಎಲ್ 2022–2023ರ ಎರಡೂ ಆವೃತ್ತಿಗಳಲ್ಲಿ ಸತತವಾಗಿ ಪ್ಲೇ ಆಫ್ಸ್ ತಲುಪಿದ ಸಾಧನೆ ಮಾಡಿತ್ತು. ಬಳಿಕ ಗಂಭೀರ್ ಕೆಕೆಆರ್ ತಂಡ ಸೇರಿಕೊಂಡರು. 2024ರಲ್ಲಿ ಲಕ್ನೋ ತಂಡ ಲೀಗ್ ಸುತ್ತಿನಲ್ಲೇ ಹೊರಬಿದ್ದಿತು. ಇದೀಗ ಹಳಿ ತಪ್ಪಿರುವ ಎಲ್‌ಎಸ್‌ಜಿ ತಂಡವನ್ನು ಮೇಲೆತ್ತುವ ಜವಾಬ್ದಾರಿ ಜಹೀರ್ ಖಾನ್ ಮೇಲಿದೆ.

ಜಹೀರ್ ಖಾನ್ 10 ಐಪಿಎಲ್ ಆವೃತ್ತಿಗಳಲ್ಲಿ ಆಡಿದ ಅನುಭವ ಹೊಂದಿದ್ದಾರೆ. ಮುಂಬೈ ಇಂಡಿಯನ್ಸ್, ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಡೇರ್ ಡೆವಿಲ್ಸ್ ತಂಡದ ಪರವಾಗಿ ಆಡಿದ್ದಾರೆ. ಅಲ್ಲದೇ ಮೆಂಟರ್ ಆಗಿ ನೇಮಕಗೊಂಡಿದ್ದಕ್ಕೆ ಜಹೀರ್ ಖಾನ್ ಸಹ ಹರ್ಷ ವ್ಯಕ್ತಪಡಿಸಿದ್ದಾರೆ.

# ಘಟಪ್ರಭಾ ನದಿ ಪ್ರವಾಹ ಪರಿಹಾರ ಕುರಿತು ಶೀಘ್ರ ಕ್ರಮ



**ಬೆಂಗಳೂರು:** ಘಟಪ್ರಭಾ ನದಿಯ ಪ್ರವಾಹದಿಂದಾಗಿ ಪ್ರತಿ ವರ್ಷ ಉಂಟಾಗುತ್ತಿರುವ ಹಾನಿಯ ಕುರಿತು ಸಂಬಂಧಪಟ್ಟ ಇಲಾಖೆ ಸಚಿವರೊಂದಿಗೆ ಸಭೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕಾವೇರಿ ನಿವಾಸದಲ್ಲಿ ಮಾತನಾಡಿದ ಅವರು, ಮುಧೋಳ ತಾಲೂಕಿನ ರೈತರ ನಿಯೋಗದೊಂದಿಗೆ ಚರ್ಚೆ ನಡೆಸಿದರು.

ಚರ್ಚೆಯಲ್ಲಿ ತಮ್ಮ ಸಮಸ್ಯೆಗಳನ್ನು ಪ್ರಸ್ತಾಪಿಸಿ ಮಾತನಾಡಿದ ರೈತರು, ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ಘಟಪ್ರಭಾ ನದಿಯ ಪ್ರವಾಹದಿಂದಾಗಿ ಒಟ್ಟು 3,4639 ಹೆಕ್ಟೇರ್ ಪ್ರದೇಶದಷ್ಟು ಬೆಳೆ ಹಾನಿಯಾಗಿದೆ. 2019ರಲ್ಲಿ 15,088 ಹೆಕ್ಟೇರ್, 2021ರಲ್ಲಿ 7,051 ಹೆಕ್ಟೇರ್ ಮತ್ತು 2024 ರಲ್ಲಿ 12,500 ಹೆಕ್ಟೇರ್ ಪ್ರದೇಶದಷ್ಟು ಬೆಳೆ ಹಾನಿಯಾಗಿದೆ. ಇದಕ್ಕೆ ಸೂಕ್ತ ಬೆಳೆ ಪರಿಹಾರ ಹಾಗೂ ಶಾಶ್ವತ ಪರಿಹಾರ ಒದಗಿಸಬೇಕು ಎಂದರು.

ಕೇಂದ್ರ ಸರ್ಕಾರದ ಮಾರ್ಗಸೂಚಿ ಪ್ರಕಾರ ನೀರಾವರಿ ಕ್ಷೇತ್ರದಲ್ಲಿ ಕಬ್ಬಿನ ಬೆಳೆಗೆ ಪ್ರತಿ ಹೆಕ್ಟೇರಿಗೆ 22,500 ರೂ. ಪರಿಹಾರ ಧನ ನಿಗದಿಪಡಿಸಲಾಗಿದೆ. ಇತರ ಬೆಳೆಗಳಿಗೆ 17,000 ರೂ. ನಿಗದಿಪಡಿಸಲಾಗಿದೆ. ಇದರಿಂದ ರೈತರಿಗೆ ಯಾವುದೇ ರೀತಿಯ ಪ್ರಯೋಜನವಾಗುವುದಿಲ್ಲ. ಈಗಾಗಲೇ ಕರ್ನಾಟಕ ಕೃಷಿ ವಿಶ್ವವಿದ್ಯಾಲಯ ಕಬ್ಬು ಬೆಳೆಯನ್ನು ಬೆಳೆಯಲು ತಗಲುವ ವೆಚ್ಚ ಪ್ರತಿ ಹೆಕ್ಟೇರ್‌ಗೆ 1.50 ಲಕ್ಷ ರೂ. ನಿಗದಿಪಡಿಸಿದ್ದು, ಇದು ಸಹ ಅವೈಜ್ಞಾನಿಕವಾಗಿದೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ಇದು ಕನಿಷ್ಟವಾಗಿದೆ. ಪ್ರತಿ ಎಕರೆ ಕಬ್ಬು ಬೆಳೆಗೆ 1 ಲಕ್ಷ ರೂ. ಹಾಗೂ ಇತರ ಬೆಳೆಗಳಿಗೆ 50 ಸಾವಿರ ರೂ. ಪರಿಹಾರವನ್ನು ನೀಡಬೇಕು. ಎನ್.ಡಿ.ಆರ್.ಎಫ್ ಮತ್ತು ಎಸ್.ಡಿ.ಆರ್.ಎಫ್ ಮಾನದಂಡಗಳನ್ನು ಪರಿಗಣಿಸದೆ ಹಾನಿಗೊಳಗಾದ ಎಲ್ಲಾ ಕ್ಷೇತ್ರಕ್ಕೂ ಪರಿಹಾರ ಧನವನ್ನು ನೀಡಬೇಕು ಎಂದು ರೈತರ ನಿಯೋಗ ಮನವಿ ಮಾಡಿದೆ.

ಇದಕ್ಕೆ ಸಂಬಂಧಿಸಿದಂತೆ ನೀರಾವರಿ ಸಚಿವರು, ಕಂದಾಯ ಸಚಿವರು ಹಾಗೂ ಲೋಕೋಪಯೋಗಿ ಇಲಾಖೆ ಸಚಿವರೊಂದಿಗೆ ಆದಷ್ಟು ಬೇಗನೆ ಸಭೆ ನಡೆಸಿ ಈ ಕುರಿತು ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಿಎಂ ರೈತರ ಮನವಿಗೆ ಪ್ರತಿಕ್ರಿಯಿಸಿದರು.

# ಟಿ20 ಕ್ರಿಕೆಟ್‌ನಲ್ಲಿ ಹೊಸ ವಿಶ್ವ ದಾಖಲೆ ನಿರ್ಮಿಸಿದ ಸ್ಪೇನ್



ಐಸಿಸಿ ಟಿ20 ವಿಶ್ವಕಪ್‌ನ ಯುರೋಪ್ ಕ್ವಾಲಿಫೈಯರ್ ಪಂದ್ಯದಲ್ಲಿ ಗ್ರೀಸ್ ವಿರುದ್ಧ ಸ್ಪೇನ್ ತಂಡವು ಭರ್ಜರಿ ಜಯ ಸಾಧಿಸಿದೆ. ಗುರ್ನಸಿ ರೋವರ್ಸ್ ಅಥ್ಲೆಟಿಕ್ ಕ್ಲಬ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಗ್ರೀಸ್ ತಂಡವು 20 ಓವರ್‌ಗಳಲ್ಲಿ 96 ರನ್ ಗಳಿಸಿತು. ಈ ಗುರಿಯನ್ನು 13 ಓವರ್‌ಗಳಲ್ಲಿ ಬೆನ್ನತ್ತುವ ಮೂಲಕ ಸ್ಪೇನ್ ತಂಡವು 7 ವಿಕೆಟ್‌ಗಳ ಗೆಲುವು ದಾಖಲಿಸಿದೆ.

ಈ ಗೆಲುವಿನೊಂದಿಗೆ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಸತತವಾಗಿ ಅತ್ಯಧಿಕ ಪಂದ್ಯಗಳನ್ನು ಗೆದ್ದ ವಿಶ್ವ ದಾಖಲೆ ಸ್ಪೇನ್ ತಂಡದ ಪಾಲಾಗಿದೆ. ಇದಕ್ಕೂ ಮುನ್ನ ಈ ವರ್ಲ್ಡ್ ರೆಕಾರ್ಡ್ ಮಲೇಷ್ಯಾ ಹಾಗೂ ಬರ್ಮುಡಾ ತಂಡಗಳ ಹೆಸರಿನಲ್ಲಿತ್ತು.

ಮಲೇಷ್ಯಾ ತಂಡವು ಸತತ 13 ಟಿ20 ಪಂದ್ಯಗಳನ್ನು ಗೆಲ್ಲುವ ಮೂಲಕ ಈ ವಿಶ್ವ ದಾಖಲೆ ನಿರ್ಮಿಸಿದ್ದರು. ಇನ್ನು ಬರ್ಮುಡಾ ಕೂಡ ಸತತ 13 ಪಂದ್ಯಗಳ ಮೂಲಕ ಈ ದಾಖಲೆಯನ್ನು ಸರಿಗಟ್ಟಿದ್ದರು. ಇದೀಗ ಈ ಎರಡು ತಂಡಗಳ ವಿಶ್ವ ದಾಖಲೆ ಮುರಿಯುವಲ್ಲಿ ಸ್ಪೇನ್ ತಂಡ ಯಶಸ್ವಿಯಾಗಿದೆ.

ಗ್ರೀಸ್ ತಂಡವನ್ನು ಬಗ್ಗು ಬಡಿಯುವುದರೊಂದಿಗೆ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಸತತವಾಗಿ ಅತ್ಯಧಿಕ ಪಂದ್ಯಗಳನ್ನು ಗೆದ್ದ ವಿಶ್ವ ದಾಖಲೆ ಸ್ಪೇನ್ ಪಾಲಾಗಿದೆ. ಸ್ಪೇನ್ ತಂಡವು ಈವರೆಗೆ ಸತತವಾಗಿ 14 ಟಿ20 ಪಂದ್ಯಗಳನ್ನು ಗೆದ್ದುಕೊಂಡಿದ್ದು, ಈ ಗೆಲುವಿನ ನಾಗಾಲೋಟದೊಂದಿಗೆ ಇದೀಗ ಟಿ20 ಕ್ರಿಕೆಟ್‌ನಲ್ಲಿ ವರ್ಲ್ಡ್ ರೆಕಾರ್ಡ್ ನಿರ್ಮಿಸಿದೆ.

ಇನ್ನು ಟೀಮ್ ಇಂಡಿಯಾ ಟಿ20 ಕ್ರಿಕೆಟ್‌ನಲ್ಲಿ ಸತತವಾಗಿ 12 ಪಂದ್ಯಗಳನ್ನು ಗೆದ್ದುಕೊಂಡಿದೆ. ಈ ಮೂಲಕ ಸತತ ಗೆಲುವಿನ ದಾಖಲೆ ಪಟ್ಟಿಯಲ್ಲಿ ಭಾರತ ತಂಡವು 5ನೇ ಸ್ಥಾನದಲ್ಲಿರುವುದು ವಿಶೇಷ. ಒಟ್ಟಿನಲ್ಲಿ ವಿಶ್ವ ಕ್ರಿಕೆಟ್‌ಗೆ ಅಂಬೆಗಾಲಿಡುತ್ತಿರುವ ಸ್ಪೇನ್ ತಂಡವು ಇದೀಗ ಸತತ ಗೆಲುವುಗಳ ಮೂಲಕ ಇಡೀ ವಿಶ್ವದ ಗಮನ ಸೆಳೆಯುವಲ್ಲಿ ಯಶಸ್ವಿಯಾಗಿರುವುದು ವಿಶೇಷ.

# ಸಿಎಂ ಪತ್ನಿ ವಿರುದ್ಧ ದೂರು ದಾಖಲು



**ಮೈಸೂರು:** ಮುಡಾ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) ಪ್ರಕರಣ ಸಂಬಂಧ ಸಿಎಂ ಪತ್ನಿ ಪಾರ್ವತಿ ಸಿದ್ದರಾಮಯ್ಯ ಅವರ ವಿರುದ್ಧ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಮೈಸೂರಿನ ಲಕ್ಷ್ಮಿಪುರಂ ಠಾಣೆಗೆ ದೂರು ನೀಡಿದ್ದಾರೆ.

**ದೂರಿನಲ್ಲಿ ಏನಿದೆ?:** ಪಾರ್ವತಿ ಸಿದ್ದರಾಮಯ್ಯ ಅವರು ಬರೆದ ಮೂಲ ಪತ್ರ ನಾಶ ಮಾಡಿ, ಇತ್ತೀಚಿಗೆ ಸೃಷ್ಟಿಸಿರುವ ಪತ್ರವನ್ನು ಕಡತಕ್ಕೆ ಸೇರಿಸಿದ್ದಾರೆ. ಸಿಎಂ ತೋರಿಸಿರುವ ಪತ್ರದಲ್ಲಿರುವ ಪಾರ್ವತಿ ಅವರ ಸಹಿ ಹಾಗೂ ಮಾಹಿತಿ ಹಕ್ಕಿನಲ್ಲಿ ಪಡೆದ ಪತ್ರದಲ್ಲಿ ಇರುವ ಸಹಿ ಬೇರೆ ಬೇರೆ ರೀತಿ ಇದೆ. ಪಾರ್ವತಿ ಅವರ ಸಹಿ ನಕಲಿ ಆಗಿದೆ ಎಂದು ದೂರಿನಲ್ಲಿ ಆರೋಪಿಸಿದ್ದಾರೆ.

ವೈಟ್ನರ್ ಹಿಂದಿನ ಪದಗಳನ್ನು ಸಮರ್ಥಿಸಿಕೊಳ್ಳುವ ಸಲುವಾಗಿ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಹಾಗೂ ಪಾರ್ವತಿ ಅವರು ಸಂಚು ರೂಪಿಸಿ ಸುಳ್ಳು ಪತ್ರ ಸೃಷ್ಟಿಸಿದ್ದಾರೆ. ಅವರ ವಿರುದ್ಧ ಕ್ರಮ ತೆಗೆದುಕೊಳ್ಳಿ ಎಂದು ದೂರು ನೀಡಿದ್ದಾರೆ. ಇದಕ್ಕೆ ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಗರಂ ಆಗಿದ್ದಾರೆ. ಸಿಎಂ ಪತ್ನಿ ಸಹಿ ನಕಲಿ ಅಂತಾ ಹೇಳೋದಕ್ಕೆ ದೂರುದಾರರೇನಾದ್ರೂ ಎಫ್‌ಎಸ್ ಎಲ್ ಅಧಿಕಾರಿನಾ ಎಂದು ಪ್ರಶ್ನಿಸಿದ್ದಾರೆ.

ಸ್ನೇಹಮಯಿ ಕೃಷ್ಣ ಒಬ್ಬ ಬ್ಲಾಕ್‌ಮೇಲರ್, ಆತನ ಕಡೆಯವರು ನನ್ನ ಬಳಿ ಬಂದು 100 ಕೋಟಿ ರೂ. ಬೇಡಿಕೆ ಇಟ್ಟಿದ್ದಾರೆ. ಇಷ್ಟರಲ್ಲೇ ಅದೆಲ್ಲವನ್ನು ಬಯಲು ಮಾಡ್ತೇನೆ ಎಂದು ಬಾಂಬ್ ಸಿಡಿಸಿದ್ದಾರೆ.

ಅತ್ತ, ಸುಳ್ಳು ದಾಖಲೆ ಕೊಟ್ಟು ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಕೂಡ ಆರೋಪ ಮಾಡಿದ್ದಾರೆ. ಬಿಜೆಪಿ ಕೂಡ ಟ್ವೀಟ್ ಮೂಲಕ ಹರಿಹಾಯ್ದಿದೆ.

# ರಾಜ್ಯಕ್ಕಾಗಿರುವ ಅನ್ಯಾಯ ಸರಿಪಡಿಸುವ ವಿಶ್ವಾಸವಿದೆ



**ಬೆಂಗಳೂರು:** 16ನೇ ಕೇಂದ್ರ ಹಣಕಾಸಿನ ಆಯೋಗದವರೊಂದಿಗೆ ಇಂದು ಸಭೆ ನಡೆಯಲಿದ್ದು, 15ನೇ ಹಣಕಾಸು ಆಯೋಗದಲ್ಲಿ ಕರ್ನಾಟಕಕ್ಕೆ ಆಗಿರುವ ಅನ್ಯಾಯ ಸರಿಪಡಿಸುತ್ತಾರೆ ಎಂಬ ವಿಶ್ವಾಸವಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 15ನೇ ಹಣಕಾಸು ಆಯೋಗದಲ್ಲಿ ಕರ್ನಾಟಕಕ್ಕೆ ಆಗಿರುವ ಅನ್ಯಾಯಗಳ ಬಗ್ಗೆ ವಿವರಿಸಲಾಗುವುದು ಎಂದು ಹೇಳಿದರು.

ಕರ್ನಾಟಕ, ಹೆಚ್ಚು ನಿರ್ಲಕ್ಷ್ಯಕ್ಕೆ ಒಳಗಾದ ರಾಜ್ಯ ಎಂದು ಮನದಟ್ಟು ಮಾಡಿ, ತೆರಿಗೆ ಹಂಚಿಕೆಯನ್ನು ಶೇ.41 ರಿಂದ ಶೇ.50ಕ್ಕೆ ಹೆಚ್ಚಿಸುವಂತೆ ಒತ್ತಾಯಿಸಲಾಗುವುದು. ಸೆಸ್ ಮತ್ತು ಸರ್ಚಾಜ್ ಗಳಲ್ಲಿ ರಾಜ್ಯಗಳಿಗೂ ಪಾಲು ನೀಡಬೇಕು. ಸೆಸ್ ಮತ್ತು ಸರ್ಚಾಜುಗಳು ಹೆಚ್ಚುತ್ತಿದ್ದು, ರಾಜ್ಯಕ್ಕೆ ತೆರಿಗೆ ಹಂಚಿಕೆ ಕಡಿಮೆಯಾಗುತ್ತಿರುವುದನ್ನು ಹಣಕಾಸು ಆಯೋಗದ ಅಧ್ಯಕ್ಷರಿಗೆ ಮನವರಿಕೆ ಮಾಡಿಕೊಡಲಾಗುವುದು ಎಂದು ವಿವರಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com